ಸಂಪುಟ: 04 ಸಂಚಿಕೆ: 340 ಪುಟಗಳು: 08 ಶುಕ್ರವಾರ 21 ಫೆಬ್ರವರಿ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

9448225696 +91 8035841833 ₹5

**ಮುಂಜಾನೆ ಮಾತು**

ಯಾವುದು ನಿನ್ನ ಭಾಗ್ಯದಲ್ಲಿ ಇದೆಯೋ ಅದು ನನಗೆ ಸಿಕ್ಕೆ ತೀರುತ್ತದೆ, ಯಾವುದು ನಿನ್ನದಲ್ಲವೋ ಅದು ನೀ ಎಷ್ಟೇ ಪ್ರಯತ್ನಿಸಿದರೂ ಸಿಗಲಾರದು, ಚಿಂತೆ ಬಿಡು ಜೀವನದಲ್ಲಿ ಬರುವುದೆಲ್ಲವ ಬಂದಂತೆ ಸ್ವೀಕರಿಸಿ.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# ದೆಹಲಿಯಲ್ಲಿ ಗುಪ್ತಾ ಸಾಮ್ರಾಜ್ಯ

- ಮತ್ತೆ ಅಚ್ಚರಿ ನೀಡಿದ ಮೋದಿ, ಶಾ ಜೋಡಿ – ರೇಖಾ ಗುಪ್ತಾ ಆಯ್ಕೆ
- ದೆಹಲಿ ಮುಖ್ಯಮಂತ್ರಿಯಾಗಿ ರೇಖಾ ಗುಪ್ತಾ ಪ್ರಮಾಣ ವಚನ, ಪಿಎಂ ಮೋದಿ ಭಾಗಿ...
- ರೇಖಾ ಗುಪ್ತಾ ದರ್ಬಾರ್ ಶುರು ಬಿಜೆಪಿ ನಾಯಕರ ಸಂಭ್ರಮ



• **ಉದಯವಾಹಿನಿ, ನವದೆಹಲಿ**

ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಬರೋಬ್ಬರಿ 27 ವರ್ಷಗಳ ನಂತರ ಕೇಸರಿ ಪಕ್ಷ ಆಡಳಿತದ ಚುಕ್ಕಾಣಿ ಹಿಡಿದೆ. ಶಾಲಿಮಾರ್ ಬಾಗ್ ವಿಧಾನಸಭಾ ಕ್ಷೇತ್ರದಿಂದ ಪ್ರಥಮ ಬಾರಿ ಶಾಸಕಿಯಾಗಿ ಆಯ್ಕೆಯಾದ ರೇಖಾ ಗುಪ್ತ ಅವರು ದೆಹಲಿಯ ನೂತನ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ಐತಿಹಾಸಿಕ ರಾಮಲೀಲಾ ಮೈದಾನದಲ್ಲಿಂದು ನಡೆದ ಬೃಹತ್ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ ನಡ್ಡಾ ಸೇರಿದಂತೆ ಇತರ ಕೇಂದ್ರ ಸಚಿವರ ಸಮ್ಮುಖದಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ರಾಜ್ಯಪಾಲ ವಿ.ಕೆ ಸಕ್ಸೆನಾ ಪ್ರಮಾಣ ವಚನ ಬೋಧಿಸಿದರು. ಇದೇ ವೇಳೆ ಸಚಿವರಾಗಿ ಪರ್ವೇಶ್ ಸಾಹಿಬ್ ಸಿಂಗ್, ಆಶಿಶ್ ಸೂದ್, ಮಂಜಿಂದರ್ ಸಿಂಗ್ ಸಿರ್ಸಾ, ರವೀಂದರ್ ಇಂದ್ರಜ್ ಸಿಂಗ್, ಕಪಿಲ್ ಮಿಶ್ರಾ ಮತ್ತು ಪಂಕಜ್ ಕುಮಾರ್ ಸಿಂಗ್ ಅವರು ಪ್ರಮಾಣ ವಚನ ಸ್ವೀಕರಿಸಿದರು.

ಸಮಾರಂಭದಲ್ಲಿ ರಾಜನಾಥ್ ಸಿಂಗ್ ಸೇರಿದಂತೆ ಹಲವು ಕೇಂದ್ರ ಸಚಿವರು, ಚಂದ್ರಬಾಬು ನಾಯ್ಡು ಸೇರಿದಂತೆ ಎನ್‌ಡಿಎ ಆಡಳಿತ ರಾಜ್ಯಗಳ ಮುಖ್ಯಮಂತ್ರಿಗಳು ಹಾಗೂ ಸಾವಿರಾರು ಬಿಜೆಪಿ ಕಾರ್ಯಕರ್ತರು ಪಾಲ್ಗೊಂಡಿದ್ದರು. ಸಮಾರಂಭಕ್ಕೂ ಮುನ್ನ ರಾಷ್ಟ್ರಗೀತೆಗೆ ಗೌರವ ಸಲ್ಲಿಸಲಾಯಿತು.

**ರಾಜಧಾನಿಯ 4ನೇ ಮಹಿಳಾ ಸಿಎಂ:** ಈ ಹಿಂದೆ ದೆಹಲಿ ವಿವಿ ವಿದ್ಯಾರ್ಥಿ ಸಂಘದ ಅಧ್ಯಕ್ಷೆಯಾಗಿದ್ದ ರೇಖಾ ಗುಪ್ತ, ಇದೀಗ ಮುಖ್ಯಮಂತ್ರಿಯಾಗಿ ಆಯ್ಕೆಯಾಗುವ ಮೂಲಕ ರಾಷ್ಟ್ರ ರಾಜಧಾನಿಯ 4ನೇ ಮಹಿಳಾ ಮುಖ್ಯಮಂತ್ರಿ ಎನಿಸಿಕೊಂಡಿದ್ದಾರೆ. ಈ ಹಿಂದೆ ಬಿಜೆಪಿಯಿಂದ ಸುಷ್ಮಾ ಸ್ವರಾಜ್, ಕಾಂಗ್ರೆಸ್‌ನಿಂದ ಶೀಲಾ ದೀಕ್ಷಿತ್ ಹಾಗೂ ಎಎಪಿಯಿಂದ ಅತಿಶಿ ದೆಹಲಿಯ ಮುಖ್ಯಮಂತ್ರಿಗಳಾಗಿದ್ದರು. ಇದೀಗ ರೇಖಾ ಗುಪ್ತಾ ಈ ಸ್ಥಾನ ಅಲಂಕರಿಸಿದ್ದು, ರಾಜಧಾನಿಯಲ್ಲಿ ಮಹಿಳೆಯರ ದರ್ಬಾರ್ ಮುಂದುವರಿಯಲಿದೆ.

**11 ದಿನಗಳ ಬಳಿಕ ಸಿಎಂ ಅಭ್ಯರ್ಥಿ ಘೋಷಣೆ:** ದೆಹಲಿ ವಿಧಾನಸಭೆ ಚುನಾವಣೆ ಫಲಿತಾಂಶ ಹೊರಬಿದ್ದ ಬರೋಬ್ಬರಿ 11 ದಿನಗಳ ಬಳಿಕ ನೂತನ ಮುಖ್ಯಮಂತ್ರಿ ಹೆಸರನ್ನು ಬಿಜೆಪಿ ಪ್ರಕಟಿಸಿತು. ಪ್ರಥಮ ಬಾರಿ ಶಾಸಕಿ ರೇಖಾ ಗುಪ್ತ ಅವರೇ ರಾಷ್ಟ್ರ ರಾಜಧಾನಿಯ ನೂತನ ಸಿಎಂ ಎಂದು ಪಕ್ಷ ಘೋಷಣೆ ಮಾಡಿತು. ಅಲ್ಲದೇ ಮಾಜಿ ಸಿಎಂ ಪುತ್ರ ಪರ್ವೇಶ್ ವರ್ಮಾ ಅವರನ್ನ ಡಿಸಿಎಂ ಸ್ಥಾನಕ್ಕೆ ಬಿಜೆಪಿ ಆಯ್ಕೆ ಮಾಡಿತು.

1. ದೆಹಲಿಯಲ್ಲಿ ಎನ್‌ಡಿಎ ಸಿಎಂ, ಡಿಸಿಎಂ ಸಭೆ
2. ಪ್ರಧಾನಿ ಮೋದಿ ನೇತೃತ್ವದಲ್ಲಿ ಎನ್‌ಡಿಎ ಸಭೆ
3. ಪ್ರಧಾನಿ ಮೋದಿ ನಾಯಕತ್ವಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ ಸಭೆ
4. ಕೇಂದ್ರ-ರಾಜ್ಯಗಳ ಸಮನ್ವಯತತೆ ಹಚ್ಚಿಸಲು ಸಭೆಯಲ್ಲಿ ನಿರ್ಣಯ

**ಪರ್ವೇಶ್ ವರ್ಮಾ:** ನೂತನ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದರು. ಇವರು ಮಾಜಿ ಮುಖ್ಯಮಂತ್ರಿ ಸಾಹಿಬ್ ಸಿಂಗ್ ವರ್ಮಾ ಅವರ ಪುತ್ರ, ಹಾಗೂ ನವದೆಹಲಿ ವಿಧಾನಸಭಾ ಕ್ಷೇತ್ರದ ಶಾಸಕರಾಗಿದ್ದಾರೆ. ಮೊನ್ನೆ ನಡೆದ ದೆಹಲಿ ವಿಧಾನಸಭೆ ಚುನಾವಣೆಯಲ್ಲಿ ಆಪ್ ನಾಯಕ ಅರವಿಂದ್ ಕೇಜ್ರಿವಾಲ್ ಅವರನ್ನು 40,89 ಮತಗಳಿಂದ ಸೋಲಿಸಿದ್ದರು. ಪಶ್ಚಿಮ ದೆಹಲಿಯಿಂದ ಸಂಸದ 47 ವರ್ಷದ ಪರ್ವೇಶ್ ವರ್ಮಾ ಭಾರತೀಯ ಜನತಾ ಯುವ ಮೋರ್ಚಾದ ರಾಷ್ಟ್ರೀಯ ಕಾರ್ಯಕಾರಿಣಿ ಸದಸ್ಯರೂ ಆಗಿದ್ದಾರೆ. 2013 ರಲ್ಲಿ ದೆಹಲಿ ವಿಧಾನಸಭಾ ಚುನಾವಣೆಯೊಂದಿಗೆ ತಮ್ಮ ರಾಜಕೀಯ ಜೀವನವನ್ನು ಪ್ರಾರಂಭಿಸಿದರು.

**ಮಂಜಿಂದರ್ ಸಿಂಗ್ ಸಿರ್ಸಾ:** ಬಿಜೆಪಿಯ ಪ್ರಮುಖ ಸಿಖ್ ನಾಯಕ ಮಂಜಿಂದರ್ ಸಿಂಗ್ ಸಿರ್ಸಾ ಅವರು ರೇಖಾ ಸಂಪುಟದಲ್ಲಿ ಸಚಿವರಾಗಿ ಪದಗ್ರಹಣ ಮಾಡಿದರು. ದೆಹಲಿ ಸಿಖ್ ಗುರುದ್ವಾರ ನಿರ್ವಹಣಾ ಸಮಿತಿಯ ಮಾಜಿ ಅಧ್ಯಕ್ಷರು ಆಗಿರುವ ಸಿರ್ಸಾ ರಾಜೌರಿ ಗಾರ್ಡನ್ ವಿಧಾನಸಭಾ ಕ್ಷೇತ್ರದಿಂದ ಎಎಪಿ ಅಭ್ಯರ್ಥಿ ಧನ್ವತಿ ಚಂದೇಲಾ ಅವರನ್ನು 18,190 ಮತಗಳಿಂದ ಸೋಲಿಸಿದ್ದರು.



## ದೇವರ ಹೆಸರಲ್ಲಿ ಪ್ರಮಾಣ ವಚನ

ರೇಖಾ ಗುಪ್ತಾ ಅವರು ಶಾಲಿಮಾರ್ ಬಾಗ್ ಕ್ಷೇತ್ರದಿಂದ ಸ್ಪರ್ಧಿಸಿ ಗೆದ್ದಿದ್ದರು. ಇದೀಗ ಬಿಜೆಪಿಯಿಂದ 2ನೇ ಹಾಗೂ ದೆಹಲಿಯ 4ನೇ ಮಹಿಳಾ ಮುಖ್ಯಮಂತ್ರಿಯಾಗಿ ದೇವರ ಹೆಸರಲ್ಲಿ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣ ಸ್ವೀಕರಿಸಿದರು. ಇವರಿಗೆ ಎಲ್‌ಜಿ ವಿಕೆ ಸಕ್ಸೇನಾ ಪ್ರಮಾಣ ವಚನ ಬೋಧಿಸಿದರು. ಪ್ರಧಾನಿ ಮೋದಿ, ಎಲ್ಲ ಕೇಂದ್ರ ಸಚಿವರು, ಪಕ್ಷದ ಎಲ್ಲ ಹಿರಿಯ ನಾಯಕರು ಮತ್ತು ಬಿಜೆಪಿ ಮತ್ತು ಎನ್‌ಡಿಎ ಆಡಳಿತದ ರಾಜ್ಯಗಳ ಮುಖ್ಯಮಂತ್ರಿಗಳು ಪ್ರಮಾಣ ವಚನ ಕಾರ್ಯಕ್ರಮಕ್ಕೆ ಸಾಕ್ಷಿಯಾದರು. 27 ವರ್ಷಗಳ ನಂತರ ದೆಹಲಿಯಲ್ಲಿ ಬಿಜೆಪಿ ಸರ್ಕಾರ ರಚನೆಯಾಗುತ್ತಿದ್ದು, ಇದಕ್ಕಾಗಿ ರಾಮಲೀಲಾ ಮೈದಾನದ ಮತ್ತು ಸುತ್ತಮುತ್ತ ಬಲವಾದ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿತ್ತು.

### ರವೀಂದ್ರ ಇಂದ್ರರಾಜ್ ಸಿಂಗ್




ಇನ್ನು ರವೀಂದ್ರ ಇಂದ್ರರಾಜ್ ಸಿಂಗ್ ಅವರಿಗೆ ಲೆಫ್ಟಿನೆಂಟ್ ಜನರಲ್ ವಿಕೆ ಸಕ್ಸೇನಾ ಪ್ರಮಾಣ ವಚನ ಬೋಧಿಸಿದರು. ಹೊಸ ಸಚಿವರಾಗಿರುವ ಸಿಂಗ್, ಪಕ್ಷದ ಸಂಘಟನೆಯಲ್ಲಿ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ. 50 ವರ್ಷದ ರವೀಂದ್ರ, ದೆಹಲಿ ವಿಶ್ವವಿದ್ಯಾಲಯದಿಂದ ಪದವಿ ಪಡೆದಿದ್ದು, ಚುನಾವಣೆಯಲ್ಲಿ ಎಎಪಿ ಅಭ್ಯರ್ಥಿ ಜೈ ಭಗವಾನ್ ಉಪಕಾರ್ ಅವರನ್ನು 31,475 ಮತಗಳಿಂದ ಸೋಲಿಸಿದ್ದರು. ವೃತ್ತಿಯಲ್ಲಿ ಉದ್ಯಮಿಯಾಗಿರುವ ರವೀಂದ್ರ ಇಂದ್ರರಾಜ್ ಅವರು ಸುದೀರ್ಘ ಕಾಲದಿಂದ ದಲಿತ ಸಮುದಾಯಕ್ಕಾಗಿ ದುಡಿಯುತ್ತಿದ್ದಾರೆ. ಇದೀಗ ಕ್ಯಾಬಿನೆಟ್ ಸಚಿವರಾಗಿ, ಅವರು ಆಡಳಿತಾತ್ಮಕ ಸುಧಾರಣೆಗಳಿಗೆ ಮಹತ್ವದ ಕೊಡುಗೆ ನೀಡುವ ನಿರೀಕ್ಷೆಯಿದೆ.

### ಕಪಿಲ್ ಮಿಶ್ರಾ



ಕಪಿಲ್ ಮಿಶ್ರಾ ಸಹ ದೆಹಲಿ ಸರ್ಕಾರದ ಸಚಿವರಾಗಿ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣ ಸ್ವೀಕರಿಸಿದರು. ಮಿಶ್ರಾ ತಮ್ಮ ರಾಜಕೀಯ ಜೀವನವನ್ನು ಆಮ್ ಆದ್ಮಿ ಪಕ್ಷದಿಂದ ಪ್ರಾರಂಭಿಸಿದವರು. 2015 ರಲ್ಲಿ, ಅವರು ಆಮ್ ಆದ್ಮಿ ಪಕ್ಷದ ಸರ್ಕಾರದಲ್ಲಿ ನೀರು ಮತ್ತು ಪ್ರವಾಸೋದ್ಯಮ ಸಚಿವರಾದರು. 44 ವರ್ಷದ ಕಪಿಲ್ ಮಿಶ್ರಾ ಅವರನ್ನು 2017 ರಲ್ಲಿ ದೆಹಲಿ ಸರ್ಕಾರದ ಸಂಪುಟದಿಂದ ವಜಾಗೊಳಿಸಲಾಯಿತು. ಬಳಿಕ ಅವರು 2019 ರಲ್ಲಿ ಬಿಜೆಪಿ ಸೇರಿದರು. ಈ ವಿಧಾನಸಭಾ ಚುನಾವಣೆಯಲ್ಲಿ ಅವರು ಆಮ್ ಆದ್ಮಿ ಪಕ್ಷದ ಮನೋಜ್ ಕುಮಾರ್ ತ್ಯಾಗಿ ಅವರನ್ನು 23,355 ಮತಗಳಿಂದ ಸೋಲಿಸಿದ್ದರು. ಮಿಶ್ರಾ ತಮ್ಮ ಸ್ಪಷ್ಟ ಹೇಳಿಕೆಗಳು ಮತ್ತು ಸಕ್ರಿಯ ರಾಜಕೀಯಕ್ಕೆ ಹೆಸರುವಾಸಿಯಾಗಿದ್ದಾರೆ.

### ಆಶಿಶ್ ಸೂದ್



ಇನ್ನು ಆಶಿಶ್ ಸೂದ್ ಸಹ ಸಚಿವರಾಗಿ ಅಧಿಕಾರ ಸ್ವೀಕಾರ ಮಾಡಿದರು. ಬಿಜೆಪಿಯ ದೆಹಲಿ ಘಟಕದ ಪ್ರಮುಖ ನಾಯಕರಲ್ಲಿ ಒಬ್ಬರು ಮತ್ತು ಪಕ್ಷದ ಪಂಜಾಬಿ ಮುಖ. ಜನಕ್‌ಪುರಿ ವಿಧಾನಸಭಾ ಕ್ಷೇತ್ರದಿಂದ ಮೊದಲ ಬಾರಿಗೆ ಶಾಸಕರಾಗಿದ್ದಾರೆ, ಅಲ್ಲಿ ಅವರು ಎಎಪಿ ಅಭ್ಯರ್ಥಿ ಪ್ರವೀಣ್ ಕುಮಾರ್ ಅವರನ್ನು 18,766 ಮತಗಳಿಂದ ಸೋಲಿಸಿದ್ದರು. ಬಿಜೆಪಿ ದೆಹಲಿ ರಾಜ್ಯ ಕಾರ್ಯದರ್ಶಿ ಮತ್ತು ಪ್ರಧಾನ ಕಾರ್ಯದರ್ಶಿಯೂ ಆಗಿದ್ದಾರೆ.

### ಡಾ.ಪಂಕಜ್ ಸಿಂಗ್



ಬಿಹಾರ ಮೂಲದ ಡಾ.ಪಂಕಜ್ ಕುಮಾರ್ ಸಿಂಗ್, ದೆಹಲಿ ಸರ್ಕಾರದಲ್ಲಿ ನೂತನ ಸಚಿವರಾಗಿ ಪ್ರಮಾಣ ಪಡೆದುಕೊಂಡರು. ರಜಪೂತ ಸಮುದಾಯದಿಂದ ಬಂದವರಾಗಿರುವ ಇವರು ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಅವರು ವಿಕಾಸಪುರಿಯಿಂದ ಆಮ್ ಆದ್ಮಿ ಪಕ್ಷದ ಮಹೇಂದ್ರ ಯಾದವ್ ಅವರನ್ನು 12,876 ಮತಗಳಿಂದ ಸೋಲಿಸಿದ್ದರು. ಬಿಹಾರದ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ರಜಪೂತ ಸಮುದಾಯಕ್ಕೆ ಪ್ರಾತಿನಿಧ್ಯ ನೀಡಲು ಮತ್ತು ಪೂರ್ವಾಂಚಲ್ ಸಮೀಕರಣವನ್ನು ಶಮನಗೊಳಿಸಲು ಮೊದಲ ಬಾರಿಗೆ ಶಾಸಕರಾದ ಮೇಲೆ ಅವರನ್ನು ಸಂಪುಟ ಸಚಿವರನ್ನಾಗಿ ಮಾಡಲಾಗಿದೆ.

# ರಾಜ್ಯ ಸರ್ಕಾರದಿಂದ ಆಡಳಿತ ಯಂತ್ರಕ್ಕೆ ಮೇಜರ್ ಸರ್ಜರಿ

**10 ಐಎಎಸ್ ಅಧಿಕಾರಿಗಳ ವರ್ಗಾವಣೆ**

• **ಉದಯವಾಹಿನಿ, ಬೆಂಗಳೂರು**

ರಾಜ್ಯ ಸರ್ಕಾರದಿಂದ ಆಡಳಿತ ಯಂತ್ರಕ್ಕೆ ಚುರುಕು ಮುಟ್ಟಿಸೋ ಸಲುವಾಗಿ ಮೇಜರ್ ಸರ್ಜರಿ ಮಾಡಿದೆ. 10 ಐಎಎಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡಿ ಆದೇಶಿಸಿದೆ. ಈ ಸಂಬಂಧ ಅಧಿಸೂಚನೆ ಹೊರಡಿಸಿರುವಂತ ರಾಜ್ಯ ಸರ್ಕಾರವು ಹುದ್ದೆಗಾಗಿ ಕಾಯುತ್ತಿರುವ ಗೋವಿಂದ ರೆಡ್ಡಿ, ಐಎಎಸ್ (ಕೆಎನ್: 2013) ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ಸರ್ಕಾರದ ಜಂಟಿ ಕಾರ್ಯದರ್ಶಿ, ಮೂಲಸೌಕರ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡಿನ ಜಲ ಸಾರಿಗೆ ಇಲಾಖೆ, ಬೆಂಗಳೂರು ಎಂದು ನೇಮಿಸಲಾಗಿದೆ.




ಬೆಂಗಳೂರು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ನಿರ್ದೇಶಕ ದರ್ಶನ್ ಎಚ್.ವಿ., ಐಎಎಸ್ (ಕೆಎನ್: 2016) ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾಯಿಸಲಾಗಿದೆ ಮತ್ತು ಮುಂದಿನ ಆದೇಶದವರೆಗೆ ಬೆಂಗಳೂರಿನ ವಾಣಿಜ್ಯ ತೆರಿಗೆಗಳ ಹೆಚ್ಚುವರಿ ಆಯುಕ್ತ (ಸೇವಾ ವಿಶ್ಲೇಷಣಾ ವಿಭಾಗ) ಆಗಿ ನೇಮಿಸಲಾಗಿದೆ. ಚಂದ್ರಶೇಖರ ನಾಯಕ ಎಲ್., ಐಎಎಸ್ ಅವರನ್ನು ಸಮಕಾಲೀನ ಹೊಣೆಗಾರಿಕೆಯಿಂದ ಬಿಡುಗಡೆ ಮಾಡಲಾಗಿದೆ.

ಮೈಸೂರು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಾಯಿತ್ರಿ ಕೆ.ಎಂ., ಐಎಎಸ್ (ಕೆಎನ್ 2016) ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾಯಿಸಲಾಗಿದೆ ಮತ್ತು ಮುಂದಿನ ಆದೇಶದವರೆಗೆ ಬೆಂಗಳೂರಿನ ರಾಷ್ಟ್ರೀಯ ಜೀವನೋಪಾಯ ಮಿಷನ್ (ಎನ್‌ಎಲ್‌ಎಂ) ಗೆ ನೇಮಿಸಲಾಗಿದೆ. ಹಾವೇರಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಕ್ಷಯ್ ಶ್ರೀಧರ್, ಐಎಎಸ್ (ಕೆಎನ್. 2017) ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ವರ್ಗಾವಣೆ ಮಾಡಲಾಗಿದೆ ಮತ್ತು ಮುಂದಿನ ಆದೇಶದವರೆಗೆ ಸರ್ಕಾರದ ಉಪ ಕಾರ್ಯದರ್ಶಿ, ಡಿಪಿಎಆರ್ (ಸೇವೆಗಳು), ಬೆಂಗಳೂರು ಉಪ ಕಾರ್ಯದರ್ಶಿ ಉಕೇಶ್ ಕುಮಾರ್ ಎಸ್.. ಐಎಎಸ್ ಅವರನ್ನು ವರ್ಗಾವಣೆ ಮಾಡಲಾಗಿದೆ. ಹುದ್ದೆಗಾಗಿ ಕಾಯುತ್ತಿರುವ ಪದ್ಮಾ ಬಸವಂತಪ್ಪ, ಐಎಎಸ್ (ಕೆಎನ್. 2017) ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ನಿರ್ದೇಶಕರು, ಸಾಮಾಜಿಕ ಲೆಕ್ಕಪರಿಶೋಧನೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಎಂದು ನೇಮಿಸಲಾಗಿದೆ.

# ಮುಂದಿನ ಬಾರಿ ನನ್ನ ನಾಯಕತ್ವದಲ್ಲಿ ಚುನಾವಣೆ ಆಗ ಒಪಿಎಸ್ ಜಾರಿ

• **ಉದಯವಾಹಿನಿ, ಬೆಂಗಳೂರು**



ಒಪಿಎಸ್ ಜಾರಿ ವಿಚಾರವಾಗಿ ಡಿಸಿಎಂ ಭರವಸೆ ನೀಡಿದಾಗ ನೌಕರರು ಡಿಕೆ, ಡಿಕೆ ಎಂದು ಘೋಷಣೆ ಕೂಗಿದರು. ಆಗ ಸಭಿಕರಿಗೆ ಸುಮ್ಮನಿರಲು ಹೇಳಿದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು, ನಾನು ಮುಂದಿನ ಬಾರಿ ಚುನಾವಣೆಗೆ ನಿಂತಾಗ, ನನ್ನ ನಾಯಕತ್ವದಲ್ಲಿ ನಡೆದಾಗ ದಯವಿಟ್ಟು ಈ ಪದವನ್ನು ಉಪಯೋಗಿಸಿ. ನಾನು ವಿಧಾನಸೌಧದಲ್ಲಿ ಇರುವವನೇ. ನಾನು ಇನ್ನು ಎಂಟತ್ತು ವರ್ಷ ಬಿಟ್ಟು ಹೋಗುವುದಿಲ್ಲ. ನನ್ನ ಆರೋಗ್ಯ ಇನ್ನೂ ಗಟ್ಟಿಯಾಗಿದೆ. ನನ್ನ ಮೇಲೆ ನಂಬಿಕೆಯಿಡಿ ಎಂದು ಮಾರ್ಮಿಕವಾಗಿ ಹೇಳಿದರು. ಜಾರಿಗೆ ಸಂಬಂಧ ಅಂಜುಮ್ ಪರ್ವೇಜ್ ಅವರ ಅಧ್ಯಕ್ಷತೆಯಲ್ಲಿ ಸಮಿತಿ ರಚನೆ ಮಾಡಲಾಗಿದ್ದು, ಆ ಸಮಿತಿಯ ವರದಿಯನ್ನು ಪರಿಶೀಲಿಸಿ ಅನುಷ್ಠಾನಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಡಿಸಿಎಂ ಭರವಸೆ ನೀಡಿದರು. ಬೆಂಗಳೂರು ಅರಮನೆ ಮೈದಾನದಲ್ಲಿ ಏರ್ಪಡಿಸಿದ ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳ ಸಮಾವೇಶದಲ್ಲಿ ಅವರು ಮಾತನಾಡುತ್ತಾ, ಕಾಂಗ್ರೆಸ್ ಪಕ್ಷದ ಪ್ರಣಾಳಿಕೆಯಲ್ಲಿ ಒಪಿಎಸ್ ಬಗ್ಗೆ ನಾವು ಭರವಸೆ ನೀಡಿದ್ದೆವು. ಅದನ್ನು ಜಾರಿಗೆ ತರಲು ಬದ್ಧರಾಗಿದ್ದೇವೆ. ನೀವು ಬಿಟ್ಟರೂ ಈ ವಿಚಾರವನ್ನು ನಾವು ಬಿಡುವುದಿಲ್ಲ. ಆದರೆ ಸ್ವಲ್ಪ ತಾಳ್ಮೆಯಿರಲಿ'' ಎಂದು ನೌಕರರಿಗೆ ಸಂದೇಶ ನೀಡಿದರು.

**ಸರ್ಕಾರಿ ನೌಕರರ ಮಹತ್ವ:** ಸರ್ಕಾರದ ರಥ ಎಳೆಯುವವರು ಸರ್ಕಾರಿ ನೌಕರರು. ನೀವು ಇಲ್ಲದಿದ್ದರೆ ಸರ್ಕಾರದ ಚಕ್ರ ಮುಂದಕ್ಕೆ ಸಾಗುವುದಿಲ್ಲ ನಿಮ್ಮ ಸಂಘ ರಚನಾತ್ಮಕವಾಗಿ ಕೆಲಸ ಮಾಡುತ್ತಿದೆ. ಸರ್ಕಾರಿ ಕೆಲಸ ಕೇವಲ ಹುದ್ದೆಯಲ್ಲ. ಅದೊಂದು ಜವಾಬ್ದಾರಿ. ನೀವು ಹೃದಯ ಶ್ರೀಮಂತಿಕೆಯಿಂದ ಜವಾಬ್ದಾರಿ ಸರಿಯಾಗಿ ನಿಭಾಯಿಸಬೇಕು'' ಎಂದು ಅವರು ಉಲ್ಲೇಖಿಸಿದರು.

# ಎಲ್ಲದಕ್ಕೂ ಒಮ್ಮೆಲೆ ಉತ್ತರ ಕೊಡುತ್ತೇನೆ

• **ಉದಯವಾಹಿನಿ, ಬೆಂಗಳೂರು**

ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮಾಡಿರುವ ಆರೋಪಗಳ ಬಗ್ಗೆ ಪಟ್ಟಿ ಮಾಡಿದ್ದೇನೆ. ಅವರ ಎಲ್ಲಾ ಆರೋಪಗಳಿಗೂ ಒಮ್ಮೆಲೆ ಉತ್ತರ ಕೊಡುತ್ತೇನೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿರುಗೇಟು ನೀಡಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿ.ವೈ.ವಿಜಯೇಂದ್ರ, ಯತ್ನಾಳ್ ಏನೇನು ಆರೋಪ ಮಾಡಿದ್ದಾರೋ ಎಲ್ಲಾವನ್ನೂ ಪಟ್ಟಿ ಮಾಡಿಕೊಂಡಿದ್ದೇನೆ.ಸಮಯ ಬಂದಾಗ ಎಲ್ಲಾದಕ್ಕೂ ಉತ್ತರ ಕೊಡುತ್ತೇನೆ. ಅವರು ಮಾಡುವ ಆರೋಪಗಳಿಗೆ ಹೇಳಿಕೆಗಳಿಗೆ ಪ್ರತಿದಿನ ಉತ್ತರಿಸುತ್ತಾ ಕೂರಲಾಗುವುದಿಲ್ಲ. ಒಬ್ಬ ರಾಜ್ಯಾಧ್ಯಕ್ಷನಾಗಿ ನನಗೆ ಮಾಡಲು ಸಾಕಷ್ಟು ಕೆಲಸಗಳಿವೆ ಎಂದರು. ಅವರು ಏನು ಮಾತನಾಡುತ್ತಾರೆ ಮಾತನಾಡಲಿ. ಏಕವಚನದಲ್ಲಿ ಮಾತನಾಡುತ್ತಾರೋ, ಬೇರೆ ಭಾಷೆಯಲ್ಲಿ ಮಾತನಾಡುತ್ತಾರೋ ಮಾತನಾಡಲಿ, ಅವರು ಹಿರಿಯರಿದ್ದಾರೆ. ನಾನು ಪಕ್ಷ ಸಂಘಟನೆ ಮಾಡುವ ಕೆಲಸ ಮಾಡುತ್ತೇನೆ. ಸಂದರ್ಭ ಬಂದಾಗ ಉತ್ತರ ಕೊಡುತ್ತೇನೆ ಎಂದು ಹೇಳಿದರು.

# ಸಿದ್ದು ಬಣಕ್ಕೆ 'ಕೈ'ಕಮಾಂಡ್ ವಾರ್ನಿಂಗ್



• **ಉದಯವಾಹಿನಿ, ಬೆಂಗಳೂರು**

ರಾಜ್ಯ ರಾಜಕಾರಣದಲ್ಲಿ ತಮ್ಮ ಅಸ್ತಿತ್ವ ಸ್ಥಾಪನೆಗಾಗಿ ದೆಹಲಿ ಯಾತ್ರೆ ನಡೆಸಿದ್ದ ಸಚಿವರ ಉತ್ಸಾಹಕ್ಕೆ ಹೈಕಮಾಂಡ್ ತಣ್ಣೀರೆರಚಿದೆ. ಗೃಹಸಚಿವ ಡಾ.ಜಿ.ಪರಮೇಶ್ವರ್, ಸತೀಶ್ ಜಾರಕಿಹೊಳಿ, ಕೆ.ಎನ್. ರಾಜಣ್ಣ ಸೇರಿದಂತೆ ಹಲವಾರು ಮಂದಿ ಸಚಿವರು ಡಿ.ಕೆ. ಶಿವಕುಮಾರ್‌ರವರ ವಿರುದ್ಧ ತೆರೆಮರೆಯ ಕಸರತ್ತು ನಡೆಸಲು ದೆಹಲಿ ದಂಡಯಾತ್ರೆ ನಡೆಸಿದರು. ಆದರೆ ಇದ್ಯಾವುದಕ್ಕೂ ಹೈಕಮಾಂಡ್ ಸೊಪ್ಪು ಹಾಕದೇ ನಿಮ್ಮ ಕೆಲಸ ನೀವು ನೋಡಿಕೊಳ್ಳಿ ಪಕ್ಷದ ವಿಚಾರಗಳನ್ನು ಬಹಿರಂಗವಾಗಿ ಚರ್ಚಿಸಿ ಮುಜುಗರ ಉಂಟು ಮಾಡಬೇಡಿ. ಒಂದು ವೇಳೆ ಇದೇ ಪ್ರವೃತ್ತಿಯನ್ನು ಮುಂದುವರೆಸಿದರೆ ಹೈಕಮಾಂಡ್ ಮಧ್ಯಪ್ರವೇಶ ಅನಿವಾರ್ಯವಾಗಬಹುದು ಎಂದು ಎಚ್ಚರಿಕೆ ನೀಡಿರುವುದಾಗಿ ತಿಳಿದುಬಂದಿದೆ.

# ಸಿದ್ದರಾಮಯ್ಯಗೆ ಮತ್ತೊಂದು ಸಂಕಷ್ಟ ರಾಜ್ಯಪಾಲರಿಗೆ ಇನ್ನೊಂದು ದೂರು

• **ಉದಯವಾಹಿನಿ, ಬೆಂಗಳೂರು**

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ–ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರಿಗೆ ಲೋಕಾಯುಕ್ತ ಪೊಲೀಸರು ಕ್ಲೀನ್ ಚಿಟ್ ನೀಡಿದ್ದಾರೆ. ಮುಡಾ ಹಗರಣದಲ್ಲಿ ಸಿಎಂ ಸಿದ್ಧರಾಮಯ್ಯ ಅವರಿಗೆ ಬಿಗ್ ರಿಲೀಫ್ ಸಿಕ್ಕಿದೆ ಎನ್ನುವಾಗಲೇ ಬಿಜೆಪಿ: ರಾಜ್ಯಪಾಲರಿಗೆ ಮತ್ತೊಂದು ದೂರು ನೀಡಿದೆ. ಮುಡಾಗೆ ಸಂಬಂಧಿಸಿದ ಮತ್ತೊಂದು ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ನಾಯಕರು ಸಿಎಂ ವಿರುದ್ಧ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ದೂರು ನೀಡಿದ್ದಾರೆ. ಮುಡಾ ಆಸ್ತಿಯ ಅಕ್ರಮ ಡಿನೋಟಿಫಿಕೇಷನ್ ಕುರಿತು ಸಿದ್ಧರಾಮಯ್ಯ ಹಾಗೂ ಬಸವೇಗೌಡ ವಿರುದ್ಧ ತನಿಖೆಗೆ ಅನುಮತಿ ನೀಡುವಂತೆ ಕೋರಿ ಬಿಜೆಪಿ ಮುಖಂಡ ಎನ್.ಆರ್.ರಮೇಶ್, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರಿಗೆ ಪತ್ರ ಬರೆದಿದ್ದಾರೆ.

ಹಿಣಕಲ್ ಗ್ರಾಮದ ಸರ್ವೆ ನಂ.70/4ಎ ಜಾಗವನ್ನು ಮುಡಾ ಸ್ವಾಧೀನಪಡಿಸಿಕೊಂಡಿತ್ತು. ಈ ಭೂಮಿಯನ್ನು ಡಿನೋಟಿಫಿಕೇಷನ್ ಮಾಡುವಲ್ಲಿ ಸಿಎಂ ಕಾನೂನು ಉಲ್ಲಂಘನೆ ಮಾಡಿದ್ದಾರೆ. ಅಧಿಕಾರ ದುರ್ಬಳಕೆ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿ ಎನ್.ಆರ್.ರಮೇಶ್ ದೂರು ನೀಡಿದ್ದಾರೆ.


# ಹಣದ ಬದಲು ಅಕ್ಕಿ ವಿತರಣೆಗೆ ಆದೇಶ ನೀಡಿದ ಸರ್ಕಾರಕ್ಕೆ ಅಭಿನಂದನೆ

## ರಾಜ್ಯ ಪಡಿತರ ವಿತರಕರ ಸಂಘದ ರಾಜ್ಯಾಧ್ಯಕ್ಷ ಹಾಗೂ ರಾಷ್ಟ್ರೀಯ ಕಾರ್ಯಧ್ಯಕ್ಷರಾದ ಕೃಷ್ಣಪ್ಪ ಸಚಿವರಿಗೆ ಮನವಿ

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಸರ್ಕಾರ ಘೋಷಣೆ ಮಾಡಿದ್ದ ಗ್ಯಾರಂಟಿ ಯೋಜನೆಯಡಿ ಉಚಿತ ಅಕ್ಕಿ ಯೋಜನೆಯು ಒಂದು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಇದುವರೆಗೆ ಕೇಂದ್ರ ಸರ್ಕಾರ ನೀಡುತ್ತಿದ್ದ 5 ಕೆ.ಜಿ ಅಕ್ಕಿ ರಾಜ್ಯ ಸರ್ಕಾರದ ಪಾಲು 5 ಕೆಜಿ ಅಕ್ಕಿಯ ಬದಲು ಡಿಬಿಟಿ ಮುಖಾಂತರ ಪ್ರತಿ ಕಾರ್ಡುದಾರರ ಒಬ್ಬರು ಸದಸ್ಯರಿಗೆ 170 ರೂ.ಗಳಂತೆ ಡಿಬಿಟಿ ಮುಖಾಂತರ ಹಣ ವರ್ಗಾವಣೆಯಾಗುತ್ತಿತ್ತು. ಸರ್ಕಾರ ಇತ್ತೀಚಿಗೆ ಪಡಿತರ ಕಾರ್ಡುದಾರರಿಂದ ಸಮೀಕ್ಷೆ ನಡೆಸಿ ಈ ಸಮೀಕ್ಷೆಯಲ್ಲಿ ಶೇಕಡ 98 ರಷ್ಟು ಪಡಿತರ ಕಾರ್ಡುದಾರರು ಬಡ ಕುಟುಂಬದವರು ಅಕ್ಕಿಯನ್ನು ನೀಡಬೇಕೆಂದು, ಹಣ ಬೇಡ ಎಂದು ಸಮೀಕ್ಷೆಯಲ್ಲಿ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದರು.

**ಸರ್ಕಾರದ ಗಮನ ಸೆಳೆದ ಕೃಷ್ಣಪ್ಪ**



### ಉದಯವಾಹಿನಿ ಪತ್ರಿಕೆಗೆ ಹೇಳಿಕೆ ಕೊಟ್ಟ ಅಧ್ಯಕ್ಷ ಕೃಷ್ಣಪ್ಪ

ಆಹಾರ ಸಚಿವರಾದ ಕೆಎಚ್ ಮುನಿಯಪ್ಪರವರು ಕೇಂದ್ರ ಆಹಾರ ಸಚಿವರೊಂದಿಗೆ ಹಲವು ಬಾರಿ ಚರ್ಚಿಸಿ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಅಕ್ಕಿ ಬಿಡುಗಡೆಗೊಳಿಸುವಲ್ಲಿ ಶ್ರಮಿಸಿರುವ ರಾಜ್ಯ ಆಹಾರ ಖಾತೆ ಸಚಿವರಾದ ಕೆಎಚ್ ಮುನಿಯಪ್ಪ ರವರಿಗೆ ಮತ್ತು ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರಿಗೆ ರಾಜ್ಯದ ಕೋಟ್ಯಂತರ ಬಿಪಿಎಲ್ ಕುಟುಂಬ ವರ್ಗದ ಸದಸ್ಯರ ಪರವಾಗಿ ಮತ್ತು ರಾಜ್ಯದ ನ್ಯಾಯಬೆಲೆ ಅಂಗಡಿ ಮಾಲೀಕರ ಪರವಾಗಿ ಅಭಿನಂದಿಸುವುದಾಗಿ ರಾಜ್ಯ ಪಡಿತರ ವಿತರಕರ ಸಂಘದ ರಾಜ್ಯ ಅಧ್ಯಕ್ಷ ಹಾಗೂ ರಾಷ್ಟ್ರೀಯ ಕಾರ್ಯ ಅಧ್ಯಕ್ಷ ಕೃಷ್ಣಪ್ಪ ಉದಯವಾಹಿನಿ ಪತ್ರಿಕೆಗೆ ತಿಳಿಸಿದ್ದಾರೆ.

ರಾಜ್ಯ ಪಡಿತರ ವಿತರಕರ ಸಂಘದ ರಾಜ್ಯಾಧ್ಯಕ್ಷ ಹಾಗೂ ರಾಷ್ಟ್ರೀಯ ಕಾರ್ಯಧ್ಯಕ್ಷರಾದ ಕೃಷ್ಣಪ್ಪ ಆಹಾರ ಸಚಿವರಾದ ಕೆಎಚ್ ಮುನಿಯಪ್ಪ ರವರಿಗೆ ಹಲವು ಬಾರಿ ಮನವಿ ಸಲ್ಲಿಸಿ ಕೇಂದ್ರ ಸರ್ಕಾರದಿಂದ ಅಕ್ಕಿಯನ್ನು ಖರೀದಿಸಿ ರಾಜ್ಯದ ಬಿಪಿಎಲ್ ಕಾರ್ಡುದಾರರಿಗೆ ಹಣದ ಬದಲು ಅಕ್ಕಿ ನೀಡಿದರೆ ರಾಜ್ಯ ಸರ್ಕಾರಕ್ಕೆ ಕೋಟ್ಯಾಂತರ ರೂಗಳು ಹಣ ಉಳಿತಾಯವಾಗುತ್ತದೆ ಎಂದು ರಾಜ್ಯ ಪಡಿತರ ವಿತರಕರ ಸಂಘದ ವತಿಯಿಂದ ಸರ್ಕಾರದ ಗಮನ ಸೆಳೆದಿದ್ದರು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹8,804 /Gram24ct ₹8,070/Gram22ct | ಬೆಳ್ಳಿ: ₹100.50/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

## ನಾಸ್ತಿಕೋ ವೇದನಿಂದಕಃ

ಮನುಸ್ಮೃತಿಯ ಎರಡನೇ ಅಧ್ಯಾಯದ ಮಾತು. ದ್ವಿಜನಾದವನು = ಬ್ರಾಹ್ಮಣ ಕ್ಷತ್ರಿಯ ಹಾಗೂ ವೈಶ್ಯನು ವೇದ ಹಾಗೂ ಸ್ಮೃತಿಗಳನ್ನು ಆದರಿಸಿ ಆಧರಿಸಿ ಅವುಗಳು ಹೇಳಿದಂತೆ ನಡೆಯಬೇಕು. ಆತನು ಯಾವತ್ತೂ ಇವುಗಳನ್ನು ನಿಂದಿಸಕೂಡದು. ಒಂದು ವೇಳೆ ನಿಂದಿಸಿದರೆ ಅವಮಾನಿಸಿದರೆ ಅಂಥವನನ್ನು ಸಜ್ಜನರು ಸಮಾಜದಿಂದ ಬಹಿಷ್ಕರಿಸಬೇಕು. ವೇದನಿಂದಕನು ದ್ವಿಜನಾಗಿದ್ದರೂ ಸಹ ಆತ ವೇದ ಒಪ್ಪದ ನಾಸ್ತಿಕನಂತೆಯೇ ಸರಿ. ವೇದ ಹಾಗೂ ಸ್ಮೃತಿಗಳ ಪಾವಿತ್ರ್ಯ ಮತ್ತು ಅಸ್ತಿತ್ವದ ಸಂರಕ್ಷಣೆಗಾಗಿ ಈ ಕಟ್ಟುನಿಟ್ಟಿನ ಶಿಸ್ತು ಅತ್ಯಗತ್ಯ. ಇಲ್ಲದಿದ್ದಲ್ಲಿ ಇವುಗಳ ಬಗ್ಗೆ ಮನಬಂದಂತೆ ಆಡಿಕೊಳ್ಳುವ ಪ್ರವೃತ್ತಿ ತೋರುವುದು. ಆದರೆ ವಿಚಾರ ಹಾಗೂ ಕಾಲಕ್ಕೆ ಅಪ್ರಸ್ತುತವಾದುದನ್ನು ವಿರೋಧಿಸಬೇಕಾಗುತ್ತದೆ, ತಿದ್ದುಪಡಿಗೊಳಿಸಬೇಕಾಗುತ್ತದೆ. ಇಲ್ಲವಾದಲ್ಲಿ ಇವು ಜನರಿಂದ ದೂರ ಉಳಿಯುತ್ತವೆ. ಇಂದಿನ ಪರಿಸ್ಥಿತಿ ಇದೇ ಆಗಿದೆ. ಇಂದು ಮತ್ತೆ ವೇದ ಸ್ಮೃತಿಗಳನ್ನು ಹಿಂದಿನಂತೆ ಬಹುಪಾಲು ಜನ ಓದಲಾರಂಭಿಸಲು ಅಪ್ರಸ್ತುತವಾದುದನ್ನು = ದ್ವಿಜರು ಮಾತ್ರ ವೇದ ಓದಲರ್ಹರು ಇತ್ಯಾದಿಯನ್ನು ಕೈಬಿಡಬೇಕು.

## ಡಿಜಿ ಇಮೇಜ್ – ನಮ್ಮ ಇಮೇಜ್



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಕೆಪಿಎ ನೇತೃತ್ವದಲ್ಲಿ ಹಾಗೂ ನಾಡಿನ ಸಮಸ್ತ ಜಿಲ್ಲಾ ಮತ್ತು ತಾಲ್ಲೂಕು ಸಂಘಗಳ ಸಹಭಾಗಿತ್ವದಲ್ಲಿ ನಡೆಯಲಿರುವ 11 ನೇ ವರ್ಷದ ಡಿಜಿ ಇಮೇಜ್ – 2025 ಅಂತರರಾಷ್ಟ್ರೀಯ ವಸ್ತು ಪ್ರದರ್ಶಕ್ಕೆ ನಾಡಿನ ಸಮಸ್ತ ಛಾಯಾಬಂಧುಗಳಿಗೆ ಸ್ವಾಗತ ಸುಸ್ವಾಗತ. ದಿನಾಂಕ : 11, 12, 13 ನೇ ಏಪ್ರಿಲ್ 2025 ಸ್ಥಳ : ತ್ರಿಪುರವಾಸಿನಿ, ಅರಮನೆ ಮೈದಾನ, ಬೆಂಗಳೂರು ಛಾಯಾಗ್ರಾಹಕರಿಗಾಗಿ – ಛಾಯಾಗ್ರಾಹಕರೇ ಆಯೋಜಿಸಿರುವ ದಕ್ಷಿಣ ಭಾರತದ ಅತೀ ದೊಡ್ಡ ಅಂತರರಾಷ್ಟ್ರೀಯ ವಸ್ತು ಪ್ರದರ್ಶನಕ್ಕೆ ಸುಸ್ವಾಗತ. ಸಹಸ್ರ ಸಹಸ್ರ ಸಂಖ್ಯೆಯಲ್ಲಿ ಬನ್ನಿ – ಭಾಗವಹಿಸಿ, ಯಶಸ್ವಿಗೊಳಿಸಿ

## ಕೃಷ್ಣಯ್ಯ ಶೆಟ್ಟಿಗೆ ರಿಲೀಫ್: ಶಿಕ್ಷೆ ಅಮಾನತಿನಲ್ಲಿಟ್ಟು ಹೈಕೋರ್ಟ್ ಜಾಮೀನು

• ಉದಯವಾಹಿನಿ, ಬೆಂಗಳೂರು

ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದಿಂದ ಗೃಹ ಸಾಲ ಕೊಡಿಸಿ ವಂಚಿಸಿದ ಆರೋಪದಡಿ ಮಾಜಿ ಸಚಿವ ಕೃಷ್ಣಯ್ಯ ಶೆಟ್ಟಿಗೆ ಮಧ್ಯಂತರ ರಿಲೀಫ್ ಸಿಕ್ಕಿದೆ. ಅವರಿಗೆ ವಿಧಿಸಿದ ಶಿಕ್ಷೆ ಅಮಾನತ್ತಿನಲ್ಲಿಟ್ಟು ಹೈಕೋರ್ಟ್ ಜಾಮೀನು ನೀಡಿದೆ. ಠೇವಣಿ ಇಟ್ಟ ಹಣ ಬಿಡುಗಡೆ ಮಾಡಿದಂತೆ ತಡೆಯಾಜ್ಞೆ ನೀಡಲಾಗಿದೆ. ಜನಪ್ರತಿನಿಧಿಗಳ ವಿಶೇಷ ಕೋರ್ಟ್ ಮೂರು ವರ್ಷ ಶಿಕ್ಷೆ ವಿಧಿಸಿತ್ತು. ಶಿಕ್ಷೆ ಪ್ರಶ್ನಿಸಿ ಕೃಷ್ಣಯ್ಯ ಶೆಟ್ಟಿ ಮೇಲ್ಮನವಿ ಸಲ್ಲಿಸಿದ್ದರು. ಕೃಷ್ಣಯ್ಯ ಶೆಟ್ಟಿ 1993ರಲ್ಲಿ ಬಾಲಾಜಿ ಕೃಪಾ ಎಂಟರ್‌ಪ್ರೈಸಸ್ ಮಾಲೀಕರಾಗಿದ್ದ ವೇಳೆ ಬಿಟಿಎಸ್. ಕೆಎಸ್‌ಆರ್‌ಟಿಸಿ, ಬಿಎಸ್‌ಎನ್‌ಎಲ್ ಇತರೆ ಸಾರ್ವಜನಿಕ ಉದ್ದಿಮೆಗಳ 181 ನೌಕರರಿಗೆ ಗೃಹ ನಿರ್ಮಾಣಕ್ಕೆ ಸಾಲ ಕೊಡಿಸುವುದಾಗಿ ಹೇಳಿ ವಂಚಿಸಿದ್ದ ಆರೋಪವಿದೆ. ಬ್ಯಾಂಕಿನಿಂದ ಪಡದ ಮೊತ್ತದಲ್ಲಿ 3.53 ಕೋಟಿ ಸಾಲ ತೀರಿಸಿಲ್ಲ. 7.15 ಕೋಟಿ ಸಾಲಕ್ಕೆ ನಕಲಿ ದಾಖಲೆ ಸೃಷ್ಟಿಸಲಾಗಿದೆ ಎಂದು ಆರೋಪಿಸಲಾಗಿತ್ತು. ಮುಖ್ಯ ವಿಚಕ್ಷಣದಳದ ಅಂದಿನ ಮುಖ್ಯಸ್ಥರು ನೀಡಿದ ದೂರು ಆಧರಿಸಿ ಸಿಬಿಐ ತನಿಖೆ ನಡೆಸಿ ದೋಷಾರೋಪ ಪಟ್ಟಿ ಸಲ್ಲಿಸಿತ್ತು. ಬ್ಯಾಂಕಿಗೆ ವಂಚಿಸಿದ ಆರೋಪದಡಿಯ ಕ್ರಿಮಿನಲ್ ಪ್ರಕರಣದಲ್ಲಿ ಕೃಷ್ಣಯ್ಯ ಶೆಟ್ಟಿ ಅವರಿಗೆ ಜನ ಪ್ರತಿನಿಧಿಗಳ ಸೆಷನ್ಸ್ ನ್ಯಾಯಾಲಯ ಮೂರು ವರ್ಷ ಜೈಲು ಶಿಕ್ಷೆ ವಿಧಿಸಿತ್ತು.

## ರಾಜ್ಯ ವಿಧಾನ ಪರಿಷತ್ತಿನ ವಿವಿಧ ಹುದ್ದೆಗಳ ನೇಮಕಾತಿಗೆ ಪರಿಷ್ಕೃತ ಪರೀಕ್ಷಾ ವೇಳಾಪಟ್ಟಿ

• ಉದಯವಾಹಿನಿ, ಬೆಂಗಳೂರು

ರಾಜ್ಯ ವಿಧಾನ ಪರಿಷತ್ತಿನ ಸಚಿವಾಲಯದ ವಿವಿಧ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದ ಸ್ಪರ್ಧಾತ್ಮಕ ಪರೀಕ್ಷಾ ಪರಿಷ್ಕೃತ ವೇಳಾಪಟ್ಟಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪ್ರಕಟಿಸಿದೆ. ಮಾ. 22ರಿಂದ ಮಾ.25ರವರೆಗೆ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿವೆ. ಕಿರಿಯ ಕಾನೋಲ್ ಆಪರೇಟರ್, ಕಪ್ಯೂಟರ್ ಆಪರೇಟರ್ ಹುದ್ದೆಗಳಿಗೆ ಮಾ.22ರಂದು, ಸಹಾಯಕ, ಕಿರಿಯ ಸಹಾಯಕ, ಕಂಪ್ಯೂಟರ್ ಆಪರೇಟರ್ ಮತ್ತು ಕಿರಿಯ ಕಾನೋಲ್ ಆಪರೇಟರ್ ಹುದ್ದೆಗಳಿಗೆ ಮಾ.23ರಂದು, ಹಿರಿಯ ಪ್ರೊಗ್ರಾಮರ್ ಮತ್ತು ಕಿರಿಯ ಪ್ರೊಗ್ರಾಮರ್ ಹುದ್ದೆಗಳಿಗೆ ಮಾರ್ಚ್ 24ರಂದು ಮತ್ತು ಡಾಟಾ ಎಂಟ್ರಿ ಸಹಾಯಕ ಹುದ್ದೆಗೆ ಮಾ.25ರಂದು ಬೆಳಿಗ್ಗೆ 10.30ರಿಂದ ಸಂಜೆ 4.30ರವರೆಗೆ ಪರೀಕ್ಷೆಗಳು ನಡೆಯಲಿವೆ ಎಂದು ಪ್ರಾಧಿಕಾರದ ಪ್ರಕಟಣೆ ತಿಳಿಸಿದೆ.

## ಅರಣ್ಯ ಪಡೆಯ ಮೊದಲ ಮಹಿಳಾ ಮುಖ್ಯಸ್ಥರಾಗಿ ಮೀನಾಕ್ಷಿ ನೇಗಿ ನೇಮಕ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ಅರಣ್ಯ ಪಡೆಗೆ ಪ್ರಥಮ ಮಹಿಳಾ ಮುಖ್ಯಸ್ಥೆಯಾಗಿ ಐಎಫ್‌ಎಸ್ ಅಧಿಕಾರಿ ಮೀನಾಕ್ಷಿ ನೇಗಿ ಅವರನ್ನು ನೇಮಕ ಮಾಡಲಾಗಿದೆ. ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯಾಗಿ ಮೀನಾಕ್ಷಿ ನೇಗಿಯವರನ್ನು ನೇಮಕ ಮಾಡಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಹಿರಿಯ



ಐಎಫ್‌ಎಸ್ ಅಧಿಕಾರಿಯಾಗಿರುವ ಮೀನಾಕ್ಷಿ ನೇಗಿ ಮೂಲತಃ ಉತ್ತರಾಖಂಡದವರು. ರಾಷ್ಟ್ರೀಯ ಮಹಿಳಾ ಆಯೋಗದ ಸದಸ್ಯ ಕಾರ್ಯದರ್ಶಿಯೂ ಆಗಿದ್ದ ಮೀನಾಕ್ಷಿ ಅವರನ್ನು ಆ ಸೇವೆಯಿಂದ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ್ದು, ಇದೀಗ ಕರ್ನಾಟಕದ ಅರಣ್ಯ ಪಡೆಗಳ ಮುಖ್ಯಸ್ಥರಾಗಿ ನೇಮಕ ಮಾಡಲಾಗಿದೆ. 1989ರ ಬ್ಯಾಚ್‌ನ ಐಎಫ್‌ಎಸ್ ಅಧಿಕಾರಿಯಾಗಿರುವ ಮೀನಾಕ್ಷಿ ನೇಗಿ ಆರಂಭದಲ್ಲೇ ಕರ್ನಾಟಕದಲ್ಲಿ ಅಧಿಕಾರ ವಹಿಸಿಕೊಂಡರು. ಕರ್ನಾಟಕ ಕೇಡರ್‌ನ ಅಧಿಕಾರಿಯಾಗಿ 35 ವರ್ಷಗಳಿಂದ ಅವರು ಸೇವೆ ಸಲ್ಲಿಸುತ್ತಿದ್ದಾರೆ. ದಕ್ಷ ಅಧಿಕಾರಿಯೆಂದು ಹೆಸರು ಮಾಡಿರುವ ಮೀನಾಕ್ಷಿ ನೇಗಿ ಬಳ್ಳಾರಿ, ಚಿಕ್ಕಮಗಳೂರು, ಮಂಡ್ಯದಲ್ಲಿ ಡಿಸಿಎಫ್ ಆಗಿ ಕೆಲಸ ಮಾಡಿದ್ದಾರೆ. ಬಳಿಕ ಕೇಂದ್ರ ಸರ್ಕಾರದ ಸೇವೆಗೆ ನಿಯೋಜನೆಗೊಂಡ ಅವರು ಆಯುಷ್ ಇಲಾಖೆಯ ಜಂಟಿ ಕಾರ್ಯದರ್ಶಿಯಾಗಿದ್ದರು. ಕಳೆದ 2 ವರ್ಷಗಳಿಂದ ಅವರು ಕೇಂದ್ರ ಮಹಿಳಾ ಆಯೋಗದ ಸದಸ್ಯ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸುತ್ತಿದ್ದರು.


# ಮುಡಾ ಹಗರಣ ಬಿಜೆಪಿ-ಜೆಡಿಎಸ್ ರಾಜಕೀಯ ಕುತಂತ್ರ

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣ ಬಿಜೆಪಿ–ಜೆಡಿಎಸ್‌ನ ರಾಜಕೀಯ ಕುತಂತ್ರ ಎಂದು ಕಿಡಿಕಾರಿರುವ ಡಿ.ಕೆ ಶಿವಕುಮಾರ್ ಇದು ಹೆಚ್ಚು ದಿನ ನಡೆಯುವುದಿಲ್ಲ ಎಂದು ತಿರುಗೇಟು ನೀಡಿದ್ದಾರೆ.

ಸದಾಶಿವನಗರದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಪ್ರಕರಣದ ಪ್ರಾರಂಭದಲ್ಲೇ ನಾನು ಹೇಳಿದ್ದೆ. ಬಿಜೆಪಿಯವರು ಬೆಂಗಳೂರಿನಿಂದ ಮೈಸೂರುವರೆಗೆ ಪಾದಯಾತ್ರೆ ಮಾಡಿದ್ದರು. ಆಗ ನಾನು ಏನು ಹೇಳಬೇಕೋ ಹೇಳಿದ್ದೆ. ಇದು ರಾಜಕೀಯ ಪ್ರೇರಿತ ಎಂದು ಪ್ರತಿಪಕ್ಷಗಳ ವಿರುದ್ಧ ವಾಗ್ದಾಳಿ ನಡೆಸಿದರು.

ಯಾವ ದಾಖಲೆಯಲ್ಲೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಹಿಯೇ ಇಲ್ಲ. ಅವರ ಪಾತ್ರ ಹೇಗೆ ಬರುತ್ತದೆ. ಆಸ್ತಿ ಕಳೆದುಕೊಂಡವರು ಪರಿಹಾರ ಕೇಳುವುದು ಸಹಜ. ನಾವು–ನೀವೂ ಕೂಡ ಕೇಳುತ್ತೇವೆ. ಮುಡಾದವರು ಕೊಟ್ಟಿದ್ದಾರೆ. ನಿರ್ದಿಷ್ಟ ಜಾಗದಲ್ಲಿ ನಿವೇಶನ ಕೊಡುವಂತೆ ಅವರು ಎಲ್ಲಿಯೂ ಕೇಳಿಲ್ಲ. ಈ ವಿಚಾರದಲ್ಲಿ ಅನಗತ್ಯ ಗೊಂದಲ ಬೇಡ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯರವರ ಪತ್ನಿ ಪಾರ್ವತಿ ಅವರು ನಿವೇಶನಗಳನ್ನು ವಾಪಸ್ ನೀಡಿದ್ದಾರೆ ಎಂದರು.



ಯಾವುದೇ ಪ್ರಕರಣ ದಾಖಲಿಸುವಾಗ ಅದಕ್ಕೆ ಪೂರಕ ದಾಖಲೆಗಳಿರಬೇಕು. ಈ ವಿಚಾರದಲ್ಲಿ ಸಾಂವಿಧಾನಿಕ ಸಂಸ್ಥೆ ಲೋಕಾಯುಕ್ತ ತನ್ನ ಕರ್ತವ್ಯ ಮಾಡಿದೆ. ಬಿಜೆಪಿಯವರು ತಮ್ಮ ಹೋರಾಟ ಮಾಡಿಕೊಳ್ಳಲಿ ದೆಹಲಿಯಿಂದ ವಕೀಲರನ್ನು ಕರೆಸಿ ಹೋರಾಟ ಮಾಡುವುದು ನಮಗೆ ಗೊತ್ತಿಲ್ಲವೇ ಎಂದು ಖಾರವಾಗಿ ಪ್ರಶ್ನಿಸಿದರು.

ಲೋಕಾಯುಕ್ತಸಂಸ್ಥೆ ಸರ್ಕಾರದ ತಾಳಕ್ಕೆ ಕುಣಿದಿದೆ ಎಂಬ ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯಿಸಿದ ಬಿಜೆಪಿ, ಸುಪ್ರೀಂಕೋರ್ಟ್‌ತೀರ್ಪು ಏನೆದೆ ಗೊತ್ತಿದೆಯೇಸ್ಥಳೀಯ ಮಟ್ಟದ ಸಂಸ್ಥೆಗಳನ್ನು ದುರ್ಬಲಗೊಳಿಸಬಾರದು ಎಂಬ ನಿರ್ದೇಶನವಿದೆ ಎಂದರು. ಲೋಕಾಯುಕ್ತ ಸ್ವಾಯತ್ತ ಸಂಸ್ಥೆ ಎಂದು ಹೈಕೋರ್ಟ್ ಹೇಳಿದೆ. ಯಾರೇ ಮುಖ್ಯಮಂತ್ರಿಯಾಗಿರಲಿ ಮುಖ್ಯಮಂತ್ರಿ ಹೇಳಿದಂತೆ ಲೋಕಾಯುಕ್ತ ಪೊಲೀಸರು ಕೇಳುತ್ತಾರಾ. ಈ ವಿಚಾರದಲ್ಲಿ ಮುಖ್ಯಮಂತ್ರಿಗಳ ಹಸ್ತಕ್ಷೇಪವಿಲ್ಲ. ಯಾವುದೇ ಅಧಿಕಾರಿಯನ್ನು ನೇಮಿಸಲು ಲೋಕಾಯುಕ್ತರ ಅನುಮತಿ ಮೇರೆಗೆ ಕೆಲಸಮಾಡಲಾಗುತ್ತದೆ. ಹೀಗಾಗಿ ರಾಜ್ಯದ ಅಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ. ಹೊರ ರಾಜ್ಯದವರನ್ನು ಆಯ್ಕೆ ಮಾಡಲು ಬರುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಸರ್ಕಾರದ ಬೊಕ್ಕಸದಲ್ಲಿ ಹಣವಿಲ್ಲ ಎಂಬ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಹೇಳಿಕೆಗೆ ಉತ್ತರಿಸಿದ ಅವರು, ಅವರಿಗೆ ಬೇರೆ ಸಮಯದಲ್ಲಿ ಉತ್ತರ ನೀಡುವುದಾಗಿ ಹೇಳಿದರು.

# ಬಿಜೆಪಿ ವಿರುದ್ಧ ಪರಂ ವಾಗ್ದಾಳಿ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ತೀವ್ರ ಸಂಚಲನ ಸೃಷ್ಟಿಸಿದ್ದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಹಗರಣದಲ್ಲಿ ಯಾವುದೇ ಸಾಕ್ಷಿ ಪುರಾವೆಗಳಿಲ್ಲದ ಕಾರಣ ಲೋಕಾಯುಕ್ತರು ತನಿಖೆ ನಡೆಸಿ ಮುಖ್ಯಮಂತ್ರಿ ಸಿದ್ದರಾಮಯ್ಯರವರಿಗೆ ಕ್ಲೀನ್‌ಚಿಟ್ ನೀಡಿದ್ದಾರೆ. ಈ ಕ್ರಮವನ್ನು ಪ್ರಶ್ನೆ ಮಾಡುವುದು ಎಷ್ಟರ ಮಟ್ಟಿಗೆ ಸರಿ ಎಂದು ಪ್ರತಿಪಕ್ಷ ಬಿಜೆಪಿ ವಿರುದ್ಧ ಪರಮೇಶ್ವರ್ ವಾಗ್ದಾಳಿ ನಡೆಸಿದ್ದಾರೆ.

ಸದಾಶಿವ ನಗರದ ತಮ್ಮ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ಸಿಬಿಐ ತನಿಖೆ ನಡೆಸುವುದು ಬೇಡ ಎಂದು ಹೇಳಿದೆ. ಒಂದೇ ಪ್ರಕರಣವನ್ನು ಎರಡು ತನಿಖಾ ಸಂಸ್ಥೆಗಳು ಬೇಡ ಎಂದು ಹೇಳಿದೆ. ಆದರೆ, ಲೋಕಾಯುಕ್ತ ನೀಡಿರುವ ತೀರ್ಪನ್ನೇ ಬಿಜೆಪಿ ಪ್ರಶ್ನಿಸುವುದಾದರೆ ಮತ್ತೆ ಸಿಬಿಐ ತನಿಖೆ ಕೋರಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಲಿ ಎಂದು ತಿರುಗೇಟು ನೀಡಿದರು.

ವರಿಷ್ಠರನ್ನು ಭೇಟಿ ಮಾಡಬೇಕೆಂದೇ ತಾವು ದೆಹಲಿಗೆ ತೆರಳಿದ್ದರೆ, ಕಾಂಗ್ರೆಸ್ ನಾಯಕರಾದ ಸೋನಿಯಾಗಾಂಧಿ, ರಾಹುಲ್‌ಗಾಂಧಿ ಮತ್ತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿ ಬರುತ್ತಿದ್ದೆ. ದೆಹಲಿ ಭೇಟಿ ಸಂಪೂರ್ಣ ಖಾಸಗಿ ಭೇಟಿ ಎಂದು ವರದಿಗಾರರ ಪ್ರಶ್ನೆಗೆ ಉತ್ತರಿಸಿದರು. ಯಾವುದೇ ರಾಜಕೀಯ ವಿದ್ಯಮಾನಗಳ ಬಗ್ಗೆ ಪ್ರತಿಕ್ರಿಯೆ ನೀಡಲು ನಿರಾಕರಿಸಿದ ಅವರು, ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹಾಗೂ ಸಚಿ ರಾಜಣ್ಣ ನಡುವಣ ವಾಕ್ಸಮರ ವಿಚಾರವಾಗಿಯೂ ಏನೂ ಹೇಳುವುದಿಲ್ಲ ಎಂದರು.

ನೂತನ ಕಾಂಗ್ರೆಸ್ ಕಚೇರಿ ಉದ್ಘಾಟನೆ

**ಮುಡಾ ಹಗರಣ ಕುರಿತು ಸ್ವತಂತ್ರ ಸಂಸ್ಥೆಯಾಗಿರುವ ಲೋಕಾಯುಕ್ತ ತನಿಖೆ ನಡೆಸಿ ಹಗರಣಕ್ಕೆ ಸಂಬಂಧಿಸಿದಂತೆ ಯಾವುದೇ ಸಾಕ್ಷಿ ಪುರಾವೆಗಳಿಲ್ಲದ ಕಾರಣ ಮುಖ್ಯಮಂತ್ರಿಗಳಿಗೆ ಕ್ಲೀನ್‌ಚಿಟ್ ನೀಡಿದೆ. ಇದನ್ನು ವಿರೋಧಿಸುವುದು ಎಷ್ಟರ ಮಟ್ಟಿಗೆ ಸರಿ ಎಂದು ಪ್ರಶ್ನಿಸಿದರು. ತಮ್ಮ ದೆಹಲಿ ಪ್ರವಾಸದ ವೇಳೆ ಪಕ್ಷದ ವರಿಷ್ಠರ ಜತೆ ಯಾವುದೇ ರಾಜಕೀಯ ವಿಚಾರ ಹಾಗೂ ಶೋಷಿತರ ಸಮಾವೇಶ ನಡೆಸುವ ಕುರಿತು ಚರ್ಚೆ ಮಾಡಿಲ್ಲ ಎಂದರು. ತಾವು ಯಾವುದೇ ಕಾರ್ಯಸೂಚಿ ಇಟ್ಟುಕೊಂಡು ದೆಹಲಿ ಭೇಟಿ ಕೈಗೊಂಡಿಲ್ಲ. ಮುಖ್ಯಮಂತ್ರಿ ಅಥವಾ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಸೇರಿದಂತೆ ಯಾವುದೇ ವಿಚಾರವನ್ನು ಚರ್ಚೆ ಮಾಡಿಲ್ಲ ಎಂದು ಹೇಳಿದರು.**



ಮಾ. 7 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ 16ನೇ ಬಾರಿಗೆ ಮುಂಗಡಪತ್ರ ಮಂಡಿಸಲಿದ್ದಾರೆ. ರಾಜ್ಯಕ್ಕೆ ಹಲವು ಕೊಡುಗೆಗಳನ್ನು ನೀಡುತ್ತಾರೆ ಎಂದು ಸುಳಿವು ನೀಡಿದರು. ಚುನಾವಣಾ ಸಂದರ್ಭದಲ್ಲಿ ಘೋಷಿಸಲಾದ 5 ಗ್ಯಾರಂಟಿ ಯೋಜನೆ ಅನುಷ್ಠಾನಗೊಳಿಸುವುದರ ಜತೆಗೆ ಹಣಕಾಸು ಅಕ್ರಮಗಳನ್ನು ಸರಿಪಡಿಸಿ ರಾಜ್ಯದ ಅಭಿವೃದ್ಧಿಗೆ ಹಣ ಬಿಡುಗಡೆ ಮಾಡುತ್ತಿದ್ದೇವೆ ಎಂದು ಅವರು, ಬಿಜೆಪಿ ಸರ್ಕಾರದ ಅವದಲ್ಲಿ ಲಕ್ಷಾಂತರ ಬಾಕಿ ಉಳಿಸಿಕೊಂಡಿದ್ದ ಬಾಕಿ ಬಿಲ್‌ಗಳನ್ನು ಮಂಜೂರು ಮಾಡಿದ್ದೇವೆ. ಹಣಕಾಸು ಜವಾಬ್ದಾರಿ ನಿರ್ವಹಿಸುವುದು ಅಷ್ಟೊಂದು ಸುಲಭ ವಲ್ಲ.

ಸಿದ್ದರಾಮಯ್ಯ ಅವರು ಸಮರ್ಥವಾಗಿ ನಿಭಾಯಿಸುತ್ತಿದ್ದಾರೆ ಎಂದು ಹೇಳಿದರು.

ಗೃಹಲಕ್ಷ್ಮಿ ಹಣ ಬಹುತೇಕ ಭಾಗಗಳಲ್ಲಿ ವಿಳಂಬವಾಗಿದೆ. ಈ ಸಮಸ್ಯೆಯನ್ನು ನಾವು ಶೀಘ್ರ ಸರಿಪಡಿಸಿ ಹಣ ಬಿಡುಗಡೆ ಮಾಡುತ್ತೇವೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

### ನೂತನ ಎಐಸಿಸಿ ಕಚೇರಿ ವೀಕ್ಷಿಸಿದ ಪರಂ

**ಇತ್ತೀಚೆಗೆ ದೆಹಲಿಯಲ್ಲಿ ನೂತನ ಕಾಂಗ್ರೆಸ್ ಕಚೇರಿ ಉದ್ಘಾಟನೆಯಾಗಿತ್ತು. ಆ ಸಂದರ್ಭದಲ್ಲಿ ತಾವು ಹೋಗಿರಲಿಲ್ಲ. ಆ ಕಾರಣಕ್ಕಾಗಿ ನೂತನ ಎಐಸಿಸಿ ಕಚೇರಿ ವೀಕ್ಷಿಸಿ ಬಂದಿದ್ದೇನೆ. ಈ ಸಂದರ್ಭದಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ ವೇಣುಗೋಪಾಲ್ ಕಚೇರಿಯಲ್ಲಿದ್ದರು. ಅವರನ್ನು ಸೌಹಾರ್ದಯುತವಾಗಿ ಭೇಟಿ ಮಾಡಿದ್ದೇನೆ. ಯಾವುದೇ ರಾಜಕೀಯ ವಿಚಾರ ಚರ್ಚಿಸಿಲ್ಲ. ಮಾಧ್ಯಮದವರ ಮುಂದೆ ಮುಚ್ಚಿಡುವಂತದ್ದೇನಿಲ್ಲ. ಅದೆಲ್ಲವನ್ನು ನಿಮ್ಮ ಮುಂದೆ ಹಂಚಿ ಕೊಳ್ಳುತ್ತೇನೆ ಎಂದು ಹೇಳಿದರು.**



ತನಿಖೆ ನಡೆಸಿದ ಲೋಕಾಯುಕ್ತದಿಂದ ಕ್ಲೀನ್‌ಚಿಟ್

## ಅಧಿಕಾರಿ ಅಮಾನತು ಮಾಡಿದ ಎಚ್ ಕೆ ಪಾಟೀಲ್

• ಉದಯವಾಹಿನಿ, ಬೆಂಗಳೂರು

ಉತ್ತರ ಕನ್ನಡ ಜಿಲ್ಲೆಯ ಕಾರವಾರದಲ್ಲಿ ಪ್ರವಾಸೋದ್ಯಮ ಅಧಿಕಾರಿಯಿಂದ ಕಚೇರಿಯಲ್ಲೇ ಬೆಡ್ ರೂಂ ಮಾಡಿಕೊಂಡ ಆರೋಪ ಕೇಳಿಬಂದಿತ್ತು. ಈ ಘಟನೆಯ ಬಗ್ಗೆ ವರದಿಯನ್ನೂ ಮಾಡಿತ್ತು.



ವರದಿ ಹಿನ್ನೆಲೆಯಲ್ಲಿ ಪ್ರವಾಸೋದ್ಯಮ ಇಲಾಖೆ ಅಧಿಕಾರಿಯನ್ನು ಅಮಾನತು ಮಾಡಲಾಗಿದೆ. ಉತ್ತರ ಕನ್ನಡ ಪ್ರವಾಸೋದ್ಯಮ ಉಪ ನಿರ್ದೇಶಕ ಜಯಂತ್ ತಮ್ಮ ಕಚೇರಿಯಲ್ಲೇ ಬೆಡ್ ರೂಂ ಮಾಡಿಕೊಂಡಿದ್ದರು.

ಈ ಹಿನ್ನೆಲೆಯಲ್ಲಿ ಶಿಸ್ತುಕ್ರಮ ಕೈಗೊಳ್ಳಲಾಗಿದೆ. ನನಗೂ ಜಯಂತ್ ಎಂಬ ಅಧಿಕಾರಿ ಬಗ್ಗೆ ಮಾಹಿತಿ ಬಂದಿದೆ. ಇಂಥ ಅಶಿಸ್ತನ್ನು ಸಹಿಸಲು ಸಾಧ್ಯವಿಲ್ಲ. ಹೀಗಾಗಿ, ಪ್ರವಾಸೋದ್ಯಮ ಇಲಾಖೆಯ ನಿರ್ದೇಶಕರ ಜೊತೆ ಮಾತಾಡಿದ್ದೇನೆ. ಕಾರವಾರದ ಅಧಿಕಾರಿ ಜಯಂತ್ ಅವರನ್ನು ಅಮಾನತು ಮಾಡುವಂತೆ ಸೂಚಿಸಿದ್ದೇನೆ ಎಂದು ವಿಧಾನಸೌಧದಲ್ಲಿ ಪ್ರವಾಸೋದ್ಯಮ ಸಚಿವ ಹೆಚ್.ಕೆ. ಪಾಟೀಲ್ ಹೇಳಿದ್ದಾರೆ. ಕಾರವಾರ ಪ್ರವಾಸೋದ್ಯಮ ಇಲಾಖೆಯ ಕಚೇರಿಯಲ್ಲಿ ಶಿಫ್ಟಿಂಗ್ ವೇಳೆ ಕಚೇರಿಯ ಒಂದು ಕೋಣೆಯಲ್ಲಿ ಬೆಡ್ ರೂಂನಲ್ಲಿರುವ ರೀತಿಯ ಮಂಚ, ಹಾಸಿಗೆ ಪತ್ತೆ ಆಗಿತ್ತು.


ಈ ಕುರಿತು ವಿಡಿಯೋ ಸಮೇತ ಸುದ್ದಿ ಪ್ರಸಾರ ಮಾಡಿತ್ತು. ಟಿವಿ9ನಲ್ಲಿ ಸುದ್ದಿ ಪ್ರಸಾರ ಆಗುತ್ತಿದ್ದಂತೆ ಈ ಬಗ್ಗೆ ವಿವರವಾದ ಮಾಹಿತಿ ಪಡೆದಿರುವ ಸಚಿವ ಹೆಚ್?.ಕೆ. ಪಾಟೀಲ್ ಆ ಅಧಿಕಾರಿಯನ್ನು ತಕ್ಷಣ ಅಮಾನತು ಮಾಡುವಂತೆ ಪ್ರವಾಸೋದ್ಯಮ ಇಲಾಖೆ ನಿರ್ದೇಶಕರಿಗೆ ಸೂಚಿಸಿದ್ದಾರೆ.

## ಟ್ರಾಫಿಕ್ ಸಮಸ್ಯೆ ಪರಿಹಾರಕ್ಕೆ AI ಮೊರೆ ಏನಿದು VAC

• ಉದಯವಾಹಿನಿ, ಬೆಂಗಳೂರು

ಟ್ರಾಫಿಕ್ ನಿಯಂತ್ರಣಕ್ಕೆ ಪೊಲೀಸ್ ಇಲಾಖೆಯು ಪ್ರಮುಖ ಜಂಕ್ಷನ್‌ಗಳಲ್ಲಿ ಬೆಂಗಳೂರು ಅಡಾಪ್ಟಿವ್ ಟ್ರಾಫಿಕ್ ಕಂಟ್ರೋಲ್ ಸಿಗ್ನಲ್ಸ್ ಸಿಸ್ಟಂ ಅಳವಡಿಸಿದೆ. ಬೆಂಗಳೂರನ್ನು ಕಾಡುತ್ತಿರುವ ಟ್ರಾಫಿಕ್ ಸಮಸ್ಯೆಗೆ ಸ್ವಲ್ಪವಾದರೂ ಪರಿಹಾರ ಸಿಗಬಹುದೆನ್ನುವ ಕಾರಣಕ್ಕಾಗಿ ಈ ಸುಧಾರಿತ ಟ್ರಾಫಿಕ್ ಸಿಗ್ನಲ್ ಕಂಟ್ರೋಲ್ ಸಿಸ್ಟಮ್ ಹಾಕಲಾಗಿದೆ.

ನೀವು ಇತ್ತೀಚಿಗೆ ಟ್ರಾಫಿಕ್ ಸಿಗ್ನಲ್‌ಗಳಲ್ಲಿ ನಿಂತಾಗ ನಿಮಗೆ VAC ಮತ್ತು MNL ಎಂಬ ಹೊಸ ಸೂಚನೆಗಳನ್ನು ಗಮನಿಸಿರಬಹುದು. VAC ಮತ್ತು MNL ಅಂದರೆ ಏನು ಎಂದು ತಿಳಿದಿಕೊಳ್ಳಲು ಈ ಸುದ್ದಿಯನ್ನು ಸಂಪೂರ್ಣವಾಗಿ





ಪೊಲೀಸರೇ ಸಿಗ್ನಲ್ ಕಂಟ್ರೋಲ್

ಓದಿ. VAC ಅಂದರೆ ವೆಹಿಕಲ್ ಆಯಕ್ಟುಯೇಟೆಡ್ ಕಂಟ್ರೋಲ್ ಎಂದರ್ಥ. ಈ ಸಿಸ್ಟಂನಲ್ಲಿ ಅಳವಡಿಸಲಾಗಿರುವ ಕ್ಯಾಮರಾಗಳು ಯಾವ ರಸ್ತೆಯಲ್ಲಿ ಹೆಚ್ಚು ವಾಹನಗಳು ನಿಂತಿವೆಯೋ ಆ ರಸ್ತೆಯ ಪ್ರಯಾಣಿಕರಿಗೆ ಆದ್ಯತೆ ಮೇರೆಗೆ ಹಸಿರು ಸಿಗ್ನಲ್ ಪ್ರದರ್ಶಿಸುತ್ತದೆ. MNL ಅಂದರೆ ಮಾನ್ಯುಯಲ್ ಎಂದರ್ಥ. ಇದರಲ್ಲಿ ಪೊಲೀಸರೇ ಸಿಗ್ನಲ್ ಕಂಟ್ರೋಲ್ ಮಾಡುತ್ತಿರುತ್ತಾರೆ. ಆಂಬ್ಯುಲೆನ್ಸ್, ವಿಐಪಿಗಳ ಸಂಚಾರವಿದ್ದರೆ, ಟ್ರಾಫಿಕ್ ಪೊಲೀಸರೇ ಸಿಗ್ನಲ್ ಕಂಟ್ರೋಲ್ ಮಾಡುತ್ತಾರೆ. ಕೆಲವು ಜಂಕ್ಷನ್‌ಗಳಲ್ಲಿ ಕಳೆದ ವರ್ಷವೇ ಅಳವಡಿಸಿದ ಈ ಸುಧಾರಿತ ಟ್ರಾಫಿಕ್ ಕಂಟ್ರೋಲ್ ಸಿಗ್ನಲ್ಸ್ ಸಿಸ್ಟಂನಲ್ಲಿ ಟೈಮರ್ ವ್ಯವಸ್ಥೆಯಿರಲಿಲ್ಲ. ಗ್ರೀನ್ ಸಿಗ್ನಲ್ ಯಾವಾಗ ಬೀಳುತ್ತೆ ಎನ್ನುವುದು ವಾಹನ ಸವಾರರಿಗೆ ಗೊತ್ತಾಗುತ್ತಿರಲಿಲ್ಲ. ಆದರೆ ಇತ್ತೀಚಿಗೆ ಅಳವಡಿಸಲಾಗುತ್ತಿರುವ ಬಹುತೇಕ ಜಂಕ್ಷನ್‌ಗಳಲ್ಲಿ ಟೈಮರ್ ವ್ಯವಸ್ಥೆಯನ್ನು ಅಳವಡಿಸಲಾಗಿದೆ. ಇದರಿಂದ ವಾಹನ ಸವಾರರಿಗೂ ಅನುಕೂಲವಾಗಲಿದ್ದು, ಇಂಧನದ ಜೊತೆ ಸ್ವಲ್ಪ ಮಟ್ಟಿನ ಮಾಲಿನ್ಯ ಕೂಡ ಕಡಿಮೆಯಾಗುತ್ತೆ.

## ಕೇಬಲ್‌ಗಳನ್ನು ಕತ್ತರಿಸಿ ಹಾಕಿದರೆ ಅವರೇ ದಾರಿಗೆ ಬರುತ್ತಾರೆ

• ಉದಯವಾಹಿನಿ, ಬೆಂಗಳೂರು

ಹೊರಗಡೆ ಇರುವ ಎಲ್ಲಾ ಕೇಬಲ್ ವಯರ್ ಗಳನ್ನು ಕಿತ್ತು ಹಾಕಬೇಕು. ಇವುಗಳನ್ನು ಭೂಗತವಾಗಿ ಹಾಕುವಂತಹ ವ್ಯವಸ್ಥೆ ಮಾಡಬೇಕು ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಬಿಬಿಎಂಪಿಗೆ ಸೂಚನೆ ನೀಡಿದ್ದೇನೆ. ಇಷ್ಟು ದಿನ ಕಾದೆವು ಏನಾದರೂ ಬದಲಿ ವ್ಯವಸ್ಥೆ ಮಾಡಿಕೊಳ್ಳುತ್ತಾರೆ ಎಂದು, ಇದಾಗದ ಕಾರಣ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಎಲ್ಲಾ ಕೇಬಲ್ ಗಳನ್ನು ಕತ್ತರಿಸಿದರೆ ಅವರೇ ದಾರಿಗೆ ಬರುತ್ತಾರೆ'' ಎಂದು ಹೇಳಿದರು.

ಹೊಸ ಯೋಜನೆಗಳು, ಬೆಂಗಳೂರಿನ ರೂಪುರೇಷೆಗಳ ಬಗ್ಗೆ, ಪ್ರತಿ ನಾಗರೀಕನ ಆಸ್ತಿ ರಕ್ಷಣೆ ಕುರಿತು ಹೊಸ ನೀತಿಗಳನ್ನು ತರಲಾಗಿದ್ದು ಅದನ್ನು ಫೆಬ್ರವರಿ ತಿಂಗಳ ಕೊನೆಯಲ್ಲಿ ಮಾಧ್ಯಮಗೋಷ್ಠಿ ನಡೆಸಿ ಬಹಿರಂಗಗೊಳಿಸಲಾಗುವುದು'' ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು. ಬಾಬಾ ಸಾಹೇಬರ ಸಂವಿಧಾನ ನಮ್ಮೆಲ್ಲರ ಬದುಕನ್ನು ರೂಪಿಸಿದೆ. ಅದೇ ರೀತಿ ಈ ನಮ್ಮರಸ್ತೆ ಎನ್ನುವ ಕೈಪಿಡಿ ಬೆಂಗಳೂರಿನ ಭವಿಷ್ಯ ಹೇಗಿರಬೇಕು ಎಂದು ದಾರಿ ತೋರಿಸಲಿದೆ.

ನಾನು ಬೆಂಗಳೂರು ಅಭಿವೃದ್ಧಿ ಸಚಿವನಾಗಿ ಅಧಿಕಾರ ವಹಿಸಿಕೊಳ್ಳುವ ಮೊದಲು ಹಾಗೂ ನಂತರವೂ ಅನೇಕ ಸ್ಥಳಗಳಿಗೆ ಭೇಟಿ ನೀಡಿದಾಗ ಅಲ್ಲಿನ ರಸ್ತೆ, ಮೆಟ್ರೋ, ಸುರಂಗ ರಸ್ತೆಗಳ ಕುರಿತು ಕುತೂಹಲಕ್ಕೆ ತಿಳಿದುಕೊಳ್ಳುತ್ತಿದ್ದೆ'' ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

ಅನೇಕ ಸಂಸ್ಥೆಗಳು ಈಗಾಗಲೇ ಹಲವಾರು ಸಲಹೆಗಳನ್ನು ನೀಡಿದ್ದಾರೆ. ಮೆಟ್ರೋ ಪಿಲ್ಲರ್‌ಗಳ ಮೇಲೆ ನಮ್ಮ ಸಂಸ್ಕೃತಿ, ಕ್ರೀಡೆ, ಕಲೆಗಳನ್ನು ಬಿಂಬಿಸುವ ಕಲಾತ್ಮಕ ಕೃತಿಗಳನ್ನು ಚಿತ್ರಿಸುವ ಬಗ್ಗೆ ಸಲಹೆ ಬಂದಿದೆ. ಈಗಾಗಲೇ ಈ ಕೆಲಸವನ್ನು ಅನೇಕ ಕಡೆಗಳಲ್ಲಿ ಕಾರ್ಯಗತಗೊಳಿಸಲಾಗಿದೆ ಎಂದು ಡಿಕೆಶಿ ಹೇಳಿದರು. ಅನೇಕ ಸಂಸ್ಥೆಗಳು, ವಿದ್ಯಾರ್ಥಿಗಳು, ಯುವ ಜನತೆ ನೀಡಿರುವ ಸಲಹೆ ಸೂಚನೆಗಳನ್ನು ಕಾಪಿಟ್ಟುಕೊಳ್ಳಲಾಗುವುದು. ವೆಬ್ ಸೈಟ್ ಅಲ್ಲಿಯೂ ಪ್ರದರ್ಶಿಸಲಾಗುವುದು. ನಾವು ಕೆಂಪೇಗೌಡರು, ಕೆಮಗಲ್ ಹನುಮಂತಯ್ಯ ಅವರು, ಎಸ್. ಎಂ.ಕೃಷ್ಣ ಅವರು ನೀಡಿರುವ ಕೊಡುಗೆಗಳನ್ನು ನಾವು ನೆಪಿಸಿಕೊಳ್ಳುತ್ತೇವೆ ಎಂದು ಉಪ ಮುಖ್ಯಮಂತ್ರಿಗಳು ಹೇಳಿದರು.





ಉದಯವಾಹಿನಿ ಚಿತ್ರ

ಸುರಂಗ ರಸ್ತೆಗಳ ಕುರಿತು ಕುತೂಹಲ

**''ಬೆಂಗಳೂರಿನಲ್ಲಿ ಸುಮಾರು 1,700 ಕಿಮೀ ವಿಸ್ತೀರ್ಣಕ್ಕೆ ವೈಟ್ ಟಾಪಿಂಗ್ ಹಾಕಲಾಗುತ್ತಿದೆ. ಮುಂದಿನ 30 ವರ್ಷ ಇದು ಬಾಳಿಕೆ ಬರುತ್ತದೆ. ರಾಜಕಾಲುವೆ ಪಕ್ಕದಲ್ಲಿ ಹೊಸ ರಸ್ತೆಗಳ ನಿರ್ಮಾಣ. ಮೇಲ್ಸೇತುವೆ ಸೇರಿದಂತೆ ಅನೇಕ ನೂತನ ಯೋಜನೆಗಳು ಸರ್ಕಾರದ ಮುಂದಿವೆ'' ಎಂದು ಡಿಸಿಎಂ ಹೇಳಿದರು.**

**ಸುರಂಗರಸ್ತೆಯ ನಿರ್ಮಾಣಕ್ಕೆ ಹಲವಾರು ಸವಾಲುಗಳಿವೆ. ಇನ್ನೂ ಟೆಂಡರ್ ಕರೆಯಲು ಸಾಧ್ಯವಾಗಿಲ್ಲ. ಏಕೆಂದರೆ ಭೂಮಿಯ ಸ್ವಾಧೀನ, ಹಣಕಾಸು, ತಾಂತ್ರಿಕ ಅಂಶಗಳಿವೆ. ನೂತನ ಮೆಟ್ರೋ ಮಾರ್ಗಗಳಲ್ಲಿ ಡಬಲ್ ಡೆಕ್ಕರ್ ಅನ್ನು ಕಾರ್ಯಗತಗೊಳಿಸಲಾಗಿದೆ. ಈ ಹಿಂದೆ ಮೆಟ್ರೋ ಮಾರ್ಗವಿರುವ ಕಡೆ ಡಬಲ್ ಡೆಕ್ಕರ್ ಸಾಧ್ಯವಾಗಿಲ್ಲ ಎಂದು ಡಿಕೆಶಿ ಹೇಳಿದರು.**

## ಹೆಚ್‌ಡಿಕೆ ಮೇಲೆ ನಮ್ಮ ಸರ್ಕಾರ ರಾಜಕೀಯ ದ್ವೇಷ ಮಾಡ್ತಿಲ್ಲ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸಚಿವ ಹೆಚ್‌ಡಿ ಕುಮಾರಸ್ವಾಮಿ ಮೇಲೆ ನಮ್ಮ ಸರ್ಕಾರ ರಾಜಕೀಯ ದ್ವೇಷ ಮಾಡುತ್ತಿಲ್ಲ ಎಂದು ಸಚಿವ ಚೆಲುವರಾಯಸ್ವಾಮಿ ತಿರುಗೇಟು ಕೊಟ್ಟಿದ್ದಾರೆ. ಕೇತಗಾನಹಳ್ಳಿ ಜಮೀನು ಸರ್ವೇ ರಾಜಕೀಯ ಪ್ರೇರಿತ ಎಂಬ ಕುಮಾರಸ್ವಾಮಿ ಆರೋಪಕ್ಕೆ ವಿಧಾನ ಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಕುಮಾರಸ್ವಾಮಿ ಕೇತಗಾನಹಳ್ಳಿ ಜಮೀನು ಸರ್ವೇ ಕೋರ್ಟ್ ಆದೇಶದ ಮೇರೆಗೆ ನಡೆಯುತ್ತಿದೆ. ಸರ್ಕಾರ ಉದ್ದೇಶಪೂರ್ವಕವಾಗಿ ಮಾಡ್ತಿರೋದಲ್ಲ. ಅಧಿಕಾರ ದುರ್ಬಳಕೆ ಮಾಡಿರುವುದು ಕುಮಾರಸ್ವಾಮಿಯವರು, ಸರ್ಕಾರವಲ್ಲ. ಜಮೀನು ಸರ್ವೇ ಸರ್ಕಾರ ಮಾಡುತ್ತಿಲ್ಲ. ಕೋರ್ಟ್ ನಿರ್ದೇಶನದ ಮೇಲೆ ಆಗುತ್ತಿದೆ. ಹಾಗಾದ್ರೆ ಕೋರ್ಟ್ ಸರ್ವೇ ಮಾಡಿ ಎಂದು ಹೇಳಿರುವುದು ರಾಜಕೀಯನಾ ಎಂದು ಪ್ರಶ್ನೆ ಮಾಡಿದರು. ನಾವೆಲ್ಲರು ಸಂವಿಧಾನ, ನ್ಯಾಯಾಲಯದಲ್ಲಿ ಭರವಸೆ ಇಟ್ಟುಕೊಂಡು ಕೆಲಸ ಮಾಡ್ತಿದ್ದೇವೆ. ಈ ಸರ್ವೇ ಸರ್ಕಾರ ಮಾಡಿದ್ದಲ್ಲ. ನ್ಯಾಯಾಲಯದ ಸೂಚನೆ ಮೇಲೆ ಆಗ್ತಿರೋದು. ಕುಮಾರಸ್ವಾಮಿ ಅವರು ಈ ರೀತಿ ಮಾತನಾಡಿದರೆ ಅದು ದುರಂತ. ಅವರು ದಾಖಲೆ ಬಿಡುಗಡೆ ಮಾಡ್ತೀನಿ ಎಂದು ಹೇಳುತ್ತಲೇ ಇದ್ದಾರೆ. ದಾಖಲಾತಿ ಬಿಡುಗಡೆ ಮಾಡಲಿ ಎಂದು ಸವಾಲೊಡ್ಡಿದರು.



# ಪಿಯುಸಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆ-1ಗೆ ಸಕಲ ಸಿದ್ಧತೆ

### ಬಜೆಟ್‌ನಲ್ಲಿ 5 ಸಾವಿರ ಕೊಠಡಿಗೆ ಅನುದಾನ ನೀಡುವಂತೆ ಮುಖ್ಯಮಂತ್ರಿಗಳಲ್ಲಿ ಮನವಿ

• ಉದಯವಾಹಿನಿ, ಬೆಂಗಳೂರು

ಪ್ರಸಕ್ತ 2024–25ನೇ ಸಾಲಿನ ದ್ವಿತೀಯ ಪಿಯುಸಿ ಮತ್ತು ಎಸ್‌ಎಸ್‌ಎಲ್‌ಸಿ ಪರೀಕ್ಷೆ–1 ಅನ್ನು ಮಾರ್ಚ್, ಏಪ್ರಿಲ್ ತಿಂಗಳಿನಲ್ಲಿ ನಡೆಸಲು ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ವತಿಯಿಂದ ಪರೀಕ್ಷೆ ನಡೆಸಲು ಎಲ್ಲಾ ರೀತಿಯ ತಯಾರಿ ನಡೆಸಲಾಗಿದೆ. ದ್ವಿತೀಯ ಪಿಯುಸಿ ಮಾರ್ಚ್ 1 ರಿಂದ 20 ರವರೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಮಾರ್ಚ್ 21 ರಿಂದ ಏಪ್ರಿಲ್ 4ರವರೆಗೆ ನಡೆಯಲಿದೆ ಎಂದು ಹೇಳಿದರು. ಪಿಯುಸಿಗೆ 7,13,862 ವಿದ್ಯಾರ್ಥಿಗಳು ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ 8,96,447 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದಾರೆ. ದ್ವಿತೀಯ ಪಿಯುಸಿ ಪರೀಕ್ಷೆಗೆ 5,050 ಕಾಲೇಜುಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ 15,881 ಶಾಲೆಗಳು ನೋಂದಾಯಿಸಿಕೊಂಡಿವೆ. ದ್ವಿತೀಯ ಪಿಯುಸಿ ಪರೀಕ್ಷೆಗೆ 1171 ಪರೀಕ್ಷಾ ಕೇಂದ್ರಗಳು, 2,342 ಸ್ಥಾನಿಕ ಜಾಗೃತ ದಳಗಳು, 504 ವಿಚಕ್ಷಣ ಜಾಗೃತ ದಳಗಳು, 365 ಪ್ರಶ್ನೆಪತ್ರಿಕಾ ವಿತರಣಾ ಮಾರ್ಗಗಳು, 1,171 ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು, ಉಪ/ಜಂಟಿ ಅಧೀಕ್ಷಕರು, ಉತ್ತರ ಪತ್ರಿಕೆಗಳ/ಪ್ರಶ್ನೆ ಪತ್ರಿಕೆಗಳ ಪಾಲಕರನ್ನು ನೇಮಿಸಲಾಗುತ್ತದೆ. ಉತ್ತರ ಪತ್ರಿಕೆಗಳ ಮೌಲ್ಯಮಾಪನ 76 ಕೇಂದ್ರಗಳಲ್ಲಿ ನಡೆಯಲಿದ್ದು, 31000 ಮೌಲ್ಯ ಮಾಪಕರು ಭಾಗವಹಿಸಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು. ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಸಂಬಂಧ ಪಟ್ಟಂತೆ 2,818 ಪರೀಕ್ಷಾ ಕೇಂದ್ರಗಳು ಹಾಗೂ ಸ್ಥಾನಿಕ ಜಾಗೃತ ಸ್ಥಳಗಳು ಇರಲಿವೆ. ಜಿಲ್ಲಾ ಹಂತದಲ್ಲಿ 410, ತಾಲ್ಲೂಕು ಹಂತದಲ್ಲಿ 1,662, ವಿಚಕ್ಷಣ ಜಾಗೃತ ದಳಗಳು ಇರಲಿವೆ. 1,117 ಪ್ರಶ್ನೆ ಪತ್ರಿಕಾ ವಿತರಣಾ ಮಾರ್ಗಗಳ ಸಂಖ್ಯೆ ಇದ್ದು, 2,818 ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರಿರುತ್ತಾರೆ. ಉಪ/ಜಂಟಿ ಅಧೀಕ್ಷಕರ ಸಂಖ್ಯೆ 958 ಆಗಿದ್ದು 2818 ಉತ್ತರ ಪತ್ರಿಕೆಗಳ/ಪ್ರಶ್ನೆ ಪತ್ರಿಕೆಗಳ ಪಾಲಕರಿರುತ್ತಾರೆ. 240 ಕೇಂದ್ರದಲ್ಲಿ ಉತ್ತರ ಪತ್ರಿಕೆಗಳ ಮೌಲ್ಯಮಾಪನವನ್ನು 65 ಸಾವಿರ ಮೌಲ್ಯ ಮಾಪಕರು ಮಾಡಲಿದ್ದಾರೆ ಎಂದು ಸಚಿವರು ವಿವರಿಸಿದರು.

ಹಿಜಾಬ್ ವಿಷಯ ನ್ಯಾಯಾಲಯದಲ್ಲಿರುವುದರಿಂದ ಯಾವುದೇ ನಿರ್ಧಾರ ಮಾಡಿಲ್ಲ ಎಂದ ಅವರು, ಕನಿಷ್ಠ ಅಂಕಗಳು 35 ಆಗಿರುತ್ತದೆ. ಅನುದಾನಿತ ಶಿಕ್ಷಕರ ನೇಮಕಕ್ಕೆ, ಕಲ್ಯಾಣ ಕರ್ನಾಟಕ ಭಾಗದ ಶಿಕ್ಷಕರ ನೇಮಕಕ್ಕೆ ಕ್ರಮ ವಹಿಸಲಾಗಿದೆ. 15 ಸಾವಿರ ಶಿಕ್ಷಕರ ನೇಮಕ ಪ್ರಕ್ರಿಯೆ ಚಾಲನೆಯಲ್ಲಿದೆ. ಬಜೆಟ್‌ನಲ್ಲಿ 5 ಸಾವಿರ ಕೊಠಡಿಗೆ ಅನುದಾನ ನೀಡುವಂತೆ ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಲಾಗಿದೆ ಎಂದರು. ಸರ್ಕಾರಿ ಕಾಲೇಜುಗಳಲ್ಲಿ ವಿಜ್ಞಾನ ವಾಣಿಜ್ಯ ವಿಭಾಗಕ್ಕೆ ಹೆಚ್ಚಿನ ಬೇಡಿಕೆ ಕಂಡುಬರುತ್ತಿದೆ ಎಂದು ಮಧುಬಂಗಾರಪ್ಪ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಶ್ಮಿ ಮಹೇಶ್, ಪದವಿ ಪೂರ್ವ ಶಿಕ್ಷಣ ಇಲಾಖೆ ನಿರ್ದೇಶಕಿ ಸಿಂಧು ರೂಪೇಶ್, ಸಾರ್ವಜನಿಕ ಶಿಕ್ಷಣ ಇಲಾಖೆ ಆಯುಕ್ತ ತ್ರಿಲೋಕ್ ಚಂದ್ರ, ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಅಧ್ಯಕ್ಷ ಬಸವರಾಜೇಂದ್ರ ಮೊದಲಾದ ಅಧಿಕಾರಿಗಳು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

ತಾಲ್ಲೂಕುಗಳಲ್ಲೂ ಫಲಿತಾಂಶ ಹೆಚ್ಚಳಕ್ಕೆ ಕ್ರಮ

**ವೆಬ್‌ಕಾಸ್ಟಿಂಗ್ : ಪರೀಕ್ಷೆ ನಡೆಯುವ ಸಂದರ್ಭದಲ್ಲಿ ವೆಬ್ ಕಾಸ್ಟಿಂಗ್ ಮಾಡಲಾಗುವುದು. ವಿದ್ಯಾರ್ಥಿಗಳು ಯಾವುದೇ ಭಯ, ಆತಂಕವಿಲ್ಲದೆ ಧೈರ್ಯದಿಂದ ಸಂತೋಷದಿಂದ ಪರೀಕ್ಷೆ ಬರೆಯಬಹುದು. ಕಲಿಕೆಯಲ್ಲಿ ಹಿಂದುಳಿದಿದ್ದ ವಿದ್ಯಾರ್ಥಿಗಳನ್ನು ವಿಶೇಷ ತರಗತಿಗಳ ಮೂಲಕ ಸಜ್ಜುಗೊಳಿಸಲಾಗಿದೆ. ಈ ಬಾರಿಯೂ 3 ಪರೀಕ್ಷೆಗಳಿರುತ್ತವೆ.ಯಾವುದೇ ಗ್ರೇಸ್ ಮಾರ್ಕ್ಸ್ ಇರುವುದಿಲ್ಲ. ಕೋವಿಡ್ ಪೂರ್ವದಲ್ಲಿ ಇದ್ದ ನಿಯಮವೇ ಜಾರಿಯಲ್ಲಿರುತ್ತದೆ ಎಂದು ಹೇಳಿದರು. ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಗಳು ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆ ನಡೆಸಲು ಈ ಬಾರಿ ವಿಶೇಷ ಕಾಳಜಿ ವಹಿಸಿದ್ದಾರೆ. ಕಡಿಮೆ ಫಲಿತಾಂಶ ಬಂದಿದ್ದ ಜಿಲ್ಲಾ ಮತ್ತು ತಾಲ್ಲೂಕುಗಳಲ್ಲೂ ಫಲಿತಾಂಶ ಹೆಚ್ಚಳಕ್ಕೆ ಕ್ರಮ ವಹಿಸಲಾಗಿದೆ ಎಂದರು.**

# ಕನ್ನಡ ನುಡಿಹಬ್ಬಕ್ಕೆ ಅದ್ದೂರಿ ತೆರೆ

## ಕವಿ, ವಿಚಾರಗೋಷ್ಠಿ ಸರ್ಕಾರಿ ಕನ್ನಡ ಮಾಧ್ಯಮ ಶಾಲೆಗಳ ಸ್ಥಿತಿಯ ಅವಲೋಕನ

**ಬಾಗೇಪಲ್ಲಿ:** ಇಲ್ಲಿನ ಸರ್ಕಾರಿ ಬಾಲಕಿಯರ ಶಾಲಾವರಣದಲ್ಲಿ ತಾಲ್ಲೂಕು ಕನ್ನಡ ಸಾಹಿತ್ಯ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಕವಿಗೋಷ್ಠಿ, ವಿಚಾರಗೋಷ್ಠಿ, ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ವಿಚಾರಗೋಷ್ಠಿಯಲ್ಲಿ ನ್ಯಾಷನಲ್ ಪಿಯು ಕಾಲೇಜು ಪ್ರಾಂಶುಪಾಲ ಡಾ. ವೆಂಕಟ ಶಿವಾರೆಡ್ಡಿ ಗಡಿಯಲ್ಲಿ ಕನ್ನಡ ಸರ್ಕಾರಿ ಶಾಲೆಗಳ ಸ್ಥಿತಿಗತಿ ಬಗ್ಗೆ ಮಾತನಾಡಿದರು.

ತಾಲ್ಲೂಕಿನಲ್ಲಿ 80ಕ್ಕೂ ಹೆಚ್ಚು ಸರ್ಕಾರಿ ಕನ್ನಡ ಶಾಲೆಗಳನ್ನು ವಿಲೀನ ಮಾಡಲಾಗಿದೆ. ಸರ್ಕಾರಿ ಶಾಲೆಗಳಲ್ಲಿ ಓದಿದವರಿಗೆ ಶಿಕ್ಷಣ ಹಾಗೂ ಉದ್ಯೋಗ, ಬ್ಯಾಂಕ್, ಕಂಪನಿಗಳಲ್ಲಿ ಮೀಸಲು ಕಲ್ಪಿಸಿದಾಗ ಮಾತ್ರ ಸರ್ಕಾರಿ ಕನ್ನಡ ಮಾಧ್ಯಮ ಶಾಲೆಗಳು ಉಳಿಯಲಿವೆ. ಹೊಸ ಖಾಸಗಿ ಶಾಲೆಗಳ ಆರಂಭಕ್ಕೆ ಕಡಿವಾಣ ಹಾಕಬೇಕು. ಸರ್ಕಾರಿ ಶಾಲೆಗಳಲ್ಲಿ ಇಂಗ್ಲಿಷ್ ಭಾಷೆಯನ್ನು ಕಡ್ಡಾಯ ಮಾಡಬೇಕು. ತಾಲ್ಲೂಕಿನ 606 ಶಿಕ್ಷಕರ ಪೈಕಿ 478 ಶಿಕ್ಷಕರಿದ್ದಾರೆ. ಉಳಿದ 128 ಹುದ್ದೆಗಳು ಖಾಲಿ ಇವೆ. 18 ಶಾಲೆಗಳಲ್ಲಿ ಅತಿಥಿ ಶಿಕ್ಷಕರಿದ್ದು, ಒಬ್ಬರೂ ಸರ್ಕಾರಿ ಶಿಕ್ಷಕರಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.


ಉದಯವಾಹಿನಿ ಚಿತ್ರ

ಸರ್ಕಾರಿ ಪ್ರೌಢಶಾಲೆ ಶಿಕ್ಷಕ ಆರ್.ಸುಧಾಕರ್ ಮಾತನಾಡಿ, ಕನ್ನಡ ಸರ್ಕಾರಿ ಶಾಲೆಗಳ ಸ್ಥಿತಿಯು ಶೋಚನೀಯವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಸಮಾರೂಪ ಸಮಾರಂಭ ಉದ್ಘಾಟಿಸಿ ಮಾತನಾಡಿದ ವೈದ್ಯ ಡಾ.ಎಸ್.ಟಿ.ರವೀಂದ್ರ, ತಮಿಳುನಾಡು, ಕೇರಳ, ಆಂಧ್ರಪ್ರದೇಶ ಸೇರಿದಂತೆ ಅನ್ಯ ರಾಜ್ಯಗಳಲ್ಲಿ ಅವರವರ ಭಾಷೆಗಳಲ್ಲಿ ಮಾತನಾಡುತ್ತಾರೆ ಮತ್ತು ವ್ಯವಹಾರ ಮಾಡುತ್ತಾರೆ. ಅನ್ಯ ರಾಜ್ಯಗಳಿಂದ ವಲಸೆ ಬಂದ ಜನರ ಜೊತೆ ಅವರ ಭಾಷೆಯನ್ನು ನಾವು ಮಾತನಾಡುವುದು ತಪ್ಪು ಎಂದರು. ತಾಲ್ಲೂಕಿನ 25 ಮಂದಿ ಕವಿ, ಕವಿಯಿತ್ರಿಯರು ಸ್ವರಚಿತ ಕವನಗಳನ್ನು ವಾಚನ ಮಾಡಿದವರಿಗೆ ಪರಿಷತ್ ವತಿಯಿಂದ ಪ್ರಶಸ್ತಿ ಪತ್ರಗಳನ್ನು ವಿತರಿಸಿದರು. ಪಿಎಂಶ್ರೀ ಸರ್ಕಾರಿ ಬಾಲಕಿಯರ ಶಾಲೆ, ಅರಣೋದಯ ಶಾಲೆ ಹಾಗು ಸರ್ಕಾರಿ ಬಾಲಕಿಯರ ಶಾಲಾ ವಿದ್ಯಾರ್ಥಿಗಳು ಕನ್ನಡ ಹಾಡುಗಳಿಗೆ ನೃತ್ಯ ಮಾಡಿದರು.

### ಉತ್ತಮ ಶಿಕ್ಷಣದಿಂದ ವಂಚಿತ

ಶಿಕ್ಷಕರನ್ನು ಮಧ್ಯಾಹ್ನದ ಬಿಸಿಯೂಟ, ಗಣತಿಗಳು ಸೇರಿದಂತೆ ವಿವಿಧ ಹೆಚ್ಚುವರಿ ಸೇವೆಗಳಿಗೆ ನಿಯೋಜಿಸಲಾಗಿದೆ. ಇದರಿಂದ ಕೃಷಿಕೂಲಿಕಾರ್ಮಿಕ ಹಾಗೂ ಬಡ ಜನಸಾಮಾನ್ಯರ ಮಕ್ಕಳು ಉತ್ತಮ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ ಎಂದರು.

## ಮಿನಿ ನ್ಯೂಸ್

# ಒಂದೇ ಪಕ್ಷದ ಇಬ್ಬರು ಶಾಸಕರ ನಡುವೆ ವೈಮನಸ್ಸು

• ಉದಯವಾಹಿನಿ, ಮಾಲೂರು

ಕೋಮುಲ್‌ನಲ್ಲಿ ಕೋಟ್ಯಂತರ ರೂಪಾಯಿ ಅವ್ಯವಹಾರ ನಡೆದಿದೆ ಎಂದು ಬಂಗಾರಪೇಟೆ ಶಾಸಕ ಎಸ್.ಎನ್. ನಾರಾಯಣಸ್ವಾಮಿ ಮಾಡಿರುವ ಆರೋಪ ಸತ್ಯಕ್ಕೆ ದೂರುವಾದದ್ದು. ಇದರಿಂದ ಕಾಂಗ್ರೆಸ್ ಪಕ್ಷ ಮತ್ತು ಕಾರ್ಯಕರ್ತರಲ್ಲಿ ಗೊಂದಲ ಉಂಟಾಗಿದೆ ಎಂದು ತಾಲ್ಲೂಕು ಕಾಂಗ್ರೆಸ್ ಸಮಿತಿ ಅಧ್ಯಕ್ಷ ವಿಜಯನರಸಿಂಹ ತಿಳಿಸಿದರು. ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಗುರುವಾರ ತಾಲ್ಲೂಕು ಕಾಂಗ್ರೆಸ್ ಸಮಿತಿಯಿಂದ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಬಂಗಾರಪೇಟೆ ಶಾಸಕ ನಾರಾಯಣಸ್ವಾಮಿ ಮೂರು ಭಾರಿ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಮಾಲೂರು ಶಾಸಕ ಕೆ.ವೈ.ನಂಜೇಗೌಡ ಎರಡು ಭಾರಿ ಶಾಸಕರಾಗಿದ್ದಾರೆ. ಇಬ್ಬರೂ ಜೊತೆ ಜೊತೆಯಲ್ಲಿ ಕೆಲಸ ಮಾಡಿದ್ದಾರೆ. ಯಾವುದೊ ಕಾರಣಕ್ಕೆ ಇಬ್ಬರ ನಡುವ ವೈಮನಸು ಉಂಟಾಗಿರಬಹುದಷ್ಟೇ ಎಂದು ಅವರು ಸ್ಪಷ್ಟಪಡಿಸಿದರು.


ಉದಯವಾಹಿನಿ ಚಿತ್ರ

ಆದರೆ, ಬಂಗಾರಪೇಟೆ ಶಾಸಕ ಎಸ್.ಎನ್. ನಾರಾಯಣಸ್ವಾಮಿ ಈ ರೀತಿ ಹೇಳಿಕೆ ನೀಡಿರುವುದರಿಂದ ಜಿಲ್ಲೆ ಮತ್ತು ತಾಲ್ಲೂಕಿನ ಕಾಂಗ್ರೆಸ್ ಕಾರ್ಯಕರ್ತರಲ್ಲಿ ಆತ್ಮವಿಶ್ವಾಸ ಕುಂದಲಿದೆ. ಕೋಮುಲ್ ಅಧ್ಯಕ್ಷರಾಗಿ ಕೆ.ವೈ.ನಂಜೇಗೌಡ ಹಲವು ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಾಡಿದ್ದಾರೆ. ಒಂದೇ ಪಕ್ಷದ ಶಾಸಕರಾಗಿ ಒಬ್ಬರ ಮೇಲೆ ಒಬ್ಬರು ಆರೋಪ ಮಾಡುವುದರಿಂದ ಪಕ್ಷದ ವರ್ಚಸ್ಸಿಗೆ ದಕ್ಕೆಯಾಗಲಿದೆ. ಕಾರ್ಯಕರ್ತರಲ್ಲಿ ಗೊಂದಲ ಉಂಟಾಗಲಿದೆ ಎಂದರು. ಇಬ್ಬರೂ ಶಾಸಕರು ತಮ್ಮ ನಡುವಿನ ತಪ್ಪುತಿಳಿವಳಿಕೆಗಳನ್ನು ಪರಸ್ಪರ ಚರ್ಚಿಸಿ ತಿಳಿಗೊಳಿಸಿಕೊಳ್ಳಬೇಕು. ಇಲ್ಲವೆ ಪಕ್ಷದ ಹಿರಿಯ ಮುಖಂಡರ ಬಳಿ ಚರ್ಚೆ ಮಾಡಿಕೊಳ್ಳಬೇಕು. ಅದರ ಬದಲು ಹೀಗೆ ಸಾರ್ವಜನಿಕವಾಗಿ ಒಬ್ಬರ ಮೇಲೆ ಒಬ್ಬರು ಆರೋಪ ಮಾಡುವುದರಿಂದ ಪಕ್ಷ ಹಾಗೂ ಕಾರ್ಯಕರ್ತರಲ್ಲಿ ಗೊಂದಲ ಮೂಡುತ್ತದೆ ಎಂದು ಕಿವಿಮಾತು ಹೇಳಿದರು.

> ಜಿಲ್ಲೆಯಲ್ಲಿ ನಾಲ್ಕು ಜನ ಕಾಂಗ್ರೆಸ್ ಶಾಸಕರಿದ್ದಾರೆ. ಏನೇ ಸಮಸ್ಯೆಗಳಿದ್ದರೂ ಜಿಲ್ಲೆಯ ಹಿರಿಯ ಮುಖಂಡರೊಂದಿಗೆ ಮಾತಾಡಿ ಸಮಸ್ಯೆಗಳನ್ನು ನಿವಾರಣೆ ಮಾಡಿಕೊಳ್ಳಬೇಕು
> – ಅಂಜನಿ ಸೋಮಣ್ಣ, ಕೆಪಿಸಿಸಿ ಸದಸ್ಯ

ದರ್ಖಾಸು ಸಮಿತಿ ಅಧ್ಯಕ್ಷ ಸಂತೇಹಳ್ಳಿ ನಾರಾಯಣಸ್ವಾಮಿ, ಗ್ಯಾರಂಟಿ ಸಮಿತಿ ಅಧ್ಯಕ್ಷ ಆಂಜಿನಪ್ಪ, ಜಿಲ್ಲಾಪ್ರಧಾನ ಕಾರ್ಯದರ್ಶಿ ಅಶ್ವಥರೆಡ್ಡಿ, ನವೀನ್ ಮತ್ತಿತರರು ಭಾಗವಹಿಸಿದ್ದರು.

# ಬ್ಯಾಂಕ್ ಸಿಬ್ಬಂದಿ ಸೋಗಿನಲ್ಲಿ ಆನ್‌ಲೈನ್ ವಂಚನೆ

• ಉದಯವಾಹಿನಿ, ಕೊಳ್ಳೇಗಾಲ

ಕೆನರಾ ಬ್ಯಾಂಕ್ ಸಿಬ್ಬಂದಿ ಎಂದು ಫೋನ್ ಕರೆ ಮಾಡಿದ ದುಷ್ಕರ್ಮಿಗಳು ಇಬ್ಬರ ಖಾತೆಗಳಿಂದ 1.30 ಲಕ್ಷ ನಗದನ್ನು ಎಗರಿಸಿದ್ದಾರೆ. ತಾಲ್ಲೂಕಿನ ಸತ್ತೇಗಾಲ ಗ್ರಾಮದ ವಿಜಯ್, ಇಕ್ಕಡಹಳ್ಳಿ ಗ್ರಾಮದ ಸಿದ್ದಪ್ಪ ಹಣ ಕಳೆದುಕೊಂಡವರು. ಇವರಿಬ್ಬರಿಗೂ ಒಂದೇ ದಿನ ದುಷ್ಕರ್ಮಿಗಳು ನಾವು ಕೆನರಾ ಬ್ಯಾಂಕ್ ಸಿಬ್ಬಂದಿ. ನಿಮ್ಮ ಖಾತೆ ಬಂದ್ ಆಗಿದೆ, ಹಾಗಾಗಿ ನಿಮ್ಮ ಮೊಬೈಲ್ ಫೋನ್‌ಗೆ ಒಂದು ಒಟಿಪಿ ನಂಬರ್ ಬರುತ್ತದೆ.



ಅದನ್ನು ಹೇಳಿ' ಎಂದು ದೂರವಾಣಿಯ ಮೂಲಕ ಮಾಹಿತಿ ನೀಡಿದ್ದರು. ಇದನ್ನು ನಂಬಿದ ಇವರು ಓಟಿಪಿ ಸಂಖ್ಯೆಯನ್ನು ಅವರಿಗೆ ಹೇಳಿದ್ದರು. ತಕ್ಷಣ ವಿಜಯ್ ಅವರ ಖಾತೆಯಿಂದ 86 ಸಾವಿರ ಹಾಗೂ ಇಕ್ಕಡಹಳ್ಳಿ ಸಿದ್ದಪ್ಪ ಅವರ ಖಾತೆಯಿಂದ 46 ಸಾವಿರ ನಗದು ಕಡಿತವಾಗಿದೆ.

ಇಬ್ಬರೂ ಕೆನರಾ ಬ್ಯಾಂಕ್‌ಗೆ ಬಂದು ವಿಚಾರಿಸಿದಾಗ 'ನಿಮ್ಮ ಖಾತೆಯಿಂದ ಕಳ್ಳರು ಹಣವನ್ನು ಎಗರಿಸಿದ್ದಾರೆ. ಪೊಲೀಸ್ ಠಾಣೆಗೆ ದೂರು ನೀಡಿ ಎಂದು ಸಿಬ್ಬಂದಿ ಮಾಹಿತಿ ನೀಡಿದ್ದರು. ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

### ಡಿ.ಕೆ.ಶಿವಕುಮಾರ್ ಅವರಿಗಿರುವ ಬೆಂಬಲ ಬರೀ 10 ಕಾಂಗ್ರೆಸ್ ಶಾಸಕರದ್ದಾ? ಏನಿದು ಜಿಟಿಡಿ ಕುತೂಹಲಕಾರಿ ಹೇಳಿಕೆ

# ಸಿದ್ದರಾಮಯ್ಯ ಅದೃಷ್ಟದ ರಾಜಕಾರಣ: ಜಿ.ಟಿ.ದೇವೇಗೌಡ

- ಮುಖ್ಯಮಂತ್ರಿ ಬದಲಾವಣೆ ಎನ್ನುವ ವಿಚಾರವನ್ನು ಕೇಳಿ ಕೇಳಿ ಸಾಕಾಗಿ ಹೋಗಿದೆ
- ಎಐಸಿಸಿ ಹೆಸರು ದುರ್ಬಳಕೆ ಮಾಡುವುದನ್ನು ನಿಲ್ಲಿಸಲಿ ಎಂದು ಡಿಕೆಶಿಗೆ ಹೇಳಿದ್ದ ಸಚಿವ ರಾಜಣ್ಣ
- 2018ರ ಅಸೆಂಬ್ಲಿ ಚುನಾವಣೆಯಲ್ಲಿ ಸಿದ್ದರಾಮಯ್ಯನವರನ್ನು ಜಿ.ಟಿ.ದೇವೇಗೌಡ ಸೋಲಿಸಿದ್ದರು


• ಉದಯವಾಹಿನಿ, ಮೈಸೂರು

**ಹತ್ತು ಶಾಸಕರ ಬೆಂಬಲ**

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಬಹಳ ಅದೃಷ್ಟವಂತ ಮನುಷ್ಯ, ಅವರಂತಹ ಅದೃಷ್ಟ ಯಾರಿಗೂ ಬರುವುದಿಲ್ಲ ಎಂದು ಚಾಮುಂಡೇಶ್ವರಿ ಕ್ಷೇತ್ರದ ಜೆಡಿಎಸ್ ಶಾಸಕ ಜಿ.ಟಿ.ದೇವೇಗೌಡ ಅಭಿಪ್ರಾಯ ಪಟ್ಟಿದ್ದಾರೆ. ಜೊತೆಗೆ, ಮುಖ್ಯಮಂತ್ರಿ ಬದಲಾವಣೆ ವಿಚಾರದಲ್ಲೂ ಕುತೂಹಲಕಾರಿ ಹೇಳಿಕೆಯನ್ನು ನೀಡಿದ್ದಾರೆ.

ಮುಖ್ಯಮಂತ್ರಿ ಪರವಾಗಿ ಮತ್ತೊಮ್ಮೆ ಬ್ಯಾಟ್ ಬೀಸಿರುವ ಜಿಟಿಡಿ, ಅಂದು ಮೈಸೂರು ನಾಡಹಬ್ಬ ದಸರಾ ಉದ್ಘಾಟನೆಯ ವೇಳೆಯೂ, ಸಿದ್ದರಾಮಯ್ಯ ಪರವಾಗಿ ಮಾತನಾಡಿದ್ದರು. ಜಿಟಿಡಿ ಹೇಳಿಕೆಯನ್ನು, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆದಿಯಾಗಿ, ಬಿಜೆಪಿ ನಾಯಕರು ಲೇವಡಿ ಮಾಡಿದ್ದರು.

ನಗರದಲ್ಲಿ ಮಾತನಾಡುತ್ತಿದ್ದ ದೇವೇಗೌಡ, ಮುಖ್ಯಮಂತ್ರಿ ಬದಲಾವಣೆ ಎನ್ನುವ ವಿಚಾರವನ್ನು ಕೇಳಿ ಕೇಳಿ ಸಾಕಾಗಿ ಹೋಗಿದೆ. ಮುಖ್ಯಮಂತ್ರಿ ಬದಲಾವಣೆ ಆಗಲು ಶಾಸಕರ ಬಲ ಬೇಡವೇ ಎಂದು ಜಿ.ಟಿ.ದೇವೇಗೌಡ ಹೇಳಿದ್ದಾರೆ. ಆ ಮೂಲಕ, ಪರೋಕ್ಷವಾಗಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರುದ್ದ ಮಾತನಾಡಿದ್ದಾರೆ. ಮುಖ್ಯಮಂತ್ರಿ ಮತ್ತು ಕೆಪಿಸಿಸಿ ಅಧ್ಯಕ್ಷರ ಬದಲಾವಣೆಯ ಕುರಿತಂತೆ, ಕಾಂಗ್ರೆಸ್‌ನಲ್ಲಿ ಬಹಳಷ್ಟು ಬದಲಾವಣೆಗಳು ನಡೆಯುತ್ತಿವೆ. ರಾಜ್ಯ ಗೃಹ ಸಚಿವ ಡಾ.ಪರಮೇಶ್ವರ್ ಅವರು, ದೆಹಲಿಯಲ್ಲಿ ಕೆ.ಸಿ.ವೇಣುಗೋಪಾಲ್ ಅವರನ್ನು ಭೇಟಿಯಾಗಿದ್ದಾರೆ. ಆದರೆ, ಭೇಟಿಯ ವೇಳೆ ನಡೆದ ಮಾತುಕತೆಯ ಗುಟ್ಟನ್ನು ಬಿಟ್ಟು ಕೊಡಲಿಲ್ಲ. ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಕಾರ್ಯಾಧ್ಯಕ್ಷ ಚಂದ್ರಶೇಖರ್ ವಿರುದ್ದ ಸಹಕಾರ ಸಚಿವ ಕೆ.ಎನ್.ರಾಜಣ್ಣ ಬಹಿರಂಗವಾಗಿಯೇ ಟೀಕಿಸಿದ್ದರು. ಅವರಿಗೇನು ತಲೆಗೆ ಎರಡು ಕೊಂಬು ಇದೆಯಾ, ನನಗೆ ಸದಾಶಿವ ನಗರದಲ್ಲಿ ಮನೆ ಇದೆಯಾ, ಎಐಸಿಸಿ ಹೆಸರು ದುರ್ಬಳಕೆ ಮಾಡುವುದನ್ನು ನಿಲ್ಲಿಸಲಿ ಎಂದೆಲ್ಲಾ ಹೇಳಿದ್ದರು.



ಇದರ ಬೆನ್ನಲ್ಲೇ ಜಿ.ಟಿ.ದೇವೇಗೌಡರ ಹೇಳಿಕೆ ಮಹತ್ವ ಪಡೆದುಕೊಂಡಿದೆ. ಬರೀ ಸಿಎಂ ಬದಲಾವಣೆ ಎಂದು ಹೇಳಿಕೆ ನೀಡುತ್ತಿದ್ದರೆ ಆಗುವುದಿಲ್ಲ. ಜನರಿಗೂ ಈ ಮಾತನ್ನು ಕೇಳಿಕೇಳಿ ಬೇಸರವಾಗಿ ಹೋಗಿದೆ. ಮುಖ್ಯಮಂತ್ರಿಯಾಗಲು 10 ಶಾಸಕರ ಬೆಂಬಲವಿದ್ದರೆ ಸಾಲುವುದಿಲ್ಲ ಎಂದು ಜಿ.ಟಿ.ದೇವೇಗೌಡ ಹೇಳಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ದ ಎಫ್ಐಆರ್ ದಾಖಲಾದ ಕೂಡಲೇ, ಅವರ ರಾಜೀನಾಮೆಯನ್ನು ಕೇಳಿದ್ದರು. ಈಗ, ಅವರಿಗೆ ಕ್ಲೀನ್ ಚಿಟ್ ಸಿಗುತ್ತಿದೆ. ಅಂದು ನಾನು ಹೇಳಿದ್ದಕ್ಕೆ ನಾನು ಏನೋ ಅಪರಾಧ ಮಾಡಿದವರ ರೀತಿಯಲ್ಲಿ ನನ್ನನ್ನು ಬಿಂಬಿಸಲಾಯಿತು ಎಂದು ಜಿ.ಟಿ.ದೇವೇಗೌಡ ಹೇಳಿದ್ದಾರೆ. ಜೊತೆಗೆ, ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗಬೇಕಿದ್ದರೆ, ಸಿದ್ದರಾಮಯ್ಯನವರ ಬೆಂಬಲ ಬೇಕೇ ಬೇಕು ಎಂದು ಜಿಟಿಡಿ ಹೇಳಿದ್ದಾರೆ.

### ಮುಖ್ಯಮಂತ್ರಿ ಆಗಲು ಸಾಧ್ಯವೇ

ಕರ್ನಾಟಕದಲ್ಲಿ ಮುಖ್ಯಮಂತ್ರಿ ಬದಲಾವಣೆಯ ವಿಚಾರಕ್ಕೆ ಸಂಬಂಧಿಸಿದಂತೆ, ಜೆಡಿಎಸ್ ಶಾಸಕ ಮತ್ತು ಸಿದ್ದರಾಮಯ್ಯನವರ ಆಪ್ತರೂ ಆದ ಜಿ.ಟಿ.ದೇವೇಗೌಡ ನೀಡಿರುವ ಹೇಳಿಕೆ ಕುತೂಹಲಕ್ಕೆ ಕಾರಣವಾಗಿದೆ. ಬರೀ ಹತ್ತು ಶಾಸಕರನ್ನು ಇಟ್ಟುಕೊಂಡು ಮುಖ್ಯಮಂತ್ರಿ ಆಗಲು ಸಾಧ್ಯವೇ ಎಂದು ಅವರು ಪ್ರಶ್ನಿಸಿದ್ದಾರೆ.

2018ರ ಅಸೆಂಬ್ಲಿ ಚುನಾವಣೆಯಲ್ಲಿ ಸಿದ್ದರಾಮಯ್ಯನವರನ್ನು ಜಿ.ಟಿ.ದೇವೇಗೌಡ, ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಸೋಲಿಸಿದ್ದರು. ಆದಾಗ್ಯೂ, ಇವರಿಬ್ಬರ ನಡುವಿನ ಒಡನಾಟ ಉತ್ತಮವಾಗಿದೆ. ದಸರಾ ಉದ್ಘಾಟನೆ ವೇಳೆ, ಭರ್ಜರಿಯಾಗಿ ತುಂಬಿದ ವೇದಿಕೆಯಲ್ಲೇ ಸಿದ್ದರಾಮಯ್ಯನವರನ್ನು ಜಿಟಿಡಿ ಹೊಗಳಿದ್ದರು. ಡಿಕೆಶಿ ಅವರು ಇಂದಲ್ಲಾ ನಾಳೆ ಸಿಎಂ ಖಂಡಿತಾ ಸಿಎಂ ಆಗುತ್ತಾರೆ ಎಂದು ಜಿಟಿಡಿ ಹೇಳುವುದನ್ನು ಮರೆಯಲಿಲ್ಲ. ಜೆಡಿಎಸ್ ನಲ್ಲಿದ್ದರೂ, ದೇವೇಗೌಡರ ಕುಟುಂಬದ ಜೊತೆಗೆ ಉತ್ತಮ ಒಡನಾಟವನ್ನು ಜಿಟಿಡಿ ಹೊಂದಿಲ್ಲ. ಅವರಿಗೆ ನಾನು ಬೇಡ, ನನ್ನ ಮಗ ಬೇಕು ಎಂದು ಆಕ್ಷೇಪ ವ್ಯಕ್ತ ಪಡಿಸಿದ್ದರು. ಈ ನಡುವೆ, ಡಿ.ಕೆ.ಶಿವಕುಮಾರ್ ಅವರಿಗೆ ಬರೀ ಹತ್ತು ಶಾಸಕರ ಬೆಂಬಲವಿದೆ ಎಂದು ಪರೋಕ್ಷವಾಗಿ ಹೇಳುವ ಮೂಲಕ ಹೊಸ ಚರ್ಚೆಗೆ ನಾಂದಿ ಹಾಡಿದ್ದಾರೆ.

# 1.75 ಕೋಟಿ ಉಳಿತಾಯ ಬಜೆಟ್ ಮಂಡನೆ

• ಉದಯವಾಹಿನಿ, ಶಿರಾ

ನಗರಸಭೆ 2025–26ನೇ ಸಾಲಿನ 1.75ಕೋಟಿ ಉಳಿತಾಯ ಬಜೆಟ್ ಅನ್ನು ನಗರಸಭೆ ಅಧ್ಯಕ್ಷ ಜೀಷಾನ್ ಮೆಹಮೂದ್ ಮಂಡಿಸಿದರು. ನಗರಸಭೆಯಲ್ಲಿ 2025–26ನೇ ಸಾಲಿನಲ್ಲಿ ವಿವಿಧ ಮೂಲಗಳಿಂದ 42.86 ಕೋಟಿ ಆದಾಯವನ್ನು ನಿರೀಕ್ಷಿಸಲಾಗಿದೆ. ಅದರಲ್ಲಿ 41.10 ಕೋಟಿ ಖರ್ಚು ಎಂದು ಅಂದಾಜು ಮಾಡಿದ್ದು ಉಳಿಕೆ 1.75 ಕೋಟಿ ಉಳಿತಾಯ ನಿರೀಕ್ಷಿಸಲಾಗಿದೆ.


ಉದಯವಾಹಿನಿ ಚಿತ್ರ

**ಆದಾಯ:** ರಾಜಸ್ವ ಸ್ವೀಕೃತಿಗಳಿಂದ 26.78, ಬಂಡವಾಳ ಸ್ವೀಕೃತಿಯಿಂದ 8.15 ಕೋಟಿ, ಅಸಾಮಾನ್ಯ ಸ್ವೀಕೃತಿಗಳಿಂದ 7.91ಕೋಟಿ ಸೇರಿ ಒಟ್ಟು 42.86 ಕೋಟಿ ಆದಾಯ ನಿರೀಕ್ಷೆ ಮಾಡಲಾಗಿದೆ.

**ಖರ್ಚು:** ರಾಜಸ್ವ ಪಾವತಿಗಾಗಿ 22.38ಕೋಟಿ, ಬಂಡವಾಳ ಪಾವತಿಗಾಗಿ 12.15ಕೋಟಿ, ಅಸಾಮಾನ್ಯ ಪಾವತಿಗಾಗಿ 6.57ಕೋಟಿ ಸೇರಿದಂತೆ ಒಟ್ಟು 41.10 ಕೋಟಿ ಖರ್ಚು ನಿರೀಕ್ಷಿಸಿರುವುದಾಗಿ ಅಧ್ಯಕ್ಷ ಹೇಳಿದರು. ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಹಿಂದೆ ಇದ್ದ ಐಡಿಎಸ್‌ಎಂಟಿ ಮಳಿಗೆಗಳನ್ನು ಈಗಾಗಲೇ ತೆರುವುಗೊಳಿಸಲಾಗಿದೆ. ಅದೇ ಜಾಗದಲ್ಲಿ 3ಕೋಟಿ ವೆಚ್ಚದಲ್ಲಿ ವಾಣಿಜ್ಯ ಸಂಕೀರ್ಣ ನಿರ್ಮಿಸಲು ಚಿಂತನೆ ನಡೆಸಲಾಗಿದೆ ಎಂದರು.

ನಗರದ ನಾರಾಯಣಸ್ವಾಮಿ ಮಂಟಪದಲ್ಲಿ ಸುಮಾರು 1.50ಕೋಟಿ ವೆಚ್ಚದಲ್ಲಿ ಫುಡ್ ಕೋರ್ಟ್ ನಿರ್ಮಿಸಲು ಯೋಜನೆ ರೂಪಿಸಲಾಗಿದೆ. ಫುಡ್ ಕೋರ್ಟ್‌ನಿಂದ 10ರಿಂದ 15ಲಕ್ಷ ಆದಾಯ ನಿರೀಕ್ಷಿಸಲಾಗಿದೆ. ನಗರದಲ್ಲಿ ಕಳ್ಳತನ ತಡೆಗಟ್ಟಲು ಆಯಕಟ್ಟಿನ ಜಾಗಗಳಲ್ಲಿ ಸಿ.ಸಿ.ಟಿವಿ ಕ್ಯಾಮೆರಾ ಮತ್ತು ಸಂಚಾರ ದಟ್ಟಣೆ ಇರುವ ಸ್ಥಳಗಳಲ್ಲಿ ಸಂಚಾರ ದೀಪಗಳನ್ನು ಅಳವಡಿಸಲು ಸುಮಾರು 35 ಲಕ್ಷ ಮೀಸಲಿರಿಸಲಾಗಿದೆ. ವಾರ್ಡ್ ನಂ. 14ರಲ್ಲಿ ಕೋಟೆ ಮಾರಮ್ಮನ ದೇವಸ್ಥಾನ ಹತ್ತಿರ ಸಾರ್ವಜನಿಕರ ಅನುಕೂಲಕ್ಕಾಗಿ 2ಕೋಟಿ ವೆಚ್ಚದಲ್ಲಿ ಸಮುದಾಯ ಭವನ ನಿರ್ಮಿಸಲಾಗುವುದು ಎಂದರು. ನಗರಸಭೆ ಪೌರಾಯುಕ್ತ ರುದ್ರೇಶ್, ಉಪಾಧ್ಯಕ್ಷ ಲಕ್ಷಿಕಾಂತ್, ಸ್ಥಾಯಿ ಸಮಿತಿ ಅಧ್ಯಕ್ಷ ಅಜೇಯ್ ಕುಮಾರ್, ಲೆಕ್ಕಿಗ ವಿಶ್ವೇಶ್ವರಯ್ಯ, ನಗರಸಭೆ ಅಧಿಕಾರಿಗಳು ಸಭೆಯಲ್ಲಿ ಇದ್ದರು.

# ಅಧರ್ಮದ ಕೈಗೆ ವಿಜ್ಞಾನ ಸಿಕ್ಕರೆ ಹಾನಿ: ಅಶೋಕ್


ಉದಯವಾಹಿನಿ ಚಿತ್ರ

• ಉದಯವಾಹಿನಿ, ನಾಗಮಂಗಲ

**ವಿಜ್ಞಾತಂ ಪ್ರಶಸ್ತಿ ಪ್ರದಾನ**

ಇಲ್ಲಿನ ಆದಿಚುಂಚನಗಿರಿ ಮಠದಲ್ಲಿ ಗುರುವಾರ 2025ನೇ ಸಾಲಿನ ವಿಜ್ಞಾತಂ ಪ್ರಶಸ್ತಿಯನ್ನು ಜುನಾ ಅಖಾಡಾದ ಆಚಾರ್ಯ ಮಹಾಮಂಡಲೇಶ್ವರರಾದ ಅವಧೇಶಾನಂದ ಗಿರಿ ಮಹಾರಾಜ್ ಅವರಿಗೆ ಪ್ರದಾನ ಮಾಡಲಾಯಿತು.


ಮಠದ ಬಿ.ಜಿ.ಎಸ್ ಸಭಾಂಗಣದಲ್ಲಿ ಪೀಠಾಧ್ಯಕ್ಷ ನಿರ್ಮಲಾನಂದನಾಥ ಸ್ವಾಮೀಜಿ ಅವರ 12ನೇ ವಾರ್ಷಿಕ ಪಟ್ಟಾಭಿಷೇಕೋತ್ಸವದಲ್ಲಿ ನಡೆದ ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಮಾತನಾಡಿದ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ, 'ವಿಜ್ಞಾನ–ತಂತ್ರಜ್ಞಾನ ಯಾವಾಗಲೂ ಧರ್ಮದ ಜೊತೆಗೆ ಇರಬೇಕು. ವಿಜ್ಞಾನ ವಿವೇಕಿಗಳ ಕೈಯಲ್ಲಿ ಇದ್ದರೆ ಮಾತ್ರ ಸುರಕ್ಷಿತವಾಗಿರುತ್ತದೆ. ನಾವು ಧರ್ಮದ ಜೊತೆಗೆ ವಿಜ್ಞಾನವನ್ನು ತೆಗೆದುಕೊಂಡು ಹೋದಾಗ ಸಮಾಜವು ಅಭಿವೃದ್ಧಿಯಾಗುತ್ತದೆ. ಆದರೆ, ಅಧರ್ಮದ ಕೈಗೆ ವಿಜ್ಞಾನ ಸಿಕ್ಕರೆ ಸಮಾಜಕ್ಕೆ ಹಾನಿ ಉಂಟಾಗುತ್ತದೆ ಎಂದರು.

ವಿಜ್ಞಾನ, ಧರ್ಮಗಳು ಒಟ್ಟಿಗೆ ಹೋದರೆ ಎಂಥ ಪರಿಪೂರ್ಣತೆ ಪಡೆಯಲು ಸಾಧ್ಯವೆಂಬುದಕ್ಕೆ ವಿಜ್ಞಾತಂ ಉತ್ಸವ ಸಾಕ್ಷಿಯಾಗಿದೆ. ವಿಜ್ಞಾನಕ್ಕೂ ಮಠಕ್ಕೂ ಏನು ಸಂಬಂಧ ನಾವೆಲ್ಲರೂ ಮಠವೆಂದರೆ ಧರ್ಮದ ಮಾರ್ಗದಲ್ಲಿ ಜನ ನಡೆಯುವಂತೆ ಮಾಡುವುದೆಂದು ತಿಳಿದಿದ್ದೇವೆ. ನಂತರ ಚಿಕ್ಕಬಳ್ಳಾಪುರ ಸಂಸದ ಕೆ.ಸುಧಾಕರ್ ಮತ್ತು ಹೊಸಕೋಟೆ ಕ್ಷೇತ್ರದ ಶಾಸಕ ಶರತ್ ಬಚ್ಚೇಗೌಡ ಮಾತನಾಡಿದರು.

> ನಿರ್ಮಲಾನಂದನಾಥ ಸ್ವಾಮೀಜಿ ಅವರು ಮಠಕ್ಕೂ ಮತ್ತು ವಿಜ್ಞಾನ- ತಂತ್ರಜ್ಞಾನಕ್ಕೂ ಇರುವ ಸಂಬಂಧವನ್ನು ವಿಜ್ಞಾತಂ ಉತ್ಸವದಲ್ಲಿ ತೋರಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ನಿರ್ಮಲಾನಂದನಾಥ ಸ್ವಾಮೀಜಿ ಆಶೀರ್ವಚನ ನೀಡಿ, ವಿಜ್ಞಾತಂ ಎಂಬುದು ವಿಜ್ಞಾನ, ಜ್ಞಾನ ಮತ್ತು ತಂತ್ರಜ್ಞಾನದ ಸಮ್ಮಿಲನ. ವಿಜ್ಞಾನ ಹಾಗೂ ತಂತ್ರಜ್ಞಾನವು ಜ್ಞಾನದ ಜೊತೆಗೆ ಸೇರಬೇಕು. ಆಗ ಮಾತ್ರವೇ ಅಭಿವೃದ್ಧಿ ಸಾಧ್ಯ' ಎಂದರು.

# ಅವಧಿ ಮುಗಿದ ಟೆಂಡರ್ ರದ್ದುಪಡಿಸಲು ಆಗ್ರಹ

• ಉದಯವಾಹಿನಿ, ಮದ್ದೂರು


ಉದಯವಾಹಿನಿ ಚಿತ್ರ

ಅವಧಿ ಮುಗಿದಿರುವ ಕಾರಣ ನೈರ್ಮಲ್ಯ ವಿಭಾಗದ ಟೆಂಡರ್ ರದ್ದುಪಡಿಸಿ ಹೊಸದಾಗಿ ಟೆಂಡರ್ ಕರೆಯಬೇಕು ಎಂದು ಪುರಸಭಾ ಸದಸ್ಯರು ಆಗ್ರಹಿಸಿದರು. ಪಟ್ಟಣದ ಪುರಸಭೆಯಲ್ಲಿ ಗುರುವಾರ ಕರೆಯಲಾಗಿದ್ದ ತುರ್ತು ಸಭೆಯಲ್ಲಿ ಈ ವಿಷಯ ಪ್ರಸ್ತಾಪಿಸಲಾಯಿತು. ಸಭೆಯಲ್ಲಿ ಈ ವಿಷಯ ಚರ್ಚೆಗೆ ಬರುತ್ತಿದ್ದಂತೆ ಪುರಸಭೆಯ ಮುಖ್ಯಾಧಿಕಾರಿಗಳು ಈ ಬಗ್ಗೆ ವಿವರಣೆ ನೀಡಿ, ಸುಮಾರು 14 ದಿನಗಳಿಂದ ಪುರಸಭೆ ಮುಂದೆ ಹೊರಗುತ್ತಿಗೆ ನೌಕರನಾಗಿ ಸಾರ್ಟರ್ ಆಗಿ ಕೆಲಸ ಮಾಡುತ್ತಿದ್ದ ಮನಿಶ್ ಎಂಬುವರನ್ನು ಹೊರಗುತ್ತಿಗೆ ತೆಗೆದುಕೊಂಡಿದ್ದ ಸಂಸ್ಥೆಯು ವಜಾಗೊಳಿಸಿದ್ದರ ವಿರುದ್ಧ ಧರಣಿ ಪ್ರತಿಭಟನೆ ನಡೆಯುತ್ತಿದೆ. ಆದ್ದರಿಂದ ಈ ಬಗ್ಗೆ ಸದಸ್ಯರು ನಿರ್ಣಯ ಕೈಗೊಳ್ಳಬೇಕು' ಎಂದರು.

**ತುರ್ತು ಸಭೆಯಲ್ಲಿ ನಿರ್ಧಾರ**

ಈ ವೇಳೆ ಪುರಸಭಾ ಸದಸ್ಯರಾದ ಮಹೇಶ್, ಎಂ.ಐ.ಪ್ರವೀಣ್, ಪ್ರಿಯಾಂಕ ಅಪ್ಪುಗೌಡ, ನಂದೀಶ್, ಮನೋಜ್ ಎದ್ದು ನಿಂತು ಈ ಬಗ್ಗೆ ಈ ಮೊದಲೇ ಸಭೆಯ ಗಮನಕ್ಕೆ ಏಕೆ ತಂದಿಲ್ಲ, ಇದಕ್ಕೆ ಸಂಬಂಧಪಟ್ಟಂತೆ 2ರಿಂದ 3 ಬಾರಿ ಟೆಂಡರ್ ಅವಧಿ ಮುಗಿದಿದ್ದರೂ ಸದಸ್ಯರ ಗಮನಕ್ಕೆ ತಂದು ಏಕೆ ನೀವು ಮತ್ತೊಮ್ಮೆ ಟೆಂಡರ್ ಕರೆಯಲಿಲ್ಲ ಎಂದು ಪುರಸಭೆಯ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಅಷ್ಟೆ ಅಲ್ಲದೆ ವಜಾಗೊಂಡ ಇದೇ ನೌಕರನ ವಿರುದ್ಧ ಪೊಲೀಸ್ ಠಾಣೆಯಲ್ಲಿ ದೂರು ಕೂಡಾ ದಾಖಲಾಗಿದೆಯಾದರೂ ಸಭೆಯ ಗಮನಕ್ಕೆ ತಂದಿಲ್ಲ ಏಕೆ ಎಂದು ಪ್ರಶ್ನಿಸಿದರು, ನಂತರ ಪುರಸಭಾಧ್ಯಕ್ಷೆ ಕೋಕಿಲ ಅರುಣ್ ಮಧ್ಯೆ ಪ್ರವೇಶಿಸಿ ಸದಸ್ಯರನ್ನು ಸಮಾಧಾನಪಡಿಸಲು ಪ್ರಯತ್ನಿಸಿದರು.

ಆದರೂ ಸದಸ್ಯರು ಹಾಗೂ ಅಧಿಕಾರಿಗಳ ನಡುವೆ ವಾಗ್ವಾದ ನಡೆದವು. ನಂತರ ಹೊರಗುತ್ತಿಗೆಯ ಅವಧಿ ಮುಗಿದಿರುವ ಕಾರಣ ಟೆಂಡರ್ ರದ್ದುಗೊಳಿಸಬೇಕೆಂದು ಸದಸ್ಯರು ನಿರ್ಧರಿಸಿದರು. 2025–26ನೇ ಸಾಲಿನ ಆಸ್ತಿ ತೆರಿಗೆ ಪರಿಷ್ಕರಣೆ ಮಾಡುವ ಬಗ್ಗೆ ಅಧಿಕಾರಿಗಳು ಸಭೆಯಲ್ಲಿ ಪ್ರಸ್ತಾಪಿಸಿದ ಹಿನ್ನೆಲೆ, ಶೇ3 ಮಾತ್ರ ಹೆಚ್ಚಿಸಲು, ನೀರಿನ ತೆರಿಗೆ 5 ಹೆಚ್ಚಿಸಲು ಸದಸ್ಯರು ಒಪ್ಪಿಗೆ ಸೂಚಿಸಿದರು. ಸಭೆಯ ಅಧ್ಯಕ್ಷತೆಯನ್ನು ಪುರಸಭಾಧ್ಯಕ್ಷೆ ಕೋಕಿಲಾ ಅರುಣ್ ವಹಿಸಿದ್ದರು, ಮುಖ್ಯಾಧಿಕಾರಿ ಮೀನಾಕ್ಷಿ ಸೇರಿ ದಂತೆ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

# ಗೌರಿಬಿದನೂರು ಸಮಸ್ಯೆ ನೂರಾರು; ಬಜೆಟ್ ನಿರೀಕ್ಷೆ ಬೆಟ್ಟದಷ್ಟು

## ಎಲ್ಲಾ ಚಿಕಿತ್ಸೆಗಳನ್ನು ನೀಡುವ ಗುಣಮಟ್ಟದ ಆಸ್ಪತ್ರೆಗಳನ್ನು ನಿರ್ಮಿಸಲು ಬಜೆಟ್‌ನಲ್ಲಿ ಹಣ ಅಗತ್ಯ

• ಉದಯವಾಹಿನಿ, ಗೌರಿಬಿದನೂರು

ರಾಜ್ಯ ಸರ್ಕಾರದ ಬಜೆಟ್ ಮಂಡನೆ ಆಗಲು ಕೆಲವೇ ದಿನಗಳು ಬಾಕಿ ಉಳಿದಿದೆ. ತಾಲ್ಲೂಕಿನ ಜನರು ಬಜೆಟ್ ಬಗ್ಗೆ ಸಹಜವಾಗಿಯೇ ನಾನಾ ನಿರೀಕ್ಷೆಗಳನ್ನು ಇಟ್ಟುಕೊಂಡಿದ್ದಾರೆ. ಕುಡಿಯುವ ನೀರು, ಕೈಗಾರಿಕೆ, ಕೃಷಿ, ಆರೋಗ್ಯ, ನಗರಾಭಿವೃದ್ಧಿ, ಪ್ರವಾಸೋದ್ಯಮ ಹೀಗೆ ನಾನಾ ಕ್ಷೇತ್ರಗಳ ಅಭಿವೃದ್ಧಿಗೆ ಎಷ್ಟು ಹಣ ದೊರೆಯಬಹುದು ಎಂಬ ನಿರೀಕ್ಷೆ ತಾಲ್ಲೂಕಿನ ಜನರಲ್ಲಿ ಮೂಡಿದೆ.

> ಎಚ್.ಎನ್ ಪ್ರಾಧಿಕಾರ ರಚನೆ ಮಾಡಲು ಅನುದಾನ ಮೀಸಲಿಡಬೇಕು. ಇದರಿಂದ ಇಲ್ಲಿನ ವಿದ್ಯಾರ್ಥಿಗಳಿಗೆ ಶಿಕ್ಷಣದ ಬಗ್ಗೆ, ವೈಜ್ಞಾನಿಕ ವಿಚಾರಗಳ ಬಗ್ಗೆ ಆಸಕ್ತಿ ಉಂಟಾಗುತ್ತದೆ
> –ಸಂಕಲ್ಪ ಗೌರೀಶ್, ಕಸಾಪ ಸದಸ್ಯ, ಗೌರಿಬಿದನೂರು

ಗೌರಿಬಿದನೂರು ನಗರವು ಬೆಂಗಳೂರಿಗೆ 84 ಕಿ. ಮೀ, ದೇವನಹಳ್ಳಿ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ 60 ಕಿ. ಮೀ, ಸ್ಮಾರ್ಟ್‌ಸಿಟಿ ತುಮಕೂರಿಗೆ 69 ಕಿ.ಮೀ ಹಾಗೂ ಆಂಧ್ರಪ್ರದೇಶ ಗಡಿ ಭಾಗ ಕೇವಲ 43 ಕಿ. ಮೀ ದೂರದಲ್ಲಿದೆ. ರಾಷ್ಟ್ರೀಯ ಹೆದ್ದಾರಿ ಮತ್ತು ರಾಜ್ಯ ಹೆದ್ದಾರಿಗಳು ನಗರದ ನಡುವೆ ಹಾದು ಹೋಗಿವೆ.

ಮುಂಬೈ, ನವದೆಹಲಿ, ಹೈದರಾಬಾದ್, ಪುಣೆ, ಚೆನ್ನೈ ಸೇರಿದಂತೆ ದೇಶದ ಎಲ್ಲಾ ಮಹಾನಗರಗಳನ್ನು ತಲುಪಲು ಮತ್ತು ಸಾಗಾಣಿಕೆ ಮಾಡಲು ನಿರಂತರ ರೈಲಿನ ವ್ಯವಸ್ಥೆಯೂ ನಗರದಿಂದ ಇದೆ.


ಉದಯವಾಹಿನಿ ಚಿತ್ರ

> ತಾಲ್ಲೂಕಿನ ಕೆರೆಗಳಿಗೆ ನೀರು ತುಂಬಿಸಲು ಎತ್ತಿನ ಹೊಳೆ ಯೋಜನೆಗೆ ಹೆಚ್ಚಿನ ಅನುದಾನ ನೀಡಬೇಕು. ಎಚ್.ಎನ್ ವ್ಯಾಲಿ, ಕೆ.ಸಿ ವ್ಯಾಲಿ ಯೋಜನೆ ನೀರನ್ನು ಮೂರನೇ ಹಂತದಲ್ಲಿ ಶುದ್ದೀಕರಣ ಮಾಡಬೇಕು. ರೈತರಿಗೆ ಟ್ರಾನ್ಸ್‌ಫಾರ್ಮಗಳನ್ನು ಅಕ್ರಮ ಸಕ್ರಮ ಮಾಡಿಕೊಡಬೇಕು. ಹಾಲಿನ ಪ್ರೋತ್ಸಾಹ ಧನ ತಕ್ಷಣ ಬಿಡುಗಡೆ ಮಾಡಬೇಕು. ಪ್ರೋತ್ಸಾಹ ಧನವನ್ನು 10 ಹೆಚ್ಚಿಸಬೇಕು
> –ಲೋಕೇಶ್ ಗೌಡ, ರೈತ ಮುಖಂಡ, ಗೌರಿಬಿದನೂರು.

ಕುಡುಮಲಕುಂಟೆ ಕೈಗಾರಿಕಾ ಪ್ರದೇಶದಲ್ಲಿ ಗುಡಿ ಮತ್ತು ಬೃಹತ್ ಕೈಗಾರಿಕೆಗಳನ್ನು ಸ್ಥಾಪಿಸಿ ಕೈಗಾರಿಕಾ ವಲಯವನ್ನಾಗಿ ಮಾಡಿದರೆ, ನಗರ ದೊಡ್ಡ ಪ್ರಮಾಣದಲ್ಲಿ ಬೆಳೆಯಲು ಸಾಧ್ಯವಾಗುತ್ತದೆ. ತಾಲ್ಲೂಕಿನಿಂದ ಕೆಲಸಕ್ಕೆ ಹೊರ ಹೋಗುವ ಸಾವಿರಾರು ಯುವಕ, ಯುವತಿಯರಿಗೆ ಉದ್ಯೋಗ ಸೃಷ್ಟಿ ಆಗುತ್ತದೆ. ಈ ಎಲ್ಲಾ ದೃಷ್ಟಿಯಿಂದ ಕುಡುಮಲಕುಂಟೆ ಕೈಗಾರಿಕಾ ಪ್ರದೇಶದ ಬೆಳವಣಿಗೆಗೆ ಅನುದಾನವೇನಾದರೂ ದೊರೆಯುತ್ತದೆಯೇ ಎನ್ನುವ ನಿರೀಕ್ಷೆ ತಾಲ್ಲೂಕಿನ ಜನರದ್ದು. ತಾಲ್ಲೂಕಿಗೆ ಯಾವುದೇ ಶಾಶ್ವತ ನೀರಾವರಿ ಯೋಜನೆಗಳಿಲ್ಲ. ಮಳೆ ನೀರು ಮತ್ತು ಕೆರೆಗಳನ್ನು ರೈತರು ನಂಬಿದ್ದಾರೆ. ಕೆ.ಸಿ ವ್ಯಾಲಿ, ಎಚ್.ಎನ್ ವ್ಯಾಲಿ ಮತ್ತು ಎತ್ತಿನ ಹೊಳೆ ಯೋಜನೆಗಳನ್ನು ಆದಷ್ಟು ಬೇಗ ಅನುಷ್ಠಾನಗೊಳಿಸಿ ಈ ಭಾಗದ ನೀರಿನ ಬವಣೆಯನ್ನು ಶಾಶ್ವತವಾಗಿ ನೀಗಿಸಲು ಬಜೆಟ್‌ನಲ್ಲಿ ಹೆಚ್ಚಿನ ಅನುದಾನ ಮೀಸಲಿಡಲಾಗುತ್ತದೆಯೇ ಎನ್ನುವ ಅಪಾರವಾದ ಆಸೆ ಮತ್ತು ನಿರೀಕ್ಷೆಗಳು ಗೌರಿಬಿದನೂರು ಜನರಲ್ಲಿ ಇದೆ. ಉತ್ತರ ಪಿನಾಕಿನಿ ನದಿ ಪುನಶ್ಚೇತನಕ್ಕೆ ಸರ್ಕಾರ ಗಮನವಹಿಸಬೇಕು.

ನದಿಯ ಗತ ವೈಭವದ ಜೀವ ಕಳೆಯನ್ನು ತುಂಬಲು ಪ್ರತ್ಯೇಕವಾಗಿ ಹಣ ಮೀಸಲಿಡಬೇಕು ಎನ್ನುವ ಆಗ್ರಹವೂ ಇದೆ.

**ಆಸ್ಪತ್ರೆಗಳ ನಿರ್ಮಾಣ:** ತಾಲ್ಲೂಕಿನಲ್ಲಿ ಹಲವು ಆಸ್ಪತ್ರೆಗಳಿದ್ದರೂ ಹೇಳಿಕೊಳ್ಳುವಂತಹ ಚಿಕಿತ್ಸೆ ಮಾತ್ರ ಮರೀಚಿಕೆಯಾಗಿದೆ. ತುರ್ತು ಸಂದರ್ಭಗಳಲ್ಲಿ ಬೆಂಗಳೂರು ನಗರದ ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳನ್ನು ಆಶ್ರಯಿಸಲು ಇಲ್ಲಿನ ವೈದ್ಯರೇ ಸಲಹೆ ನೀಡುತ್ತಾರೆ. ಅದಕ್ಕಾಗಿ ಎಲ್ಲಾ ಚಿಕಿತ್ಸೆಗಳನ್ನು ನೀಡುವ ಗುಣ ಮಟ್ಟದ ಆಸ್ಪತ್ರೆಗಳನ್ನು ನಿರ್ಮಿಸಲು ಬಜೆಟ್‌ನಲ್ಲಿ ಹಣ ಅಗತ್ಯ ವಾಗಿದೆ. ಗೌರಿಬಿದನೂರು, ಪುರಸಭೆಯಿಂದ ನಗರಸಭೆಯಾಗಿ ಬಡ್ತಿ ಪಡೆದರೂ ಇಲ್ಲಿಯವರೆಗೆ ಒಳ ಚರಂಡಿ ವ್ಯವಸ್ಥೆ ಇಲ್ಲ.

ಈ ಬಾರಿಯ ಬಜೆಟ್‌ನಲ್ಲಿ ವಿಶೇಷ ಪ್ಯಾಕೇಜ್ ನೀಡಿದರೆ, ಅನುಕೂಲವಾಗಲಿದೆ. ತಾಲ್ಲೂಕಿನ ಪುರಾಣ ಪ್ರಸಿದ್ಧ ವಿದುರಾಶ್ವತ್ಥ ದೇವಾಲಯ, ಮುದಗಾನುಕುಂಟೆ ಸೇರಿದಂತೆ ಧಾರ್ಮಿಕ ಕ್ಷೇತ್ರಗಳ ಅಭಿವೃದ್ಧಿ ಮಾಡಿದರೆ ಭಕ್ತರು ಸಂಖ್ಯೆ ಇನ್ನು ಹೆಚ್ಚಾಗುವ ಸಾಧ್ಯತೆ ಇದೆ. ಹಲವು ವರ್ಷಗಳಿಂದ ನನೆಗುದಿಗೆ ಬಿದ್ದಿರುವ ನಗರದ ಎಂ.ಜಿ ರಸ್ತೆ ವಿಸ್ತರಣೆಗೂ ಒತ್ತು ನೀಡಬೇಕು. ತಾಲ್ಲೂಕಿನ ಜನರು ಬಜೆಟ್ ಮೇಲೆ ಅಪಾರವಾದ ನಿರೀಕ್ಷೆಗಳನ್ನು ಹೊಂದಿದ್ದಾರೆ. ಆ ನಿರೀಕ್ಷೆಗಳು ಈಡೇರುತ್ತವೆಯೇ ಅಥವಾ ಹುಸಿಯಾಗುತ್ತವೆಯೇ ಎನ್ನುವುದನ್ನು ತಿಳಿಯಲು ಮಾ.7ರವರೆಗೆ ಕಾಯಬೇಕಾಗಿದೆ.

### ಎಚ್.ಎನ್ ಪ್ರಾಧಿಕಾರ ರಚನೆ

ಶಿಕ್ಷಣ ತಜ್ಞ ಎಚ್ ನರಸಿಂಹಯ್ಯ ಅವರ ಹೆಸರಿನಲ್ಲಿ ಎಚ್.ಎನ್ ಪ್ರಾಧಿಕಾರ ರಚಿಸಬೇಕು ಎನ್ನುವ ಆಗ್ರಹ ಈ ಹಿಂದಿನಿಂದಲೂ ಇದೆ. ಈ ಬಗ್ಗೆ ವಿಚಾರವಾಗಿ ಜನಪ್ರತಿನಿಧಿಗಳು ಸಹ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ. ಎಚ್.ಎನ್ .ಪ್ರಾಧಿಕಾರ ರಚನೆ ಬಗ್ಗೆ ಬಜೆಟ್ ಮೇಲೆ ಅಪಾರವಾದ ಭರವಸೆಗಳನ್ನು ಸಹ ಗೌರಿಬಿದನೂರು ಜನರು ಹೊಂದಿದ್ದಾರೆ. ನರಸಿಂಹಯ್ಯ ಅವರ ಸ್ವಗ್ರಾಮ ಹೊಸೂರಿನ 200 ಎಕರೆ ಪ್ರದೇಶದಲ್ಲಿ ಅಂತರರಾಷ್ಟ್ರೀಯ ವಿಜ್ಞಾನ ಕೇಂದ್ರ ನಿರ್ಮಾಣ ಮಾಡಲಾಗಿದೆ. ಅವರ ಹೆಸರಿಗೆ ಗೌರವ ಹೆಚ್ಚಿಸಲು, ತಾಲ್ಲೂಕಿಗೆ ಅತ್ಯಾಧುನಿಕ, ತಂತ್ರಜ್ಞಾನದಿಂದ ಕೂಡಿದ ವೈದ್ಯಕೀಯ, ಎಂಜಿನಿಯರಿಂಗ್ ಕಾಲೇಜುಗಳನ್ನು ಪ್ರಾರಂಭ ಮಾಡಿದರೆ, ಶಿಕ್ಷಣ ತಜ್ಞ ಎಚ್ ಎನ್ ಹೆಸರು ರಾಜ್ಯಕ್ಕೆ ಕಳಶಪ್ರಾಯವಾಗುತ್ತದೆ.

> ಹೊಸೂರಿನ ಎಚ್ ಎನ್ ವಿಜ್ಞಾನ ಕೇಂದ್ರವನ್ನು ಅಂತರರಾಷ್ಟ್ರೀಯ ಮಟ್ಟಕ್ಕೇರಿಸಲು, ಹಾಗೂ ಎಚ್. ಎನ್ ಓದಿದ ಶಾಲೆಯನ್ನು ಮಾದರಿ ಶಾಲೆಯನ್ನಾಗಿ ಅಭಿವೃದ್ಧಿ ಮಾಡಲು ಹಣ ಮೀಸಲಿಡಬೇಕು.
> –ಮಂಜುನಾಥ್ ಎಚ್.ವಿ, ಜಿಲ್ಲಾ ಪಂಚಾಯತಿ ಮಾಜಿ ಅಧ್ಯಕ್ಷ, ಹೊಸೂರು, ಗೌರಿಬಿದನೂರು

## ಪ್ರತಿಯೊಬ್ಬರೂ ಶಿವಾಜಿ ಮಹಾರಾಜರ ಇತಿಹಾಸ ಅರಿಯಬೇಕು: ಹಾಸಿಂಪೀರ ವಾಲಿಕಾರ

• ಉದಯವಾಹಿನಿ ವಿಜಯಪುರ

ಛತ್ರಪತಿ ಶಿವಾಜಿ ಮಹಾರಾಜರು ಧೈರ್ಯ ಹಾಗು ಸಾಹಸದಿಂದ ಮರಾಠ ಸಾಮ್ರಾಜ್ಯ ಕಟ್ಟಿದವರು. ಅನೇಕ ಸೈನಿಕ ದಳದ ತುಕಡಿಗಳನ್ನು ಸ್ಥಾಪಿಸಿದರು. ವಿವಿಧ ತರಬೇತಿಗಳನ್ನು ಪಡೆದು ಸ್ವತ: ಸಮರ್ಥ ಯೋಧರಾಗಿದ್ದರು ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಹಾಸಿಂಪೀರ ವಾಲಿಕಾರ ಅಭಿಪ್ರಾಯ ವ್ಯಕ್ತಪಡಿಸಿದರು.

ಗ್ಯಾರಂಟಿ ಯೋಜನೆಗಳ ಅರಿವು

ಇಳಿಹೊತ್ತು ಸಮಯದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜನ್ಮ ದಿನಾಚರಣೆ ಸಮಾರಂಭದಲ್ಲಿ ಮಾತನಾಡಿ, ಶಿವಾಜಿ ಮಹಾರಾಜರು ಇಸ್ಲಾಮಿಯರ ವಿರೋಧಿಯಾಗಿರಲಿಲ್ಲ. ಅನೇಕ ಸೈನಿಕ ಪದಾತಿ ದಳಗಳ ಮುಖಂಡರು ಇಸ್ಲಾಮಿಯರಾಗಿದ್ದರು. ಶಿವಾಜಿ ಮಹಾರಾಜರ ಇತಿಹಾಸ ಅರಿಯದೇ ಅನೇಕರು ರಾಜಕೀಯ ದುರ್ಬಳಕೆ ಮಾಡುತ್ತಿರುವದು ಅತ್ಯಂತ ಕಳವಳಕಾರಿ ಸಂಗತಿ. ಯುದ್ದಗಳು ಸಾಮ್ರಾಜ್ಯ ಕಟ್ಟುವದಕ್ಕಾಗಿ ಜರುಗಿದವು ಹೊರತು ಧರ್ಮ ವಿರೋಧಕ್ಕಾಗಿ ಇರಲಿಲ್ಲ ಎಂದರು. ತಿಕೋಟಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸಿದ್ರಾಮಯ್ಯ ಲಕ್ಕುಂಡಿಮಠ ಮಾತನಾಡಿ, ಮರಾಠ ಸಾಮ್ರಾಜ್ಯ ಕಟ್ಟಿದ ಕೀರ್ತಿ ಶಿವಾಜಿ ಮಹಾರಾಜರಿಗೆ ಸಲ್ಲುತ್ತದೆ. ಶಿವಾಜಿ ಮಹಾರಾಜರು ಎಲ್ಲಾ ಧರ್ಮಗಳನ್ನು ಗೌರವದಿಂದ ಕಂಡವರು.



ಉದಯವಾಹಿನಿ ಚಿತ್ರ

ರಾಜಮಾತಾ ಜೀಜಾಬಾಯಿ ಶಿವಾಜಿ ಮಹಾರಾಜರ ವ್ಯಕ್ತಿತ್ವ ರೂಪಿಸಿದರು. ಆದಿಲ್ ಶಾಹಿ ಮನೆತನದೊಂದಿಗೆ ಶಿವಾಜಿ ಮಹಾರಾಜರ ಕುಟುಂಬ ಸೌಹಾರ್ದ ತೆಯಿಂದ ಕೂಡಿತ್ತು ಎಂದರು.

ರುದ್ರಮ್ಮ ಗಿಡ್ಡಪ್ಪಗೋಳ, ಅಣ್ಣುಗೌಡ ಬಿರಾದಾರ, ಅಹಮ್ಮದ ವಾಲಿಕಾರ, ಶಶಿಕಲಾ ನಾಯ್ಕೋಡಿ, ತಸ್ಲಿಮ್ ಉಜನಿ, ಸಂಜಯ ಕುಲಕರ್ಣಿ, ರಾಹುಲ್ ಮನಸೆ, ರವಿ ಬೆನಕಟ್ಟಿ, ರಾಹುಲ್ ಚವ್ಹಾಣ, ಬಸವರಾಜ ಬಿರಾದಾರ, ರವಿ ಕಿತ್ತೂರ, ವಿಜಯಲಕ್ಷ್ಮಿ ಹಳಕಟ್ಟಿ ಮುಂತಾದವರು ಉಪಸ್ಥಿತರಿದ್ದರು.

# ಬಸವೇಶ್ವರ ಆಸ್ಪತ್ರೆಗೆ ರೂ.100 ಕೋಟಿ ಅಂದಾಜು ವೆಚ್ಚದಲ್ಲಿ ಅತ್ಯಾಧುನಿಕ ಸ್ಪರ್ಶ

• ಮುಗಳಖೋಡ, ಜಿಡಗಾ ಮಠದ ಡಾ.ಮುರುಘರಾಜೇಂದ್ರ ಮಹಾಸ್ವಾಮೀಜಿಗಳಿಂದ ಅಡಿಗಲ್ಲು : ನಮೋಶಿ

• ಉದಯವಾಹಿನಿ ಕಲಬುರಗಿ

ಇಲ್ಲಿನ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಬಸವೇಶ್ವರ ಆಸ್ಪತ್ರೆಗೆ ರೂ.100 ಕೋಟಿ ಅಂದಾಜು ವೆಚ್ಚದಲ್ಲಿ ಅತ್ಯಾಧುನಿಕ ಸ್ಪರ್ಶ ನೀಡುವ ಸಂಬಂಧ ಸಂಜೆ 5.30ಕ್ಕೆ ಬಸವೇಶ್ವರ ಆಸ್ಪತ್ರೆ ಆವರಣದಲ್ಲಿ ಹಲವು ಕಾಮಗಾರಿಗಳಿಗೆ ಅಡಿಗಲ್ಲು ಸಮಾರಂಭ ನೆರವೇರಲಿದೆ ಎಂದು ಸಂಸ್ಥೆಯ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಶಶಿಲ್ ಜಿ.ನಮೋಶಿ ತಿಳಿಸಿದರು.

> ಬಸವೇಶ್ವರ ಆಸ್ಪತ್ರೆಯಲ್ಲಿ ಜನರಿಗೆ ತುರ್ತಾಗಿ ಗುಣಮಟ್ಟದ ವೈದ್ಯಕೀಯ ಸೇವೆ ಲಭಿಸಲು ಅನುಕೂಲವಾಗುವಂತೆ ಇತ್ತೀಚೆಗೆ ಹಾಸ್ಪಿಟಲ್ ಕನ್ಸಲ್ಟೆಂಟ್ ಒಬ್ಬರನ್ನು ನೇಮಕ ಮಾಡಿಕೊಳ್ಳಲಾಗಿದೆ. ಮೇಲಾಗಿ, ಈಗಾಗಲೇ 100 ಸ್ಟಾಫ್ ನರ್ಸ್‌ಗಳ ನೇಮಕಾತಿಗೆ ಅಗತ್ಯ ಅನುಮೋದನೆ ನೀಡಲಾಗಿದೆ. -ಶಶಿಲ್ ನಮೋಶಿ
> ಅಧ್ಯಕ್ಷರು, ಎಚ್‌ಕೆಇ

ಬಸವೇಶ್ವರ ಆಸ್ಪತ್ರೆಯ ಸಭಾಂಗಣದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಮುಗಳಖೋಡ, ಜಿಡಗಾ ಮಠದ ಡಾ.ಮುರುಘರಾಜೇಂದ್ರ ಮಹಾಸ್ವಾಮೀಜಿಗಳು ಅಡಿಗಲ್ಲು ನೆರವೇರಿಸಲಿದ್ದಾರೆ. ವೈದ್ಯಕೀಯ ಶಿಕ್ಷಣ ಮತ್ತು ಕೌಶಲಾಭಿವೃದ್ಧಿ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಹಾಗೂ ಸಣ್ಣ ಕೈಗಾರಿಕಾ ಖಾತೆ ಸಚಿವ ಶರಣಬಸಪ್ಪ ದರ್ಶನಾಪುರ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುತ್ತಿದ್ದು, ಎಚ್‌ಕೆಇ ಅಧ್ಯಕ್ಷ ಶಶಿಲ್ ನಮೋಶಿ ಅಧ್ಯಕ್ಷತೆ ವಹಿಸಲಿದ್ದಾರೆ. ವಿಧಾನ ಪರಿಷತ್ ಸದಸ್ಯರಾದ ಬಿ.ಜಿ.ಪಾಟೀಲ್ ಹಾಗೂ ಡಾ.ಚಂದ್ರಶೇಖರ ಪಾಟೀಲ್ ಹುಮನಾಬಾದ್ ಹಾಗೂ ಚಿಂಚೋಳಿ ಶಾಸಕ ಡಾ.ಅವಿನಾಶ ಜಾಧವ ಗೌರವ ಅತಿಥಿಗಳಾಗಿ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಮಾಹಿತಿ ನೀಡಿದರು. **ಕಾಮಗಾರಿಗಳ ವಿವರ:** 260 ವೈದ್ಯಕೀಯ ವಿದ್ಯಾರ್ಥಿಗಳಿಗೆ ಏಕಕಾಲಕ್ಕೆ ವಸತಿ ಸೌಕರ್ಯ ಕಲ್ಪಿಸುವ ನಿಟ್ಟಿನಲ್ಲಿ 160 ಕೋಣೆಗಳ ಸಾಮರ್ಥ್ಯದ ಚಂದ್ರಶೇಖರ ಪಾಟೀಲ್ ಸ್ಮಾರಕ ವಸತಿ ನಿಲಯ, ಮಹಾದೇವಪ್ಪ ರಾಂಪುರೆ ಮೆಡಿಕಲ್ ಕಾಲೇಜು ಕಟ್ಟಡದ ಎರಡು ಮತ್ತು ಮೂರನೇ ಅಂತಸ್ತು ನಿರ್ಮಾಣ ಕಾಮಗಾರಿ, ಹೈದರಾಬಾದಿನ ಸ್ಟಾರ್ ಆಸ್ಪತ್ರೆಯೊಂದಿಗೆ ಒಡಂಬಡಿಕೆ ಮಾಡಿಕೊಂಡಿರುವ ತುರ್ತು ಚಿಕಿತ್ಸಾ ಘಟಕ (ಟ್ರಾಮಾ ಕೇರ್) ಮತ್ತು ಐಸಿಸಿಯು, ಬಸವೇಶ್ವರ ಆಸ್ಪತ್ರೆಯಲ್ಲಿ ಅಗತ್ಯ ಹೃದ್ರೋಗ ಚಿಕಿತ್ಸೆಗೆ ಪೂರಕವಾಗಿ ಕ್ಯಾಥ್‌ಲ್ಯಾಬ್, ಆಸ್ಪತ್ರೆಯ ಮೊದಲ ಮಹಡಿಯಲ್ಲಿ ರೇಡಿಯೊಲಜಿ ವಿಭಾಗ, ಮಾಡ್ಯುಲರ್ ಆಪರೇಷನ್ ಥಿಯೇಟರ್ (ನಾಲ್ಕು), ಬಸವೇಶ್ವರ ಆಸ್ಪತ್ರೆಯ ಮುಖ್ಯ ಪ್ರವೇಶದ್ವಾರ ನಿರ್ಮಾಣ, ನರ್ಸಿಂಗ್ ಕಾಲೇಜಿನ ಎರಡನೇ ಅಂತಸ್ತು ನಿರ್ಮಾಣ ಹಾಗೂ 40 ಹಾಸಿಗೆ ಸಾಮರ್ಥ್ಯದ ಐಸಿಸಿಯು ಘಟಕ ನಿರ್ಮಾಣ ಕಾಮಗಾರಿಗಳಿಗೆ ಜಿಡಗಾ-ಮುಗಳಖೋಡ ಶ್ರೀಗಳು ಅಡಿಗಲ್ಲು ನೆರವೇರಿಸಲಿದ್ದಾರೆ ಎಂದು ನಮೋಶಿ ವಿವರಿಸಿದರು.


ಉದಯವಾಹಿನಿ ಚಿತ್ರ

### ವಿಶ್ವದರ್ಜೆಯ ಆಂಬ್ಯುಲೆನ್ಸ್ ಸೇವೆ ಶೀಘ್ರ

ಜನರಿಗೆ ಬಸವೇಶ್ವರ ಆಸ್ಪತ್ರೆಯಲ್ಲಿ ಉತ್ತಮ ಗುಣಮಟ್ಟದ ಚಿಕಿತ್ಸೆ ದೊರೆಯುವಂತೆ ವಿಶ್ವದರ್ಜೆಯ ಎಲ್ಲಾ ಅನುಕೂಲಗಳನ್ನು ಹೊಂದಿರುವ ಆಂಬ್ಯುಲೆನ್ಸ್ ಸೇವೆ ಶೀಘ್ರ ಪರಿಚಯಿಸಲಾಗುತ್ತಿದೆ ಎಂದು ಎಚ್‌ಕೆಇ ಅಧ್ಯಕ್ಷ ಶಶಿಲ್ ನಮೋಶಿ ತಿಳಿಸಿದರು. ಯಾವುದೇ ವ್ಯಕ್ತಿಗೆ ತುರ್ತು ವೈದ್ಯಕೀಯ ಸೇವೆ ಅಗತ್ಯವಿದ್ದರೆ ತಕ್ಷಣ ಬಸವೇಶ್ವರ ಆಸ್ಪತ್ರೆಯ 9141182180 ಮೊಬೈಲ್ ಸಂಖ್ಯೆಗೆ ತಕ್ಷಣ ಕರೆ ಮಾಡಿದರೆ ಕೇವಲ 10 ನಿಮಿಷಗಳಲ್ಲಿ ಸರ್ವಸನ್ನದ್ಧ ಸ್ಥಿತಿಯ ಆಂಬ್ಯುಲೆನ್ಸ್ ರೋಗಿಯ ಮನೆ ಬಾಗಿಲಲ್ಲಿ ನಿಲ್ಲಲಿದೆ. ಒಮ್ಮೆ ಚಿಕಿತ್ಸೆ ಅಗತ್ಯವಿರುವ ವ್ಯಕ್ತಿಯನ್ನು ಆಂಬ್ಯುಲೆನ್ಸ್ ಒಳಗೆ ಹತ್ತಿಸುತ್ತಿದ್ದಂತೆಯೇ ಓರ್ವ ತಜ್ಞ ವೈದ್ಯರು ಹಾಗೂ ವೈದ್ಯಕೀಯ ಸಿಬ್ಬಂದಿ ತಕ್ಷಣ ಅಗತ್ಯ ಚಿಕಿತ್ಸೆ ಆರಂಭಿಸಲಿದ್ದಾರೆ. ಆ ವ್ಯಕ್ತಿಯನ್ನು ಆಸ್ಪತ್ರೆಗೆ ಕರೆತರುವವರೆಗೆ ಅಗತ್ಯವಿರುವ ತುರ್ತು ಚಿಕಿತ್ಸೆ ನೀಡುವ ಹೊಣೆಯನ್ನು ವಿಶ್ವದರ್ಜೆಯ 'ರೆಡ್ ಆಂಬ್ಯುಲೆನ್ಸ್' ನಿಭಾಯಿಸಲಿದೆ. ಹೀಗಾಗಿ, ಜೀವಹಾನಿ ತಡೆಯಲು ಅನುಕೂಲ ಆಗಲಿದೆ ಎಂದು ನಮೋಶಿ ವಿಶ್ವಾಸ ವ್ಯಕ್ತಪಡಿಸಿದರು.

### ಸೌಜನ್ಯದ ವರ್ತನೆಗೆ ಮೊದಲ ಆದ್ಯತೆ

ಬಸವೇಶ್ವರ ಆಸ್ಪತ್ರೆಗೆ ಚಿಕಿತ್ಸೆ ಕೋರಿ ಬರುವ ವ್ಯಕ್ತಿ ಹಾಗೂ ಅವರ ಸಂಬಂಧಿಕರೊಂದಿಗೆ ಆಸ್ಪತ್ರೆಯ ಸಿಬ್ಬಂದಿ ಸೌಜನ್ಯದಿಂದ ವರ್ತಿಸುವಂತೆ ಈಗಾಗಲೇ ನಿರ್ದೇಶನ ನೀಡಲಾಗಿದೆ. ಇದಕ್ಕೆ ಪೂರಕವಾಗಿ ಆಸ್ಪತ್ರೆಯ ಸಿಬ್ಬಂದಿ ವರ್ತನೆಯ ಮೇಲೆ ನಿಗಾವಹಿಸಲು ಎಂಟು ಮ್ಯಾನೇಜರ್‌ಗಳ ನೇಮಕಾತಿಗೂ ಒತ್ತು ನೀಡಲಾಗಿದೆ. ಹಾಗೊಂದುವೇಳೆ, ಯಾವುದೇ ಸಿಬ್ಬಂದಿ ಅನುಚಿತವಾಗಿ ವರ್ತಿಸಿದ ಕುರಿತು ದೂರು ಬಂದರೆ ಅಂತಹ ಸಿಬ್ಬಂದಿ ವಿರುದ್ಧ ತಕ್ಷಣ ಕ್ರಮ ಜರುಗಿಸಲಾಗುವುದು ಎಂದು ಶಶಿಲ್ ನಮೋಶಿ ಸ್ಪಷ್ಟಪಡಿಸಿದರು.

ಜೀವಹಾನಿ ತಡೆಯಲು ಅನುಕೂಲ

ತಾವು ಸಂಸ್ಥೆಯ ಅಧ್ಯಕ್ಷ ಹುದ್ದೆ ವಹಿಸಿಕೊಂಡ ಕೂಡಲೆ ಬಸವೇಶ್ವರ ಆಸ್ಪತ್ರೆಗೆ ಆಸ್ಪತ್ರೆಗಳ ಮತ್ತು ಆರೋಗ್ಯ ಸೇವೆಗಳ ರಾಷ್ಟ್ರೀಯ ಮಾನ್ಯತಾ ಮಂಡಳಿಯಿಂದ (ಎನ್‌ಎಬಿಎಚ್) ಮಾನ್ಯತೆ ಪಡೆಯುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮುಂದುವರೆದಿದೆ. ಈ ನಿಟ್ಟಿನಲ್ಲಿ ಆಸ್ಪತ್ರೆಯ ತಜ್ಞ ವೈದ್ಯರ ಸಮಿತಿ ರಚಿಸಲಾಗಿದ್ದು, ಅವರು ಎಲ್ಲವನ್ನೂ ನೋಡಿಕೊಳ್ಳುತ್ತಿದ್ದಾರೆ ಎಂದರು. ಇನ್ನು, ಅನುಕೂಲಸ್ಥರು ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಾಗಿ ನಗದು ಸ್ವರೂಪದ ಚಿಕಿತ್ಸೆ ಪಡೆಯಲು ಬಯಸುವುದಾದರೆ ಅಂತಹ ವ್ಯಕ್ತಿಗಳಿಗಾಗಿ ಪ್ರತ್ಯೇಕವಾಗಿ ಪಾವತಿ ವಾರ್ಡ್ (ಪೇಯ್ಡ್ ವಾರ್ಡ್) ನಿರ್ಮಾಣಕ್ಕೂ ಆದ್ಯತೆ ನೀಡಲಾಗುತ್ತಿದೆ. ಮೇಲಾಗಿ, ಆಸ್ಪತ್ರೆಯಲ್ಲಿ ಸ್ವಚ್ಛತೆಗೆ ಹೆಚ್ಚು ಪ್ರಾಧಾನ್ಯತೆ ನೀಡಲು 175 ಶೌಚಾಲಯಗಳನ್ನು ಮೇಲ್ದರ್ಜೆಗೆ ಏರಿಸಲಾಗಿದೆ ಎಂದು ತಿಳಿಸಿದರು.

ಸಂಸ್ಥೆಯ ಉಪಾಧ್ಯಕ್ಷ ರಾಜಾ ಬಿ.ಭೀಮಳ್ಳಿ, ಕಾರ್ಯದರ್ಶಿ ಉದಯಕುಮಾರ್ ಎಸ್.ಚಿಂಚೋಳಿ, ಡಾ.ಕೈಲಾಶ ಬಿ.ಪಾಟೀಲ್, ಡಾ.ಮಹಾದೇವಪ್ಪ ರಾಂಪುರೆ, ಡಾ.ಶರಣಬಸಪ್ಪ ಆರ್.ಹರವಾಳ, ಡಾ.ಅನಿಲ್ ಕುಮಾರ್ ಬಿ.ಪಟ್ಟಣ, ಅನಿಲ್ ಕುಮಾರ್ ಎಸ್.ಮರಗೋಳ, ಡಾ.ಕಿರಣ ದೇಶಮುಖ, ಉಪ ಡೀನ್ ವಿಜಯಕುಮಾರ್ ಕಪ್ಪಿಕೇರಿ ಉಪಸ್ಥಿತರಿದ್ದರು.

## ಮಿನಿ ನ್ಯೂಸ್

### ಭಾರತ ವಿಶ್ವಗುರು ಎನಿಸಿಕೊಳ್ಳಲು ಜಾತೀಯತೆ ತೊಲಗಬೇಕು: ದೊಡ್ಡಮನಿ

• ಉದಯವಾಹಿನಿ, ಕಾಳಗಿ

ತಾಲ್ಲೂಕ ಸಮಾಜ ಕಲ್ಯಾಣ ಇಲಾಖೆ ಚಿತ್ತಾಪೂರ ಹಾಗೂ ಸಾಮ್ರಾಟ್ ಅಶೋಕ ಚಾರಿಟೇಬಲ್ ಟ್ರಸ್ಟ್ ಸಂಯುಕ್ತ ಆಶ್ರಯದಲ್ಲಿ 2024-25ನೇ ಸಾಲಿನ ಅಸ್ಪೃಶ್ಯತಾ ನಿರ್ಮೂಲನಾ ವಿಚಾರಗೋಷ್ಠಿ, ಕಾರ್ಯಾಗಾರ ಹಾಗೂ ಅರಿವು ಮೂಡಿಸುವ ಕಾರ್ಯಕ್ರಮವು ಕಮಕನೂರ ಗ್ರಾಮದ ಲಕ್ಷ್ಮೀ ದೇವಸ್ಥಾನ ಆವರಣದಲ್ಲಿ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸಮಾಜ ಸೇವಕ ಸುನೀಲಕುಮಾರ ವಟವಟಿ ಅಸ್ಪೃಶ್ಯತೆ ಎಂಬುದು ಒಂದು ಸಾಮಾಜಿಕ ಪಿಡುಗು, ಅದನ್ನು ಬೇರು ಸಮೇತ ಕಿತ್ತೆಸೆಯಲು ತಾವೇಲ್ಲರೂ ಮನಸ್ಸು ಮಾಡಬೇಕು. ಮತ್ತು ಬುದ್ಧ, ಬಸವ ಹಾಗೂ ಡಾ.ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ತಮ್ಮ ಜೀವನದಲ್ಲಿ ಮೈಗೂಡಿಸಿಕೊಳ್ಳಬೇಕೆಂದರು.

ನಂತರ ಟ್ರಸ್ಟ್ ಅಧ್ಯಕ್ಷ ಯಲ್ಲಪ್ಪ ದೊಡ್ಡಮನಿ ತಮ್ಮ ಉಪನ್ಯಾಸ ಭಾಷಣದಲ್ಲಿ ಇಡೀ ಪ್ರಪಂಚದಲ್ಲಿಯೇ, ಭಾರತ ವಿಶ್ವ ಗುರು ಎನಿಸಿಕೊಳ್ಳಬೇಕಾದರೆ ದೇಶದಲ್ಲಿನ ಜಾತೀಯತೆ ಸಂಪೂರ್ಣವಾಗಿ ತೊಲಗಬೇಕು ಮತ್ತು ಸಾಮ್ರಾಟ್ ಅಶೋಕನ ಕಾಲದ ಭಾರತ ಪುನ: ಸ್ಥಾಪನೆಯಾಗಬೇಕು ಎಂದರು.

ಶಿಕ್ಷಕಿ ಶಿವಜ್ಯೋತಿ ಮಠ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ರಾಜ್ ಲಕ್ಷ್ಮೀ ಫೌಂಡೇಶನ್ ಟ್ರಸ್ಟ್ ಅಧ್ಯಕ್ಷೆ ಸರಸ್ವತಿ ದೊಡ್ಡಮನಿ,ಉದಯಕುಮಾರ ತಳವಾರ, ಭೀಮಣ್ಣ ಪೂಜಾರಿ, ಅಶೇನ್ ಪಟೇಲ, ಮಹೇಶ ತಳವಾರ, ಶಿವು ಜಮಾದಾರ, ದೇವು ಬಂಡಿ, ಮಲ್ಲು ಬಂಡಿ, ಮಹೇಶ ಜಮಾದಾರ, ಶರಣು ಜೋತಪೂರ, ಶಾಲೆಯ ಸಹ ಶಿಕ್ಷಕಿಯರು, ಗ್ರಾಮದ ಹಿರಿಯ ಮುಖಂಡರು, ಯುವಕರು, ಗ್ರಾಂ.ಪಂ.ಸಿಬ್ಬಂದಿಗಳು, ವಿದ್ಯಾರ್ಥಿಗಳು, ಟ್ರಸ್ಟ್ ಸಿಬ್ಬಂದಿಗಳು ಸೇರಿದಂತೆ ಅನೇಕರಿದ್ದರು. ಶಿಕ್ಷಕ ಭೀಮ್ ರೆಡ್ಡಿ ನಿರೂಪಿಸಿ,ವಂದಿಸಿದರು.

## ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಜೊತೆ ಅವರ ಉತ್ತಮ ಆರೋಗ್ಯಕ್ಕೂ ಮಹತ್ವ

• ಉದಯವಾಹಿನಿ, ಚಿಂಚೋಳಿ

ವಸತಿ ಶಾಲೆಯಲ್ಲಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಜೊತೆ ಅವರ ಆರೋಗ್ಯಕ್ಕೂ ಮಹತ್ವ ನೀಡಲಾಗಿದೆ ಎಂದು ಭಾಗ್ಯೋದಯ ವಿಧ್ಯಾವರ್ದಕ ಸಂಘದ ಡಾ.ಬಿ.ಆರ್.ಅಂಬೇಡ್ಕರ್ ಪ್ರಾಥಮಿಕ ವಸತಿಶಾಲೆಯ ಸಂಸ್ಥಾಪಕ ಅಧ್ಯಕ್ಷ ರಮೇಶ ಯಾಕಾಪೂರ ಹೇಳಿದರು.

ನಗರದ ಚಂದಾಪೂರದ ಭಾಗ್ಯೋದಯ ವಿಧ್ಯಾವರ್ದಕ ಸಂಘದ ಆಶ್ರಯದಲ್ಲಿ ಕೇಂದ್ರ ಸರ್ಕಾರದ ನ್ಯಾಯ ಮತ್ತು ಸಬಲೀಕರಣ ಇಲಾಖೆಯ ಅನುದಾನಿತ ಡಾ.ಬಿ.ಆರ್.ಅಂಬೇಡ್ಕರ್ ಪ್ರಾಥ ಮಿಕ ವಸತಿಶಾಲೆಯ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು,ವಸತಿಶಾಲೆಯಲ್ಲಿ ಒಂದನೇ ತರಗತಿಗೆ ಮಕ್ಕಳಿಗೆ ಸೇರ್ಪಡೆ ಮಾಡುತ್ತಾರೆ ಮಕ್ಕಳ ಶಿಕ್ಷಣಕ್ಕಾಗಿ ನಾವು ಉತ್ತಮ ಶಿಕ್ಷಕರಿಗೆ ಮತ್ತು ಆರೋಗ್ಯಕ್ಕಾಗಿ ವೈದ್ಯರ ನೇಮಕ,ಮಕ್ಕಳ ಆಟಪಾಠದ ಜೋತೆ ಕರಾಟೆ ಕಲಿಕೆ,ಶುದ್ಧೀಕರಣ ನೀರು,ವಾಸ್ತವ್ಯಕ್ಕಾಗಿ ಉತ್ತಮ ಕೋಣೆಗಳು,ಹೀಗೆ ವಿವಿಧ ಸೌಲಭ್ಯಗಳು ನೀಡುತ್ತಿದ್ದು ಇದರಿಂದ ನಮ್ಮ ವಸತಿ ಶಾಲೆಯಲ್ಲಿ ಶಿಕ್ಷಣ ಪಡೆದ ವಿದ್ಯಾರ್ಥಿಗಳು ಡಾಕ್ಟರ್,ಇಂಜಿನಿಯರಿಂಗ್, ಪೋಲಿಸ್, ನ್ಯಾಯಾಧೀಶರು,ಸರ್ಕಾರಿ ವಕೀಲರಂಥಹ ದೊಡ್ಡ ದೊಡ್ಡ ಹುದ್ದೆಗಳು ಪಡೆದುಕೊಂಡಿದ್ದಾರೆ ಎಂದರು. ಬಿಇಓ ವಿ.ಲಕ್ಷ್ಮಯ್ಯ, ಸಿಪಿಐ ಕಪಿಲದೇವ, ಮುಖ್ಯಾಧಿಕಾರಿ ಕಾಶಿನಾಥ ಧನ್ನಿ, ಬಿ.ಎಸ್.ನಿಂಗರಾಜ ಅರಸ್,ಮಾತನಾಡಿದರು.



ಉದಯವಾಹಿನಿ ಚಿತ್ರ

> ವಿದ್ಯಾರ್ಥಿಗಳು ಸತತ ಅಧ್ಯಯನ ಶೀಲರಾದಾಗ ಯಶಸ್ಸು ನಿಮ್ಮ ಬೆನ್ನಹಿಂದೆ ಇರುತ್ತದೆ, ವೇದಿಕೆ ಮೇಲೆ ಗಣ್ಯವ್ಯಕ್ತಿಗಳು ಕುಳಿತುಕೊಂಡ ಹಾಗೆ ವಿಧ್ಯಾರ್ಥಿಗಳು ತಾವು ಮುಂದಿನ ದಿನಗಳಲ್ಲಿ ಕುಳಿತುಕೊಳ್ಳಲು ಬಹಳಷ್ಟು ಕಷ್ಟಪಟ್ಟು ಕಠಿಣ ಪರಿಶ್ರಮ ಪಟ್ಟು ವಿಧ್ಯಾಭ್ಯಾಸ ಮಾಡಿದರೆ ತಾವು ಒಂದುದಿನ ಕುಳಿತುಕೊಳ್ಳಬಹುದು
> -ಶ್ರೀಮಂತ ಕಟ್ಟಿಮನಿ,
> ವಕೀಲ ಸಂಘದ ಅಧ್ಯಕ್ಷ

ಶ್ರೀಪಾದ್ ದೇಶಪಾಂಡೆ ಸ್ವಾಗತಿಸಿದರು, ವಸತಿಶಾಲೆಯ ಮುಖ್ಯಗುರುಗಳು ರಶೀದಾ ನಿರೂಪಿಸಿ ವಂದಿಸಿದರು.

ಈ ಸಂದರ್ಭದಲ್ಲಿ ನಾಗೇಂದ್ರಪ್ಪಾ ಗುರಂಪಳ್ಳಿ, ಮಹಾದೇವಪ್ಪಾ, ಮಾಣಿಕ ಗೌತಮ್, ರಾಹುಲ್ ಯಾಕಾಪೂರ, ರೇವಣಸಿದ್ದಪ್ಪಾ ಕಲಬುರ್ಗಿ, ಮುಖ್ಯ ಗುರುಗಳು ಸೂರ್ಯಕಾಂತ,ಶಿಕ್ಷಕ ಸಂಜುಕುಮಾರ, ಜಗದೀಶ,ಸಂಜು ಮತಂಟ್ಟಿ, ಇಂದಿರಮ್ಮ, ಮೇನಿಕಾ,ರತ್ನೇಲ್,ಶಾಲಾಮಕ್ಕಳು ಇದ್ದರು.

ಕಾರ್ಯಕ್ರಮ ನಂತರ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿದವು, ಕ್ರೀಡಾಕೂಟದಲ್ಲಿ ವಸತಿಶಾಲೆಯ ಮಕ್ಕಳು ಪ್ರಥಮ ದ್ವಿತೀಯ ತೃತೀಯ ವಿಜೇತರಾದ ಮಕ್ಕಳಿಗೆ ಬಹುಮಾನ ನೆನಪಿನ ಕಾಣಿಕೆ ನೀಡಲಾಯಿತು.

## ಇರುವುದು ಒಂದೇ ಭೂಮಿ, ಒಂದೇ ಜಮೀನು,ಅದು ಕೇತಗಾನಹಳ್ಳಿಯಲ್ಲಿ

• ಉದಯವಾಹಿನಿ, ಹಾಸನ

ಇರುವುದು ಒಂದೇ ಭೂಮಿ, ಒಂದೇ ಜಮೀನು. ಅದು ಕೇತಗಾನಹಳ್ಳಿಯಲ್ಲಿ ಕೃಷಿಗಾಗಿ ಖರೀದಿಸಿದ್ದು. ಕಾನೂನಾತ್ಮಕವಾಗಿ ಯಾವ ರೀತಿ ಹೋರಾಟ ಮಾಡಬೇಕು ಮಾಡುತ್ತೇವೆ ಎಂದು ಜೆಡಿಎಸ್ ರಾಜ್ಯ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದರು.

ನಗರದ ಖಾಸಗಿ ರೆಸಾರ್ಟ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇತಗಾನಹಳ್ಳಿ ನ್ಯಾಯಾಲಯದ ಮೂಲಕ ಜಮೀನು ಸರ್ವೆ ವಿಚಾರವಾಗಿ ಪ್ರತಿಕ್ರಿಯೆ ನೀಡಿ, 1985ರಲ್ಲಿ ಕೇತಗಾನಹಳ್ಳಿಯಲ್ಲಿ ತಂದೆ ಕುಮಾರಸ್ವಾಮಿ ಅವರು ಜಮೀನು ಖರೀದಿ ಮಾಡಿದ್ದರು. ಆಗ ರಾಜಕೀಯಕ್ಕೆ ಅವರು ಬಂದಿರಲಿಲ್ಲ. ಸಿನಿಮಾ ಹಂಚಿಕೆದಾರರಾಗಿ ವೃತ್ತಿ ಪ್ರಾರಂಭಿಸಿದ್ದರು. ಅದರಲ್ಲಿ ದುಡಿದ ಹಣದಿಂದ ರಾಮನಗರ ಜಿಲ್ಲೆಯಲ್ಲಿ ರಾಜಕೀಯವಾಗಿ ಗಟ್ಟಿ ನೆಲೆ ಕಂಡುಕೊಳ್ಳಲು ದೇವೇಗೌಡರು ಚುನಾವಣೆ ನಿಲ್ಲುವ ಮೊದಲೇ ತೆಗೆದುಕೊಂಡಂತಹ ಜಮೀನು ಅದು ಎಂದರು. ನ್ಯಾಯಾಲಯದಿಂದ ಒಂದಿಷ್ಟು ನಿರ್ದೇಶನ ಕೊಟ್ಟಿದ್ದು ಕೆಲವೊಂದು ಸರ್ವೆ ನಂಬರ್ ಕೊಟ್ಟು ವರದಿ ನೀಡುವಂತೆ ತಿಳಿಸಿದೆ. ಕಾನೂನಾತ್ಮಕವಾಗಿ ಯಾವ ರೀತಿ ಹೋರಾಟ ಮಾಡಬೇಕು ಮಾಡುತ್ತೇವೆ. ಈ ಭೂಮಿಯನ್ನು ನಾವು ಕೃಷಿ ಚಟುವಟಿಕೆಗೆ ತೆಗೆದುಕೊಂಡಿದ್ದು, ಅಲ್ಲಿ ಯಾವುದೇ ಕಮರ್ಷಿಯಲ್ ಕಟ್ಟಡ ಕಟ್ಟಿಲ್ಲ ಎಂದು ಸ್ಪಷ್ಟಪಡಿಸಿದರು.

**ಚುನಾವಣೆ ವೇಳೆ ಮಾತ್ರ ಗೃಹಲಕ್ಷ್ಮಿ ಗ್ಯಾರಂಟಿ:** ಚುನಾವಣೆ ವೇಳೆಯಲ್ಲಿ ಮಾತ್ರ ರಾಜ್ಯ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆ ಹಣ ಬಿಡುಗಡೆ ಮಾಡುತ್ತಾರೆ. ನಂತರ ಮರೆತುಬಿಡುತ್ತಾರೆ ಎಂದು ನಿಖಿಲ್ ಕುಮಾರಸ್ವಾಮಿ ಆರೋಪಿಸಿದರು. ಮುಂಬರುವ ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿ ಚುನಾವಣೆ ಹಿನ್ನೆಲೆಯಲ್ಲಿ ಸಭೆ ಮಾಡಿದ್ದೇವೆ. ಪಕ್ಷದ ಸದಸ್ಯತ್ವ ನೋಂದಣಿ ವೇಗವಾಗಿ ನಡೆಯುತ್ತಿದೆ. ಹಾಸನ, ಶಿವಮೊಗ್ಗ ಚಿಕ್ಕಮಗಳೂರು ಜಿಲ್ಲೆಯ ಪಕ್ಷದ ಅಧ್ಯಕ್ಷರು, ಶಾಸಕರು, ಮಾಜಿ ಶಾಸಕರು, ಮುಖಂಡರು ಸಭೆಯಲ್ಲಿ ಭಾಗವಹಿಸಿದ್ದಾರೆ ಎಂದರು.

ಸಭೆಯಲ್ಲಿ ಸಾಕಷ್ಟು ಚರ್ಚೆ ಮಾಡಿದ್ದೇವೆ. ಮುಂಬರುವ ಚುನಾವಣೆಯನ್ನು ಗಂಭೀರವಾಗಿ ತೆಗೆದುಕೊಂಡಿದ್ದು ಸಭೆಯಲ್ಲಿ ಆರೋಗ್ಯಕರವಾದ ಚರ್ಚೆಗಳು ನಡೆದಿದೆ. ಮುಂದಿನ 10 ದಿನದಲ್ಲಿ ಕುಮಾರಣ್ಣ ಜೆಡಿಎಸ್ ಶಾಸಕರು ಎಂಎಲ್ಸಿ ಮುಖಂಡರ ಸಭೆಯನ್ನು ಕರೆಯಲಿದ್ದಾರೆ ಎಂದರು. ಲೋಕಸಭಾ ಅಧಿವೇಶನ ನಡೆಯುವಾಗ ಪಕ್ಷ ಸಂಘಟನೆಯಲ್ಲಿ ತೊಡಗಿಸಿಕೊಳ್ಳಿ ಎಂದು ದೇವೇಗೌಡರು ಸೂಚನೆ ಕೊಟ್ಟಿದ್ದರು. ಅದರಂತೆ ಪಕ್ಷ ಸಂಘಟನೆಯಲ್ಲಿ ತೊಡಗಿದ್ದೇನೆ ಎಂದು ನಿಖಿಲ್ ಹೇಳಿದರು.



> ನಾವು ಮೂಲ ಕೃಷಿಕರು, ರೈತರು ನೀವು ಬಂದು ನೋಡಬಹುದು. ನಮ್ಮ ತೋಟದಲ್ಲಿ ಎಷ್ಟು ಅಡಿಕೆ ಎಷ್ಟು ತೆಂಗಿನ ಮರಗಳಿವೆ ಎಂದು. ಇದು ಕೃಷಿ ಚಟುವಟಿಕೆಗೆ ಬಳಸುತ್ತಿರುವ ಭೂಮಿಯಾಗಿದೆ. ಈ ಜಮೀನಿನ ಸಂಬಂಧ ನಾಲ್ಕೈದು ಮಂದಿ ಕಾಂಗ್ರೆಸ್ ನಾಯಕರು ಕುಮ್ಮಕ್ಕು ಕೊಟ್ಟು ಮಾಧ್ಯಮದ ಮುಂದೆ ನಿಲ್ಲಿಸಿ ಹೇಳಿಕೊಟ್ಟಿದ್ದಾರೆ. ಏನೇ ಇದ್ದರೂ ಕಾನೂನಾತ್ಮಕವಾಗಿ ಹೋರಾಟ ಮಾಡುತ್ತೇವೆ. ಈ ವಿಚಾರವಾಗಿ 15 -20 ವರ್ಷದಿಂದ ಆಪಾದನೆ ಎದುರಿಸುತ್ತಿದ್ದೇವೆ -ನಿಖಿಲ್ ಕುಮಾರಸ್ವಾಮಿ

## ಮೊಸಳೆ ತಂದು ಜೆಸ್ಕಾಂ ಕಚೇರಿ ಮುಂದೆ ರೈತರ ಪ್ರತಿಭಟನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕಲಬುರಗಿ

ಬೆಳಗಿನ ಜಾವ ನಾಲ್ಕು ಗಂಟೆಗೆ ಗೋಧಿ ಬೆಳೆಗೆ ನೀರು ಬಿಡಲು ಹೋದಾಗ ರೈತನ ಜಮೀನಿನಲ್ಲಿ ಪ್ರತ್ಯಕ್ಷವಾಗಿರುವ ಮೊಸಳೆಯನ್ನು ಎತ್ತಿನ ಬಂಡಿಯಲ್ಲಿ ಕಟ್ಟಿಕೊಂಡು ಬಂದು ಜೆಸ್ಕಾಂ ಕಚೇರಿ ಮುಂದೆ ರೈತರು ಪ್ರತಿಭಟನೆ ನಡೆಸಿರುವ ಘಟನೆ ಜಿಲ್ಲೆಯಲ್ಲಿ ಇಂದು ನಡೆದಿದೆ.

ಅಫಜಲಪುರ ತಾಲ್ಲೂಕಿನ ಗೊಬ್ಬೂರ್ (ಬಿ) ಗ್ರಾಮದ ಲಕ್ಷ್ಮಣ ಪೂಜಾರಿ ಎಂಬ ರೈತನ ಹೊಲದಲ್ಲಿ ಮೊಸಳೆ ಪ್ರತ್ಯಕ್ಷವಾಗಿತ್ತು. ಜೆಸ್ಕಾಂ ಕಚೇರಿ ರೈತರ ಕೃಷಿ ಜಮೀನಿಗೆ ಬೆಳಗಿನ ಜಾವ 4 ಗಂಟೆಗೆ ವಿದ್ಯುತ್ ಪೂರೈಕೆ ಮಾಡುತ್ತಿರುವುದರಿಂದ ಭಯದ ವಾತಾವರಣದಲ್ಲಿ ಕೆಲಸ ಮಾಡುವಂತಾಗಿದೆ. ರೈತರಿಗೆ ಬೆಳಗಿನ ಜಾವ 4 ಗಂಟೆ ಬದಲು 6 ಗಂಟೆಗೆ ಸಮರ್ಪಕವಾಗಿ ವಿದ್ಯುತ್ ನೀಡುವಂತೆ ಆಗ್ರಹಿಸಿ ಗೊಬ್ಬೂರ್ (ಬಿ) ಗ್ರಾಮದ ಜೆಸ್ಕಾಂ ಕಚೇರಿ ಮುಂಭಾಗದಲ್ಲಿ ಮೊಸಳೆ ಇಟ್ಟು ರೈತರು ಪ್ರತಿಭಟನೆ ನಡೆಸಿದರು.

## ಸಾರ್ವಜನಿಕರ ಅರ್ಜಿಗಳಿಗೆ ಅಧಿಕಾರಿಗಳು ಸ್ಪಂದಿಸಿ ಬಗೆಹರಿಸಿ: ಉಮೇಶ ಬಿ.ಕೆ

• ಉದಯವಾಹಿನಿ, ಬೀದರ

ಸಾರ್ವಜನಿಕರು ಸಲ್ಲಿಸಿರುವ ಎಂಟು ಅರ್ಜಿಗಳನ್ನು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಕೂಡಲೇ ಸ್ಪಂದಿಸಿ ಬಗೆಹರಿಸುವಂತೆ ಕರ್ನಾಟಕ ಲೋಕಾಯುಕ್ತ ಕಲಬುರಗಿಯ ಎಸ್.ಪಿ. ಉಮೇಶ ಬಿ.ಕೆ.ಸೂಚಿಸಿದರು. ಅವರು ಇಂದು ಹುಮನಾಬಾದ ತಹಸೀಲ್ದಾರ ಕಛೇರಿಯಲ್ಲಿ ಹಮ್ಮಿಕೊಂಡಿದ್ದ ಸಾರ್ವಜನಿಕ ಕುಂದು ಕೊರತೆ ಅಹವಾಲು ಸ್ವೀಕಾರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಹುಮನಾಬಾದ ತಾಲ್ಲೂಕಿನ ಚಿನಕೇರಾ ಗ್ರಾಮದ ನಿವಾಸಿಯಾದ ರುಕ್ಮೀಣಿಬಾಯಿ ಶಂಕರ ಸುಮಾರು ತಿಂಗಳಿಂದ ರೇಷನ್ ವಿತರಣೆ ಮಾಡದಿರುವ ಕುರಿತು ಹಾಗೂ ವೃದ್ದಾಪ್ಯ ವೇತನ ಕಡಿಮೆ ನೀಡುತ್ತಿರುವ ಬಗ್ಗೆ ಅಳಲು ತೊಡಿಕೊಂಡಾಗ ಸಂಬಂಧಪಟ್ಟ ಅಧಿಕಾರಿಗಳು ನಿಯಮದಂತೆ ರೇಷನ್ ವಿತರಣೆ ಮಾಡುವಂತೆ ಸೂಚಿಸಿದಾಗ ಕೂಡಲೇ ರೇಷನ್ ವಿತರಣೆ ಮಾಡಲಾಯಿತು. ಈ ಸಮಯದಲ್ಲಿ ಎರಡು ಅರ್ಜಿಗಳಿಗೆ ಫಾರಂ ನಂಬರ 1 ಮತ್ತು 2 ಅರ್ಜಿ ನೊಂದಾಯಿಸಿಕೊಳ್ಳಲಾಯಿತ್ತು. ಬೀದರ ಕ.ಲೋ. ಡಿ.ಎಸ್.ಪಿ. ಹಣಮಂತರಾಯ, ಬೀದರ ಕ.ಲೋ. ಪಿ.ಐ.ಬಾಬಾಸಾಹೇಬ ಪಾಟೀಲ, ಉದಂಡಪ್ಪ, ಹುಮನಾಬಾದ ತಹಸೀಲ್ದಾರರು, ತಾಲ್ಲೂಕ ಮಟ್ಟದ ಅಧಿಕಾರಿಗಳು, ಶಾಂತಲಿಂಗಪ್ಪಾ, ಅಡೆಪ್ಪಾ, ಭರತ, ಕಿಶೋರ, ನಾಗಶೆಟ್ಟಿ ಉಪಸ್ಥಿತರಿದ್ದರು.

## ಇಂದಿನಿಂದ ಪುಲಿಗೆರೆ ಉತ್ಸವ

• ಉದಯವಾಹಿನಿ, ಲಕ್ಷ್ಮೇಶ್ವರ

ಪಟ್ಟಣದ ಐತಿಹಾಸಿಕ ಪ್ರಸಿದ್ಧ ಶ್ರೀ ಸೋಮೇಶ್ವರ ದೇವಸ್ಥಾನದ ಆವರಣದಲ್ಲಿ ಫೆಬ್ರವರಿ 21ರಿಂದ 23ರವರೆಗೆ ಇನ್ಫೋಸಿಸ್ ಫೌಂಡೇಶನ್ ಬೆಂಗಳೂರು ಹಾಗೂ ಭಾರತೀಯ ವಿದ್ಯಾಭವನ ಬೆಂಗಳೂರು, ಸೋಮೇಶ್ವರ ಟ್ರಸ್ಟ್ ಸೇವಾ ಸಮಿತಿ ಆಶ್ರಯದಲ್ಲಿ ಪುಲಿಗೆರೆ ಸಾಂಸ್ಕೃತಿಕ ಉತ್ಸವ ಆರಂಭವಾಗಲಿದೆ ಎಂದು ಭಾರತೀಯ ವಿದ್ಯಾ ಭವನದ ಜಂಟಿ ನಿರ್ದೇಶಕರಾದ ನಾಗಲಕ್ಷ್ಮಿ ಕೆ ರಾವ್ ತಿಳಿಸಿದರು.

ದೇವಸ್ಥಾನದ ಪ್ರಾಂಗಣದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಕಳೆದ ಏಳು ವರ್ಷಗಳಿಂದ ನಡೆದ ಎಲ್ಲಾ ಕಾರ್ಯಕ್ರಮಗಳ ಸಮಗ್ರ ಚಿತ್ರಣವನ್ನು ನೀಡುವ ವಿಶೇಷ ಪುಸ್ತಕವನ್ನು ಲೋಕಾರ್ಪಣೆ ಮಾಡುವ ಕಾರ್ಯಕ್ರಮ ಜರುಗಲಿದೆ ಎಂದರು. ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ಗಂಗಣ್ಣ ಮಹಾಂತಶೆಟ್ಟರ ಮತ್ತು ಜಿಎಸ್ಎ ಗಡ್ಡ ದೇವರ ಮಠ ಅವರು ನಮ್ಮೂರಿನ ಹೆಮ್ಮೆ ಈ ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿಯಾಗಿ ಮಾಡುವ ಮೂಲಕ ಎಲ್ಲರೂ ನಮ್ಮೂರ ಕಾರ್ಯಕ್ರಮ ನಮ್ಮ ಹೆಮ್ಮೆ ಎಂದು ಭಾಗವಹಿಸಿ ಎಲ್ಲರೂ ಸಹಕಾರ ನೀಡೋಣ ಎಂದರು.

ಕಾರ್ಯಕ್ರಮವನ್ನು ಇಂದು ಬೆಳಿಗ್ಗೆ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿಯ ಅಧ್ಯಕ್ಷರಾದ ಜಂಬಣ್ಣ ಬಾಳಿಕಾಯಿ ಹಾಗೂ ಭಾರತೀಯ ವಿದ್ಯಾ ಭವನದ ಜಂಟಿ ನಿರ್ದೇಶಕರಾದ ನಾಗಲಕ್ಷ್ಮಿ ಕೆ. ರಾವ್ ಉದ್ಘಾಟಿಸಲ್ಲಿದ್ದಾರೆ. ಸಂಜೆ ಕಾರ್ಯಕ್ರಮವು ಜಾನಪದ ಮೇಳದೊಂದಿಗೆ ಶ್ರೀ ಸೋಮೇಶ್ವರ ದೇವರ ಪಲ್ಲಕ್ಕಿ ಉತ್ಸವ ಸಕಲ ವಾದ್ಯ ವೈಭವಗಳೊಂದಿಗೆ ಜರುಗಲಿದೆ ಮುಖ್ಯ ಅತಿಥಿಗಳಾಗಿ ಇನ್ಫೋಸಿಸ್ ಪ್ರತಿಷ್ಠಾನದ ಸಿಎಸ್‌ಆರ್ ವಿಭಾಗದ ವ್ಯವಸ್ಥಾಪಕರಾದ ಪ್ರಶಾಂತ ಹೆಗಡೆ ಭಾಗವಹಿಸುವರು ಎಂದು ಹೇಳಿದರು ಇದೇ ಸಂದರ್ಭದಲ್ಲಿ ಉತ್ಸವದ ಬಿತ್ತಿ ಪತ್ರವನ್ನು ಬಿಡುಗಡೆಗೊಳಿಸಲಾಯಿತು.


ವಿಜಿಪಡಿಗೇರಿ ಬಸಣ್ಣ ಬೆಂಡಿಗೇರಿ ಎಂಆರ ಪಾಟೀಲ್ ಬಸವೇಶ್ ಮಹಾಂತ ಶೆಟ್ಟರ್ ಗುರುರಾಜ್ ಪಾಟೀಲ್ ಕುಲಕರ್ಣಿ, ಮಾಲಾ ದುಂದರಗಿ ಆದಿ ಬಸವರಾಜ್, ಇದ್ದರು.

## ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯುತ್ಸವ

• ಉದಯವಾಹಿನಿ, ನವಲಗುಂದ

ಮೊಘಲ್ ಆಳ್ವಿಕೆಯನ್ನು ಧಿಕ್ಕರಿಸಿ ಸಾರ್ವಭೌಮ ಹಿಂದೂ ರಾಜ್ಯಕ್ಕೆ ಅಡಿಪಾಯ ಹಾಕಿದವರು ಛತ್ರಪತಿ ಶಿವಾಜಿ ಮಹಾರಾಜರು ಎಂದು ತಹಶೀಲ್ದಾರ್ ಸುಧೀರ್ ಸಾವಕಾರ ಹೇಳಿದರು.

ತಾಲ್ಲೂಕ ಆಡಳಿತ ವತಿಯಿಂದ ತಹಸೀಲ್ದಾರ ಕಚೇರಿ ಸಭಾಭವನದಲ್ಲಿ ಶಿವಾಜಿ ಮಹಾರಾಜರ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು. ನಂತರ ಮರಾಠ ಸಮಾಜದ ತಾಲೂಕ ಅಧ್ಯಕ್ಷ ಜೀವನ ಪವಾರ ಮಾತನಾಡಿದರು. ನಂತರ ''ಶಿವಾಜಿ ಮಹಾರಾಜರ ಭವ್ಯ ಮೆರವಣಿಗೆ ತಹಶೀಲ್ದಾರ ಸುಧೀರ ಸಾಹುಕಾರ ಹಾಗೂ ಕೆಪಿಸಿಸಿ ಸದಸ್ಯ ವಿನೋದ ಅಸೂಟಿ ಪೂಜೆ ಸಲ್ಲಿಸಿ ಭಾವಚಿತ್ರ ಮೆರವಣಿಗೆ ಚಾಲನೆ ನೀಡಿದರು. ಮೆರವಣಿಗೆಯಲ್ಲಿ ಪಾಲ್ಗೊಂಡ ಶಾಸಕ ಎನ್ ಎಚ್ ಕೋನರಡ್ಡಿ ಮಾತನಾಡಿ ಶಿವಾಜಿ ಮಹಾರಾಜರು ಧರ್ಮನಿರಪೇಕ್ಷ, ಧರ್ಮಾತೀತ, ಜಾತ್ಯತೀತ ವ್ಯಕ್ತಿ ಆಗಿದ್ದರು ಎಂದರು.


ಉದಯವಾಹಿನಿ ಚಿತ್ರ

ಶಿವಾಜಿ ಮಹಾರಾಜರ ಪ್ರತಿಮೆ ಭವ್ಯ ಮೆರವಣಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಅಂಬಾಭವಾನಿ ದೇವಸ್ಥಾನಕ್ಕೆ ತೆರಳಿ ಸಂಪನ್ನಗೊಂಡಿತು.

# ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿಯಿಂದ ಬ್ಲ್ಯಾಕ್ ಪೇಪರ್ ಬಿಡುಗಡೆ

## ಕಳೆದ ವರ್ಷದ ಬಜೆಟ್‌ನಲ್ಲಿ ಮೀಸಲಿಟ್ಟ ಹಣವೆಷ್ಟು, ಖರ್ಚಾಗಿರುವ ಹಣವೆಷ್ಟು ಎನ್ನುವುದನ್ನು ಶ್ವೇತಪತ್ರ ಹೊರಡಿಸಬೇಕು

• ಉದಯವಾಹಿನಿ, ಹಾವೇರಿ


ಬಜೆಟ್ ಮಂಡನೆಗೂ ಮುಂಚೆ ಸಿಎಂ ಸಿದ್ದರಾಮಯ್ಯ ಅವರು ಕಳೆದ ವರ್ಷದ ಬಜೆಟ್‌ನಲ್ಲಿ ಮೀಸಲಿಟ್ಟ ಹಣವೆಷ್ಟು, ಖರ್ಚಾಗಿರುವ ಹಣವೆಷ್ಟು ಎನ್ನುವುದನ್ನು ಶ್ವೇತಪತ್ರ ಹೊರಡಿಸಬೇಕು. ಇಲ್ಲದಿದ್ದರೆ, ರಾಜ್ಯ ಸರ್ಕಾರ ಎಲ್ಲಿ ವಿಫಲವಾಗಿದೆ ಎನ್ನುವುದನ್ನು ಬ್ಲ್ಯಾಕ್ ಪೇಪರ್ ಬಿಡುಗಡೆ ಮಾಡಲು ರಾಜ್ಯ ಬಿಜೆಪಿ ಘಟಕ ಸಿದ್ಧರಾಗಬೇಕು ಎಂದು ಸೂಚಿಸುವುದಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ತಿಳಿಸಿದರು.

ಆರ್ಥಿಕ ಪರಿಸ್ಥಿತಿ ಸರಿ ಇಲ್ಲ

ಹಾವೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ನಾನು ಕಾಂಗ್ರೆಸ್‌ನ ಆಂತರಿಕ ವಿಚಾರದಲ್ಲಿ ಯಾವುದೇ ರೀತಿಯ ಹೇಳಿಕೆ ನೀಡಲು ಸಿದ್ಧನಿಲ್ಲ. ಜನರು ಇವರಿಗೆ ಆಡಳಿತ ನಡೆಸಲು ಅವಕಾಶ ಕೊಟ್ಟಿದ್ದಾರೆ. ಅದನ್ನು ಮಾಡಲು ಇವರಿಗೆ ಸಮಯವಿಲ್ಲ. ಯಾಕೆಂದರೆ ಆರ್ಥಿಕ ಪರಿಸ್ಥಿತಿ ಸರಿ ಇಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಿಂದುಳಿದ ವರ್ಗಗಳ ಇಲಾಖೆ ಹಾಗೂ ನಿಗಮಗಳ ಅಧಿಕಾರಿಗಳ ಸಭೆ ನಡೆಸಿದರು. ಈ ವರ್ಷ ಹಿಂದುಳಿದ ವರ್ಗಗಳ ನಿಗಮಗಳಿಗೆ ಎಷ್ಟು ಹಣ ಖರ್ಚಾಗಿದೆ ಎಂದು ಸಿಎಂ ಮಾಡಿರುವ ಸಭೆಯಲ್ಲಿ ಚರ್ಚೆಯೇ ಆಗಲಿಲ್ಲ. ಹಿಂದುಳಿದ ವರ್ಗಗಳ ನಾಯಕರು ಸಿಎಂರನ್ನು ಕೇಳಬೇಕಿತ್ತು. ಅದನ್ನು ವಿರೋಧ ಪಕ್ಷವಾಗಿ ಬಿಜೆಪಿ ಮಾಡುತ್ತದೆ ಎಂದು ಹೇಳಿದರು. ಸಿದ್ದರಾಮಯ್ಯ ಸೇರಿದಂತೆ ಹಲವಾರು ಜನರು ಸೈಟುಗಳನ್ನು ಪಡೆದಿರುವುದರಲ್ಲಿ ಸಾವಿರಾರು ಕೋಟಿ ಅವ್ಯವಹಾರ ಆಗಿರುವುದು ಸಿದ್ಧವಾಗಿದೆ. ಎಲ್ಲವೂ ಸರಿಯಾಗಿದ್ದರೆ ಮುಖ್ಯಮಂತ್ರಿಗಳು ಸೈಟ್‌ಗಳನ್ನು ಯಾಕೆ ವಾಪಸ್ ಕೊಟ್ಟರು ಎನ್ನುವುದಕ್ಕೆ ಉತ್ತರ ಕೊಡಬೇಕು ಎಂದು ಆಗ್ರಹಿಸಿದರು.

### ವಿವಿ ಮುಚ್ಚುವುದು ಅನ್ಯಾಯ

ರಾಜ್ಯದಲ್ಲಿ ಹೊಸ ವಿಶ್ವ ವಿದ್ಯಾಲಯಗಳನ್ನು ಮುಚ್ಚುವುದು ದೊಡ್ಡ ಅನ್ಯಾಯ. ಇವತ್ತು ಡಿಜಿಟಲ್ ವೇದಿಕೆ ಬಂದ ಮೇಲೆ ಹಲವಾರು ರೀತಿಯ ಅನುಕೂಲ ಇದೆ. ಬಹಳ ದೊಡ್ಡ ಕ್ಯಾಂಪಸ್ ಬೇಕಿಲ್ಲ. ಅತ್ಯಂತ ಕಡಿಮೆ ವೆಚ್ಚದಲ್ಲಿ ವಿವಿ ನಡೆಸಬಹುದು ಎನ್ನುವುದನ್ನು ಕಳೆದ ಎರಡು ವರ್ಷಗಳಲ್ಲಿ ಎಂಟು ವಿವಿಗಳು ನಡೆಸಿ ತೋರಿಸಿವೆ. ಹಳೆಯ ವಿವಿಗಳಿಗೆ ರಾಜ್ಯ ಸರ್ಕಾರ ನೂರಾರು ಕೋಟಿ ರೂ. ನೀಡುತ್ತದೆ. ಆದರೆ ಅಲ್ಲಿ ಸಂಬಳ ಕೊಡಲು ಸಾಧ್ಯವಾಗಿಲ್ಲ. ಪಿಂಚಣಿ ಕೊಡಲು ಆಗುತ್ತಿಲ್ಲ. ಪ್ರಾಧ್ಯಾಪಕರಿರುವಲ್ಲಿ ವಿದ್ಯಾರ್ಥಿಗಳಿಲ್ಲ. ಕೇವಲ ಭ್ರಷ್ಟಾಚಾರದ ಕೂಪಗಳಾಗಿವೆ. ಕಳೆದ ಎರಡು ವರ್ಷಗಳಲ್ಲಿ ಹೊಸ ವಿವಿಗಳು ಉತ್ತಮ ಕೆಲಸ ಮಾಡಿವೆ. ಕೇವಲ 20 ದಿನದಲ್ಲಿ ಫಲಿತಾಂಶ ಪ್ರಕಟಿಸಿದ್ದಾರೆ. ಅನೇಕ ವಿದ್ಯಾರ್ಥಿನಿಯರು ದೂರದ ಊರುಗಳಿಗೆ ಉನ್ನತ ಶಿಕ್ಷಣ ಕಲಿಯಲು ಹೋಗಲು ಆಗುತ್ತಿಲ್ಲ. ಇಲ್ಲಿಯೇ ವಿವಿ ಇರುವುದರಿಂದ ಅನೇಕ ಪಾಲಕರು ತಮ್ಮ ಹೆಣ್ಣು ಮಕ್ಕಳನ್ನು ಉನ್ನತ ಶಿಕ್ಷಣ ಕಲಿಸಲು ಕಳುಹಿಸುತ್ತಿದ್ದಾರೆ. ಆದರೆ ಬಿಜೆಪಿ ಅವಧಿಯಲ್ಲಿ ವಿವಿಗಳು ಸ್ಥಾಪನೆ ಆಗಿವೆ ಎನ್ನುವ ಒಂದೇ ಒಂದು ಕಾರಣಕ್ಕೆ ಅವುಗಳನ್ನು ಮುಚ್ಚುವ ಪ್ರಯತ್ನ ಮಾಡಲಾಗುತ್ತಿದೆ ಎಂದು ದೂರಿದರು.



### ಗೃಹಲಕ್ಷ್ಮಿಗೆ ಗ್ರಹಣ

ಯಾವುದೇ ಯೋಜನೆಯನ್ನು ಯೋಜನಾಬದ್ಧವಾಗಿ ರೂಪಿಸಿ ಹಣ ಒದಗಿಸಬೇಕು. ಪೂರ್ವ ತಯಾರಿ ಇಲ್ಲದೇ ರಾಜಕೀಯ ಲಾಭಕ್ಕಾಗಿ ಮಾಡಿರುವ ಗ್ಯಾರಂಟಿ ಯೋಜನೆಗಳು ಕುಂಟುವುದು ಸಹಜ. ಗೃಹಲಕ್ಷ್ಮಿ ಯೋಜನೆಗೆ ಅತಿ ಹೆಚ್ಚು ಖರ್ಚಾಗುತ್ತಿದೆ. ಅದನ್ನು ಎರಡು ಮೂರು ತಿಂಗಳು ನಿಲ್ಲಿಸಿದರೆ ಸಾಕಷ್ಟು ಹಣ ಉಳಿತಾಯವಾಗುತ್ತದೆ ಎಂದು ಹಣಕಾಸು ಇಲಾಖೆ ಅಧಿಕಾರಿಗಳು ಯೋಚಿಸುತ್ತಿದ್ದಾರೆ. ಹೀಗಾಗಿ ಗೃಹಲಕ್ಷ್ಮಿ ಯೋಜನೆಗೆ ಗ್ರಹಣ ಹಿಡಿದಿದೆ. ಇದು ಈ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ನಡೆಯುತ್ತಿದೆ. ಚುನಾವಣೆಯ ಸಂದರ್ಭದಲ್ಲಿ ಮತದಾನದ ಹಿಂದಿನ ದಿನ ಮತದಾರರಿಗೆ ನೀಡಿ ಅಧಿಕೃತ ಲಂಚಕೊಡುವ ವ್ಯವಸ್ಥೆಯಾಗುತ್ತಿದೆ. ಇದನ್ನು ನೋಡಿಯೂ ಚುನಾವಣಾ ಆಯೋಗವೂ ಕಣ್ಣು ಮುಚ್ಚಿ ಕುಳಿತಿದೆ ಎಂದು ಆರೋಪಿಸಿದರು.

### ಕ್ಲೀನ್‌ಚಿಟ್ ನಿರೀಕ್ಷಿತ

ಸಿಎಂ ಸಿದ್ದರಾಮಯ್ಯ ವಿರುದ್ಧ ಲೋಕಾಯುಕ್ತ ಕ್ಲೀನ್‌ಚಿಟ್ ನೀಡಿರುವುದು ನಿರೀಕ್ಷಿತ, ಲೋಕಾಯುಕ್ತ ಸಿಎಂ ವಿರುದ್ಧ ಮೃದು ಧೋರಣೆ ತಾಳಿದೆ. ಲೋಕಾಯುಕ್ತ ಸ್ವಾಯತ್ತ ಸಂಸ್ಥೆ ಇದ್ದರೂ ರಾಜ್ಯ ಸರ್ಕಾರದ ಅಡಿಯಲ್ಲಿ ಇರುವ ಪೊಲೀಸರೇ ತನಿಖೆ ಮಾಡುವುದರಿಂದ ಅವರು ಅದೇ ರೀತಿಯ ವರದಿ ಕೊಡುತ್ತಾರೆ. ಅದಕ್ಕಾಗಿಯೇ ಕೇಂದ್ರದ ಸ್ವಾಯತ್ತ ಸಂಸ್ಥೆಯಿಂದ ತನಿಖೆ ಆಗಬೇಕೆಂಬ ಬೇಡಿಕೆ ಇದೆ. ಇಡಿ ತನಿಖೆಯ ಬಗ್ಗೆ ಕೋರ್ಟ್ ತೀರ್ಮಾನ ಮಾಡಬೇಕಿದೆ. ಈ ಲೋಕಾಯುಕ್ತ ಪೊಲೀಸರು ಸಲ್ಲಿಸಿರುವ ಬಿ ರಿಪೋರ್ಟ್ ಕೂಡ ಕೋರ್ಟ್‌ನಲ್ಲಿ ಪರಿಶೀಲನೆ ಆಗಲಿದೆ. ಅಂತಿಮವಾಗಿ ಸತ್ಯ ಹೊರ ಬರಲಿದೆ ಎಂದು ಹೇಳಿದರು.

## ದಿನ ಭವಿಷ್ಯ

| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
|---|---|---|
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ನಿಮ್ಮ ಕುಟುಂಬದ ಸದಸ್ಯರು ಹಾಗೂ ಸ್ನೇಹಿತರಿಂದ ಬೆಂಬಲ ಪಡೆದು ಹೊಸ ಉತ್ಸಾಹ ಮತ್ತು ಆತ್ಮವಿಶ್ವಾಸದಿಂದ ಮುಂದುವರಿಯುತ್ತೀರಿ. ನೀವು ನಿಮ್ಮ ಅತ್ಯುತ್ತಮ ನಡವಳಿಕೆಯನ್ನು ಹೊಂದಿರಬೇಕು.

**ವೃಷಭ** ಮನೆಯ ಸಮಸ್ಯೆಗಳಿಗೆ ತಕ್ಷಣ ಗಮನ ನೀಡುವ ಅಗತ್ಯವಿರುತ್ತದೆ. ಪ್ರಣಯದ ನಡತೆಗಳು ಫಲ ನೀಡುವುದಿಲ್ಲ. ಕೈಗೊಂಡ ಹೊಸ ಕಾರ್ಯಯೋಜನೆಗಳು ನಿಮ್ಮ ನಿರೀಕ್ಷೆಗಳನ್ನು ತಲುಪುವುದಿಲ್ಲ.

**ಮಿಥುನ** ನಿಮ್ಮ ಸಂತೋಷದ ಪ್ರಕೃತಿ ಇತರರಿಗೆ ಸಂತೋಷ ತರುತ್ತದೆ. ಈ ರಾಶಿ ಚಕ್ರದ ವಿವಾಹಿತ ಜನರಿಗೆ ಇಂದು ಅತ್ತೆಮನೆಯ ಕಡೆಯಿಂದ ಹಣದ ಪ್ರಯೋಜನವಾಗುವ ಸಾಧ್ಯತೆ ಇದೆ. ಮನೆಯ ಕೆಲಸ ಸುಸ್ತು ಮಾಡುತ್ತದೆ.

**ಕರ್ಕಾಟಕ** ಕುಡಿಯುವ ಅಭ್ಯಾಸವನ್ನು ತೊಡೆದುಹಾಕಲು ಇದೊಂದು ಅತ್ಯಂತ ಪವಿತ್ರವಾದ ದಿನ. ನೀವು ವೈನ್ ಕುಡಿಯುವುದು ಆರೋಗ್ಯದ ಪ್ರಾಣಾಂತಿಕ ಶತ್ರು ಎಂದು ನೀವು ಅರ್ಥ ಮಾಡಿಕೊಳ್ಳಬೇಕು.

**ಸಿಂಹ** ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಸಂಬಂಧಿಕರಿಂದ ಹಣದ ಸಾಲವನ್ನು ತೆಗೆದುಕೊಂಡಿರುವ ಜನರು, ಯಾವುದೇ ಪರಿಸ್ಥಿತಿಯಲ್ಲಿಯೂ ಸಾಲವನ್ನು ಮರುಪಾವತಿ ಮಾಡಬೇಕಾಗುತ್ತದೆ.

**ಕನ್ಯಾ** ನಿಮ್ಮ ಭಯವನ್ನು ಗುಣಪಡಿಸಲು ಇದು ಒಳ್ಳೆಯ ಸಮಯ. ಇದು ಭೌತಿಕ ಚೈತನ್ಯವನ್ನು ಕಡಿಮೆ ಮಾಡುವುದಲ್ಲದೇ ಜೀವಿತಾವಧಿಯನ್ನೂ ಕಡಿಮೆ ಮಾಡುತ್ತದೆ ಎಂದು ನೀವು ಅರ್ಥ ಮಾಡಿಕೊಳ್ಳಬೇಕು.

**ತುಲಾ** ಕುಟುಂಬದವರು, ಮಕ್ಕಳು ಮತ್ತು ಸ್ನೇಹಿತರೊಂದಿಗೆ ಕಳೆದ ಸಮಯ ನಿಮ್ಮ ಚೈತನ್ಯವನ್ನು ಮರಳಿ ನೀಡಲು ಮುಕ್ತವಾಗಿರುತ್ತದೆ. ಪ್ರಯಾಣದಲ್ಲಿ ಪ್ರಣಯ ಸಂಪರ್ಕದ ಸಾಧ್ಯತೆಯಿದೆ.

**ವೃಶ್ಚಿಕ** ಹಳೆಯ ಸ್ನೇಹಿತರ ಜೊತೆಗಿನ ಒಂದು ಪುನರ್ಮಿಲನ ನಿಮ್ಮನ್ನು ಚೇತೋಹಾರಿಯಾಗಿರಿಸುತ್ತದೆ. ಇಂದು ನಿಮ್ಮ ಹಣವನ್ನು ಅನೇಕ ವಿಷಯಗಳಿಗೆ ಖರ್ಚು ಮಾಡಬಹುದು.

**ಧನಸ್ಸು** ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ.

**ಮಕರ** ದಿನದಲ್ಲಿ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ ಇಡೀ ಕುಟುಂಬಕ್ಕೆ ಸಂತೋಷ ಮತ್ತು ಆನಂದ ತೆರೆದಿಡುತ್ತದೆ. ಇದನ್ನು ಒಂದು ವಿಶೇಷ ದಿನವಾಗಿಸಲು ದಯೆ ಮತ್ತು ಪ್ರೀತಿಯ ಸಣ್ಣ ತುಣುಕುಗಳನ್ನು ನೀಡಿ.

**ಕುಂಭ** ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ನಿಮ್ಮ ಹಣವನ್ನು ಸಂಗ್ರಹಿಸಿದಾಗ ಮಾತ್ರ ಹಣ ನಿಮ್ಮ ಕೆಲಸಕ್ಕೆ ಬರುತ್ತದೆ. ಇದನ್ನು ನೀವು ಚೆನ್ನಾಗಿ ಅರ್ಥಮಾಡಿಕೊಳ್ಳಿ.

**ಮೀನ** ಇಂದು ಮನೆಯಲ್ಲಿ ನೀವು ಇತರರನ್ನು ಮುಜುಗರಪಡಿಸದೇ ನಿಮ್ಮ ಕುಟುಂಬದ ಅವಶ್ಯಕತೆಗಳಿಗೆ ಹೊಂದಿಕೊಳ್ಳಲು ಯತ್ನಿಸಬೇಕು. ನಿಮ್ಮ ಗೆಳತಿಯ ಜೊತೆ ಅಸಭ್ಯವಾಗಿ ನಡೆದುಕೊಳ್ಳಬೇಡಿ.

# ಸ್ವಯಂ ಪ್ರೇರಿತ ರಕ್ತದಾನ ಶಿಬಿರ

• ಉದಯವಾಹಿನಿ ಸವದತ್ತಿ

ಹರಳಕಟ್ಟಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಬೆಳಗಾವಿ ಜಿಲ್ಲಾ ಪಂಚಾಯತ್ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಗ್ರಾಮ ಪಂಚಾಯತ್ ಕಗದಾಳ ಇವರ ಸಂಯುಕ್ತ ಆಶ್ರಯದಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಜರುಗಿತು. ಶಿಬಿರಕ್ಕೆ ಚಾಲನೆ ನೀಡಿದ ಕಗದಾಳ ಗ್ರಾಮ ಪಂಚಾಯತ ಅಧ್ಯಕ್ಷರಾದ ಕೃಷ್ಣಾರೆಡ್ಡಿ ಸವದತ್ತಿ ಇವರು ಮಾತನಾಡಿ ಆರೋಗ್ಯ ಕ್ಷೇತ್ರದಲ್ಲಿ ಅಗಾಧ ಬದಲಾವಣೆಗಳಾಗಿದ್ದರೂ ಬಹುತೇಕರಲ್ಲಿ ರಕ್ತದಾನದ ಕುರಿತು ಇನ್ನೂ ಸಹ ಮೂಢನಂಬಿಕೆ, ತಪ್ಪು ಕಲ್ಪನೆ ಗಳಿವೆ. ಆರೋಗ್ಯವಂತರು ಸದೃಢ ಆರೋಗ್ಯ ಹೊಂದಲು ರಕ್ತದಾನ ಅತಿ ಅವಶ್ಯಕವಾಗಿದೆ. ರಕ್ತದಾನಕ್ಕಿಂತ ಮಿಗಿಲಾದ ದಾನವಿಲ್ಲ ಎಂದು ಹೇಳಿದರು. ಬಿಮ್ಸ ವೈದ್ಯಾಧಿಕಾರಿಗಳಾದ ಡಾ. ಆರ್. ಜಿ ಪಾಟೀಲ ಇವರು ಮಾತನಾಡಿ ತುರ್ತು ಸಂದರ್ಭಗಳಲ್ಲಿ ರಕ್ತದ ಅಲಭ್ಯತೆಯಿಂದಲೇ ಅದೆಷ್ಟೋ ಜೀವಗಳು ಮೃತಪಡುತ್ತಿವೆ .

ರಕ್ತದಾನದ ಕುರಿತು ಜನರಲ್ಲಿ ಹೆಚ್ಚಿನ ಜಾಗೃತಿ ಮೂಡಬೇಕಿದೆ ಎಂದರು. ರಕ್ತದಾನ ಮಾಡಿದ ಸ್ವಯಂಸೇವಕರಿಗೆ ಇಲಾಖೆಯಿಂದ ಪ್ರಮಾಣ ಪತ್ರ ವಿತರಿಸಲಾಯಿತು. ಈ



ಉದಯವಾಹಿನಿ ಚಿತ್ರ

ಸಂದರ್ಭದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಹರಳಕಟ್ಟಿಯ ವೈದ್ಯಾಧಿಕಾರಿಗಳಾದ ಡಾಕ್ಟರ್ ಸಿದ್ದಪ್ಪ ಕೋರಿಶೆಟ್ಟರ್ ಮತ್ತು ಸಿಬ್ಬಂದಿ ವರ್ಗ ರಕ್ತ ಬಂಡಾರ ಬಿಮ್ಸ್ ಬೆಳಗಾವಿ, ಕಗದಾಳ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾದ ಪಿ.ಎನ್ ಕೌಜಲಗಿ, ಪಂಚಾಯತನ ಸರ್ವ ಸದಸ್ಯರು ಮತ್ತು ಸಿಬ್ಬಂದಿ ವರ್ಗ ಹಾಗೂ ಸುತ್ತಮುತ್ತಲಿನ ಗ್ರಾಮದ ಸಾರ್ವಜನಿಕರು ಮತ್ತು ಸಮುದಾಯ ಆರೋಗ್ಯ ಅಧಿಕಾರಿ ಶಿವಶಂಕರ್ ಭೂಷಣ್ಣವರ್ ಮಂಜುಳಾ ತಳವಾರ್, ಭಾರತಿ ಗೌಡ, ದ್ಯಾಮವ್ವ ಬಡಿಗೇರ್, ಆರ್ ಅರ್ ಈಟಿ, ಅಮೃತಾ ಬೆನಚಿ ನಮರಡಿ ಹಾಗೂ ಈರಣ್ಣ ಅಂತಕ್ನವರ್ ಆಶಾ ಕಾರ್ಯಕರ್ತರು ಉಪಸ್ಥಿತರಿದ್ದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಆರ್ ಎಸ್ ಚಿಟ್ನಿಸ್ ಕಾರ್ಯಕ್ರಮ ನಿರೂಪಣೆ ಮಾಡಿ ಸ್ವಾಗತಿಸಿದರು.

# ರನ್ನ ರಥಯಾತ್ರೆಗೆ ಭವ್ಯ ಸ್ವಾಗತ

• ಉದಯವಾಹಿನಿ ಚಿತ್ರದುರ್ಗ

ರನ್ನ ವೈಭವ-2025ರ ಅಂಗವಾಗಿ ಚಿತ್ರದುರ್ಗ ನಗರಕ್ಕೆ ಆಗಮಿಸಿದ ರನ್ನ ರಥಯಾತ್ರೆಗೆ ರಾತ್ರಿ ಜಾನಪದ ಕಲಾಮೇಳಗಳೊಂದಿಗೆ ಭವ್ಯ ಸ್ವಾಗತ ಕೋರಲಾಯಿತು.

ಬಾಗಲಕೋಟೆ ಜಿಲ್ಲೆಯ ಮುಧೋಳದಲ್ಲಿ ನಡೆಯುವ ರನ್ನ ವೈಭವ-2025ರ ಅಂಗವಾಗಿ ರನ್ನ ರಥಯಾತ್ರೆಯು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸಂಚರಿಸಲಿದ್ದು, ತುಮಕೂರಿನಿಂದ ಶಿರಾ, ಹಿರಿಯೂರು ಮಾರ್ಗವಾಗಿ ಚಿತ್ರದುರ್ಗ ನಗರಕ್ಕೆ ಆಗಮಿಸಿದ ರಥಯಾತ್ರೆಯನ್ನು ಮದಕರಿ ವೃತ್ತದಲ್ಲಿ ಸ್ವಾಗತಿಸಲಾಯಿತು.

ಮದಕರಿ ವೃತ್ತದಿಂದ ಮೆರವಣಿಗೆ ಮೂಲಕ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದ ಮಾರ್ಗವಾಗಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಮೀಪದ ಒನಕೆ ಓಬವ್ವ ವೃತ್ತಕ್ಕೆ ಆಗಮಿಸಿತು. ಈ ವೇಳೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರು ರನ್ನನ ಮೂರ್ತಿಗೆ ಪೂಜೆ ಸಲ್ಲಿಸಿ, ಪುಷ್ಪನಮನ ಸಲ್ಲಿಸಿದರು.

ರನ್ನ ರಥ ಸಮಿತಿಯ ಸದಸ್ಯರಿಂದ ರನ್ನನ


ಉದಯವಾಹಿನಿ ಚಿತ್ರ

ಗದೆಯನ್ನು ಹಸ್ತಾಂತರ ಮಾಡಿಕೊಂಡ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅದನ್ನು ಸಾರ್ವಜನಿಕವಾಗಿ ಪ್ರದರ್ಶನ ಮಾಡುವ ಮೂಲಕ ರನ್ನ ರಥಕ್ಕೆ ಚಾಲನೆ ನೀಡಿದರು.

ರನ್ನ ರಥಯಾತ್ರೆಯು ಚಿತ್ರದುರ್ಗ ಜಿಲ್ಲೆಗೆ ಆಗಮಿಸಿದ ವೇಳೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಕೆ.ಎಂ. ಶಿವಸ್ವಾಮಿ, ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಮಾಲತೇಶ್ ಮುದ್ದಜ್ಜಿ, ಖಜಾಂಚಿ ಮಲ್ಲಿಕಾರ್ಜುನ್, ರಾಜ್ಯ ಪರಿಷತ್ ಸದಸ್ಯ ರಾಜಪ್ಪ, ನಿರ್ದೇಶಕರಾದ ಡಾ.ಬಿ.ಟಿ.ಲೋಲಾಕ್ಷಮ್ಮ, ಉಮೇಶಯ್ಯ, ಪ್ರೌಢಶಾಲಾ ಶಿಕ್ಷಕರ ಸಂಘದ ತಾಲ್ಲೂಕು ಅಧ್ಯಕ್ಷ ಟಿ.ಹೆಚ್.ಬಸವರಾಜಪ್ಪ, ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ಸೇರಿದಂತೆ ಜಿಲ್ಲೆಯ ವಿವಿಧ ಇಲಾಖೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು, ವಿವಿಧ ಸಂಘ ಸಂಸ್ಥೆಗಳ ಮುಖಂಡರು, ಸಾರ್ವಜನಿಕರು ಭಾಗವಹಿಸಿ ರಥಯಾತ್ರೆಯ ಸ್ವಾಗತ ಮತ್ತು ಬೀಳ್ಕೊಡುವ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ನಂತರ ರಥಯಾತ್ರೆಯು ಚಿತ್ರದುರ್ಗ ನಗರದಿಂದ ಕೂಡ್ಲಿಗಿ ಮಾರ್ಗವಾಗಿ ಹೊಸಪೇಟೆಗೆ ತೆರಳಿತು.

ರನ್ನ ವೈಭವ -2025

### ರಾಷ್ಟ್ರವೀರ ಶಿವಾಜಿ ಮಹಾರಾಜರ ಆದರ್ಶ, ತತ್ವಗಳನ್ನು ಯುವಜನಾಂಗ ಅಳವಡಿಸಿಕೊಳ್ಳಲಿ: ಸಚಿವ ಈಶ್ವರ ಖಂಡ್ರೆ

# ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯುತ್ಸವ ಕಾರ್ಯಕ್ರಮ

• ಉದಯವಾಹಿನಿ ಬೀದರ



ರಾಷ್ಟ್ರ ಪುರುಷ, ರಾಷ್ಟ್ರವೀರ, ಧರ್ಮನಿರಪೇಕ್ಷ, ಜಾತ್ಯಾತೀತ ಮಹಾವೀರ, ರೈತ ಅಭಿವೃದ್ಧಿ, ಸ್ವದೇಶ ರಾಜ್ಯಸಂಸ್ಥಾಪಕ ಛತ್ರಪತಿ ಶಿವಾಜಿ ಮಹಾರಾಜರ ಆದರ್ಶ ತತ್ವಗಳನ್ನು ಇಂದಿನ ಯುವ ಜನಾಂಗವು ಅಳವಡಿಸಿಕೊಳ್ಳುವ ಅಗತ್ಯವಿದೆಯೆಂದು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಕರೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಆಶ್ರಯದಲ್ಲಿಂದು ಹಮ್ಮಿಕೊಂಡ ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯುತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಇಡೀ ದೇಶದಲ್ಲಿ ಶಿವಾಜಿ ಮಹಾರಾಜರಂತಹ ರಾಜರಿಲ್ಲ. ಅವರ ದೇಶಭಕ್ತಿ, ರಾಷ್ಟ್ರಪ್ರೇಮ, ಯುದ್ಧ ನೀತಿ ಧೈರ್ಯ, ಶೌರ್ಯ ಮಹಿಳಾ ಗೌರವ ಜಾತ್ಯಾತೀತ ಮನೋಭಾವನೆ ಇತರೇ ರಾಜರಲ್ಲಿ ಕಾಣುವುದು ತೀರ ಕಡಿಮೆ. ರೈತರ ಬಗ್ಗೆ ಅಪಾರ ಕಳಕಳಿ ಹೊಂದಿದ್ದರು. ಮುಘಲರೊಂದಿಗೆ ಯುದ್ಧ ಮಾಡಿ ಗೆದ್ದರು. ಗೆರಿಲ್ಲಾ ಯುದ್ಧ ಪರಿಣಿತರಾಗಿದ್ದರು. ತಾಯಿ ಬೀಜಾಮಾತಾ ಮಾರ್ಗದರ್ಶನದಲ್ಲಿ ರಾಷ್ಟ್ರಭಕ್ತಿ ಬೆಳೆಸಿಕೊಂಡ ಶಿವಾಜಿ ಬಾಲ್ಯದಿಂದಲೇ ರಾಮಾಯಣ, ಮಹಾಭಾರತ ಓದಿ ಸ್ವರಾಜ್ಯ, ರಾಜ್ಯ ನಿರ್ಮಿಸಿದರು ಎಂದು ಸಚಿವರು ತಿಳಿಸಿದರು.

ನಮ್ಮ ಕರ್ನಾಟಕ-ಮಹಾರಾಷ್ಟ್ರದ ಸಂಬಂಧಗಳು ಶತಶತಮಾನಗಳಿಂದಲೂ ಭಾತೃತ್ವ ರೀತಿ ಯಲ್ಲಿವೆ. ಶಿವಾಜಿಯ ತಂದೆಯ ಸಮಾಧಿ ದಾವಣಗೆರೆಯಲ್ಲಿದೆ. ಶಿವಾಜಿಯು ಕರ್ನಾಟಕದಲ್ಲಿ ಅನೇಕ ದಿನ ಉಳಿದು ಅನನ್ಯವಾದ ಸಂಬಂಧ ಹೊಂದಿದ್ದರು.

ಕರ್ನಾಟಕ ಮಹಾರಾಷ್ಟ್ರದ ಗಡಿ ಭಾಗದಲ್ಲಿ ಇತ್ತೀಚೆಗೆ ಉತ್ತಮ ಅಭಿವೃದ್ಧಿಯಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಧಾರಶಿವ ಮಹಾರಾಷ್ಟ್ರದ ಮಾಜಿ ಸಂಸದರಾದ ಪ್ರೋ.ರವೀಂದ್ರ ವಿಶ್ವನಾಥರಾವ ಗಾಯಕವಾಡ ಅವರು ಅತಿಥಿ ಉಪನ್ಯಾಸ ನೀಡಿದರು.

ಕಾರ್ಯಕ್ರಮಕ್ಕೂ ಮುಂಚಿತವಾಗಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಶಿವಾಜಿ ಮಹಾರಾಜರ ಭಾವಚಿತ್ರಕ್ಕೆ ಸಚಿವ ರಹೀಂ ಖಾನ್, ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಮಾಜಿ ಸಚಿವರಾದ ಬಂಡೆಪ್ಪ ಖಾಶಂಪೂರ, ಈಶ್ವರ ಸಿಂಗ ಠಾಕೂರ, ಸಮಾಜದ ಗಣ್ಯರಿಂದ ಪೂಜೆ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಬೀದರ ನಗರಸಭೆ ಅಧ್ಯಕ್ಷರಾದ ಮಹ್ಮದ ಗೌಸ್, ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ಬದೋಲೆ, ಅಪರ ಜಿಲ್ಲಾಧಿಕಾರಿಗಳಾದ ಶಿವಕುಮಾರ ಶೀಲವಂತ, ಮಾಜಿ ಜಿಲ್ಲಾ ಪಂಚಾಯತ ಉಪಾಧ್ಯಕ್ಷರಾದ ಪ್ರಕಾಶ ಪಾಟೀಲ, ಘಾಟಬೋರಳ ಸಮಾಜದ ಮುಖಂಡರಾದ ಮದನರಾವ ಬಿರಾದಾರ, ರಘುನಾಥ ಜಾಧವ, ಅರ್ಜುನ ಬಿಲ್ಲೆ, ಪಂಡಿತ ಜಾಧವ ಬಾಳೂರು ಸೇರಿದಂತೆ ಸಮಾಜದ ಗಣ್ಯರು, ಅಭಿಮಾನಿಗಳು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**ಮಾಂಸಾಹಾರ ಅವರವರ ಆಹಾರ ಪದ್ಧತಿಯಷ್ಟೆ**

ದೇವರನ್ನು ಕಾಣುವ ವ್ಯವಸ್ಥೆಯಲ್ಲಿಯೂ ವೈವಿಧ್ಯತೆ ಇವೆ. ಬೀದರ ಜಿಲ್ಲೆ, ಕರ್ನಾಟಕ, ದೇಶ, ವಿದೇಶಗಳಲ್ಲಿಯೂ ಆಯಾ ಪ್ರದೇಶಕ್ಕನುಗುಣವಾಗಿ ದೇವರನ್ನು ಕಾಣುವ ರೀತಿ, ತತ್ವ, ಕಲ್ಪನೆ ವೈವಿಧ್ಯಮಯವಾಗಿದೆ. ಆದರೆ ಈ ಮನುಷ್ಯ ಮಾತ್ರ ಎಲ್ಲೆಡೆ ಒಂದೇ ರೀತಿ ಆಗಿದ್ದಾನೆ. ಈ ನೆಲ, ಜಲ, ವಾಯು ಎಲ್ಲರಿಗೂ ಒಂದೇ, ರಕ್ತವೂ ಒಂದೇ, ಸಸ್ಯಹಾರ, ಮಾಂಸಾಹಾರ ಅವರವರ ಆಹಾರ ಪದ್ಧತಿಯಷ್ಟೆ, ಎಲ್ಲಾ ಸಮುದಾಯದವರು ಸೇರಿ ಬೀದರ ಜಿಲ್ಲೆಯನ್ನು ಅಭಿವೃದ್ಧಿಗೊಳಿಸೋಣ ಎಂದು ತಿಳಿಸಿದರು.

ಶಿವಾಜಿ ಮಹಾರಾಜರು ಧರ್ಮನಿರಪೇಕ್ಷ, ಧರ್ಮಾತೀತ, ಜಾತ್ಯತೀತ ಆಗಿದ್ದರು. ಅವರ ಅಂಗರಕ್ಷಕರೇ ಮುಸ್ಲಿಂ ಸಮುದಾಯದವರಾಗಿದ್ದರು. ಅನೇಕ ಹುದ್ದೆಗಳಲ್ಲಿ ಮುಸ್ಲಿಂ ನಾಯಕರನ್ನು ನೇಮಿಸಿದ್ದರು. ಎಲ್ಲಾ ಸಮುದಾಯದವರನ್ನು ಒಟ್ಟಾಗಿ ಮುನ್ನಡೆಸುತ್ತಿದ್ದರು. ಆದರೆ ಇತ್ತೀಚೆಗೆ ಕೆಲವು ಜಾತಿ-ಜಾತಿಗಳಲ್ಲಿ ಕೋಮು-ದ್ವೇಷ ಬಿತ್ತುವ ಕಾರ್ಯ ಮಾಡುತ್ತಿದ್ದು ಎಲ್ಲಾ ಸಮುದಾಯಗಳು ಒಟ್ಟಾಗಿ ಸಹೋದರತ್ವದಿಂದ ಬಾಳಬೇಕೆಂದು -ಈಶ್ವರ ಖಂಡ್ರೆ

**ದೇಶ ಕಂಡ ಅತೀ ಪ್ರಸಿದ್ಧ ಮಹಾಪುರುಷ**

ಶಿವಾಜಿ ಮಹಾರಾಜರು ಈ ದೇಶ ಕಂಡ ಅತೀ ಪ್ರಸಿದ್ಧ ಮಹಾಪುರುಷ ಆಗಿದ್ದರು. ಶಿವಾಜಿಯು ಯಾರ ವಿರುದ್ಧವು ಇರಲಿಲ್ಲ. ಎಲ್ಲಾ ಸಮುದಾಯಗಳನ್ನು ಒಟ್ಟಾಗಿ ರಾಜ್ಯಭಾರ ಮಾಡುತ್ತಿದ್ದರು. ಅನೇಕ ದೊಡ್ಡ ಹುದ್ದೆಗಳನ್ನು ಅಲ್ಪಸಂಖ್ಯಾತ ಸಮುದಾಯದವರಿಗೆ ನೀಡಿದ್ದರು. ಸಮಾಜದಲ್ಲಿ ವೈವಿಧ್ಯತೆ ಇದೆ. ಬೀದರನಲ್ಲಿ ಎಲ್ಲಾ ಸಮುದಾಯಗಳು ಶಾಂತಿಯಿಂದ, ಸೌಹಾರ್ದದಿಂದ ಜೀವಿಸುತ್ತಿದ್ದಾರೆ -ರಹೀಂ ಖಾನ್ ಪೌರಾಡಳಿತ ಹಾಗೂ ಹಜ್ ಸಚಿವ

# ದೇವದಾಸಿಯರ ಮಾಶಾಸನ ಹೆಚ್ಚಳಕ್ಕೆ ಒತ್ತಾಯಿಸಿ ಧರಣಿ


ಉದಯವಾಹಿನಿ ಚಿತ್ರ

• ಉದಯವಾಹಿನಿ ಹೊಸಪೇಟೆ

ಜಿಲ್ಲೆಯಲ್ಲಿ 6 ಸಾವಿರಕ್ಕಿಂತ ಹೆಚ್ಚು ದೇವದಾಸಿ ಮಹಿಳೆಯರಿದ್ದು, ಅನೇಕರು ಸರ್ಕಾರ ನಡೆಸಿದ ಸಮೀಕ್ಷೆಯಿಂದ ಹೊರಗುಳಿದಿದ್ದಾರೆ. ಈ ಹಿನ್ನೆಲೆಯಲ್ಲಿ ದೇವದಾಸಿ ಮಹಿಳೆಯರು ಮತ್ತು ಮಕ್ಕಳ ಬಗ್ಗೆ ಮರು ಸಮೀಕ್ಷೆ ನಡೆಸುವ ಜೊತೆಗೆ ಮತ್ತಿತರೆ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಒತ್ತಾಯಿಸಿ ರಾಜ್ಯ ದೇವದಾಸಿ ಮಹಿಳೆಯರ ವಿಮೋಚನಾ ಸಂಘದ ಜಿಲ್ಲಾ ಸಮಿತಿ ನೇತೃತ್ವದಲ್ಲಿ ನೂರಾರು ಜನ ದೇವದಾಸಿಯರು ಬುಧವಾರ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ನಡೆಸಿದರು.

ಈ ಕುರಿತು ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿಗೆ ಮನವಿ ಸಲ್ಲಿಸಿ, ಮಹಿಳಾ ಅಭಿವೃದ್ಧಿ ನಿಗಮವು ಎಲ್ಲಾ ದೇವದಾಸಿ ಮಹಿಳೆಯರ ಕುಟುಂಬದ ಎಲ್ಲಾ ಸದಸ್ಯರ ಗಣತಿಗೆ ಕೂಡಲೇ ಕ್ರಮವಹಿಸಬೇಕು. ಆನ್ ಲೈನ್ ಅರ್ಜಿ ಸಲ್ಲಿಕೆ ಮೂಲಕ ಸಮೀಕ್ಷೆ ನಡೆಸಲು ಉದ್ದೇಶಿಸಿದ್ದು, ಇದು ದೇವದಾಸಿ ಮಹಿಳೆಯರಿಗೆ ಕಷ್ಟದಾಯಕವಾಗುತ್ತದೆ. ಜೊತೆಗೆ ಅನರ್ಹರೂ ಅರ್ಜಿ ಸಲ್ಲಿಕೆಗೆ ಅವಕಾಶ ದೊರೆಯಲಿದ್ದು, ಭ್ರಷ್ಟಾಚಾರಕ್ಕೂ ದಾರಿಯಾಗುತ್ತದೆ. ಈ ಹಿನ್ನೆಲೆಯಲ್ಲಿ ಈ ಹಿಂದಿನಂತೆ ಅಂಗನವಾಡಿ ಕೇಂದ್ರ ಮತ್ತು ಕಾರ್ಯಕರ್ತೆಯರ ಮೂಲಕ ಗಣತಿ ಮಾಡಬೇಕು. ಬಿ.ಮಾಳಮ್ಮ, ಜಿಲ್ಲಾ ಕಾರ್ಯದರ್ಶಿ ಕೆ.ನಾಗರತ್ನ, ಪ್ರಮುಖರಾದ ಹನುಮ್ಮ, ಈರಮ್ಮ, ಚಾಂದ್ ಬೀ, ಮೈಲಮ್ಮ, ಎಸ್.ಯಲ್ಲಮ್ಮ, ಹಂಪಮ್ಮ, ಕಮಲಮ್ಮ, ಯಂಕಮ್ಮ, ಪಾಲ್ಗೊಂಡಿದ್ದರು.

**ಬೇಡಿಕೆಗಳ ಈಡೇರಿಕೆಗೆ ಒತ್ತಾಯ**

ಎಲ್ಲಾ ದೇವದಾಸಿ ಮಹಿಳೆಯರ ಕುಟುಂಬದ ಸರ್ವೇ ಕಾರ್ಯ ಆರಂಭಕ್ಕೆ ಸರ್ಕಾರ ತಕ್ಷಣ ಆದೇಶಿಸಬೇಕು ಎಂದು ಧರಣಿ ನಿರತರು ಒತ್ತಾಯಿಸಿದರು. ಎಲ್ಲಾ ದೇವದಾಸಿ ಮಹಿಳೆಯರ ಮಾಸಿಕ ಪಿಂಚಣಿ, ಸಹಾಯಧನವನ್ನು ಈ ಬಜೆಟ್‌ನಲ್ಲಿ ಕನಿಷ್ಠ 3 ಸಾವಿರ ರೂ. ಗೆ ಹೆಚ್ಚಿಸಬೇಕು. ದೇವದಾಸಿ ಮಹಿಳೆಯರಿಗೆ ಸ್ವಯಂ ಉದ್ಯೋಗದಡಿ ನೀಡಲಾಗುತ್ತಿದ್ದ 30,000 ರೂ. ಸಹಾಯಧನವನ್ನು ಕಳೆದ ಮೂರು ವರ್ಷಗಳಿಂದ ನಿಲ್ಲಿಸಲಾಗಿದೆ. ಅದನ್ನು 1.50 ಲಕ್ಷ ರೂ. ಗೆ ಹೆಚ್ಚಿಸಿ ಪುನಾರಂಭಿಸಬೇಕು ಎಂಬುದು ಸೇರಿದಂತೆ ಇನ್ನಿತರೆ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿದರು.

# ಸರ್ವಜ್ಞರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು

• ಉದಯವಾಹಿನಿ ಮುದ್ದೇಬಿಹಾಳ

ಸರ್ವಜ್ಞ ಎಂದರೆ ಎಲ್ಲವನ್ನು ತಿಳಿದವನು. ಸಮಾಜದ ಜ್ಞಾನವನ್ನು ಅರಿತವನು. ಸರ್ವಜ್ಞ ಕವಿಯು, ವಿದ್ಯೆ, ಕೃಷಿ ಹಾಗೂ ಜೀವನದ ಕುರಿತ ಆಳವನ್ನು ಅಳೆಯುವುದರ ಮೂಲಕ ದೊಡ್ಡ ವ್ಯಕ್ತಿತ್ವವನ್ನು ಹೊಂದಿದ್ದರು. ಅವರ ತ್ರಿಪದಿಗಳಲ್ಲಿ ಒಳ ಅರಿವು ಜಾಸ್ತಿ ಇದ್ದು, ಶ್ರೀ ಸಾಮಾನ್ಯರಿಗೂ ಅರ್ಥವಾಗುವಂತಿರುತ್ತದೆ. ಸರ್ವಜ್ಞರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಮುಂದಿನ ಪೀಳಿಗೆಗೆ ತಲುಪಿಸುವಂಥ ಕೆಲಸವನ್ನು ಮಾಡಬೇಕು ಎಂದು ತಹಶೀಲ್ದಾರ ಬಲರಾಮ ಕಟ್ಟಿಮನಿ ಹೇಳಿದರು ಅವರು ಗುರುವಾರ ತಾಲ್ಲೂಕ ಆಡಳಿತದಿಂದ ಹಮ್ಮಿಕೊಂಡ ತ್ರಿಪದಿ ಕವಿ ಸರ್ವಜ್ಞರ 505 ನೇ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು

**ಸರ್ವಜ್ಞ ಎಂದರೆ ಎಲ್ಲವನ್ನು ತಿಳಿದವನು**

ಕುಂಬಾರ ಸಮಾಜದ ತಾಲ್ಲೂಕ ಅಧ್ಯಕ್ಷ ಕುಂಭ ಕಲಾ ನಿಗಮದ ನಿಕಟಪೂರ್ವ ನಿರ್ದೇಶಕ ಬಸಣ್ಣ ಕುಂಬಾರ ( ನಡಹಳ್ಳಿ) ಮಾತನಾಡಿ ಸರ್ವಜ್ಞ ತನ್ನ ವಚನದ ಮೂಲಕ ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಕೆಲಸ ಮಾಡಿದ್ದಾನೆ , ಅನುಭವಗಳಿಂದ ವಚನಗಳ ಮೂಲಕ ಲೋಕದ ಅಂಕುಡೊಂಕು ತಿದ್ದುವಲ್ಲಿ ಪ್ರಮುಖ ಪಾತ್ರ ವಹಿಸಿದವರು ಕವಿ ಸರ್ವಜ್ಞ. ಸಾಮಾಜಿಕ ತಾರತಮ್ಯಗಳಿಂದ ನರಳುತ್ತಿದ್ದ ಸಮಾಜದಲ್ಲಿ ಸಮಾನತೆ ಮೂಡಿಸಲು, ಜನರಲ್ಲಿ ಬದಲಾವಣೆಗಳನ್ನು ತರಲು ಶಕ್ತರ ವಿರುದ್ಧ ವಚನ, ಕಾವ್ಯ, ಕವನಗಳ ಮೂಲಕ ಕ್ರಾಂತಿಯನ್ನು ಎಬ್ಬಿಸಿದ ಕ್ರಾಂತಿಕಾರಿ ಕವಿ ಸರ್ವಜ್ಞರಾಗಿದ್ದಾರೆ ಇಂದು ಕುಂಬಾರ ಸಮಾಜ ಸಂಘಟಿತವಾಗವೇಕು ಸಮಾಜ ಶೈಕ್ಷಣಿಕವಾಗಿ ಮುಂದೆ ಬರಲು ಪ್ರತಿಯೊಬ್ಬರು ಶಿಕ್ಷಣವಂತರಾಗಬೇಕು ಎಂದರು

ಪಟ್ಟಣದ ಕುಂಬಾರ ಓಣಿಯ ಗ್ರಾಮದೇವತೆ ಶ್ರೀ ದ್ಯಾಮವ್ವ ದೇವಿಗೆ ವಿಶೇಷ ಪೂಜೆಯನ್ನು ಸಲ್ಲಿಸಿ ಅಲ್ಲಿಂದ ಸಂತ ಕವಿ ಸರ್ವಜ್ಞರ ಭಾವಚಿತ್ರದ ಭವ್ಯ ಮೆರವಣಿಗೆಯನ್ನು ಮಂಗಲವಾದ್ಯಗಳೊಂದಿಗೆ ತಹಶಿಲ್ದಾರರ ಕಚೇರಿಯ ವರಗೆ ಮಾಡಲಾಯಿತು . ಕಾರ್ಯಕ್ರಮದಲ್ಲಿ ಕ್ಷೇತ್ರ ಸಮನ್ವಯ ಅಧಿಕಾರಿ ಯು ಬಿ ಧರಿಕಾರ, ಶಿರಸ್ತೆದಾರ ಎಂ ಎ ಬಾಗೇವಾಡಿ, ಕುಂಬಾರ ಸಮಾಜದ ಅಂಬರಿಷ ಕುಂಬಾರ ಜಗದೀಶ್ ಕುಂಬಾರ, ಎಸ್ ಸಿ ಸುಗಂಧಿ, ಮಲ್ಲಪ್ಪ ಕುಂಬಾರ ,ಗುರುಪ್ಪ ಕುಂಬಾರ, ಮಲ್ಲು ಬ ಕುಂಬಾರ, ಮಹಾದೇವಪ್ಪ ಕುಂಬಾರ ನಾಲತವಾಡ, ಎನ್ ಎನ್ ಕುಂಬಾರ,ಧರ್ಮಣ್ಣ ಕುಂಬಾರ,ರಾಜು ಚಂದಪ್ಪ ಕುಂಬಾರ, ಸುಭಾಷ್ ಕುಂಬಾರ,ಮಹಾಂತೇಶ ಕುಂಬಾರ,ಶಂಕರ ಕುಂಬಾರ, ಅಂಬಣ್ಣ ಕುಂಬಾರ, ರಾಮಣ್ಣ ಕುಂಬಾರ ಚನ್ನಪ್ಪ ಕುಂಬಾರ, ಪತ್ರಕರ್ತ ಬಸವರಾಜ ಕುಂಬಾರ ಶೋಭಾ ಕಾಖಾಂಡಕಿ, ಶರಣಪ್ಪ ಕುಂಬಾರ, ಗೌರಮ್ಮ ಕುಂಬಾರ, ರವಿ ಕುಂಬಾರ, ಕೃಷ್ಣ ಕುಂಬಾರ ಸೇರಿದಂತೆ ಸಮಾಜದ ಭಾಂದವರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು, ಸಿಆರ್ ಪಿ ಗುಂಡು ಚವ್ಹಾಣ ನಿರೂಪಿಸಿ ವಂದಿಸಿದರು.


ಉದಯವಾಹಿನಿ ಚಿತ್ರ

ಸರ್ವಜ್ಞನ ತ್ರಿಪದಿಗಳು ಕನ್ನಡ ಸಾಹಿತ್ಯ ಸಿರಿಗೆ ಅಮೂಲ್ಯ ಕೊಡುಗೆಯಾಗಿದೆ. ತ್ರಿಪದಿಗಳು ಸಾರುವ ಸಂದೇಶ ಸರ್ವಕಾಲಕ್ಕೂ ಪ್ರಸ್ತುತ. ಇವುಗಳು ಹಲವು ಭಾಷೆಗಳಿಗೆ ಭಾಷಾಂತರಗೊಂಡಿದ್ದು, ಭಾಷೆ ಮತ್ತು ಗಡಿಗಳ ಎಲ್ಲೆ ಮೀರಿ ಕರ್ನಾಟಕದ ಕೀರ್ತಿಯನ್ನು ಬೆಳಗಿಸಿವೆ -ಡಾ.ನಿಂಗರಾಜ ಚಕ್ರಸಾಲಿ

# ಸರ್ವಜ್ಞರ ತ್ರಿಪದಿಗಳಲ್ಲಿದೆ ಅದ್ಭುತ ಸಂದೇಶ

### • ಕವಿ ಸರ್ವಜ್ಞ ಜಯಂತಿಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಭಿಮತ

• ಉದಯವಾಹಿನಿ ಚಿತ್ರದುರ್ಗ

ಸಮಾಜದ ಆಗು-ಹೋಗು, ಅಂಕು-ಡೊಂಕುಗಳನ್ನು, ಒರೆ-ಕೋರೆಗಳನ್ನು ಅತ್ಯಂತ ಸುಲಭ, ಸರಳ ಭಾಷೆಯಲ್ಲಿ ಜನಸಾಮಾನ್ಯರಿಗೆ ಅರ್ಥೈಸುವ ಶೈಲಿಯಲ್ಲಿ ತ್ರಿಪದಿ ರಚಿಸಿ ಸರ್ವಜ್ಞ ಅವರು ನೀಡಿದ ಸಂದೇಶಗಳು ಸರ್ವಕಾಲಕ್ಕೂ ಪ್ರಸ್ತುತವಾಗಿವೆ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ, ಕುಂಬಾರ ಗುಂಡಯ್ಯ ಮಹಾಸಂಸ್ಥಾನ, ಜಿಲ್ಲಾ ಕುಂಬಾರ ಕ್ಷೇಮಾಭಿವೃದ್ಧಿ ಸಂಘ, ಕರ್ನಾಟಕ ಕುಂಬಾರ ಮಹಿಳಾ ಮಹಾಸಭಾ ವತಿಯಿಂದ ಹಮ್ಮಿಕೊಂಡಿದ್ದ ಕವಿ ಸರ್ವಜ್ಞ ಜಯಂತಿ ಆಚರಣೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಕನ್ನಡ ಕುಲಕೋಟಿಗೆ ಚಿರಪರಿಚಿತನಾದವರು ಕವಿ ಸರ್ವಜ್ಞ. ಸಮಾಜದ ಅಂಕುಡೊಂಕುಗಳನ್ನು, ಮೌಢ್ಯಗಳನ್ನು ನಿರ್ದಾಕ್ಷಿಣ್ಯವಾಗಿ, ಕಟುವಾಗಿ ಟೀಕಿಸಿ ತನ್ಮೂಲಕ ಸಮಾಜ ತಿದ್ದಲು ಸರ್ವಜ್ಞರು ಪ್ರಯತ್ನಿಸಿದ್ದಾರೆ ಎಂದು ತಿಳಿಸಿದ ಅವರು, ಸರ್ವಜ್ಞರ ವಚನಗಳು ನೇರ ಹಾಗೂ ಸರಳವಾಗಿದ್ದು, ಜನಸಮಾನ್ಯರಿಗೆ ಸುಲಭವಾಗಿ ಅರ್ಥವಾಗುತ್ತವೆ ಎಂದು ಹೇಳಿದರು.

ಸರ್ವಜ್ಞರು ಸಮಾಜದ ಒಳಗಿರುವ ಲೋಪ-ದೋಷ ತಿದ್ದಿ, ಪರಿಹಾರ ಕಂಡುಕೊಳ್ಳುತ್ತಾ, ಸಮಾಜ ತಿದ್ದುವ ಕೆಲಸ ಮಾಡಿದರು. ರಾಜರು ಕಳೆಗುಂದಿ, ಸಮಾಜದಲ್ಲಿ ಧಾರ್ಮಿಕ ನೀತಿ, ನಿಯಮಗಳು ಶಿಥಿಲಾವಸ್ಥೆಯಲ್ಲಿದ್ದ ಸಮಯದಲ್ಲಿ ಕ್ರಾಂತಿಪುರುಷನಾದ ಸರ್ವಜ್ಞ ಹೊರಹೊಮ್ಮುತ್ತಾರೆ. ಆ ಸಂದರ್ಭದಲ್ಲಿ ಮೇಲ್ವರ್ಗದ ಜನರಿಂದ ತಳಸಮುದಾಯದವರ ಮೇಲೆ ಆಗುವ ಶೋಷಣೆ, ಸಮಾಜದಲ್ಲಿರುವ ಅಸಮಾನತೆ, ಮೌಢ್ಯತೆ ಹೋಗಲಾಡಿಸಿ, ಸಮಸಮಾಜದ ಕಲ್ಪನೆ ಕಟ್ಟಿಕೊಟ್ಟವರು ಕವಿ ಸರ್ವಜ್ಞರು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ, ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ, ಜಿಲ್ಲಾ ಕುಂಬಾರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಎಸ್.ಯರ್ರಿಸ್ವಾಮಿ, ಕುಂಬಾರ ಗುಂಡಯ್ಯ ಮಹಾಸಂಸ್ಥಾನದ ನಿರ್ದೇಶಕ ಕೆ.ಟಿ.ರಮೇಶ್, ಕರ್ನಾಟಕ ಕುಂಬಾರ ಮಹಿಳಾ ಮಹಾಸಭಾದ ಕಾರ್ಯದರ್ಶಿ ಹೇಮಾವತಿ, ಜಿಲ್ಲಾ ಕುಂಬಾರ ಸಮಾಜ ಉಪಾಧ್ಯಕ್ಷ ಸುನಿಲ್ ಸೇರಿದಂತೆ ಕುಂಬಾರ ಸಮಾಜದ ಮುಖಂಡರು ಹಾಗೂ ಗಣ್ಯರು ಇದ್ದರು. ಜಗದೀಶ್ ಮತ್ತು ತಂಡ ಗೀತಗಾಯನ ನಡೆಸಿಕೊಟ್ಟರು.


ಉದಯವಾಹಿನಿ ಚಿತ್ರ

**ಸರ್ವಜ್ಞ ಜಯಂತಿ ಆಚರಣೆ**

**ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಜಿಲ್ಲಾಧಿಕಾರಿಗೆ ಮನವಿ**

ಕರ್ನಾಟಕ ಕುಂಬಾರ ಮಹಿಳಾ ಮಹಾಸಭಾ ಅಧ್ಯಕ್ಷೆ ಎಸ್.ಬೈಲಮ್ಮ ಅವರು ಪ್ರತ್ಯೇಕ ಕುಂಬಾರ ಅಭಿವೃದ್ಧಿ ನಿಗಮ ಸ್ಥಾಪಿಸಿ, ರೂ.200 ಕೋಟಿ ಅನುದಾನ ನೀಡಬೇಕು. ಪ್ರತಿಯೊಂದು ಹಳ್ಳಿಯಲ್ಲಿ ಕುಂಬಾರಿಕೆ ಪ್ರೋತ್ಸಾಹಿಸಲು ಮಣ್ಣು ಪರಿಷ್ಕರಣಾ ಘಟಕ, ಪ್ರತಿ ತಾಲ್ಲೂಕಿನಲ್ಲಿಯೂ ಕುಂಬಾರರ ಮಣ್ಣಿನ ಮಡಿಕೆ ಮಾರಾಟ ಮಾಡಲು ಮಾರುಕಟ್ಟೆ ವ್ಯವಸ್ಥೆ ಹಾಗೂ ಮಳಿಗೆಗಳನ್ನು ಸ್ಥಾಪಿಸುವುದು, ಪ್ರತಿಯೊಂದು ಸರ್ಕಾರಿ ಕಚೇರಿ ಹಾಗೂ ಶಾಲಾ-ಕಾಲೇಜು, ವಸತಿ ನಿಲಯಗಳಲ್ಲಿ ಕುಡಿಯುವ ನೀರಿಗೆ ಮಣ್ಣಿನ ಮಡಿಕೆಗಳನ್ನು ಬಳಸುವಂತೆ ಆದೇಶಿಸುವುದು ಸೇರಿದಂತೆ ಕುಂಬಾರ ಸಮುದಾಯದ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅವರಿಗೆ ಮನವಿ ಪತ್ರ ಸಲ್ಲಿಸಿದರು.

ಕರ್ನಾಟಕದ ಭಾಷಾ ಪರಂಪರೆಯಲ್ಲಿ ಸರ್ವಜ್ಞನ ತ್ರಿಪದಿಗಳು ಅತ್ಯಂತ ಮಹತ್ವದ ಪಾತ್ರ ವಹಿಸಿವೆ. ಕನ್ನಡ ಸಾಹಿತ್ಯ ಶ್ರೀಮಂತ ಪರಂಪರೆಗೆ ತ್ರಿಪದಿಗಳ ಕೊಡುಗೆ ಅನನ್ಯ. ಸರ್ವಜ್ಞರು ಸಾಮಾಜಿಕ ಬದುಕನ್ನು, ಸ್ವ ಅನುಭವ, ಅರಿವು ಕಟ್ಟಿಕೊಡುವ ಕೆಲಸವನ್ನು ತ್ರಿಪದಿಗಳು ಮಾಡುತ್ತಿವೆ. ಇಂದಿನ ಬದುಕಿಗೆ ಸರ್ವಜ್ಞನ ತ್ರಿಪದಿಗಳು ಅತ್ಯಂತ ಹೆಚ್ಚು ಪ್ರಸ್ತುತವಾಗಿವೆ -ಗೀತಾ ಭರಮಸಾಗರ, ಚಿಕ್ಕಬೆನ್ನೂರು ಶಿಕ್ಷಕಿ

# ಬಸವ , ಅಂಬೇಡ್ಕರ್ ವಸತಿ ಯೋಜನೆಯಡಿ ಫಲಾನುಭವಿಗಳ ಆಯ್ಕೆ

• ಉದಯವಾಹಿನಿ ಮುದ್ದೇಬಿಹಾಳ

202223 ನೇ ಸಾಲಿನ ಬಸವ ವಸತಿ ಹಾಗೂ ಅಂಬೇಡ್ಕರ್ ವಸತಿ ಯೋಜನೆಗಳ ಹೆಚ್ಚುವರಿ ಫಲಾನುಭವಿಗಳ ಆಯ್ಕೆಯನ್ನು ಗುರುವಾರ ಕವಡಿಮಟ್ಟಿ ಗ್ರಾ.ಪಂ ಯಲ್ಲಿ ಗ್ರಾಮಸಭೆಯಲ್ಲಿ ಮಾಡಲಾಯಿತು. ಬಸವ ವಸತಿ ಯೋಜನೆಯ ಹೆಚ್ಚುವರಿಯಲ್ಲಿ 15ಮನೆಗಳ ಫಲಾನುಭವಿಗಳ ಆಯ್ಕೆ ಹಾಗೂ ಅಂಬೇಡ್ಕರ್ ಆವಾಸ ಯೋಜನೆ ಹೆಚ್ಚುವರಿ 3 ಫಲಾನುಭವಿಗಳ ಆಯ್ಕೆಯನ್ನು ಗ್ರಾಮಸಭೆಯಲ್ಲಿ ಕೈ ಎತ್ತುವ ಮೂಲಕ ಆಯ್ಕೆ ಮಾಡಲಾಯಿತು.

ಪಿಡಿಒ ಪಿ.ಎಸ್ ಕಸನಕ್ಕಿ ಮಾತನಾಡಿ ಸರಕಾರದ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವಲ್ಲಿ ಸ್ಥಳೀಯರ ಸಹಕಾರ ಮುಖ್ಯವಾಗುತ್ತದೆ ಆಯ್ಕೆ ಮಾಡಲಾದ ಫಲಾನುಭವಿಗಳು ಸಕಾಲದಲ್ಲಿ ಮನೆಗಳನ್ನು ಕಟ್ಟಿಕೊಳ್ಳಬೇಕು ಎಂದರು. ಗ್ರಾಮಸಭೆಯಲ್ಲಿ ಗ್ರಾ.ಪಂ ಅಧ್ಯಕ್ಷೆ ಶಕುಂತಲಾ ಹಂಡರಗಲ್ಲ, ಉಪಾಧ್ಯಕ್ಷೆ ಶ್ರೀದೇವಿ ಬಿರಾದಾರ, ಜಯಶ್ರೀ ವಾಲಿಕಾರ, ಶರಣಮ್ಮ ಮಲಗಲದಿನ್ನಿ, ನೀಲಮ್ಮ ಚಲವಾದಿ, ಸಿದ್ದರಾಮಯ್ಯ ಗುರುವಿನ, ದ್ಯಾವಪ್ಪ ಹುಣಶ್ಯಾಳ, ಮುಖಂಡರಾದ ರಾಮಣ್ಣ ರಾಜನಾಳ ಸೇರಿದಂತೆ ಕಾರ್ಯದರ್ಶಿ ಎ .ಆರ್ ಕೂರವೇರ ಸಿಬ್ಬಂದಿಗಳಾದ ಡಿ ಬಿ ವಾಲಿಕಾರ, ವೀರಯ್ಯ ಹಿರೇಮಠ ಹಾಗೂ ಕವಡಿಮಟ್ಟಿ, ಶಿರೋಳ, ಜಲಪೂರ, ಸರೂರ, ಸರೂರ ಎಲ್ ಟಿ ಗ್ರಾಮಸ್ಥರು ಭಾಗವಹಿಸಿದ್ದರು.



ಉದಯವಾಹಿನಿ ಚಿತ್ರ

# ಎಸಿಸಿ ಖಾಯಂ ನೌಕರರ ಚುನಾವಣೆ ಶೀಘ್ರದಲ್ಲಿ


ಉದಯವಾಹಿನಿ ಚಿತ್ರ

• ಉದಯವಾಹಿನಿ ವಾಡಿ

ಪಟ್ಟಣದ ಎಸಿಸಿ ಕಂಪನಿಯ ಇಂಡಿಯನ್ ನ್ಯಾಷನಲ್ ಟ್ರೇಡ್ ಯೂನಿಯನ್ ಕಾಂಗ್ರೆಸ್ ಯೂನಿಯನ್‌ಗೆ ಚುನಾವಣೆ ನಡೆಸಲು ಸಕಲ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಯೂನಿಯನ್ ಅಧ್ಯಕ್ಷ ರಮೇಶ್ ಕಾರಬಾರಿ ತಿಳಿಸಿದರು. ಮಾರ್ಚ್ ಮೊದಲ ವಾರದಲ್ಲಿ ಚುನಾವಣೆ ದಿನಾಂಕ ಪ್ರಕಟ ಮಾಡುವ ಮೂಲಕ ಪಾರದರ್ಶಕವಾಗಿ ಚುನಾವಣೆ ನಡೆಸಲು ಎಸಿಸಿ ಖಾಯಂ ನೌಕರರು ಕೈಜೋಡಿಸಿದ್ದಾರೆ. ಕಾರ್ಖಾನೆಯ ಆಡಳಿತ ಮಂಡಳಿ ಜೋತೆ ಚರ್ಚಿಸಿ ಚುನಾವಣೆಗೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಹೇಳಿದರು. ಎಸಿಸಿ 249 ಖಾಯಂ ನೌಕರರು ಮಾತ್ರ ಚುನಾವಣೆಯಲ್ಲಿ ಮತ ಚಲಾಯಿಸುವ ಹಕ್ಕು ಹೊಂದಿದ್ದು ಗುತ್ತಿಗೆ ಕಾರ್ಮಿಕರನ್ನು ನಾವು ಚುನಾವಣೆಗೆ ಪರಿಗಣಿಸೋದಿಲ್ಲ ಎಂದು ಅವರು ತಿಳಿಸಿದ ಅವರು, ಜಿಲ್ಲಾಧ್ಯಕ್ಷ ಅಶೋಕ ಗೂಳಿ ಅವರ ನೇತೃತ್ವದಲ್ಲಿ ಈ ಚುನಾವಣೆಯನ್ನು ನಡೆಸಲಾಗುವುದೆಂದು ತಿಳಿಸಿದರು. ಇಂಡಿಯನ್ ನ್ಯಾಷನಲ್ ಟ್ರೇಡ್ ಯೂನಿಯನ್ ಕಾಂಗ್ರೆಸ್ ಉಪಾಧ್ಯಕ್ಷ ಅರವಿಂದ್, ಖಜಾಂಚಿ ತುಕಾರಾಮ ರಾಠೋಡ, ಫಯಾಜ್ ಇದ್ದರು.


### ವೆರಿ ಅನ್‌ಫೇರ್; ಭಾರತದಲ್ಲಿ ಟೆಸ್ಲಾ ಫ್ಯಾಕ್ಟರಿ ನಿರ್ಮಾಣದ ಎಲಾನ್ ಮಸ್ಕ್ ನಿರ್ಧಾರಕ್ಕೆ ಟ್ರಂಪ್ ಬೇಸರ

# ಭಾರತದಲ್ಲಿ ಕಾರು ಮಾರಾಟ ಮಾಡುವುದು ಅಸಾಧ್ಯ: ಅಧ್ಯಕ್ಷ

**ವಾಷಿಂಗ್ಟನ್:** ಅಮೆರಿಕದ ಬಿಲಿಯನೇರ್ ಉದ್ಯಮಿ ಎಲಾನ್ ಮಸ್ಕ್ ಅವರ ಟೆಸ್ಲಾ ಕಂಪನಿಯು, ಭಾರತದಲ್ಲಿ ತನ್ನ ಸಿಬ್ಬಂದಿ ನೇಮಕಾತಿಗೆ ಚಾಲನೆ ನೀಡಿದೆ. ಈ ಮಧ್ಯೆ, ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಭಾರತದ ಹೆಚ್ಚುವರಿ ಸುಂಕಗಳನ್ನು ತಪ್ಪಿಸಲು ಭಾರತದಲ್ಲಿ ಕಾರ್ಖಾನೆಯನ್ನು ನಿರ್ಮಿಸುವ ಟೆಸ್ಲಾದ ಯಾವುದೇ ಸಂಭಾವ್ಯ ಯೋಜನೆಗಳನ್ನು ತುಂಬಾ ಅನ್ಯಾಯ ಎಂದು ಕರೆದಿರುವುದು ಗಮನ ಸೆಳೆದಿದೆ. ಫಾಕ್ಸ್ ನ್ಯೂಸ್‌ನ ಸೀನ್ ಹ್ಯಾನಿಟಿಗಾಗಿ ಟೆಸ್ಲಾ ಸಿಇಒ ಎಲಾನ್ ಮಸ್ಕ್ ಅವರೊಂದಿಗೆ ನೀಡಿದ ಜಂಟಿ ಸಂದರ್ಶನದಲ್ಲಿ ಮಾತನಾಡಿದ ಡೊನಾಲ್ಡ್ ಟ್ರಂಪ್, ಕಳೆದ ವಾರ ಭಾರತದ ಪ್ರಧಾನಮಂತ್ರಿ, ನರೇಂದ್ರ ಮೋದಿ ಅವರ ಅಮೆರಿಕ ಭೇಟಿಯ ಸಂದರ್ಭದಲ್ಲಿ ಕಾರುಗಳ ಮೇಲಿನ ಭಾರತದ ಹೆಚ್ಚಿನ ಸುಂಕವನ್ನು ತಾವು ಪ್ರಸ್ತಾಪಿಸಿದ್ದಗಿ ಸ್ಪಷ್ಟಪಡಿಸಿದ್ದಾರೆ.

ಆರಂಭಿಕ ವ್ಯಾಪಾರ ಒಪ್ಪಂದಕ್ಕೆ ಪೂರಕವಾಗಿ ಕೆಲಸ ಮಾಡಲು ಮತ್ತು ಸುಂಕಗಳ ಬಗೆಗಿನ ಬಿಕ್ಕಟ್ಟನ್ನು ಪರಿಹರಿಸಲು ಭಾರತದ ಪ್ರಧಾನಿ ನರೇಂದ್ರ ಮೋದಿ ಒಪ್ಪಿಕೊಂಡಿದ್ದಾರೆ. ಆದರೆ ಈ ನಿಟ್ಟಿನಲ್ಲಿಉಭಯ ದೇಶಗಳು ಸಾಗಬೇಕಾದ ದಾರಿ ಇನ್ನೂ ದೂರವಿದೆ ಎಂದು ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಎಲಾನ್ ಮಸ್ಕ್ ಅವರು ಭಾರತದಲ್ಲಿ ತಮ್ಮ ಕಾರನ್ನು ಮಾರಾಟ ಮಾಡುವುದು ಅಸಾಧ್ಯ ಎಂದು ಹೇಳಿರುವ ಡೊನಾಲ್ಡ್ ಟ್ರಂಪ್, ಭಾರತದ ಹೆಚ್ಚು ಸುಂಕಗಳು ಮತ್ತು ಅಲ್ಲಿನ ಸ್ಥಳೀಯ ಆಟೋಮೊಬೈಲ್ ಉದ್ಯಮವನ್ನು ಎದುರಿಸಿ ಕಾರು ಮಾರಾಟ ಮಾಡುವುದು ಅಷ್ಟು ಸುಲಭದ ಮಾತಲ್ಲ ಎಂದು ಸೂಚ್ಯವಾಗಿ ಹೇಳಿದ್ದಾರೆ.

ಪ್ರಪಂಚದ ಪ್ರತಿಯೊಂದು ದೇಶವೂ ನಮ್ಮಿಂದ ಲಾಭ ಪಡೆಯುತ್ತದೆ. ನಮ್ಮ ಸರಕುಗಳ ಮೇಲೆ ಹೆಚ್ಚುವರಿ ಸುಂಕಗಳನ್ನು ವಿಧಿಸು ಮೂಲಕ ಅವರು ಈ ಲಾಭವನ್ನು ಗಳಿಸುತ್ತಿದ್ದಾರೆ. ಈ ಕಾರಣಕ್ಕೆ ಎಲಾನ್ ಮಸ್ಕ್ ಅವರು ಭಾರತದಲ್ಲಿ ತಮ್ಮ ಟೆಸ್ಲಾ ಕಾರುಗಳನ್ನು ಮಾರಾಟ ಮಾಡುವುದು ಪ್ರಾಯೋಗಿಕವಾಗಿ ಅಸಾಧ್ಯ ಎಂದು ಅಮೆರಿಕದ ಅಧ್ಯಕ್ಷರು ಸಂದರ್ಶನದಲ್ಲಿ ಅಭಿಪ್ರಾಯಪಟ್ಟರು. ಮೂಲಗಳ ಪ್ರಕಾರ, ಎಲಾನ್ ಮಸ್ಕ್ ಅವರ ಟೆಸ್ಲಾ ಕಂಪನಿಯು ಈ ವರ್ಷದ ಏಪ್ರಿಲ್‌ನಲ್ಲಿ ಭಾರತೀಯ ಮಾರುಕಟ್ಟೆಗೆ ಪ್ರವೇಶಿಸುವ ನಿರೀಕ್ಷೆಯಿದೆ.



ಭಾರತದ ನವದೆಹಲಿ, ಮುಂಬೈ ನಗರಗಳಲ್ಲಿ ಎರಡು ಶೋರೂಮ್‌ಗಳಿಗೆ ಸ್ಥಳಗಳನ್ನು ಟೆಸ್ಲಾ ನಿಗದಿ ಮಾಡಿದೆ. ಅಲ್ಲದೇ ಭಾರತದಲ್ಲಿ 13 ಮಧ್ಯಮ-ಮಟ್ಟದ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆ ಕೂಡ ಆರಂಭಿಸಿದೆ. ಆದಾಗ್ಯೂ, ಟೆಸ್ಲಾ ಕಂಪನಿಯು ಪ್ರಸ್ತುತ ಭಾರತದಲ್ಲಿ ಯಾವುದೇ ವಾಹನಗಳನ್ನು ತಯಾರಿಸುತ್ತಿಲ್ಲ. ಟೆಸ್ಲಾ ಭಾರತದ ಎಲೆಕ್ಟ್ರಿಕ್ ವಾಹನ (ಇವಿ) ಮಾರುಕಟ್ಟೆಗೆ ಪ್ರವೇಶಿಸುತ್ತದೆ ಎಂಬ ವದಂತಿಗಳು ದೀರ್ಘಕಾಲದಿಂದಲೂ ಹರಿದಾಡುತ್ತಿವೆ. ಆದರೆ ಸ್ಥಳೀಕರಿಸಿದ ಕಾರ್ಖಾನೆ ಹೂಡಿಕೆಗಳು, ನಿಯಮಗಳು ಮತ್ತು ಹೆಚ್ಚಿನ ತೆರಿಗೆಗಳಿಗೆ ಸಂಬಂಧಿಸಿದ ಹಲವಾರು ಅಡೆತಡೆಗಳನ್ನು ಟೆಸ್ಲಾ ಕಂಪನಿ ಎದುರಿಸುತ್ತಿದೆ. ತಮ್ಮ ಅಮೆರಿಕ ಭೇಟಿಯ ಸಂದರ್ಭದಲ್ಲಿ, ಪ್ರಧಾನಿ ಮೋದಿ ಅವರು ಟೆಸ್ಲಾ ಸಿಇಒ ಎಲಾನ್ ಮಸ್ಕ್ ಅವರನ್ನು ಭೇಟಿ ಮಾಡಿದ್ದರು. ಭಾರತವು ಎಲೆಕ್ಟ್ರಿಕ್ ವಾಹನಗಳ ಮೇಲೆ ಶೇ. 100ರಷ್ಟು ಆಮದು ಸುಂಕ ವಿಧಿಸುವುದನ್ನು ನಿಲ್ಲಿಸಬೇಕು ಎಂದು ಈವೇಳೆ ಎಲಾನ್ ಮಸ್ಕ್ ಅವರು ಪ್ರಧಾನಿ ಮೋದಿ ಅವರಲ್ಲಿ ಮನವಿ ಮಾಡಿದ್ದರು. ಆದರೆ ಟಾಟಾ ಮೋಟಾರ್ಸ್‌ನಂತಹ ಸ್ಥಳೀಯ ಆಟೋಮೊಬೈಲ್ ಕಂಪನಿಗಳ ರಕ್ಷಣೆಗೆ, ಭಾರತದ ಈ ಹೆಚ್ಚು ಆಮದು ಸುಂಕ ನೀತಿ ಒಂದು ರೀತಿಯಲ್ಲಿ ಸಹಾಯ ಮಾಡುತ್ತಿದೆ.

> **ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಭಾರತದ ಹೆಚ್ಚುವರಿ ಸುಂಕಗಳನ್ನು ತಪ್ಪಿಸಲು, ಭಾರತದಲ್ಲಿ ಕಾರ್ಖಾನೆಯನ್ನು ನಿರ್ಮಿಸುವ ಟೆಸ್ಲಾದ ಯಾವುದೇ ಸಂಭಾವ್ಯ ಯೋಜನೆಗಳನ್ನು 'ತುಂಬಾ ಅನ್ಯಾಯ' ಎಂದು ಕರೆದಿರುವುದು ಗಮನ ಸೆಳೆದಿದೆ. ಫಾಕ್ಸ್ ನ್ಯೂಸ್‌ನ ಸೀನ್ ಹ್ಯಾನಿಟಿಗಾಗಿ ಟೆಸ್ಲಾ ಸಿಇಒ ಎಲಾನ್ ಮಸ್ಕ್ ಅವರೊಂದಿಗೆ ನೀಡಿದ ಜಂಟಿ ಸಂದರ್ಶನದಲ್ಲಿ ಮಾತನಾಡಿದ ಡೊನಾಲ್ಡ್ ಟ್ರಂಪ್, ಎಲಾನ್ ಮಸ್ಕ್ ಅವರು ಭಾರತದಲ್ಲಿ ತಮ್ಮ ಕಾರನ್ನು ಮಾರಾಟ ಮಾಡುವುದು ಅಸಾಧ್ಯ ಎಂದು ಹೇಳಿದ್ದಾರೆ.**

ಭಾರತದಲ್ಲಿ ಇವಿ ಉತ್ಪಾದನೆ ಮತ್ತು ಮಾರಾಟ ಮಾರುಕಟ್ಟೆ ಆರಂಭಿಕ ಹಂತದಲ್ಲಿದೆಯಾದರೂ, ಕೇಂದ್ರ ಸರ್ಕಾರವು ಇವಿ ಕ್ಷೇತ್ರವನ್ನು ಉತ್ತೇಜಿಸಲು ಹಲವಾರು ಕ್ರಮಗಳನ್ನು ಕೈಗೊಳ್ಳುತ್ತಿದೆ. ಭಾರತ ಸರ್ಕಾರ ಕಳೆದ ಮಾರ್ಚ್‌ನಲ್ಲಿ ತನ್ನ ಹೊಸ ಇವಿ ನೀತಿಯನ್ನು ಅನಾವರಣಗೊಳಿಸಿದ್ದು, ಜಾಗತಿಕ ಇವಿ ಕಾರು ತಯಾರಕರು ಭಾರತದಲ್ಲಿ ಕನಿಷ್ಠ 500 ಮಿಲಿಯನ್ ಅಮೆರಿಕನ್ ಡಾಲರ್ ಹೂಡಿಕೆ ಮಾಡಿದರೆ ಮತ್ತು ಕಾರ್ಖಾನೆಯನ್ನು ಸ್ಥಾಪಿಸಿದರೆ ಆಮದು ತೆರಿಗೆಗಳನ್ನು ಶೇ. 15ರಷ್ಟಕ್ಕೆ ಇಳಿಸುವ ವಾಗ್ದಾನ ಮಾಡಿದೆ.

## ಮಿನಿ ನ್ಯೂಸ್

### ವಿಮಾನ ನಿಲ್ದಾಣದಲ್ಲಿ ಬಾಂಗ್ಲಾದೇಶದ ವಿಮಾನ ತುರ್ತು ಭೂಸ್ಪರ್ಶ

**ನಾಗ್ಪುರ:** ಸುಮಾರು ವಿಮಾನವು396 ಪ್ರಯಾಣಿಕರು ಮತ್ತು 12 ಸಿಬ್ಬಂದಿಗಳೊಂದಿಗೆ ಢಾಕಾದಿಂದ ದುಬೈಗೆ ಹೊರಟಿದ್ದ ಬಿಮನ್ ಬಾಂಗ್ಲಾದೇಶ ಏರ್‌ಲೈನ್ಸ್ ವಿಮಾನವು ಮಹಾರಾಷ್ಟ್ರದ ನಾಗುರ ವಿಮಾನ ನಿಲ್ದಾಣದಲ್ಲಿ ತುರ್ತು ಭೂಸ್ಪರ್ಶ ಮಾಡಿದೆ. ತಾಂತ್ರಿಕ ಸಮಸ್ಯೆಗಳಿಂದಾಗಿ ಮಧ್ಯರಾತ್ರಿಯ ಸುಮಾರಿಗೆ ವಿಮಾನ ತುರ್ತು ಭೂಸ್ಪರ್ಶ ಮಾಡಲಾಯಿತು ಎಂದು ನಾಗುರ ವಿಮಾನ ನಿಲ್ದಾಣದ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

### ವಾಪಸ್ ಬರುತ್ತೇನೆ, ಪ್ರತೀಕಾರ ತೀರಿಸಿಕೊಳ್ಳುತ್ತೇನೆ: ಶೇಖ್ ಹಸೀನಾ

**ಢಾಕಾ:** ನಾನು ವಾಪಸ್ ಬಾಂಗ್ಲಾದೇಶಕ್ಕೆ ಬರುತ್ತೇನೆ. ನಮ್ಮ ಪೊಲೀಸರನ್ನು ಬಲಿ ತೆಗೆದುಕೊಂಡಿದ್ದಕ್ಕಾಗಿ ಪ್ರತೀಕಾರ ತೀರಿಸಿಕೊಳ್ಳುತ್ತೇನೆ ಎಂದು ಭಾರತದಲ್ಲಿ ಆಶ್ರಯ ಪಡೆಯುತ್ತಿರುವ ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಘೋಷಣೆ ಮಾಡಿದ್ದಾರೆ. ಸರ್ಕಾರಿ ಹುದ್ದೆಗಳಲ್ಲಿ ನೀಡುವ ಮೀಸಲಾತಿ ವಿಚಾರವಾಗಿ ವಿದ್ಯಾರ್ಥಿಗಳು ಕಳೆದ ವರ್ಷ ದೊಡ್ಡ ಮಟ್ಟದ ಚಳವಳಿ ನಡೆಸಿದ್ದರು. ಪೊಲೀಸರು, ಪ್ರತಿಭಟನಕಾರರ ನಡುವೆ ಘರ್ಷಣೆ ಉಂಟಾಗಿತ್ತು. ಈ ವೇಳೆ ಮೃತಪಟ್ಟಿದ್ದ ನಾಲ್ವರು ಪೊಲೀಸರ ಪತ್ನಿಯರ ಜೊತೆ ಜೂಮ್ ಮೀಟಿಂಗ್‌ನಲ್ಲಿ ಮಾತನಾಡಿದ ಹಸೀನಾ ಅವರು ದೇಶಕ್ಕೆ ಮರಳುವುದಾಗಿ ಹೇಳಿದ್ದಾರೆ. ಹಂಗಾಮಿ ಪ್ರಧಾನಿ ಮೊಹಮ್ಮದ್ ಯೂನುಸ್ ಸರ್ಕಾರದ ವಿರುದ್ಧವೂ ಹರಿಹಾಯ್ದಿರುವ ಹಸೀನಾ, ಅವರು (ಯೂನಸ್) ದೇಶವನ್ನು ನಾಶ ಮಾಡಿದ್ದಾರೆ.

ಭಯೋತ್ಪಾದಕರ ಕೈಯಲ್ಲಿ ಸರ್ಕಾರ ನೀಡಿದ್ದಾರೆ. ಯೂನುಸ್ ಒಬ್ಬ ದಂಗೆಕೋರ. ನಾನು ವಾಪಸು ಬರುತ್ತೇನೆ. ಭಯೋತ್ಪಾದಕರು ತುಂಬಿರುವ ಈ ಸರ್ಕಾರವನ್ನು ಉರುಳಿಸುತ್ತೇನೆ ಎಂದರು.



ಭದ್ರತಾ ಸಿಬ್ಬಂದಿ ಹತ್ಯೆ ಮಾಡಿದ ಪ್ರಕರಣದ ಸಂಬಂಧ ರೂಪಿಸಲಾಗಿದ್ದ ಎಲ್ಲಾ ತನಿಖಾ ಸಮಿತಿಗಳನ್ನು ಯೂನುಸ್ ಸರ್ಕಾರ ರದ್ದು ಮಾಡಿದೆ. ನಾನು ದೇಶದ ಬಿಡುವ ಸಂದರ್ಭದಲ್ಲಿ ನನ್ನ ಹತ್ಯೆಗೆ ಸಂಚು ನಡೆದಿತ್ತು. ದೇವರ ದಯೆ, ನಾನು ಬದುಕಿದ್ದೇನೆ ಎಂದರು. ತಮ್ಮ ಅವಾಮಿ ಪಕ್ಷದ ಕಾರ್ಯಕರ್ತರೊಂದಿಗೆ ಹಸೀನಾ ಅವರು ನಿರಂತರವಾಗಿ ಆನ್‌ಲೈನ್ ಮೀಟಿಂಗ್‌ಗಳ ಮೂಲಕ ಸಂಪರ್ಕದಲ್ಲಿ ಇರುತ್ತಾರೆ ಎಂದು 'ದಿ ಟ್ರಿಬ್ಯೂನ್' ಪತ್ರಿಕೆ ವರದಿ ಮಾಡಿದೆ.

## ಭೂಮಿಯತ್ತ ಬರುತ್ತಿದೆ ಸಿಟಿ ಕಿಲ್ಲರ್ ಕ್ಷುದ್ರಗ್ರಹ

**ನವದೆಹಲಿ:** ಮುಂಬರುವ 2032ರಲ್ಲಿ ವಿನಾಶಕಾರಿ ಕ್ಷುದ್ರಗ್ರಹವು ಭೂಮಿಗೆ ಅಪ್ಪಳಿಸುವ ಸಾಧ್ಯತೆ ಏರಿದೆ ಎಂದು ನಾಸಾ ತಿಳಿಸಿದೆ. ಡಿಸೆಂಬರ್ 22, 2032ಕ್ಕೆ ಭೂಮಿಗೆ ಈ ಕ್ಷುದ್ರಗ್ರಹ ಅಪ್ಪಳಿಸುವ ಸಾಧ್ಯತೆ ಶೇ.3.1ರಷ್ಟು ಹೆಚ್ಚಾಗಿದೆ. ಅಮೆರಿಕದ ಬಾಹ್ಯಾಕಾಶ ಸಂಸ್ಥೆ ನಾಸಾ ಈ ಕ್ಷುದ್ರಗ್ರಹದ ಪಥವನ್ನು ಟ್ರಾಕ್ ಮಾಡುತ್ತಿದ್ದು, ಅಚ್ಚರಿಯ ಅಂಶಗಳನ್ನು ರಿವೀಲ್ ಮಾಡಿದೆ. ಅದರಲ್ಲೂ ವಿಶ್ವದ ಅತ್ಯಂತ ಹೆಚ್ಚು ಜನಸಂಖ್ಯೆ ಹೊಂದಿರುವ ಏಳು ನಗರಗಳನ್ನು ಅಪಾಯದ ಅಂಚಿಗೆ ಈ ಕ್ಷುದ್ರಗ್ರಹ ತಂದು ನಿಲ್ಲಿಸಿದ್ದು, ಅದಕ್ಕಾಗಿಯೇ 2024 ಜಖ4 ಎಂಬ ಕ್ಷುದ್ರಗ್ರಹಕ್ಕೆ ಸಿಟಿ ಕಿಲ್ಲರ್ ಎಂದು ವಿಜ್ಞಾನಿಗಳು ಕರೆಯುತ್ತಿದ್ದಾರೆ. ಈ ಕ್ಷುದ್ರಗ್ರಹ ಭೂಮಿಗೆ ಅಪ್ಪಳಿಸುವ ಸಾಧ್ಯತೆ ಶೇ.3.1 ರಷ್ಟಿದ್ದು ಮತ್ತಷ್ಟು ಆತಂಕ ಹೆಚ್ಚಿಸಿದೆ.




ಈ ಮೊದಲು ಸಾನಾ ಈ ಕ್ಷುದ್ರಗ್ರಹ ಭೂಮಿಗೆ ಅಪ್ಪಳಿಸುವ ಸಾಧ್ಯತೆ 1. ರಷ್ಟಿದೆ ಎಂದು ಹೇಳಿತ್ತು. ನಂತರ ಇನ್ನಷ್ಟು ಅಧ್ಯಯನದ ಬಳಿಕ ಈ ಕ್ಷುದ್ರಗ್ರಹ ಭೂಮಿಗೆ ಅಪ್ಪಳಿಸುವ ಸಾಧ್ಯತೆ ಶೇ.3.1 ರಷ್ಟಿದೆ ಎಂದು ಹೇಳಿದೆ. ಕ್ಷುದ್ರಗ್ರಹ ಅಂದಾಜು 177 ಅಡಿ ವ್ಯಾಸವನ್ನು ಹೊಂದಿದೆ. ಇದು ಸರಿಸುಮಾರು ದೊಡ್ಡ ಕಟ್ಟಡದ ಗಾತ್ರ. ಆದರೆ ಮಾನವ ನಾಗರಿಕತೆಯನ್ನು ಕೊನೆಗೊಳಿಸಲು ಇದು ತುಂಬಾ ಚಿಕ್ಕದಾಗಿದ್ದರೂ, ಒಂದು ಪ್ರಮುಖ ನಗರವನ್ನು ಅಳಿಸಿ ಹಾಕಬಹುದು. ಇದರ ಬಗ್ಗೆ ನಾನು ಭಯಪಡುತ್ತಿಲ್ಲ ಎಂದು ಪ್ಲಾನೆಟರಿ ಸೊಸೈಟಿಯ ಮುಖ್ಯ ವಿಜ್ಞಾನಿ ಬ್ರೂಸ್ ಬೆಟ್ಸ್ ಹೇಳಿದ್ದಾರೆ. ಆದರೆ ಸ್ವಾಭಾವಿಕವಾಗಿ ನೀವು ಭೂಮಿಗೆ ಡಿಕ್ಕಿ ಹೊಡೆಯುವುದನ್ನು ಶೇಕಡಾವಾರು ಹೆಚ್ಚಾಗುವುದನ್ನು ನೋಡಿದಾಗ, ಅದು ನಿಮಗೆ ಆತಂಕ, ಅಸ್ಪಷ್ಟತೆ ಅನುಭವ ತರುತ್ತದೆ ಎಂದು ಅವರು ಹೇಳಿದರು.

> **ಅಂಕಿ ಅಂಶವು ಏರಿಳಿತ**
>
> **ಮೊದಲ ಬಾರಿಗೆ ಕಳೆದ ವರ್ಷ ಡಿ.27 ರಂದು ಚಿಲಿಯ ಎಲ್ ಸಾಸ್ ವೀಕ್ಷಣಾಲಯ ಕ್ಷುದ್ರಗ್ರಹ ಪತ್ತೆಹಚ್ಚಿತು. ವಿಶ್ವಾದ್ಯಂತ ಗ್ರಹ ರಕ್ಷಣಾ ಸಹಯೋಗವಾದ ಅಂತರರಾಷ್ಟ್ರೀಯ ಕ್ಷುದ್ರಗ್ರಹ ಎಚ್ಚರಿಕೆ ಜಾಲ ಈ ವರ್ಷದ ಜನವರಿಯಲ್ಲಿ ಪರಿಣಾಮದ ಸಂಭವನೀಯತೆ 1% ದಾಟಿದ ನಂತರ ಎಚ್ಚರಿಕೆ ಜ್ಞಾಪಕ ಪತ್ರವನ್ನು ನೀಡಿತು. ಅಂದಿನಿಂದ, ಈ ಅಂಕಿ ಅಂಶವು ಏರಿಳಿತಗೊಂಡಿದೆ ಆದರೆ ಇನ್ನೂ ಮೇಲಕ್ಕೆ ಸಾಗುತ್ತಿದೆ.**

ಆದರೆ ಖಗೋಳಶಾಸ್ತ್ರಜ್ಞರು ಹೆಚ್ಚಿನ ಡೇಟಾವನ್ನು ಸಂಗ್ರಹಿಸುತ್ತಿದ್ದಂತೆ, ಸಂಭವನೀಯ ವೇಗ ಶೂನ್ಯಕ್ಕೆ ಇಳಿಯುವ ಮೊದಲು ಹೆಚ್ಚಾಗುತ್ತದೆ ಎಂದು ಅವರು ವಿವರಿಸಿದರು. 2032 ರಲ್ಲಿ ಭೂಮಿಗೆ ಪ್ರಮುಖ ಕ್ಷುದ್ರಗ್ರಹ ಅಪ್ಪಳಿಸುವ ಅವಕಾಶವನ್ನು ಹೆಚ್ಚಿಸಿದೆ, ಕಳೆದ ವಾರ 2.6% ರಷ್ಟಿತ್ತು. ಈಗ ಅದು -3ಕ್ಕೆ1 ಎಂದು ಹೇಳಿದೆ. ನಾಸಾದ ಇತ್ತೀಚಿನ ಲೆಕ್ಕಾಚಾರಗಳ ಪ್ರಕಾರ ಸಂಭವನೀಯ ಘರ್ಷಣೆಯ ದಿನಾಂಕ ಡಿಸೆಂಬರ್ 22, 2032. ಆದಾಗ್ಯೂ, ಕ್ಷುದ್ರಗ್ರಹವು ಭೂಮಿಯನ್ನು ಸಂಪೂರ್ಣವಾಗಿ ತಪ್ಪಿಸಿಕೊಳ್ಳುವ ಸಾಧ್ಯತೆ ಇನ್ನೂ 96.9% ಇದೆ ಎಂದು ತಜ್ಞರು ಹೇಳಿದ್ದಾರೆ, ಮತ್ತು ಸಂಶೋಧಕರು ಅದರ ಪಥದ ಬಗ್ಗೆ ಇನ್ನಷ್ಟು ತಿಳಿದುಕೊಳ್ಳುತ್ತಿದ್ದಂತೆ, ದತ್ತಾಂಶದಲ್ಲಿನ ಅದರ ಪ್ರಸ್ತುತ ಅಪಾಯದ ಮಟ್ಟವನ್ನು ಆಧರಿಸಿ, ಘರ್ಷಣೆಯ ಸಾಧ್ಯತೆಗಳು 0% ಕ್ಕೆ ಕಡಿಮೆಯಾಗುವ ಸಾಧ್ಯತೆಯಿದೆ.

## ಮಸೀದಿ ಮುಂಭಾಗ ಮಹಾರಾಣಾ ಪ್ರತಾಪ್ ಪ್ರತಿಮೆ ಸ್ಥಾಪನೆ

**ಹಮೀರ್ ಪುರ:** ಹಿಮಾಚಲ ಪ್ರದೇಶದ ಸುಜಾನ್ ಪುರ ತಿರಾದಲ್ಲಿ ಮಸೀದಿ ಮುಂಭಾಗದಲ್ಲಿ ಮಹಾರಾಣಾ ಪ್ರತಾಪ್ ಪ್ರತಿಮೆ ನಿರ್ಮಾಣಕ್ಕೆ ಮುಸ್ಲಿಂ ಸಮುದಾಯ ಸಲ್ಲಿಸಿದ್ದ ಆಕ್ಷೇಪಣೆಯನ್ನು ಹಿಂಪಡೆದಿದೆ. ಪ್ರತಿಮೆ ಸ್ಥಾಪನೆಗೆ ಮುಸ್ಲಿಂ ಸುಧಾರ್ ಸಭಾ ಬೆಂಬಲ ವ್ಯಕ್ತಪಡಿಸಿದೆ. ಸಮುದಾಯದ ಕೆಲವರು ಪ್ರತಿಮೆ ಸ್ಥಾಪನೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ನಗರ ಪರಿಷತ್ ಕಾರ್ಯಕಾರಿ ಅಧಿಕಾರಿ ಅಜ್ಮೀರ್ ಠಾಕೂರ್ ಗುರುವಾರ ಹೇಳಿದ್ದಾರೆ. ವಾರ್ಡ್ ಸಂಖ್ಯೆ 4 ರಲ್ಲಿ ಮಸೀದಿಯ ಮುಂಭಾಗದ ಉದ್ಯಾನವನದಲ್ಲಿ ಮಹಾರಾಣಾ ಪ್ರತಾಪ್ ಪ್ರತಿಮೆಯನ್ನು ಸ್ಥಾಪಿಸದಂತೆ ಮುಸ್ಲಿಂ ಸಮುದಾಯದ ನಿಯೋಗವು ಹಮೀರ್‌ಪುರ ಆಡಳಿತಕ್ಕೆ ಮನವಿ ಸಲ್ಲಿಸಿದ ಎರಡು ದಿನಗಳ ನಂತರ ಈ ಬೆಳವಣಿಗೆಯಾಗಿದೆ.

ಮನವಿ ಪತ್ರಕ್ಕೆ ಪ್ರತಿಕ್ರಿಯಿಸಿದ ವಿಶ್ವ ಹಿಂದೂ ಪರಿಷತ್, ಅನುಮೋದಿತ ಸ್ಥಳದಲ್ಲಿ ಪ್ರತಿಮೆ ಸ್ಥಾಪಿಸುವ ನಿರ್ಧಾರದಿಂದ ಹಿಂದೆ ಸರಿಯದಂತೆ ಆಡಳಿತಕ್ಕೆ ಹೇಳಿತ್ತು. ಈ ವಿಷಯದ ಬಗ್ಗೆ ಗಮನ ಹರಿಸುವಂತೆ ಜಿಲ್ಲಾಧಿಕಾರಿ ಉಪ ವಿಭಾಗೀಯ ಮ್ಯಾಜಿಸ್ಟ್ರೇಟ್ ಅವರಿಗೆ ಸೂಚಿಸಿದ್ದರು.

ನನ್ನ ಕಚೇರಿಗೆ ಆಗಮಿಸಿದ್ದ ಮುಸ್ಲಿಂ ಸುಧಾರ್ ಸಭಾ ಮುಖ್ಯಸ್ಥರು ಹಾಗೂ ಸಮಿತಿ ಸದಸ್ಯರು ಪ್ರತಿಮೆ ಸ್ಥಾಪನೆಗೆ ಬೆಂಬಲ ವ್ಯಕ್ತಪಡಿಸಿರುವುದಾಗಿ ಪತ್ರ ಸಲ್ಲಿಸಿದ್ದಾರೆ. ಪಾರ್ಕ್ ನಲ್ಲಿ ಪ್ರತಿಮೆ ನಿರ್ಮಾಣವನ್ನು ಸ್ವಾಗತಿಸಿದ್ದು, ಎರಡೂ ಸಮುದಾಯಗಳು ಶಾಂತಿಯುತ

> **ನನ್ನ ಕಚೇರಿಗೆ ಆಗಮಿಸಿದ್ದ ಮುಸ್ಲಿಂ ಸುಧಾರ್ ಸಭಾ ಮುಖ್ಯಸ್ಥರು ಹಾಗೂ ಸಮಿತಿ ಸದಸ್ಯರು ಪ್ರತಿಮೆ ಸ್ಥಾಪನೆಗೆ ಬೆಂಬಲ ವ್ಯಕ್ತಪಡಿಸಿರುವುದಾಗಿ ಪತ್ರ ಸಲ್ಲಿಸಿದ್ದಾರೆ. ಪಾರ್ಕ್‌ನಲ್ಲಿ ಪ್ರತಿಮೆ ನಿರ್ಮಾಣವನ್ನು ಸ್ವಾಗತಿಸಿದ್ದು, ಎರಡೂ ಸಮುದಾಯಗಳು ಶಾಂತಿಯುತ ಸಹಭಾಳ್ವೆ ನಡೆಸಲು ಸಮಿತಿ ಮುಖಂಡರು ಹೇಳಿದ್ದಾರೆ**

ಸಹಭಾಳ್ವೆ ನಡೆಸಲು ಸಮಿತಿ ಮುಖಂಡರು ಹೇಳಿದ್ದಾರೆ ಎಂದು ಠಾಕೂರ್ ತಿಳಿಸಿದ್ದಾರೆ. ಪ್ರತಿಮೆ ಸ್ಥಾಪನೆಗೆ ವಿರೋಧ ವ್ಯಕ್ತಪಡಿಸಿ ಸಲ್ಲಿಸಲಾಗಿದ್ದ ಅರ್ಜಿಯನ್ನು ಹಿಂಪಡೆದಿದ್ದೇವೆ ಎಂದು ಸಮಿತಿ ಸದಸ್ಯರು ಹೇಳಿದ್ದಾರೆ. ಸೋಮವಾರ ರಾತ್ರಿ ಮುಸ್ಲಿಂ ನಿಯೋಗ ಜಿಲ್ಲಾಡಳಿತಕ್ಕೆ ಮನವಿ ಪತ್ರ ಸಲ್ಲಿಸಿತ್ತು. ಈ ವಿಡಿಯೋ ವೈರಲ್ ಆಗಿತ್ತು. ಮಾರನೇ ದಿನ ಸ್ಥಳೀಯ ಸಂಸ್ಥೆ ಸೂಚಿಸಿದ್ದ ಸ್ಥಳದಲ್ಲಿ ಪ್ರತಿಮೆ ಸ್ಥಾಪನೆ ಮಾಡಲಾಗುವುದು ಎಂದು ವಿಶ್ವ ಹಿಂದೂ ಪರಿಷತ್ ಹೇಳಿತ್ತು. ಮಹಾರಾಣಾ ಪ್ರತಾಪ್ ಪ್ರತಿಮೆಗೆ ವಿರೋಧ ವ್ಯಕ್ತಪಡಿಸುವುದು ನ್ಯಾಯ ಸಮ್ಮತವಲ್ಲ. ಹೊರಗಡೆಯಿಂದ ಬಂದಿರುವ ಮುಸ್ಲಿಂ ಮುಖಂಡರು ಹಿಂದೂ ವಿರೋಧಿ ಭಾವನೆ ಸೃಷ್ಟಿಸುತ್ತಿದ್ದಾರೆ ಎಂದು ವಿಶ್ವ ಹಿಂದೂ ಪರಿಷತ್ ಮುಖಂಡ ಪಂಕಜ್ ಭಾರತೀಯ ಹೇಳಿದ್ದಾರೆ.



## ಬಾಲಕಿ ಮೇಲೆ 75 ವರ್ಷದ ಮಠಾಧೀಶ, ಸಹಚರನಿಂದ ಅತ್ಯಾಚಾರ

**ಮುಂಬೈ:** ಅಪ್ರಾಪ್ತ ಬಾಲಕಿ ಮೇಲೆ ಅತ್ಯಾಚಾರ ಎಸಗಿದ ಆರೋಪದ ಮೇಲೆ ಮಹಾರಾಷ್ಟ್ರದ ಅಮರಾವತಿ ಜಿಲ್ಲೆಯ ಮಠವೊಂದರ 75 ವರ್ಷದ ಮಠಾಧೀಶ ಮತ್ತು ಆತನ ಸಹಚರನನ್ನು ಪೊಲೀಸರು ಬಂಧಿಸಿದ್ದಾರೆ ಎಂದು ಗುರುವಾರ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. 17 ವರ್ಷದ ಸಂತ್ರಸ್ತೆಯ ಸಂಬಂಧಿ ಮಹಿಳೆಯನ್ನೂ ಬಂಧಿಸಲಾಗಿದೆ ಎಂದು ಅವರು ಹೇಳಿದರು. ಬಾಲಕಿ ತನ್ನ ಪೋಷಕರೊಂದಿಗೆ ಮಂಗಳವಾರ ಸಂಜೆ ಅಮರಾವತಿಯ ಶಿರ್ಖೇಡ್ ಪೊಲೀಸ್ ಠಾಣೆಗೆ ಬಂದು ರಿದ್ಧಾಪುರ ಮಠದ ಮಠಾದೀಶ ಮತ್ತು ಇತರರ ವಿರುದ್ಧ ದೂರು ನೀಡಿದ್ದಾಳೆ. ವೈದ್ಯಕೀಯ ಪರೀಕ್ಷೆಯಲ್ಲಿ ಬಾಲಕಿ ಎಂಟು ತಿಂಗಳ ಗರ್ಭಿಣಿ ಎಂಬುದು ಬೆಳಕಿಗೆ ಬಂದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ದೂರುದಾರರ ಪ್ರಕಾರ, ಬಾಲಕಿ ತನ್ನ ಚಿಕ್ಕಪ್ಪ ಮತ್ತು ಚಿಕ್ಕಮ್ಮನೊಂದಿಗೆ ಕಳೆದ ಒಂದು ವರ್ಷದಿಂದ ಸೇವೆಗಾಗಿ ಮಠದಲ್ಲಿಯೇ ತಂಗಿದ್ದಳು. ಈ ವೇಳೆ, ತನ್ನನ್ನು ಭೇಟಿಯಾಗಲು ಬಾಲಕಿಯನ್ನು ಕಳುಹಿಸುವಂತೆ 2024ರ ಏಪ್ರಿಲ್ 2 ರಂದು ಮಠಾಧೀಶರು ಸಂತ್ರಸ್ತೆಯ ಚಿಕ್ಕಮ್ಮನಿಗೆ ಕೇಳಿದ್ದಾರೆ. ಆಕೆಯ ಚಿಕ್ಕಮ್ಮ ಬಾಲಕಿಯನ್ನು ಮಠಾಧೀಶರಾದ ಸುರೇಂದ್ರಮುನಿ ತಾಳೇಗಾಂವ್ಕರ್ ಅವರ ಕೋಣೆಗೆ ಕಳುಹಿಸಿದ್ದಾರೆ. ಅಲ್ಲಿ ಅವರು ಬಾಲಕಿ ಮೇಲೆ ಅತ್ಯಾಚಾರ ಎಸಗಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ. ಮಠದಲ್ಲೇ ಇರುವ ಬಾಳಾಸಾಹೇಬ್ ದೇಸಾಯಿ (40) ಎಂಬಾತನೂ ಬಾಲಕಿ ಮೇಲೆ ಅತ್ಯಾಚಾರ ಎಸಗಿದ್ದಾನೆ. ಆರೋಪಿಗಳಿಬ್ಬರೂ ಹಲವು ತಿಂಗಳು ಬಾಲಕಿ ಮೇಲೆ ಕೃತ್ಯ ಎಸಗಿದ್ದಾರೆ. ಸಂತ್ರಸ್ತೆ ಆರಂಭದಲ್ಲಿ ತನ್ನ ಚಿಕ್ಕಮ್ಮನಿಗೆ ಈ ವಿಚಾರ ತಿಳಿಸಿದ್ದಾಳೆ. ಆದರೆ, ಆಕೆ ಸುಮ್ಮನಿರುವಂತೆ ಬಾಲಕಿಗೆ ಬೆದರಿಸಿದ್ದಾಳೆ.


ಇದರಿಂದಾಗಿ ಆರೋಪಿಗಳಿಬ್ಬರೂ ಸಂತ್ರಸ್ತೆಗೆ ಲೈಂಗಿಕ ಕಿರುಕುಳ ನೀಡುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಪ್ರಕರಣದ ಕುರಿತು ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ನೀವೀಗ ಎಲ್ಲಿಗೆ ಹೋದರೂ ವ್ಯವಸ್ಥೆ ನಿಮ್ಮನ್ನು ತುಳಿಯುತ್ತದೆ: ರಾಹುಲ್

**ಇದು ನಿಮ್ಮ ಸಂವಿಧಾನ**

**ರಾಯಬರೇಲಿ:** ಸಂವಿಧಾನ ರಚನೆಗೆ ದಲಿತರು ನೀಡಿದ ಕೊಡುಗೆಯನ್ನು ಶ್ಲಾಘಿಸಿದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಇದು ನಿಮ್ಮ ಸಿದ್ಧಾಂತ, ಆದರೆ ನೀವು ಈಗ ಎಲ್ಲಿಗೆ ಹೋದರೂ ನೀವು ವ್ಯವಸ್ಥೆಯಿಂದ ತುಳಿತಕ್ಕೊಳಗಾಗಿದ್ದೀರಿ ಎಂದು ಹೇಳಿದರು. ಲೋಕಸಭೆಯ ವಿರೋಧ ಪಕ್ಷದ ನಾಯಕ ಮತ್ತು ರಾಯಬರೇಲಿ ಸಂಸದ ಇಲ್ಲಿನ ಬರ್ಗಡ್ ಚೌರಾಹಾ ಬಳಿಯ ಮೂಲ ಭಾರತಿ ಹಾಸ್ಟೆಲ್‌ನ ದಲಿತ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ರಾಹುಲ್ ಗಾಂಧಿ ಅವರ ಜೊತೆ ಕಾಂಗ್ರೆಸ್ ಅಮೇಥಿ ಸಂಸದ ಕಿಶೋರಿ ಲಾಲ್ ಶರ್ಮಾ, ಪಕ್ಷದ ಇತರ ಮುಖಂಡರು ಇದ್ದರು. ದೊಡ್ಡ 500 ಸಂಸ್ಥೆಗಳ ಭಾಗವಾಗಿರುವ ಕೆಲವು ಉನ್ನತ ಖಾಸಗಿ ಕಂಪನಿಗಳನ್ನು ಹೆಸರಿಸಿದ ರಾಹುಲ್, ಅದ ರಲ್ಲಿ ಎಷ್ಟು ದಲಿತರು ಆ ಕಂಪನಿಗಳ ಚುಕ್ಕಾಣಿ ಹಿಡಿ ದಿದ್ದಾರೆ ಎಂದು ಯುವ ಕರನ್ನು ಪ್ರಶ್ನಿಸಿದರು.


ಆಗ ಓರ್ವ ವಿದ್ಯಾರ್ಥಿ ಯಾರೂ ಇಲ್ಲ ಎಂದು ಪ್ರತಿಕ್ರಿಯಿಸಿದಾಗ, ಏಕೆ ಎಂದು ರಾಹುಲ್ ಗಾಂಧಿ ಅತನನ್ನು ಪ್ರಶ್ನಿ ಸಿದರು. ಆಗ ಮತ್ತೊಬ್ಬ ವಿದ್ಯಾ ರ್ಥಿ, ನಮಗೆ ಸೂಕ್ತ ಸೌಲಭ್ಯಗಳಿಲ್ಲದ ಕಾರಣ ಎಂದು ಉತ್ತರಿಸಿದರು. ಅದನ್ನು ಒಪ್ಪಿ ಕೊಳ್ಳದ ರಾಹುಲ್ ಗಾಂಧಿ, ಡಾ. ಬಿಆರ್ ಅಂಬೇಡ್ಕರ್ ಜಿ ಕೂಡ ಯಾವುದೇ ಸೌಲಭ್ಯವನ್ನು ಹೊಂದಿರಲಿಲ್ಲ. ಅವರು ತಮ್ಮ ಪ್ರಯತ್ನದಲ್ಲಿ ಏಕಾಂಗಿಯಾಗಿದ್ದರೂ ಕೂಡ ಅವರು ದೇಶದ ರಾಜಕೀಯವನ್ನು ಅಲ್ಲಾಡಿಸಿದರು' ಎಂದರು. ಇಡೀ ವ್ಯವಸ್ಥೆಯು ನಿಮ್ಮ ವಿರುದ್ಧವಾಗಿದೆ, ನೀವು ಏಳಿಗೆ ಕಾಣುವುದನ್ನು ಅದು ಬಯಸುವುದಿಲ್ಲ. ಈ ವ್ಯವಸ್ಥೆಯು ಪ್ರತಿದಿನ ನಿಮ್ಮ ಮೇಲೆ ದಾಳಿ ಮಾಡುತ್ತದೆ ಅರ್ಧದಷ್ಟು ಸಮಯ ಅದು ನಿಮ್ಮ ಮೇಲೆ ಹೇಗೆ ದಾಳಿ ಮಾಡಿತು ಎಂಬುದು ಕೂಡ ನಿಮಗೆ ತಿಳಿದಿರುವುದಿಲ್ಲ ಎಂದು ಹೇಳಿದರು. ಸಂವಿಧಾನದ ಸಿದ್ಧಾಂತವೇ ನಿಮ್ಮ ಸಿದ್ಧಾಂತ ಎಂಬುದನ್ನು ನೀವು ಅರ್ಥ ಮಾಡಿಕೊಳ್ಳಬೇಕು. ಈ ದೇಶದಲ್ಲಿ ದಲಿತರು ಇಲ್ಲದಿದ್ದರೆ, ಸಂವಿಧಾನ ಬರುತ್ತಿರಲಿಲ್ಲ ಎಂದು ನಾನು ನಿಮಗೆ ಖಚಿತವಾಗಿ ಹೇಳಬಲ್ಲೆ. ಇದು ನಿಮ್ಮ ಸಿದ್ಧಾಂತ, ಇದು ನಿಮ್ಮ ಸಂವಿಧಾನ ಆದರೆ ನೀವು ಈಗ ಎಲ್ಲಿಗೆ ಹೋದರೂ ವ್ಯವಸ್ಥೆಯಿಂದ ತುಳಿತಕ್ಕೊಳಗಾಗಿದ್ದೀರಿ' ಎಂದು ರಾಹುಲ್ ತಿಳಿಸಿದರು. ರಾಹುಲ್ ಗಾಂಧಿಯವರು ಇಂದಿ ನಿಂದ ತಮ್ಮ ಸಂಸದೀಯ ಕ್ಷೇತ್ರಕ್ಕೆ ಎರಡು ದಿನಗಳ ಪ್ರವಾಸದಲ್ಲಿದ್ದಾರೆ. ರಾಹುಲ್ ಗಾಂಧಿ ಅವರ ಜೊತೆ ಅಮೇಥಿ ಸಂಸದ ಕಿಶೋರಿ ಲಾಲ್ ಶರ್ಮಾ ಮತ್ತು ಪಕ್ಷದ ಇತರ ಮುಖಂಡರು ಇದ್ದರು.





### ಪೊಲೀಸ್ ಮಾಹಿತಿದಾರರೆಂದು ಶಂಕಿಸಿ ಇಬ್ಬರನ್ನು ಹತ್ಯೆಗೈದ ನಕ್ಸಲರು

**ದಾಂತೇವಾಡ:** ಛತ್ತೀಸಗಢದ ದಾಂತೇವಾಡ ಜಿಲ್ಲೆಯಲ್ಲಿ ಪೊಲೀಸ್ ಮಾಹಿತಿದಾರರು ಎಂದು ಶಂಕಿಸಿ ನಕ್ಸಲರು ಇಬ್ಬರು ವ್ಯಕ್ತಿಗಳನ್ನು ಹತ್ಯೆ ಮಾಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಬರ್ಸೂರ್ ಪೊಲೀಸ್ ಠಾಣಾ ವ್ಯಾಪ್ತಿಯ ತೊಡ್ಮಾ ಗ್ರಾಮದಲ್ಲಿ ಈ ಘಟನೆ ನಡೆದಿದೆ.

ಈ ಕುರಿತು ಭದ್ರತಾ ಸಿಬ್ಬಂದಿಗೆ ಮಾಹಿತಿ ನೀಡಲಾಗಿದ್ದು, ದಾಂತೇವಾಡ-ಬಿಜಾ ಪುರ ಜಿಲ್ಲೆಯ ಗಡಿಯಲ್ಲಿರುವ ಅರಣ್ಯಕ್ಕೆ ತೆರಳಿದ್ದಾರೆ. ಘಟನೆ ಕುರಿತು ಶೋಧ ಕಾರ್ಯಾಚರಣೆ ನಡೆಸಲಾಗುತ್ತಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ಹೇಳಿದ್ದಾರೆ. ಬಮನ್ ಕಶ್ಯಪ್ (29), ಅನಿಸ್ ರಾಮ್ ಪೋಯಮ್ (38) ಮೃತರು. ಇತ್ತೀಚೆಗೆ ಬಿಜಾಪುರ ಜಿಲ್ಲೆಯ ಗಡಿಯಲ್ಲಿರುವ ಅರ ಣ್ಯದಲ್ಲಿ ಭದ್ರತಾ ಸಿಬ್ಬಂದಿ ಜೊತೆಗೆ ನಡೆದ ಗುಂಡಿನ ಚಕಮಕಿಯಲ್ಲಿ 31 ನಕ್ಸಲರು ಹತರಾಗಿದ್ದರು.



## ಮಮತಾಗೆ ರಾಜ್ಯಪಾಲರ ತಿರುಗೇಟು




**ಕೊಲ್ಕತ್ತಾ:** ಉತ್ತರ ಪ್ರದೇಶದ ಪ್ರಯಾಗ್ ರಾಜ್‌ನಲ್ಲಿ ನಡೆಯುತ್ತಿರುವ ಮಹಾಕುಂಭ ಮೇಳವನ್ನು 'ಮುಕ್ತಿ ಮೇಳ' ಎಂದು ಪಶ್ಚಿಮ ಬಂಗಾಳ ರಾಜ್ಯಪಾಲ ಸಿ.ವಿ. ಆನಂದ್ ಬೋಸ್ ಗುರುವಾರ ಹೇಳಿದ್ದಾರೆ.

ಈ ಮೂಲಕ ಕುಂಭ ಮೇಳ ಮೃತ್ಯುಕುಂಭ ಎಂದಿದ್ದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವ ರಿಗೆ ತಿರುಗೇಟು ನೀಡಿದ್ದಾರೆ. ರಾಷ್ಟ್ರ ರಾಜಧಾನಿಯಲ್ಲಿ ನಡೆದ ಕಾಲ್ತುಳಿತದಲ್ಲಿ 18 ಜನರ ಸಾವನ್ನು ಉಲ್ಲೇಖಿಸಿ ಮಹಾ ಕುಂಭ ಮೇಳವನ್ನು ಮೃತ್ಯುಕುಂಭ ಎಂದು ಮಮತಾ ಬ್ಯಾನರ್ಜಿ ಹೇಳಿದ್ದರು. ಈ ಹೇಳಿಕೆ ಕುರಿತು ಸುದ್ದಿಗಾರರೊಂದಿಗೆ ಮಾತ ನಾಡಿದ ರಾಜ್ಯಪಾಲರು, ಕುಂಭ ಮೇಳ ಆಚರಣೆಯಲ್ಲಿ ವಿನಮ್ರನಾಗಿ ಪಾಲ್ಗೊಳ್ಳಲು ಅಲ್ಲಿಗೆ ಹೋಗಿದ್ದೆ. ಕುಂಭ ಮೇಳ ಮುಕ್ತಿ ಮೇಳ, ಮೃತ್ಯುಂಜಯ ಮೇಳ ಎಂದು ಬಣ್ಣಿಸಿದರು. ಆನಂದ್ ಬೋಸ್ ಅವರು ಕೂಡಾ ಪ್ರಯಾಗ್ ರಾಜ್‌ಗೆ ತೆರಳಿ ಸಂಗಮದಲ್ಲಿ ಪುಣ್ಯ ಸ್ನಾನ ಮಾಡಿದ್ದರು.

ನಿಮಗೆ ಗೊತ್ತಾ, ಕುಂಭಮೇಳವನ್ನು ಭಾರತ ಹೊಂದಿರುವ ಶ್ರೇಷ್ಠ ಸಂಪ್ರದಾಯದ ಪ್ರತೀಕವಾಗಿ ನೋಡುತ್ತೇನೆ. ಕುಂಭವು ದೇವರೊಂದಿಗಿನ ಸಹಭಾಗಿತ್ವವಾಗಿದೆ. ಜನಸಾಮಾನ್ಯರು ಸ್ವಯಂ ಪ್ರೇರಣೆಯಿಂದ ಅಲ್ಲಿಗೆ ಬರುತ್ತಿದ್ದಾರೆ. ಲಕ್ಷ ಲಕ್ಷ ಜನ ತಾವಾಗಿಯೇ ಅಲ್ಲಿಗೆ ಬಂದಿದ್ದರು. ಇದು ಆಕಾಶದೊಂದಿಗೆ ಭೂಮಿ, ದೇವರೊಂದಿಗೆ ಮಾನವ ಮತ್ತು ಆಂತರಿಕ ಪ್ರಪಂಚವನ್ನು ಬಾಹ್ಯ ಪ್ರಪಂಚದೊಂದಿಗೆ ಸಂಪರ್ಕಿಸುವ ಕಾಮನಬಿಲ್ಲಿನ ಸೇತುವೆ. ಭಾರತದ ಸಂಪ್ರದಾಯ ಮತ್ತು ಸಂಸ್ಕೃತಿಯ ಶ್ರೇಷ್ಠತೆ ಎಂದು ಭಾವಿಸುತ್ತೇನೆ ಎಂದರು.

> **ಯಾವುದೇ ವಿವಾದ ಹುಟ್ಟಿಕೊಳ್ಳಲು ನಾನು ಬಯಸುವುದಿಲ್ಲ. ಇದು ಪ್ರಜಾಸತ್ತಾತ್ಮಕ ವ್ಯವಸ್ಥೆ. ಯಾವುದೇ ಪರಿಸ್ಥಿತಿ ಬಗ್ಗೆ ತನ್ನದೇ ಆದ ಅಭಿಪ್ರಾಯ ವ್ಯಕ್ತಪಡಿಸಲು ಸಿಎಂ ಅರ್ಹರಿದ್ದಾರೆ. ಇಂತಹ ಪ್ರಜಾಪ್ರಭುತ್ವದ ಸೌಂದರ್ಯನನ್ನು ನಾನು ಸ್ವಾಗತಿಸುತ್ತೇನೆ. ಆದರೆ, ರಾಜ್ಯಪಾಲನಾಗಿ ಯಾವುದೇ ಪ್ರತಿಕ್ರಿಯೆ ನೀಡಲು ಬಯಸುವುದಿಲ್ಲ. ರಾಜಕೀಯ ಹೇಳಿಕೆಗಳಿಗೆ ಸಂಬಂಧಿಸಿದಂತೆ ನಾನು ಯಾವುದೇ ಪ್ರತಿಕ್ರಿಯೆಗಳನ್ನು ನೀಡುವುದಿಲ್ಲ ಎಂದರು.**



# ರಷ್ಯಾ ವಿರುದ್ಧ ಯುದ್ಧ ಆರಂಭಕ್ಕೆ ಉಕ್ರೇನ್ ಅಧ್ಯಕ್ಷರೇ ಕಾರಣ

### ಉಕ್ರೇನ್‌ನಲ್ಲಿ ಅವರ ಜನಬೆಂಬಲ ಕುಸಿಯುತ್ತಿರುವುದನ್ನು ಸಮೀಕ್ಷೆಯು ತೋರಿಸಿವೆ

**ಮಯಾಮಿ:** ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝುಲೆನ್‌ಸ್ಕಿ ಅವರನ್ನು ಸರ್ವಾಧಿಕಾರಿ ಎಂದು ಟೀಕಿಸಿದ್ದಾರೆ. ಮೂರು ವರ್ಷಗಳ ಹಿಂದೆ ಆರಂಭವಾದ ರಷ್ಯಾ- ಉಕ್ರೇನ್ ಯುದ್ಧವನ್ನು ಕೊನೆಗೊಳಿಸಲು ಪ್ರಯತ್ನಗಳು ಮುಂದುವರಿದಿರುವಾಗಲೇ ಟ್ರಂಪ್ ಅವರ ಹೇಳಿಕೆ ಹೊರಬಿದ್ದಿದೆ.

ಇದು ಝುಲೆನ್‌ಸ್ಕಿ ಮತ್ತು ಅವರ ನಡುವೆ ಮೂಡಿರುವ ಬಿರುಕನ್ನು ಇನ್ನಷ್ಟು ದೊಡ್ಡದಾಗಿಸಿದೆ. ರಷ್ಯಾ ವಿರುದ್ಧದ ಯುದ್ಧದಲ್ಲಿ ಅಮೆರಿಕವು ಉಕ್ರೇನ್‌ಗೆ ಅಗತ್ಯ ಹಣಕಾಸಿನ ಮತ್ತು ಶಸ್ತ್ರಾಸ್ತ್ರಗಳ ನೆರವು ನೀಡಿದೆ. ಆದರೆ ಟ್ರಂಪ್ ಅಧಿಕಾರ ವಹಿಸಿಕೊಂಡ ಕೆಲವೇ ವಾರಗಳಲ್ಲಿ ಅಮೆರಿಕದ ವಿದೇಶಾಂಗ ನೀತಿಯಲ್ಲಿ ಹಠಾತ್ ಬದಲಾವಣೆ ಕಂಡುಬಂದಿದೆ. ಅಮೆರಿಕವು ಕೆಲ ದಿನಗಳ ಹಿಂದೆ ರಷ್ಯಾ ಜತೆ ಮಾತುಕತೆ ಆರಂಭಿಸಿದೆ.

> **ಝುಲೆನ್‌ಸ್ಕಿ ಅವರು ಜೋ ಬೈಡನ್ (ಅಮೆರಿಕದ ಹಿಂದಿನ ಅಧ್ಯಕ್ಷ) ಅವರನ್ನು ತಮ್ಮ ಮಾತುಗಳಿಂದ ಮರುಳು ಮಾಡಿದ್ದಾರೆ. ಆದರೆ ನಾವು ಯುದ್ಧವನ್ನು ಕೊನೆಗೊಳಿಸಲು ರಷ್ಯಾ ಜತೆ ಯಶಸ್ವಿಯಾಗಿ ಮಾತುಕತೆ ನಡೆಸುತ್ತಿದ್ದೇವೆ. ಯುದ್ಧ ಕೊನೆಗೊಳಿಸುವುದು ಟ್ರಂಪ್ ಆಡಳಿತದಿಂದ ಮಾತ್ರ ಸಾಧ್ಯ ಎಂಬುದನ್ನು ಎಲ್ಲರೂ ಒಪ್ಪಿಕೊಂಡಿದ್ದಾರೆ**
>
> **-ಡೊನಾಲ್ಡ್ ಟ್ರಂಪ್**
> **ಅಮೆರಿಕದ ಅಧ್ಯಕ್ಷ**



ಇದೀಗ, ಟ್ರಂಪ್ ಅವರು ಝುಲೆಲ್‌ಸ್ಕಿ ಅವರನ್ನು ಟೀಕಿಸಿದ್ದು, ಯುದ್ಧ ಆರಂಭಕ್ಕೆ ಉಕ್ರೇನ್ ಕಾರಣ ಎಂದು ದೂರಿದ್ದಾರೆ. ಚುನಾವಣೆ ನಡೆಯದೆ ಸರ್ವಾಧಿಕಾರಿಯಾಗಿ ಮುಂದುವರಿದಿರುವ ಝುಲೆನ್‌ಸ್ಕಿ, ಶೀಘ್ರವಾಗಿ ನಿರ್ಗಮಿಸುವುದು ಒಳಿತು. ಇಲ್ಲದಿದ್ದರೆ ಅವರಿಗೆ ಎಲ್ಲೂ ನೆಲೆಸಿಗದು ಎಂದು ಅಮೆರಿಕದ ಅಧ್ಯಕ್ಷರು ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ.

2019ರಲ್ಲಿ ಉಕ್ರೇನ್ ಅಧ್ಯಕ್ಷರಾಗಿ ಆಯ್ಕೆಯಾದ ಝುಲೆನ್‌ಸ್ಕಿ ಅವರ ಐದು ವರ್ಷಗಳ ಅಧಿಕಾರಾವಧಿ 2024ರ ಮೇನಲ್ಲಿ ಕೊನೆಗೊಳ್ಳಬೇಕಿತ್ತು. ಆದರೆ ಯುದ್ಧದ ಕಾರಣ ಉಕ್ರೇನ್‌ನಲ್ಲಿ ಮಿಲಿಟರಿ ಕಾನೂನು ಜಾರಿಯಲ್ಲಿರುವುದರಿಂದ ಅವಧಿ ಕಳೆದರೂ ಅಧ್ಯಕ್ಷರಾಗಿ ಮುಂದುವರಿದಿದ್ದಾರೆ.

ಝುಲೆನ್‌ಸ್ಕಿ ಅವರು ಚುನಾವಣೆ ನಡೆಸಲು ನಿರಾಕರಿಸುತ್ತಿದ್ದಾರೆ. ಉಕ್ರೇನ್‌ನಲ್ಲಿ ಅವರ ಜನಬೆಂಬಲ ಕುಸಿಯುತ್ತಿರುವುದನ್ನು ಸಮೀಕ್ಷೆಯು ತೋರಿಸಿವೆ ಎಂದು ಟ್ರಂಪ್ ಹೇಳಿದ್ದಾರೆ.

### ರಷ್ಯಾದಿಂದ ತಪ್ಪು ಮಾಹಿತಿ: ಝುಲೆನ್‌ಸ್ಕಿ

**ಡೊನಾಲ್ಡ್ ಟ್ರಂಪ್ ಅವರು ರಷ್ಯಾದ 'ತಪ್ಪು ಮಾಹಿತಿ'ಗೆ ತುತ್ತಾಗುತ್ತಿದ್ದಾರೆ ಎಂದು ಝುಲೆನ್‌ಸ್ಕಿ ಆರೋಪಿಸಿದ್ದಾರೆ. ಅಮೆರಿಕದ ಅಧ್ಯಕ್ಷರು ಮಾಡಿರುವ ಟೀಕೆಗೆ ಕೀವ್‌ನಲ್ಲಿ ಸುದ್ದಿಗೋಷ್ಠಿಯಲ್ಲಿ ಪ್ರತಿಕ್ರಿಯಿಸಿದ ಅವರು ಅಮೆರಿಕದ ಅಧ್ಯಕ್ಷರಾಗಿ ಟ್ರಂಪ್ ಅವರ ಬಗ್ಗೆ ಅಪಾರ ಗೌರವವಿದೆ. ದುರದೃಷ್ಟವಶಾತ್ ಅವರು ತಪ್ಪು ಮಾಹಿತಿಯ ಯುಗದಲ್ಲಿ ಬದುಕುತ್ತಿದ್ದಾರೆ ಎಂದು ಹೇಳಿದ್ದಾರೆ. ಯುದ್ಧವನ್ನು ಉಕ್ರೇನ್ ಆರಂಭಿಸಿದೆ ಎಂಬ ಟ್ರಂಪ್ ಆರೋಪವನ್ನೂ ಅವರು ಅಲ್ಲಗಳೆದರು. ರಷ್ಯಾ- ಅಮೆರಿಕ ಮಾತುಕತೆಯನ್ನೂ ಟೀಕಿಸಿದ ಅವರು ಹಲವು ವರ್ಷಗಳ ಏಕಾಂಗಿತನದಿಂದ ಹೊರಬರಲು ಬ್ಲಾದಿಮಿರ್ ಪುಟಿನ್ ಅವರಿಗೆ ಅಮೆರಿಕ ನೆರವಾಗಿದೆ ಎಂದಿದ್ದಾರೆ.**




## ಅಮೆರಿಕದ ಅನುದಾನದ ಬಗ್ಗೆ ಚುನಾವಣಾ ಆಯೋಗ ಸ್ಪಷ್ಟನೆ ನೀಡಬೇಕು: ಒಮರ್ ಅಬ್ದುಲ್ಲಾ

**ಜಮ್ಮು:** ಭಾರತದಲ್ಲಿ ಮತದಾನಕ್ಕೆ ಉತ್ತೇಜನ ನೀಡಲು ಅಮೆ ರಿಕವು ಅಂದಾಜು 182 ಕೋಟಿ ವ್ಯಯಿಸುತ್ತಿತ್ತು ಎಂಬ ವರದಿಗಳಿಗೆ ಸಂಬಂಧಿಸಿದಂತೆ ಚುನಾವಣಾ ಆಯೋಗವು ಸ್ಪಷ್ಟನೆ ನೀಡಬೇಕು ಎಂದು ಜಮ್ಮು ಮತ್ತು ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಹೇಳಿದ್ದಾರೆ.

> **ಯಾರಿಗೆ ಅನುದಾನ ನೀಡಬೇಕು ಅಥವಾ ನೀಡಬಾರದು ಎಂಬುದು ಅಮೆರಿಕಕ್ಕೆ ಬಿಟ್ಟ ವಿಚಾರ. ಆದರಲ್ಲಿ ನಮ್ಮ ನಿರ್ಧಾರ ಏನಿದೆ?**
>
> **-ಒಮರ್ ಅಬ್ದುಲ್ಲಾ,**
> **ಜಮ್ಮು ಮತ್ತು ಕಾಶ್ಮೀರ ಮುಖ್ಯಮಂತ್ರಿ**


ಜಮ್ಮುವಿನಲ್ಲಿ ನಡೆದ ಕಾರ್ಯಕ್ರಮದ ಸಂದರ್ಭ ದಲ್ಲಿ ಮಾಧ್ಯಮದವರು ಕೇಳಿದ ಪ್ರಶ್ನೆಗೆ ಪ್ರತಿಕ್ರಿ ಯಿಸಿದ ಒಮರ್, ದೇಶದ ಪ್ರಜಾಸತ್ತಾತ್ಮಕ ಪ್ರಕ್ರಿಯೆ ಯಲ್ಲಿ ವಿದೇಶಗಳು ತಲೆಹಾಕುವುದನ್ನು ತೀವ್ರವಾಗಿ ವಿರೋಧಿಸುತ್ತೇವೆ ಎಂದಿದ್ದಾರೆ. ವಿದೇಶದ ಪಾಲ್ಗೊ ಳ್ಳುವಿಕೆಗೆ ಅವಕಾಶ ಇರಬಾರದು. ಆ ರೀತಿ ಆಗಿರುವುದಕ್ಕೆ ಈವರೆಗೆ ಯಾವುದೇ ಸಾಕ್ಷ್ಯ ಇಲ್ಲ. ನಮ್ಮ ಚುನಾವಣೆಗಳು ಮುಕ್ತ, ಪಾರ ದರ್ಶಕವಾಗಿ ನಡೆಯುತ್ತಿವೆ ಎಂದು ಈ ದಿನದವರೆಗೆ ನಾವು ನಂಬಿದ್ದೇವೆ. ಹಾಗಾಗಿ, ನಮ್ಮ ಚುನಾವಣೆಗಳಲ್ಲಿ ವಿದೇಶದ ಪಾತ್ರವಿದೆಯೇ ಎಂಬ ಬಗ್ಗೆ ಚುನಾವಣಾ ಆಯೋಗವೇ ಸ್ಪಷ್ಟನೆ ನೀಡಬೇಕು ಎಂದು ಹೇಳಿದ್ದಾರೆ.




ಭಾರತದಲ್ಲಿ ಮತದಾನವನ್ನು ಪ್ರೋತ್ಸಾಹಿಸುವ ಸಲುವಾಗಿ ಅಮೆರಿಕ ನೀಡುತ್ತಿದ್ದ ಅನು ದಾನವನ್ನು ಕಡಿತಗೊಳಿಸಲಾಗಿದೆ.

ವೆಚ್ಚ ನಿಯಂತ್ರಣದ ಭಾಗವಾಗಿ ಈ ಕ್ರಮ ಕೈಗೊಂಡಿರುವುದಾಗಿ ಅಮೆರಿಕ ಸರ್ಕಾರದ ಕಾರ್ಯದಕ್ಷತಾ ಇಲಾಖೆಯ (ಡಿಒಜಿಇ) ಉಸ್ತುವಾರಿ ಎಲಾನ್ ಮಸ್ಕ್ ಅವರು ಕಳೆದ ವಾರ ಘೋಷಿಸಿದ್ದರು.

> **ಹಣ ನೀಡುವ ಅಗತ್ಯವೇನಿದೆ**
>
> **ಭಾರತದಲ್ಲಿ ನಡೆಯುವ ಚುನಾವಣೆಗೆ ಹಣ ನೀಡುವ ಅಗತ್ಯವೇನಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರಶ್ನಿಸಿದ್ದರು. ಹಾಗೆಯೇ, ಅಮೆರಿಕದ ಹಿಂದಿನ ಜೋ ಬೈಡನ್ ಆಡಳಿತವು ಭಾರತದಲ್ಲಿ ಬೇರೊಬ್ಬರು ಅಧಿಕಾರಕ್ಕೇರುವುದನ್ನು ಬಯಸಿತ್ತು ಎಂದೂ ಶಂಕಿಸಿದ್ದರು. ಈ ಕುರಿತು ಒಮರ್ ಪ್ರತಿಕ್ರಿಯಿಸಿದ್ದಾರೆ.**



## 4 ವರ್ಷಗಳ ದಾಂಪತ್ಯ ಜೀವನಕ್ಕೆ ಅಂತ್ಯ ಹಾಡಿದ ಚಾಹಲ್- ಧನಶ್ರೀ ವರ್ಮಾ



**ಒಂದು ದೊಡ್ಡ ಘಟನೆ**

ಟೀಮ್ ಇಂಡಿಯಾದ ಲೆಗ್ ಸ್ಪಿನ್ನರ್ ಯುಜ್ವೇಂದ್ರ ಚಾಹಲ್ ತಮ್ಮ ಪತ್ನಿ ಧನಶ್ರೀ ವರ್ಮಾ ಅವರಿಂದ ಬೇರ್ಪಟ್ಟಿದ್ದಾರೆ. ವರದಿಗಳ ಪ್ರಕಾರ, ಇಬ್ಬರೂ ಬಾಂದ್ರಾ ಕುಟುಂಬ ನ್ಯಾಯಾಲಯದಲ್ಲಿ ವಿಚ್ಛೇದನ ಪಡೆದಿದ್ದಾರೆ. ಆದರೆ ಇಬ್ಬರೂ ಬೇರೆಯಾಗಲು ಕಾರಣವೇನೆಂದು ಬಹಿರಂಗವಾಗಿಲ್ಲ. ಆದರೆ ಧನಶ್ರೀ ಮತ್ತು ಯುಜ್ವೇಂದ್ರ ತಮ್ಮ ಸಾಮಾಜಿಕ ಮಾಧ್ಯಮ ಖಾತೆಗಳಲ್ಲಿ ಪೋಸ್ಟ್ ಮಾಡುವ ಮೂಲಕ ತಮ್ಮ ಜೀವನದಲ್ಲಿ ಒಂದು ದೊಡ್ಡ ಘಟನೆ ನಡೆದಿರುವ ಬಗ್ಗೆ ಸುಳಿವು ನೀಡಿದ್ದಾರೆ.

ಟೀಂ ಇಂಡಿಯಾದ ಲೆಗ್ ಸ್ಪಿನ್ನರ್ ಯುಜ್ವೇಂದ್ರ ಚಾಹಲ್ ಮತ್ತು ಧನಶ್ರೀ ವರ್ಮಾ ವಿಚ್ಛೇದನ ಪಡೆದಿದ್ದಾರೆ ಎಂಬ ಮಾಹಿತಿ ಹೊರಬಿದ್ದಿದೆ. ಮಾಧ್ಯಮ ವರದಿಗಳ ಪ್ರಕಾರ, ಇಬ್ಬರೂ ಬಾಂದ್ರಾ ಕುಟುಂಬ ನ್ಯಾಯಾಲಯದಲ್ಲಿ ವಿಚ್ಛೇದನದ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದ್ದು, ಪರಸ್ಪರ ಬೇರೆಯಾಗಿದ್ದಾರೆ. ವಾಸ್ತವವಾಗಿ ಬಹಳ ದಿನಗಳಿಂದ ಇಬ್ಬರೂ ಬೇರೆಯಾಗಿ ಪ್ರತ್ಯೇಕವಾಗಿ ವಾಸಿಸಲಾರಂಭಿಸಿದ್ದರು.

ಅಲ್ಲದೆ ಇಷ್ಟರಲ್ಲೇ ಈ ಇಬ್ಬರು ಅಧಿಕೃತವಾಗಿ ದೂರವಾಗಲಿದ್ದಾರೆ ಎಂಬ ವರದಿಗಳು ಆಗಾಗ್ಗೆ ಕೇಳಿ ಬರುತ್ತಿದ್ದವು. ಈಗ ಈ ಸುದ್ದಿ ದೃಢಪಟ್ಟಂತೆ ತೋರುತ್ತಿದ್ದು, ಚಾಹಲ್-ಧನಶ್ರೀ ನಡುವಿನ ದಾಂಪತ್ಯ ಜೀವನ ಕೇವಲ 4 ವರ್ಷಗಳಿಗೆ ಅಂತ್ಯಗೊಂಡಿದೆ.

### ಗಿಲ್ ಭರ್ಜರಿ ಶತಕ, ಶಮಿ ಮಾರಕ ದಾಳಿ!

# ಬಾಂಗ್ಲಾ ಬಗ್ಗುಬಡಿದ ಭಾರತ

ಬಾಂಗ್ಲಾದೇಶ ನೀಡಿದ್ದ 229ರನ್‌ಗಳ ಗುರಿಯನ್ನು 46.3 ಓವರ್‌ಗಳಲ್ಲಿ 4 ವಿಕೆಟ್ ಕಳೆದುಕೊಂಡು ತಲುಪಿತು. ಆರಂಭಿಕ ಬ್ಯಾಟರ್ ಶುಭ್‌ಮನ್ ಗಿಲ್ ಶತಕ ಸಿಡಿಸಿ ಗೆಲುವಿನ ರೂವಾರಿಯಾದರು.


ಚಾಂಪಿಯನ್ಸ್ ಟ್ರೋಫಿಯಲ್ಲಿ ಭಾರತ ತಂಡ ಶುಭಾರಂಭ ಮಾಡಿದೆ. ದುಬೈ ಅಂತಾರಾಷ್ಟ್ರೀಯ ಸ್ಟೇಡಿಯಂನಲ್ಲಿ ನಡೆದ ಪಂದ್ಯದಲ್ಲಿ ಬಾಂಗ್ಲಾದೇಶ ತಂಡವನ್ನು 6 ವಿಕೆಟ್‌ಗಳಿಂದ ಮಣಿಸಿ ಗೆಲುವಿನೊಂದು ತನ್ನ ಅಭಿಯಾನ ಆರಂಭಿಸಿದೆ. ಬಾಂಗ್ಲಾದೇಶ ನೀಡಿದ್ದ 229ರನ್‌ಗಳ ಗುರಿಯನ್ನು 46.3 ಓವರ್‌ಗಳಲ್ಲಿ 4 ವಿಕೆಟ್ ಕಳೆದುಕೊಂಡು ತಲುಪಿತು. ಆರಂಭಿಕ ಬ್ಯಾಟರ್ ಶುಭ್‌ಮನ್ ಗಿಲ್ ಶತಕ ಸಿಡಿಸಿ ಗೆಲುವಿನ ರೂವಾರಿಯಾದರು.

229ರನ್‌ಗಳ ಗುರಿ ಬೆನ್ನಟ್ಟಿದ ಟೀಮ್ ಇಂಡಿಯಾ ಪವರ್ ಪ್ಲೇ ಉತ್ತಮವಾಗಿ ಬಳಸಿಕೊಂಡು ಅದ್ಭುತ ಆರಂಭ ಪಡೆದುಕೊಂಡಿತು. ನಾಯಕ ರೋಹಿತ್ ಉಪನಾಯಕ ಗಿಲ್ ಮೊದಲ ವಿಕೆಟ್‌ಗೆ 69 ರನ್‌ಗಳ ಜೊತೆಯಾಟ ನೀಡಿದರು. ಎಂದಿನಂತೆ ಬಿರುಸಿನ ಬ್ಯಾಟಿಂಗ್ ಮಾಡಿದ ರೋಹಿತ್ 36 ಎಸೆತಗಳಲ್ಲಿ 7 ಬೌಂಡರಿ ಸಹಿತ 41 ರನ್‌ಗಳಿಸಿ ಔಟ್ ಆದರು.

ರೋಹಿತ್ ವಿಕೆಟ್ ನಂತರ ಬಂದ ಕೊಹ್ಲಿ 38 ಎಸೆತಗಳಲ್ಲಿ 22, ಶ್ರೇಯಸ್ 17 ಎಸೆತಗಳಲ್ಲಿ 2 ಬೌಂಡರಿ ಸಹಿತ 15 ರನ್, ಅಕ್ಷರ್ ಪಟೇಲ್ 12 ಎಸೆತಗಳಲ್ಲಿ 8 ರನ್‌ಗಳಿಸಿ ವಿಕೆಟ್ ಒಪ್ಪಿಸಿದರು. ನಂತರ ಶುಭ್‌ಮನ್ ಗಿಲ್ ಹಾಗೂ ಕನ್ನಡಿಗ ಕೆಎಲ್ ರಾಹುಲ್ 5ನೇ ವಿಕೆಟ್ ಮುರಿಯದ 87 ರನ್‌ಗಳ ಜೊತೆಯಾಟದ ಮೂಲಕ ತಂಡವನ್ನು ಗೆಲುವಿನ ಗಡಿ ದಾಟಿಸಿದರು. ಗಿಲ್ 129 ಎಸೆತಗಳಲ್ಲಿ 9 ಬೌಂಡರಿ, 2 ಸಿಕ್ಸರ್‌ಗಳ ಜೊತೆಗೆ ಅಜೇಯ 101 ರನ್‌ಗಳಿಸಿದರೆ, ರಾಹುಲ್ 47 ಎಸೆತಗಳಲ್ಲಿ 1 ಬೌಂಡರಿ, 2 ಸಿಕ್ಸರ್‌ಗಳ ನೆರವಿನಿಂದ ಅಜೇಯ 41 ರನ್‌ಗಳಿಸಿದರು.



ಗಿಲ್ ಅಜೇಯ 101 ರನ್



### ಇತಿಹಾಸ ಸೃಷ್ಟಿಸಿದ ಶಮಿ

ಚಾಂಪಿಯನ್ಸ್ ಟ್ರೋಫಿಯ ಮೊದಲ ಪಂದ್ಯದಲ್ಲಿಯೇ 5 ವಿಕೆಟ್‌ಗಳನ್ನು ಕಬಳಿಸುವ ಮೂಲಕ ಶಮಿ ಎದುರಾಳಿ ತಂಡದಲ್ಲಿ ನಡುಕು ಹುಟ್ಟಿಸಿದ್ದಾರೆ. ಓವರ್‌ನ ಆರನೇ ಎಸೆತದಲ್ಲಿ ಆರಂಭಿಕ ಸೌಮ್ಯ ಸರ್ಕಾರ್ ಅವರ ವಿಕೆಟ್ ಪಡೆದರು. ನಂತರ ಏಳನೇ ಓವರ್‌ನಲ್ಲೂ ಶಮಿ ಬಾಂಗ್ಲಾದೇಶಕ್ಕೆ ಆಘಾತ ನೀಡಿ ಮೆಹದಿ ಹಸನ್ ಮಿರಾಜ್ ಅವರನ್ನು ಪೆವಿಲಿಯನ್‌ಗೆ ಕಳುಹಿಸಿದರು. ನಂತರ ಜಾಕಿರ್ ಅಲಿ ಮತ್ತು ತೌಹೀದ್ ಹೃದಯೋಯ್ ನಡುವೆ ಶತಕದ ಪಾಲುದಾರಿಕೆ ಇತ್ತು. ಈ ವೇಳೆ ಟೀಂ ಇಂಡಿಯಾಕ್ಕೆ ವಿಕೆಟ್ ಅಗತ್ಯವಿದ್ದಾಗ, ಶಮಿ ಈ ಕೆಲಸ ಮಾಡಿದರು. ನಿರ್ಣಾಯಕ ಸಮಯದಲ್ಲಿ ದಾಳಿಗಿಳಿದ ಶಮಿ, ಜಾಕಿರ್ ಅಲಿ ವಿಕೆಟ್ ಪಡೆಯುವ ಮೂಲಕ ತಂಡಕ್ಕೆ ಸಮಾಧಾನ ತಂದುಕೊಟ್ಟರು. ಈ ಮೂಲಕ 200 ಏಕದಿನ ವಿಕೆಟ್‌ಗಳನ್ನು ಸಹ ಪೂರ್ಣಗೊಳಿಸಿದರು. ನಂತರ ಶಮಿ ತಂಜಿಮ್ ಹಸನ್ ಸಕಿಬ್ ಮತ್ತು ತಸ್ಕಿನ್ ಅಹ್ಮದ್ ಅವರ ವಿಕೆಟ್‌ಗಳನ್ನು ಕಬಳಿಸಿ ತಮ್ಮ 5 ವಿಕೆಟ್‌ಗಳನ್ನು ಪೂರ್ಣಗೊಳಿಸಿದರು.

# ಕೈಮುಗಿದು ಕ್ಷಮೆಯಾಚಿಸಿದ ರೋಹಿತ್ ಶರ್ಮಾ..!



ಬಾಂಗ್ಲಾದೇಶ ವಿರುದ್ಧದ ಪಂದ್ಯದಲ್ಲಿ ಭಾರತಕ್ಕೆ ಆರಂಭದಲ್ಲಿಯೇ ಮೂರು ವಿಕೆಟ್‌ಗಳನ್ನು ಕಬಳಿಸುವ ಮೂಲಕ ಮೊಹಮ್ಮದ್ ಶಮಿ ಮತ್ತು ಹರ್ಷಿತ್ ರಾಣಾ ಉತ್ತಮ ಆರಂಭ ನೀಡಿದರು. ಇದಾದ ನಂತರ, ಅಕ್ಷರ್ ಪಟೇಲ್ ತಮ್ಮ ಮೊದಲ ಓವರ್‌ನಲ್ಲಿಯೇ ವಿನಾಶಕಾರಿ ದಾಳಿ ನಡೆಸಿ ಬಾಂಗ್ಲಾದೇಶವನ್ನು ಸಂಕಷ್ಟಕ್ಕೆ ಸಿಲುಕಿಸಿದರು.

**2 ಎಸೆತಗಳಲ್ಲಿ 2 ವಿಕೆಟ್**

ಸತತ 8 ಓವರ್‌ಗಳ ವೇಗದ ಬೌಲಿಂಗ್ ನಂತರ, ನಾಯಕ ರೋಹಿತ್ ಶರ್ಮಾ 9 ನೇ ಓವರ್‌ನಲ್ಲಿ ಅಕ್ಷರ್ ಪಟೇಲ್ ಅವರನ್ನು ಬೌಲಿಂಗ್‌ಗೆ ಇಳಿಸಿದರು. 9ನೇ ಓವರ್‌ನ ಎರಡನೇ ಎಸೆತದಲ್ಲಿ ಅಕ್ಷರ್ ತಂಜಿದ್ ಹಸನ್ ಅವರ ವಿಕೆಟ್ ಪಡೆದರು. ವಿಕೆಟ್ ಕೀಪರ್ ಕೆಎಲ್ ರಾಹುಲ್ ಉತ್ತಮ ಕ್ಯಾಚ್ ಹಿಡಿಯುವ ಮೂಲಕ ತಂಜಿದ್‌ಗೆ ಪೆವಿಲಿಯನ್ ದಾರಿ ತೋರಿಸಿದರು. ನಂತರ ಮುಂದಿನ ಎಸೆತದಲ್ಲೇ ಕಣಕ್ಕಿಳಿದ ಅನುಭವಿ ಬ್ಯಾಟ್ಸ್‌ಮನ್ ಮುಷ್ಫಿಕರ್ ರಹೀಮ್ ಕೂಡ ಅಕ್ಷರ್ ಎಸೆತದಲ್ಲಿ ರಾಹುಲ್‌ಗೆ ಕ್ಯಾಚ್ ನೀಡಿದರು. ಹೀಗಾಗಿ ಸತತ 2 ಎಸೆತಗಳಲ್ಲಿ 2 ವಿಕೆಟ್ ಪಡೆದಿದ್ದ ಅಕ್ಷರ್‌ಗೆ ಹ್ಯಾಟ್ರಿಕ್ ವಿಕೆಟ್ ಪಡೆಯುವ ಅವಕಾಶ ಸಿಕ್ಕಿತು.

ಇದಕ್ಕೆ ಪೂರಕವಾಗಿ ಅಕ್ಷರ್‌ಕೂಡ ಮುಂದಿನ ಎಸೆತದಲ್ಲೇ ವಿಕೆಟ್ ಪಡೆಯುವ ಸನ್ನಿವೇಶ ಸೃಷ್ಟಿಸಿದ್ದರು. ಆದರೆ ಕ್ರಿಕೆಟ್‌ನಲ್ಲಿ ಕ್ಷಮಿಸಲಾಗದ ತಪ್ಪನ್ನು ನಾಯಕ ರೋಹಿತ್ ಶರ್ಮಾ ಮಾಡಿದ್ದು ಇಲ್ಲಿಯೇ. ಹ್ಯಾಟ್ರಿಕ್ ಎಸೆತಕ್ಕೂ ಮುನ್ನ ಫಿಲ್ಡ್ ಬದಲಿಸಿದ್ದ ನಾಯಕ ರೋಹಿತ್ ಸ್ವತಃ ಮೊದಲ ಸ್ಲಿಪ್‌ನಲ್ಲಿ ಹೋಗಿ ನಿಂತರೆ, ಶುಭ್‌ಮನ್ ಗಿಲ್ ಅವರನ್ನು ಎರಡನೇ ಸ್ಲಿಪ್‌ನಲ್ಲಿ ನಿಲ್ಲಿದ್ದರು. ಇದೇ ವೇಳೆ ಅಕ್ಷರ್ ಬೌಲ್ ಮಾಡಿದ ಹ್ಯಾಟ್ರಿಕ್ ಎಸೆತ ಹೊಸ ಬ್ಯಾಟ್ಸ್‌ಮನ್ ಜಾಕಿರ್ ಅಲಿ ಅವರ ಬ್ಯಾಟ್‌ನ ಅಂಚಿಗೆ ತಾಗಿ ಮೊದಲ ಸ್ಲಿಪ್‌ನಲ್ಲಿ ನಿಂತಿದ್ದ ರೋಹಿತ್ ಕಡೆಗೆ ಹೋಯಿತು. ರೋಹಿತ್ ಕೂಡ ಆರಂಭದಲ್ಲಿ ಕ್ಯಾಚ್ ಅನ್ನು ಸುಲಭವಾಗಿ ಪೂರ್ಣಗೊಳಿಸಲು ಪ್ರಯತ್ನಿಸಿದರು. ಆದರೆ ರೋಹಿತ್ ಆತುರದಲ್ಲಿದ್ದ ಕಾರಣ ಕ್ಯಾಚ್ ಹಿಡಿಯಲು ಸಾಧ್ಯವಾಗಲಿಲ್ಲ. ಪರಿಣಾಮವಾಗಿ, ಅಕ್ಷರ್ ಪಟೇಲ್ ಹ್ಯಾಟ್ರಿಕ್ ತಪ್ಪಿಸಿಕೊಂಡರು.

**ಕೈಮುಗಿದ ಕ್ಷಮೆಯಾಚಿಸಿದ ರೋಹಿತ್**

ಈ ತಪ್ಪನ್ನು ಯಾವ ಭಾರತೀಯ ಆಟಗಾರನೂ ನಂಬಲು ಸಾಧ್ಯವಾಗಲಿಲ್ಲ. ಕ್ರೀಡಾಂಗಣದಲ್ಲಿ ಕುಳಿತಿದ್ದ ಪ್ರೇಕ್ಷಕರು ಕೂಡ ಆಘಾತಕ್ಕೊಳಗಾದರು. ಇತ್ತ ರೋಹಿತ್ ಕೂಡ ಕೋಪದಿಂದ ನೆಲಕ್ಕೆ ತಮ್ಮ ಕೈಗಳನ್ನು ಹೊಡೆಯಲಾರಂಭಿಸಿದರು. ಆ ನಂತರ ಕೈಗಳನ್ನು ಜೋಡಿಸಿ ಅಕ್ಷರ್ ಬಳಿ ಕ್ಷಮೆಯಾಚಿಸಿದರು. ಒಂದು ವೇಳೆ ರೋಹಿತ್ ಈ ಕ್ಯಾಚ್ ಅನ್ನು ಹಿಡಿದಿದ್ದರೆ ಚಾಂಪಿಯನ್ಸ್ ಟ್ರೋಫಿಯ ಇತಿಹಾಸದಲ್ಲಿ ಹ್ಯಾಟ್ರಿಕ್ ಪಡೆದ ಮೊದಲ ಭಾರತೀಯ ಮತ್ತು ಎರಡನೇ ಬೌಲರ್ ಎಂಬ ದಾಖಲೆ ಅಕ್ಷರ್ ಪಾಲಾಗುತ್ತಿತ್ತು.

# ಭಾರತಕ್ಕೆ ತಕ್ಕ ಪಾಠ ಕಲಿಸಬೇಕು

## ಪಾಕ್ ಕ್ರಿಕೆಟಿಗನ ಉವಾಚ

ಚಾಂಪಿಯನ್ಸ್ ಟ್ರೋಫಿಯ 5ನೇ ಪಂದ್ಯದಲ್ಲಿ ಭಾರತ ಮತ್ತು ಪಾಕಿಸ್ತಾನ್ ತಂಡಗಳು ಮುಖಾಮುಖಿಯಾಗಲಿದೆ. ಫೆಬ್ರವರಿ 23 ರಂದು ದುಬೈನ ಇಂಟರ್‌ನ್ಯಾಷನಲ್ ಸ್ಟೇಡಿಯಂನಲ್ಲಿ ನಡೆಯಲಿರುವ ಈ ಪಂದ್ಯಕ್ಕಾಗಿ ಇಡೀ ವಿಶ್ವವೇ ಕಾತುರದಿಂದ ಕಾಯುತ್ತಿದೆ. ಈ ಪಂದ್ಯದಲ್ಲಿ ಟೀಮ್ ಇಂಡಿಯಾವನ್ನು ಬಗ್ಗು ಬಡಿದು ಭಾರತಕ್ಕೆ ತಕ್ಕ ಪಾಠ ಕಲಿಸಬೇಕೆಂದು ಪಾಕಿಸ್ತಾನ್ ತಂಡದ ಮಾಜಿ ಸ್ಪಿನ್ನರ್ ಎಂದು ಸಖ್ಲೈನ್ ಮುಷ್ತಾಕ್ ಆಗ್ರಹಿಸಿದ್ದಾರೆ. ಭಾರತ ಮತ್ತು ಪಾಕಿಸ್ತಾನ್ ನಡುವಣ ಹೈವೋಲ್ಟೇಜ್ ಪಂದ್ಯಕ್ಕೆ ದಿನಗಣನೆ ಶುರುವಾಗಿದೆ. ಈ ಪಂದ್ಯಕ್ಕೂ ಮುನ್ನವೇ ಪಾಕ್ ತಂಡದ ಮಾಜಿ ಸ್ಪಿನ್ನರ್ ಸಖ್ಲೈನ್ ಮುಷ್ತಾಕ್ ಭಾರತದ ವಿರುದ್ಧ ಹರಿಹಾಯ್ದಿದ್ದಾರೆ.

ಪಾಕಿಸ್ತಾನದ ಚಾನೆಲ್ ಚರ್ಚೆಯಲ್ಲಿ ಕಾಣಿಸಿಕೊಂಡ ಸಖ್ಲೈನ್ ಈ ಬಾರಿ ಪಾಕಿಸ್ತಾನ್ ಭಾರತಕ್ಕೆ ತಕ್ಕ ಪಾಠ ಕಲಿಸಬೇಕು ಎಂದು ಆಗ್ರಹಿಸಿದ್ದಾರೆ. ಭಾರತ ತಂಡವು ಪಾಕಿಸ್ತಾನದಲ್ಲಿ ಪಂದ್ಯಾವಳಿ ಆಡಲು ನಿರಾಕರಿಸಿದ್ದಾರೆ. ಇದರಿಂದಾಗಿ ಇಂದು ಹೈಬ್ರಿಡ್ ಮಾದರಿಯಲ್ಲಿ ಟೂರ್ನಿ ಆಯೋಜಿಸಬೇಕಾದ ಅನಿವಾರ್ಯತೆ ಎದುರಾಗಿದೆ. ಬಿಸಿಸಿಐನ ಇಂತಹ ಬೇಡಿಕೆಗಳು ತರ್ಕಬದ್ಧವಲ್ಲ. ಹೀಗಾಗಿ ಪಾಕ್ ಪಡೆ ಈ ಸಲ ಭಾರತ ತಂಡವನ್ನು ಸೋಲಿಸಿ ತಕ್ಕ ಪಾಠ ಕಲಿಸಬೇಕು ಸಖ್ಲೈನ್ ಮುಷ್ತಾಕ್ ಆಗ್ರಹಿಸಿದ್ದಾರೆ.

**ಅವಿವೇಕದ ತಂತ್ರಗಳಿಗೆ ಪ್ರತ್ಯುತ್ತರ**

**ವೀಸಾ ನೀಡದ ಭಾರತ:**

ಇದೇ ವೇಳೆ ಭಾರತೀಯ ರಾಯಭಾರ ಕಚೇರಿಯು ವೀಸಾ ನೀಡದಿರುವ ಘಟನೆಯನ್ನು ನೆನಪಿಸಿಕೊಂಡ ಸಖ್ಲೈನ್ ಮುಷ್ತಾಕ್, ಭಾರತದ ವಿರುದ್ಧ ಮೂರು ಪಂದ್ಯಗಳ ಟೆಸ್ಟ್ ಸರಣಿಯಲ್ಲಿ ನಾನು ನ್ಯೂಝಿಲೆಂಡ್ ತಂಡದ ಬೌಲಿಂಗ್ ಕೋಚ್ ಆಗಿ ಕಾಣಿಸಿಕೊಳ್ಳಬೇಕಿತ್ತು. ಆದರೆ ಭಾರತೀಯ ರಾಯಭಾರ ಕಚೇರಿಯು ವೀಸಾಗಾಗಿ ನನ್ನನ್ನು ತಿಂಗಳುಗಳ ಕಾಲ ಕಾಯುವಂತೆ ಮಾಡಿತ್ತು. ನಾನು ಮೂರು ತಿಂಗಳುಗಳ ಕಾಲ ಕಾದಿದ್ದೆ. ಆದರೆ ಅವರಿಂದ ನನಗೆ ಯಾವುದೇ ಉತ್ತರ ಸಿಕ್ಕಿರಲಿಲ್ಲ. ಹೀಗಾಗಿ ನಾನು ನ್ಯೂಝಿಲೆಂಡ್ ತಂಡದೊಡನೆ ಕಾರ್ಯ ನಿರ್ವಹಿಸಲು ಸಾಧ್ಯವಾಗಿರಲಿಲ್ಲ ಎಂದು ಸಖ್ಲೈನ್ ಮುಷ್ತಾಕ್ ಹೇಳಿದ್ದಾರೆ.

**ಭಾರತೀಯರು ಯಾವ ಲೋಕದಲ್ಲಿದ್ದಾರೆ**


ಪಾಕಿಸ್ತಾನದ ಯುವಕರು ವಿರಾಟ್ ಕೊಹ್ಲಿ ಮತ್ತು ಜಸ್ಪ್ರೀತ್ ಬುಮ್ರಾ ಅವರನ್ನು ನೋಡಲು ಬಯಸುತ್ತಾರೆ. ಆದರೆ ಇವರೆಲ್ಲಾ ಯಾವ ಲೋಕದಲ್ಲಿದ್ದಾರೆ ಏನನ್ನು ಸಾಧಿಸಲು ಬಯಸುತ್ತಾರೆಂದು ನನಗೆ ತಿಳಿಯುತ್ತಿಲ್ಲ. ಇವರು ಯಾವಾಗ ಸುಧಾರಿಸುತ್ತಾರೆ ಇವರ ಮನಸ್ಥಿತಿ ಯಾವಾಗ ಬದಲಾಗುತ್ತೊ ಎಂಬುದೇ ನನ್ನ ಪ್ರಶ್ನೆ. ಟೈ ಧರಿಸಿ ಇಂಗ್ಲಿಷ್ ಮಾತನಾಡಿದರೆ, ನೀವು ನಾಗರಿಕರಾಗಿದ್ದೀರಿ ಎಂದು ನೀವು ಭಾವಿಸುತ್ತೀರಿ. ಆದರೆ ಅದಲ್ಲ ನಾಗರೀಕತೆ ಅದಲ್ಲ ಎಂಬುದನ್ನು ಅವರಿಗೆ ಅರ್ಥ ಮಾಡಿಸಬೇಕು ಎಂದು ಸಖ್ಲೈನ್ ಮುಷ್ತಾಕ್ ಆಗ್ರಹಿಸಿದ್ದಾರೆ. ಇದಕ್ಕಾಗಿ ಪಾಕಿಸ್ತಾನವು ಒಂದು ನಿಲುವನ್ನು ತೆಗೆದುಕೊಂಡು ಅವರಿಗೆ ತಕ್ಕ ಪಾಠ ಕಲಿಸಬೇಕು. ಈ ಮೂಲಕ ಭಾರತೀಯ ಕ್ರಿಕೆಟ್ ಮಂಡಳಿಯ ಅವಿವೇಕದ ತಂತ್ರಗಳಿಗೆ ಪ್ರತ್ಯುತ್ತರ ನೀಡಬೇಕೆಂದು ಪಿಸಿಬಿಯನ್ನು ಸಖ್ಲೈನ್ ಮುಷ್ತಾಕ್ ಒತ್ತಾಯಿಸಿದ್ದಾರೆ.



**ಸಿನಿ ವಾಹಿನಿ**

# ಎಲ್ಲೋ ಜೋಗಪ್ಪ ನಿನ್ನರಮನೆ

ವಿಭಿನ್ನ ಕಥನದ ಸುಳಿವಿನೊಂದಿಗೆ ಎಲ್ಲರನ್ನೂ ಸೆಳೆದುಕೊಂಡಿರುವ 'ಎಲ್ಲೋ ಜೋಗಪ್ಪ ನಿನ್ನರಮನೆ' ಚಿತ್ರ ಈ ವಾರ ಅಂದರೆ ಫೆಬ್ರವರಿ 21ರಂದು ರಾಜ್ಯಾದ್ಯಂತ ತೆರೆಗಾಣಲಿದೆ. ಈಗಾಗಲೇ ಕಿರುತೆರೆಯಲ್ಲಿ ಅಗ್ನಿಸಾಕ್ಷಿ, ನಾಗಿಣಿ, ಕಮಲಿಯಂಥಾ ಸೀರಿಯಲ್‌ಗಳ ಮೂಲಕ ಯಶಸ್ವಿ ನಿರ್ದೇಶಕರು ಅನ್ನಿಸಿಕೊಂಡಿರುವ ಹಯವದನ ಈ ಮೂಲಕ ಕನ್ನಡ ಚಿತ್ರರಂಗಕ್ಕೆ ನಿರ್ದೇಶಕರಾಗಿ ಪಾದಾರ್ಪಣೆ ಮಾಡಿದ್ದಾರೆ. ಒಂದು ಅಪರೂಪದ ಕಥಾನಕದೊಂದಿಗೆ ಅವರು ಪ್ರೇಕ್ಷಕರನ್ನು ಮುಖಾಮುಖಿಯಾಗುತ್ತಿರುವ ಸುಳಿವು ಟ್ರೈಲರ್ ಮೂಲಕ ನಿಖರವಾಗಿಯೇ ಸಿಕ್ಕಿದೆ. ಅಂಜನ್ ನಾಗೇಂದ್ರ ನಾಯಕನಾಗಿ ನಟಿಸಿರುವ ಈ ಸಿನಿಮಾದಲ್ಲಿ ಇಬ್ಬರು ನಾಯಕಿಯರಿದ್ದಾರೆ.



ಮಂಗಳೂರು ಹುಡುಗಿ ವೆನ್ಯಾ ರೈ ಹಾಗೂ ಭರತನಾಟ್ಯ ಪ್ರವೀಣೆ ಸಂಜನಾ ದಾಸ್ ನಾಯಕಿಯರಾಗಿ ನಟಿಸಿದ್ದಾರೆ. ನಿರ್ದೇಶಕ ಹಯವದನ ಅವರು ವರ್ಷಗಟ್ಟಲೆ ಶ್ರಮ ವಹಿಸಿ ಈ ಸಿನಿಮಾದ ಕಥೆಯನ್ನು ಸಿದ್ಧ ಪಡಿಸಿದ್ದಾರೆ.

ಅಷ್ಟೇ ಶ್ರದ್ಧೆಯಿಂದ, ಸೂಕ್ಷ್ಮತೆಯಿಂದ ಈ ಸಿನಿಮಾದ ಪ್ರತೀ ಪಾತ್ರಗಳಿಗೆ ಒಪ್ಪುವಂಥಾ ನಟ ನಟಿಯರನ್ನು ಆಯ್ಕೆ ಮಾಡಿಕೊಂಡಿದ್ದಾರೆ. ಅಂಥಾದ್ದೊಂದು ಜವಾಬ್ದಾರಿಯುತ ಹುಡುಕಾಟದಲ್ಲಿ ನಿರ್ದೇಶಕರ ಕಣ್ಣಿಗೆ ಬಿದ್ದಿದ್ದಾಕೆ ಸಂಜನಾ ದಾಸ್. ಈಕೆ ಈ ಹಿಂದೆ ಕೇಟಿಎಂ ಅಂತೊಂದು ಸಿನಿಮಾದಲ್ಲಿ ನಾಯಕಿಯಾಗಿ ನಟಿಸಿದ್ದರು. ಆ ಸಿನಿಮಾದ ಟೀಸರ್ ನೋಡಿದ್ದ ಹಯವದನ ಅವರಿಗೆ ಈ ಸಿನಿಮಾದ ಒಂದು ಪಾತ್ರಕ್ಕೆ ಈ ಹುಡುಗಿಯೇ ಸೂಕ್ತ ಅಂತನ್ನಿಸಿದ್ದೇ ಸಂಜನಾರ ಲಕ್ಕು ಕುದುರಿದಂತಾಗಿದೆ. ಅಂದಹಾಗೆ, ಸಂಜನಾ ದಾಸ್ ಎಲ್ಲೋ ಜೋಗಪ್ಪ ನಿನ್ನರಮನೆ ಚಿತ್ರದಲ್ಲಿ ತಮಿಳು ಹುಡುಗಿಯಾಗಿ ನಟಿಸಿದ್ದಾರೆ. ಅಡ್ವೆಂಚರ್ ಅನ್ನು ಇಷ್ಟಪಡುವ ಲವಲವಿಕೆಯ ಪಾತ್ರಕ್ಕೆ ಸಾಕಷ್ಟು ತಯಾರಿ ನಡೆಸಿಯೇ ಅವರು ಜೀವ ತುಂಬಿದ್ದಾರೆ. ಸಂಜನಾ ಪಾತ್ರದ ಚಿತ್ರೀಕರಣ ಮನಾಲಿಯಲ್ಲಿ ನಡೆದಿದೆ. ಮೂಲತಃ ಭರತನಾಟ್ಯ ಕಲಾವಿದೆಯಾಗಿರುವ ಸಂಜನಾ ಪಾಲಿಗೆ ನಟನೆ ಎಂಬುದು ಎಳವೆಯಿಂದಲೇ ಆವರಿಸಿಕೊಂಡಿದ್ದ ಸೆಳೆತ.



# ತಮಿಳಿನಿಂದ ಬ್ಯಾನ್, ಹಿಂದಿಯಿಂದ ರಿಜೆಕ್ಟ್!..

ಮೊದಲ ಚಿತ್ರದ ಯಶಸ್ಸು ಅವರನ್ನು ಸಿನಿಮಾರಂಗದಲ್ಲೇ ಉಳಿಯುವಂತೆ ಮಾಡಿತು.. ಸೌತ್ ಸ್ಟಾರ್ ನಟಿಯಾಗಿದ್ದ ಆಸಿನ್ ಬಾಲಿವುಡ್‌ಗೆ ಕಾಲಿಡುವ ಮೊದಲೇ ತಾನು ಅಭಿಷೇಕ್ ಬಚ್ಚನ್ ಹಾಗೂ ಅಕ್ಷಯ್ ಕುಮಾರ್ ಜೊತೆ ನಟಿಸುವುದಿಲ್ಲ ಎಂದು.. ಆಸಿನ್‌ಗೆ ಮುಳುವಾಗಿದ್ದು ಐಫಾ (2010) ಚಲನಚಿತ್ರ ಸಮಾರಂಭ..

ನಟಿ ಆಸಿನ್ ಯಾರಿಗೆ ಗೊತ್ತಿಲ್ಲ ಸೌತ್ ಹಾಗೂ ನಾರ್ತ್ ಎಲ್ಲಾ ಕಡೆ ನಟಿಸಿ ಸೈ ಎನ್ನಿಸಕೊಂಡ ಈ ನಟಿ ಒಂದು ಕಾಲದಲ್ಲಿ ಇಡೀ ಭಾರತದ ಸ್ಟಾರ್ ನಟಿಯಾಗಿ ಮಿಂಚಿದವರು. ಅವರನ್ನು ಆ ಕಾಲದಲ್ಲಿ 'ಲೇಡಿ ಲಕ್ಕಿ ಆಕ್ಟ್ರೆಸ್; ಎಂದೇ ಚಿತ್ರೋದ್ಯಮ ಕರೆಯುತ್ತಿತ್ತು. ಕಾರಣ, ಆಸಿನ್ ನಟಿಸಿದ್ದ ಮೊದಲ ಮೂರೂ ಚಿತ್ರಗಳೂ ಸೂಪರ್ ಹಿಟ್ ಆದವು. ಆ ಬಳಿಕ ನಟಿ ಆಸಿನ್ ಸ್ಟಾರ್ ಪಟ್ಟ ಪಡೆದು, ಹಿಂತಿರುಗಿ ನೋಡಿದ್ದೇ ಇಲ್ಲ. ಆಸಿನ್ ಮೊದಲ ಚಿತ್ರ 2001ರಲ್ಲಿ ತೆರೆಗೆ ಅಪ್ಪಳಿಸಿತು. ಅದು ಮಲಯಾಂಳನ'ಸೂಪರ್ ಹಿಟ್ ಆಗಿತ್ತು.

ಸೈಬೋ ಮಲಾಬರ್‌ನ ಕ್ಯಾಥೋಲಿಕ್ ಸಮುದಾಯದ ಹುಡುಗಿ, ಕೇರಳದ ಕೊಚ್ಚಿಯಲ್ಲಿ ಜನಿಸಿದವರು ತಂದೆ ಬಿಸಿನೆಸ್‌ಮ್ಯಾನ್, ತಾಯಿ ಸರ್ಜನ್. ಈ ಆಸಿನ್.


# ಮೊನಾಲಿಸಾಳ ಮೊದಲ ಸಿನಿಮಾ ಬಂದ್



ಕುಂಭಮೇಳದಲ್ಲಿ ರುದ್ರಾಕ್ಷಿ ಮಾರುತ್ತಿದ್ದ ಮೊನಲಿಸಾ ಬಾಲಿವುಡ್ ಸಿನಿಮಾದಲ್ಲಿ ನಟಿಸಲಿದ್ದಾರೆ ಎಂಬ ಸುದ್ದಿ ಹರಿದಾಡಿತ್ತು. ಆದರೆ ಈಗ ಆ ಸಿನಿಮಾ ನಿಂತು ಹೋಗಿದೆ ಎನ್ನಲಾಗುತ್ತಿದ್ದೆ. ಮೊನಲಿಸಾಗೆ ಸಿನಿಮಾ ಆಫರ್ ನೀಡಿದ ನಿರ್ದೇಶಕ, ಆಕೆಯನ್ನು ಟ್ರ್ಯಾಪ್ ಮಾಡಿದ್ದಾನೆ ಎಂಬ ಆತಂಕಕಾರಿ ಹೇಳಿಕೆಯನ್ನು ಸಿನಿಮಾದ ನಿರ್ಮಾಪಕ ನೀಡಿದ್ದಾರೆ.

ಕುಂಭಮೇಳದಲ್ಲಿ ರುದ್ರಾಕ್ಷಿ ಮಾಲೆ ಮಾರುತ್ತಿದ್ದ ಯುವತಿಯ ಚಿತ್ರ ಕಳೆದ ತಿಂಗಳು ವೈರಲ್ ಆಗಿತ್ತು. ಯುವತಿಯ ನಗು, ಚೂಪಾದ ಕಣ್ಣಿನ ನೋಟಕ್ಕೆ ಜನ ಮಾರುಹೋದರು. ಫೋಟೊ ವೈರಲ್ ಆಗುತ್ತಿದ್ದಂತೆ ಆ ಯುವತಿಯ ಅದೃಷ್ಟವೇ ಬದಲಾಗಿ ಹೋಯ್ತು. ಯುವತಿ ಮೇಕೋವರ್ ಮಾಡಿ ಮಾಡೆಲಿಂಗ್ ಮಾಡಿಸಲಾಯ್ತು, ಕೆಲ ಜಾಹೀರಾತುಗಳಲ್ಲಿ ಯುವತಿ ನಟಿಸಿದರು. ಕೆಲ ಪ್ರೊಮೋಷನಲ್ ಇವೆಂಟ್‌ಗಳಲ್ಲಿ ಅದ್ದೂರಿಯಾಗಿ ಯುವತಿ ಕಾಣಿಸಿಕೊಂಡರು. ಗ್ಲಾಮರಸ್ ಆದ ಫೋಟೊಶೂಟ್ ಮಾಡಿಸಿ ಚಿತ್ರಗಳನ್ನು ಹಂಚಿಕೊಳ್ಳಲಾಯ್ತು. 'ದಿ ಡೈರಿ ಆಫ್ ಮಣಿಪುರ್' ಸಿನಿಮಾದಲ್ಲಿ ಯುವತಿ ನಾಯಕಿಯಾಗಿ ನಟಿಸಲಿದ್ದಾಳೆ ಎಂಬ ಸುದ್ದಿ ಹೊರಬಿದ್ದಿತ್ತು. ಆದರೆ ಆಕೆಯ ಮೊದಲ ಸಿನಿಮಾ ಚಿತ್ರೀಕರಣ ಪ್ರಾರಂಭ ಆಗುವುದಕ್ಕೆ ಮುಂಚೆಯೇ ನಿಂತು ಹೋಗಿದೆ. 'ದಿ ಡೈರಿ ಆಫ್ ಮಣಿಪುರ್' ಸಿನಿಮಾದ ನಿರ್ಮಾಪಕ ಜಿತೇಂಧರ್ ನಾರಾಯಣ್ ಸಿಂಗ್ ಅಲಿಯಾಸ್ ವಸೀಮ್ ರಿಜ್ವಿ 'ದಿ ಡೈರಿ ಆಫ್ ಮಣಿಪುರ್' ಸಿನಿಮಾದ ನಿರ್ದೇಶಕ ಸನೋಜ್ ಮಿಶ್ರ ವಿರುದ್ಧ ಹಲವು ಆರೋಪಗಳನ್ನು ಮಾಡಿದ್ದಾರೆ. ಸನೋಜ್ ಮಿಶ್ರಾ ಒಬ್ಬ ಸುಳ್ಳುಗಾರ, ಮೋಸಗಾರ, ಮಹಾನ್ ಕುಡುಕ, ಆತ ಸುಳ್ಳು ಹೇಳಿ ಹಲವರಿಗೆ ಮೋಸ ಮಾಡಿದ್ದಾನೆ. ಯುವತಿಯರಿಗೆ ಸಿನಿಮಾಗಳಲ್ಲಿ ಅವಕಾಶ ಕೊಡಿಸುವುದಾಗಿ ನಂಬಿಸಿ ಮೋಸ ಮಾಡಿದ್ದಾನೆ. ಈಗ ಕುಂಭಮೇಳ ಮೊನಲಿಸಾಗೂ ಮೋಸ ಮಾಡುತ್ತಿದ್ದಾನೆ ಎಂದು ಆರೋಪಿಸಿದ್ದಾರೆ. ಸನೋಜ್ ಮಿಶ್ರಾ ನಿರ್ದೇಶನ ಮಾಡಿರುವ ಯಾವೊಂದು ಸಿನಿಮಾ ಸಹ ಈ ವರೆಗೆ ಬಿಡುಗಡೆ ಆಗಿಲ್ಲ. ಆತ ಮೊನಲಿಸಾಳಿಗೆ ತರಬೇತಿ ನೀಡುವ ನೆಪದಲ್ಲಿ ಆಕೆಯನ್ನು ಬೇರೆ ಬೇರೆ ಇವೆಂಟ್‌ಗಳಿಗೆ ಕಳಿಸಿ ತಾನು ಹಣ ಮಾಡಿಕೊಳ್ಳುತ್ತಿದ್ದಾನೆ. ಮೊನಲಿಸಾಳ ಕುಟುಂಬದವರು ಆ ವ್ಯಕ್ತಿಯ ಬಗ್ಗೆ ಜಾಗೃತೆಯಿಂದ ಇರಬೇಕು ಎಂದು ಎಚ್ಚರಿಕೆ ಹೇಳಿದ್ದಾರೆ

# ಜನಸಾಮಾನ್ಯರಿಂದಲೇ ಬಿಡುಗಡೆಯಾಯ್ತು 'ಅಪಾಯವಿದೆ ಎಚ್ಚರಿಕೆ' ಟ್ರೈಲರ್!



ಅಭಿಜಿತ್ ತೀರ್ಥಹಳ್ಳಿ ನಿರ್ದೇಶನದ 'ಅಪಾಯವಿದೆ ಎಚ್ಚರಿಕೆ' ಚಿತ್ರ ಆರಂಭದಿಂದ ಇಲ್ಲೀವರೆಗೂ ಹಂತ ಹಂತವಾಗಿ ಪ್ರೇಕ್ಷಕರನ್ನು ಸೆಳೆಯುತ್ತಾ ಸಾಗಿ ಬಂದಿತ್ತು. ಇದೇ ಫೆಬ್ರವರಿ 28ರಂದು ಬಿಡುಗಡೆಗೊಳ್ಳಲಿರುವ ಈ ಚಿತ್ರದ ಟ್ರೈಲರ್ ಇದೀಗ ಬಿಡುಗಡೆಗೊಂಡಿದೆ. ಈಗಾಗಲೇ ಇದೊಂದು ಬೇರೆಯದ್ದೇ ತೆರನಾದ ಕಥೆಯನ್ನೊಳಗೊಂಡಿರೋ ಸಿನಿಮಾ ಎಂಬ ಸುಳಿವು ಪ್ರೇಕ್ಷಕರಿಗೆ ಸಿಕ್ಕಿತ್ತು. ಈಗ ಅದಕ್ಕೆ ತಕ್ಕುದಾಗಿ, ಅತ್ಯಂತ ವಿಶೇಷವಾಗಿ ಈ ಟ್ರೈಲರ್ ಅನ್ನು ಲಾಂಚ್ ಮಾಡಲಾಗಿದೆ. ಈಟಿ ಮಾಲ್ ನಲ್ಲಿ ನಡೆದ ಅಚ್ಚುಕಟ್ಟಾದ ಕಾರ್ಯಕ್ರಮದಲ್ಲಿ ಜನಸಾಮಾನ್ಯರ ಕೈಯಿಂದಲೇ ಟ್ರೈಲರ್ ಬಿಡುಗಡೆಗೊಳಿಸುವ ಮೂಲಕ ಚಿತ್ರತಂಡ ಮೆಚ್ಚುಗೆಗೆ ಪಾತ್ರವಾಗಿದೆ. ಸಾಮಾನ್ಯವಾಗಿ ಯಾವುದೇ ಟ್ರೈಲರ್ ಬಿಡುಗಡೆ ಸಮಾರಂಭದಲ್ಲಿಯೂ ಸಾಮ್ಯತೆಗಳಿರುತ್ತವೆ. ಸಿನಿಮಾ, ರಾಜಕೀಯ ಸೇರಿದಂತೆ ನಾನಾ ಕ್ಷೇತ್ರಗಳ ಗಣ್ಯರಿಂದ ಟ್ರೈಲರ್ ಲಾಂಚ್ ಮಾಡಿಸಲಾಗುತ್ತದೆ. ಆದರೆ, ನಿರ್ದೇಶಕ ಅಭಿಜಿತ್ ತೀರ್ಥಹಳ್ಳಿ ಬೇರೆಯದ್ದೇ ದಾರಿಯನ್ನು ಆಯ್ಕೆ ಮಾಡಿಕೊಂಡಿದ್ದಾರೆ. ಆಟೋ ಚಾಲಕರು, ಕ್ಯಾಬ್ ಚಾಲಕರು ಸೇರಿದಂತೆ ನಾನಾ ಕೆಲಸ ಮಾಡುವ ಒಂದಷ್ಟು ಜನರಿಂದ ಅಪಾಯವಿದೆ ಎಚ್ಚರಿಕೆ ಚಿತ್ರದ ಟ್ರೈಲರ್ ಬಿಡುಗಡೆಗೊಳಿಸಿದ್ದಾರೆ. ಈ ಮೂಲಕ ನಿಜವಾದ ಸಿನಿಮಾ ಪ್ರೇಮಿಗಳ ಕಡೆಯಿಂದಲೇ ಟ್ರೈಲರ್ ಬಿಡುಗಡೆಗೊಳಿಸುವ ಮೂಲಕ ಎಲ್ಲರ ಗಮನ ಸೆಳೆದುಕೊಂಡಿದ್ದಾರೆ.

ತಮ್ಮ ಕಷ್ಟ ಕಾರ್ಪಣ್ಯಗಳಾಚೆಗೂ ಬಿಡುಗಡೆಗೊಂಡ ಸಿನಿಮಾಗಳನ್ನೆಲ್ಲ ನೋಡುವ ನಿಜವಾದ ಸಿನಿಮಾ ಪ್ರೇಮಿಗಳು ಇವರೇ. ಅಂಥವರಿಂದಲೇ ಟ್ರೈಲರ್ ಲಾಂಚ್ ಮಾಡಿಸೋದು ನಿಜಕ್ಕೂ ಥ್ರಿಲ್ಲಿಂಗ್ ಸಂಗತಿ ಎಂಬಂಥಾ ಶಹಬ್ಬಾಸ್ ಗಿರಿ ಸಾಮಾಜಿಕ ಜಾಲತಾಣಗಳ ಮೂಲಕ ಹೊಮ್ಮಿಕೊಳ್ಳುತ್ತಿದೆ. ಅಪಾಯವಿದೆ ಎಚ್ಚರಿಕೆ ಸಸ್ಪೆನ್ಸ್ ಹಾರರ್ ಥ್ರಿಲ್ಲರ್ ಜಾನರಿನ ಸಿನಿಮಾ.



### ಮುಂಗಾರು ಮಳೆಯಲ್ಲಿ ತಂದಲ್ಲೇ

# ನೀನಿಲ್ಲಿ ಪ್ರೀತಿಯ ಮುನ್ಸೂಚನೆ

**ಹಾಡಿಗೆ ಸಿಕ್ಕ ಹೃದಯಸ್ಪರ್ಶಿ ಪ್ರತಿಕ್ರಿಯೆ**

ಮುಂಗಾರು ಮಳೆ ಖ್ಯಾತಿಯ ನಟ ಗಣೇಶ್ ಮತ್ತು ಪೂಜಾ ಗಾಂಧಿ ಬಿಡುಗಡೆ ಮಾಡಿದ ಈ ಟ್ರ್ಯಾಕ್ ಇದೀಗ ಲಕ್ಷಾಂತರ ವೀಕ್ಷಣೆಗಳನ್ನು ಗಳಿಸಿದೆ. ಹಾಡಿನ ಯಶಸ್ಸಿನ ನಂತರ, ಚಿತ್ರತಂಡ ಇತ್ತೀಚೆಗೆ ಮಾಧ್ಯಮಗಳೊಂದಿಗೆ ಸಂವಾದ ನಡೆಸಿ, ಯೋಜನೆಯ ಕುರಿತು ಮಾಹಿತಿ ಹಂಚಿಕೊಂಡಿತು.

ವಿನಯ್ ರಾಜ್‌ಕುಮಾರ್ ಮತ್ತು ಅದಿತಿ ಪ್ರಭುದೇವ ಅಭಿನಯದ 'ಅಂದೊಂದಿತ್ತು ಕಾಲ' ಚಿತ್ರ ಇದೀಗ ತೀವ್ರ ಕುತೂಹಲಕ್ಕೆ ಕಾರಣವಾಗಿದೆ. ಚಿತ್ರತಂಡ ಇತ್ತೀಚೆಗಷ್ಟೇ 'ಮುಂಗಾರು ಮಳೆಯಲ್ಲಿ ತಂದಲ್ಲೇ ನೀನಿಲ್ಲಿ ಪ್ರೀತಿಯ ಮುನ್ಸೂಚನೆ' ಎಂಬ ಹಾಡನ್ನು ಬಿಡುಗಡೆ ಮಾಡಿತ್ತು. ಹಾಯಾಗಿದೆ ಮತ್ತು ಜಗವೇ ನೀನು ಗೆಳತಿಯೇ ಮುಂತಾದ ಕನ್ನಡ ಗೀತೆಗಳಿಗೆ ಧ್ವನಿ ನೀಡಿರುವ ಗಾಯಕ ಸಿದ್ ಶ್ರೀರಾಮ್ ಈ ಗೀತೆಗೂ ಧ್ವನಿ ನೀಡಿದ್ದು, ಮತ್ತೊಮ್ಮೆ ಪ್ರೇಕ್ಷಕರ ಮನಸ್ಸಿಗೆ ಹತ್ತಿರವಾಗಿದ್ದಾರೆ. ಮುಂಗಾರು ಮಳೆ ಖ್ಯಾತಿಯ ನಟ ಗಣೇಶ್ ಮತ್ತು ಪೂಜಾ ಗಾಂಧಿ ಬಿಡುಗಡೆ ಮಾಡಿದ ಈ ಟ್ರ್ಯಾಕ್ ಇದೀಗ ಲಕ್ಷಾಂತರ ವೀಕ್ಷಣೆಗಳನ್ನು ಗಳಿಸಿದೆ. ಹಾಡಿನ ಯಶಸ್ಸಿನ ನಂತರ, ಚಿತ್ರತಂಡ ಇತ್ತೀಚೆಗೆ ಮಾಧ್ಯಮಗಳೊಂದಿಗೆ ಸಂವಾದ ನಡೆಸಿ, ಯೋಜನೆಯ ಕುರಿತು ಮಾಹಿತಿ ಹಂಚಿಕೊಂಡಿತು. ವಿನಯ್ ರಾಜ್‌ಕುಮಾರ್ ಮಾತನಾಡಿ, ''ಮುಂಗಾರು ಮಳೆಯಲ್ಲಿ ತಂದಲ್ಲೇ ನೀನಿಲ್ಲಿ ಪ್ರೀತಿಯ ಮುನ್ಸೂಚನೆ' ಎಂಬ ಹಾಡಿಗೆ ಸಿಕ್ಕ ಪ್ರತಿಕ್ರಿಯೆ ಹೃದಯಸ್ಪರ್ಶಿಯಾಗಿದೆ. ನಮ್ಮ ಚಿತ್ರವು ಐದು ಅತ್ಯುತ್ತಮ ಹಾಡುಗಳನ್ನು ಒಳಗೊಂಡಿದೆ. ಪ್ರತಿಯೊಂದು ಹಾಡನ್ನು ಸಂಗೀತ ನಿರ್ದೇಶಕ ವಿ ರಾಘವೇಂದ್ರ, ಅವರು ಎಚ್ಚರಿಕೆಯಿಂದ ಸಂಗೀತ ಸಂಯೋಜಿಸಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966